23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 299 | ನವದೆಹಲಿ | ಬೆಲೆ ₹10 | ಮೇ 5 2026, ಮಂಗಳವಾರ

# ಬಂಗಾಳದಲ್ಲಿ ಬಿಜೆಪಿ ಬಿರುಗಾಳಿ, ತಮಿಳುನಾಡಿನಲ್ಲಿ ಟಿವಿಕೆ ಸುನಾಮಿ

## ಕೇರಳದಲ್ಲಿ ಯುಡಿಎಫ್ ಅಸ್ಸಾಂನಲ್ಲಿ ಕಮಲಕ್ಕೆ ಹ್ಯಾಟ್ರಿಕ್ ಪುದುಚೇರಿಯಲ್ಲಿ ಎನ್‌ಡಿಎಗೆ ಜಯಮಾಲೆ

**ನವದೆಹಲಿ, ಮೇ 4:** ದೇಶದ 5 ರಾಜ್ಯಗಳ ವಿಧಾನಸಭಾ ಚುನಾವಣೆಗೆ ಇತ್ತೀಚೆಗೆ ನಡೆದ ಚುನಾವಣೆ ಫಲಿತಾಂಶ ಸೋಮವಾರ ಪ್ರಕಟವಾಗಿದ್ದು, ಅಸ್ಸಾಂ, ಪಶ್ಚಿಮ ಬಂಗಾಳ ಹಾಗೂ ಪುದುಚೇರಿಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಕ ಗೆಲುವು ಸಾಧಿಸಿದ್ದರೆ, ಕೇರಳದಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್ ಬಹುಮತ ಪಡೆದಿದ್ದರೆ, ತಮಿಳುನಾಡಿನಲ್ಲಿ ಆಡಳಿತಾರೂಢ ಡಿಎಂಕೆಗೆ ಹೊಸ ಪಕ್ಷ ಟಿವಿಕೆ ಶಾಕ್ ನೀಡಿದೆ.

ಭಾರತೀಯ ಚುನಾವಣಾ ಆಯೋಗದ (ಸೋಮವಾರ ರಾತ್ರಿ 10 ಗಂಟೆ) ಮಾಹಿತಿ ಪ್ರಕಾರ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ನಿರ್ಣಾಯಕ ಗೆಲುವು ಪಡೆದಿದೆ. ರಾಜ್ಯದ ಒಟ್ಟು 294 ಸ್ಥಾನಗಳ ಪೈಕಿ 187 ಸ್ಥಾನ ಗೆದ್ದಿದ್ದು, 20 ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸಿತ್ತು.

**ತಮಿಳುನಾಡಿನಲ್ಲಿ ಟಿವಿಕೆ ಶಾಕ್; ಬಂಗಾಳ, ಅಸ್ಸಾಂನಲ್ಲಿ ಬಿಜೆಪಿ ಸ್ವೀಪ್; ಕೇರಳದಲ್ಲಿ ಯುಡಿಎಫ್ ಗೆಲುವು!**

ಪಶ್ಚಿಮ ಬಂಗಾಳ, ಅಸ್ಸಾಂ, ತಮಿಳುನಾಡು, ಕೇರಳ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಯ ಮತ ಎಣಿಕೆ ಮುಗಿಯುತ್ತಿದ್ದಂತೆ ಹೊರಬಂದ ಫಲಿತಾಂಶ ಶಾಕ್ ನೀಡಿದೆ.

ಪಶ್ಚಿಮ ಬಂಗಾಳದಲ್ಲಿ ಬಿಜೆಪಿ 200 ಸ್ಥಾನಗಳೊಂದಿಗೆ ಐತಿಹಾಸಿಕ ಗೆಲುವು ಸಾಧಿಸಿದೆ. 2021 ರ ಚುನಾವಣೆಯಲ್ಲಿ 294 ಸ್ಥಾನಗಳ ಪೈಕಿ 215 ಸ್ಥಾನಗಳನ್ನು ಗೆದಿದ್ದ ಆಡಳಿತಾರೂಢ ಟಿಎಂಸಿ ಕೇವಲ 88 ಸ್ಥಾನಗಳಿಗೆ ಕುಸಿದಿದೆ.

ತಮಿಳುನಾಡಿನಲ್ಲಿ, ನಟ–ರಾಜಕಾರಣಿ ವಿಜಯ್ ಅವರ ತಮಿಳಗ ವೆಟ್ರಿ ಕಳಗಂ (ಟಿವಿಕೆ) 100ಕ್ಕೂ ಹೆಚ್ಚು ಸ್ಥಾನಗಳನ್ನು ಗಳಿಸುವ ಮೂಲಕ ಆಘಾತಕಾರಿ ಫಲಿತಾಂಶವನ್ನು ನೀಡಿದೆ.

ಅಸ್ಸಾಂನಲ್ಲಿ ಆಡಳಿತಾರೂಢ ಬಿಜೆಪಿ ನೇತೃತ್ವದ ಎನ್‌ಡಿಎ ಹ್ಯಾಟ್ರಿಕ್ ಸಾಧನೆ ಮಾಡಿದೆ.

**ಚುನಾವಣಾ ಫಲಿತಾಂಶದ ಬೆನ್ನಲ್ಲೇ ಪಶ್ಚಿಮ ಬಂಗಾಳದಲ್ಲಿ ಭುಗಿಲೆದ್ದ ಹಿಂಸಾಚಾರ:** ಪಶ್ಚಿಮ ಬಂಗಾಳ ಚುನಾವಣಾ ಫಲಿತಾಂಶದ ಬೆನ್ನಲ್ಲೇ ರಾಜಕೀಯ ಹಿಂಸಾಚಾರ ಭುಗಿಲೆದ್ದಿದ್ದು, ಕೂಚ್ ಬೆಹಾರ್‌ನ ದಿನ್ಹಾಟಾದಲ್ಲಿ ಬಿಜೆಪಿ ಮತ್ತು ಟಿಎಂಸಿ ಕಾರ್ಯಕರ್ತರ ನಡುವೆ ಘರ್ಷಣೆ ಸಂಭವಿಸಿದೆ.

ಹೀಗಾಗಿ ಕೇಂದ್ರ ಪಡೆಗಳ ಸಿಬ್ಬಂದಿ ಲಾಠಿ ಚಾರ್ಜ್ ನಡೆಸಿದರು. ಜಲ್ಪೈಗುರಿಯ ಡಿಐಜಿ ಅಂಜಲಿ ಸಿಂಗ್ ಈ ಬಗ್ಗೆ ಮಾತನಾಡಿ, "ಕಾನೂನು ಮತ್ತು ಸುವ್ಯವಸ್ಥೆಯೊಂದಿಗೆ ಪರಿಸ್ಥಿತಿ ಶಾಂತಿಯುತವಾಗಿದೆ. ಯಾವುದೇ ಅಡ್ಡಿ ಅಥವಾ ಯಾವುದೇ ಅತಂಕದ ನಿರೀಕ್ಷೆಯಿಲ್ಲ. ಪರಿಸ್ಥಿತಿ ಶಾಂತಿಯುತವಾಗಿದೆ. ಯಾವುದೇ ಪರಿಸ್ಥಿತಿ ಉದ್ಭವಿಸಿದಲ್ಲಿ ನಾವು ಪಡೆಗಳನ್ನು ಸಿದ್ಧವಾಗಿಟ್ಟುಕೊಂಡಿದ್ದೇವೆ" ಎಂದು ಹೇಳಿದ್ದಾರೆ.

| ಪಶ್ಚಿಮ ಬಂಗಾಲ | ತಮಿಳುನಾಡು | ಕೇರಳ | ಅಸ್ಸಾಂ | ಪುದುಚೇರಿ |
|---|---|---|---|---|
| ಒಟ್ಟು ಸ್ಥಾನ: 294 | ಒಟ್ಟು ಸ್ಥಾನ: 234 | ಒಟ್ಟು ಸ್ಥಾನ: 140 | ಒಟ್ಟು ಸ್ಥಾನ: 126 | ಒಟ್ಟು ಸ್ಥಾನ: 30 |
| ಬಹುಮತಕ್ಕೆ ಅಗತ್ಯ ಸಂಖ್ಯೆ: 148 | ಬಹುಮತಕ್ಕೆ ಅಗತ್ಯ ಸಂಖ್ಯೆ: 118 | ಬಹುಮತಕ್ಕೆ ಅಗತ್ಯ ಸಂಖ್ಯೆ: 71 | ಬಹುಮತಕ್ಕೆ ಅಗತ್ಯ ಸಂಖ್ಯೆ: 64 | ಬಹುಮತಕ್ಕೆ ಅಗತ್ಯ ಸಂಖ್ಯೆ: 16 |
| ಬಿಜೆಪಿ: 187 (ಜಯ), 20 (ಮುನ್ನಡೆ) | ಟಿವಿಕೆ: 96 (ಜಯ), 11 (ಮುನ್ನಡೆ) | ಯುಡಿಎಫ್: 97 | ಬಿಜೆಪಿ: 81 (ಜಯ), 1 (ಮುನ್ನಡೆ) | ಎನ್‌ಡಿಎ: 18 |
| ಟಿಎಂಸಿ: 64 (ಜಯ), 16 (ಮುನ್ನಡೆ) | ಡಿಎಂಕೆ: 50 (ಜಯ), 10 (ಮುನ್ನಡೆ) | ಎಲ್‌ಡಿಎಫ್: 35 | ಕಾಂಗ್ರೆಸ್: 18 ಜಯ, 4 (ಮುನ್ನಡೆ) | ಕಾಂಗ್ರೆಸ್: 6 |
| ಕಾಂಗ್ರೆಸ್: 2, ಎಜೆಯುಪಿ: 2, | ಎಐಎಡಿಎಂಕೆ: 42 (ಜಯ), 5 (ಮುನ್ನಡೆ) | ಎನ್‌ಡಿಎ: 3 | ಬಿಪಿಎಫ್: 10, ಎಜಿಪಿ: 10 | ಟಿವಿಕೆ: 2 |
| ಸಿಪಿಐ(ಎಂ): 1 | ಇತರ: 17 (ಜಯ), 3 (ಮುನ್ನಡೆ) | ಇತರ: 5 | ಎಐಯುಡಿಎಫ್: 2 | |







## ಇಬ್ಬರು ಮುಖ್ಯಮಂತ್ರಿಗಳಿಗೆ ಸೋಲು



### ಜನರ ತೀರ್ಪಿಗೆ ತಲೆಬಾಗುತ್ತೇನೆ

ಜನರ ತೀರ್ಪಿಗೆ ನಾನು ತಲೆಬಾಗುತ್ತೇನೆ ಎಂದು ಡಿಎಂಕೆ ಅಧ್ಯಕ್ಷ ಮತ್ತು ನಿರ್ಗಮಿತ ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಹೇಳಿದ್ದಾರೆ. ನಾವು ಉತ್ತಮ ಆಡಳಿತವನ್ನು ನೀಡಿದ್ದೇವೆ ಮತ್ತು ನಮ್ಮ ಸಾಧನೆಗಳನ್ನು ಒತ್ತಿ ಹೇಳುವ ಮೂಲಕ ಮತಗಳನ್ನು ಕೋರಿದ್ದೇವೆ. ನಮ್ಮ ಕಲ್ಯಾಣ ಯೋಜನೆಗಳನ್ನು ಮುಂದುವರಿಸಲು ನಾವು ಮತಗಳನ್ನು ಕೋರಿದ್ದೇವೆ ಎಂದು ಡಿಎಂಕೆ ಸ್ಟಾಲಿನ್ ಹೇಳಿದರು.


### ಭದ್ರಕೋಟೆಯಲ್ಲೇ ಮಮತಾಗೆ ಸೋಲು



ಮಮತಾ ಬ್ಯಾನರ್ಜಿ ತಾವು ಸ್ಪರ್ಧಿಸಿದ್ದ ಭಬಾನಿಪುರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಸುವೇಂದು ಅಧಿಕಾರಿ ವಿರುದ್ಧ 15,114 ಮತಗಳ ಅಂತರದಿಂದ ಸೋತಿದ್ದಾರೆ.

### ಕೇರಳಂ ಸಿಎಂ ಪಿಣರಾಯಿ ವಿಜಯನ್ ರಾಜೀನಾಮೆ

2026ರ ವಿಧಾನಸಭಾ ಚುನಾವಣೆಯಲ್ಲಿ ಎಡ ಪ್ರಜಾಸತ್ತಾತ್ಮಕ ರಂಗ (ಎಲ್‌ಡಿಎಫ್) ಸೋಲೊಪ್ಪಿದ ಬೆನ್ನಲ್ಲೇ ಕೇರಳ ಮುಖ್ಯಮಂತ್ರಿ ಪಿಣರಾಯಿ ವಿಜಯನ್ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿದ್ದಾರೆ. ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರ ಅಧಿಕೃತ ನಿವಾಸವಾದ 'ಲೋಕಭವನ'ಕ್ಕೆ ವಿಶೇಷ ದೂತರ ಮೂಲಕ ರಾಜೀನಾಮೆ ಪತ್ರ ಕಳುಹಿಸಿಕೊಟ್ಟಿದ್ದಾರೆ. ಈ ಮೂಲಕ ಕೇರಳದಲ್ಲಿ ಎಲ್‌ಡಿಎಫ್ ಆಡಳಿತ ಕೊನೆಗೊಂಡಿದ್ದು, ಸ್ಥಾಪಿತ ಕಾರ್ಯವಿಧಾನದ ಪ್ರಕಾರ, ಹೊಸ ಸರ್ಕಾರ ಅಧಿಕಾರ ವಹಿಸಿಕೊಳ್ಳುವವರೆಗೆ ಉಸ್ತುವಾರಿ ಮುಖ್ಯಮಂತ್ರಿಯಾಗಿ ಮುಂದುವರಿಯುವಂತೆ ಪಿಣರಾಯಿ ವಿಜಯನ್ ಅವರಿಗೆ ರಾಜ್ಯಪಾಲರು ಸೂಚಿಸಿದ್ದಾರೆ. ರಾಜೀನಾಮೆ ಪತ್ರ ತಲುಪಿದ ನಂತರ ಈ ವಿಷಯವನ್ನು ಫೋನ್ ಮೂಲಕ ತಿಳಿಸಲಾಗಿದೆ.



## ಎಡರಂಗದ ಭದ್ರಕೋಟೆಯಲ್ಲಿ ಕಾಂಗ್ರೆಸ್ ವಿಜಯೋತ್ಸವ

**ತಿರುವನಂತಪುರಂ, ಮೇ 4:** ಕೇರಳ ವಿಧಾನಸಭಾ ಚುನಾವಣೆ ಫಲಿತಾಂಶ ಹೊರಬಿದ್ದಿದ್ದು, ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ ಭರ್ಜರಿ ಜಯ ದಾಖಲಿಸಿದೆ. ಪಿಣರಾಯಿ ವಿಜಯನ್ ನೇತೃತ್ವದ ಎಲ್‌ಡಿಎಫ್ ಆಡಳಿತಕ್ಕೆ ಅಂತ್ಯ ಹಾಡಿರುವ ಯುಡಿಎಫ್ 10 ವರ್ಷದ ಬಳಿಕ ಮತ್ತೆ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದೆ. ಒಟ್ಟು 140 ವಿಧಾನಸಭಾ ಕ್ಷೇತ್ರಗಳ ಪೈಕಿ ಯುಡಿಎಫ್ ಸುಮಾರು 104 ಸ್ಥಾನಗಳಲ್ಲಿ ಮುನ್ನಡೆ ಸಾಧಿಸಿ, ಸ್ಪಷ್ಟ ಬಹುಮತ ಪಡೆದಿದೆ. 10 ವರ್ಷಗಳ ಎಲ್‌ಡಿಎಫ್ ಆಡಳಿತದ ನಂತರ ಕೇರಳದ ಜನರು ಈ ಬಾರಿ ಬದಲಾವಣೆಗೆ ಮತ ನೀಡಿದ್ದಾರೆ.

ಮಾಜಿ ಮುಖ್ಯಮಂತ್ರಿ ದಿವಂಗತ ಉಮ್ಮನ್ ಚಾಂಡಿ ಅವರ ಪುತ್ರ ಚಾಂಡಿ ಉಮ್ಮನ್ ಅವರು ಪುತುಪಳ್ಳಿಯಲ್ಲಿ 52,907 ಮತಗಳ ಬೃಹತ್ ಅಂತರದಿಂದ ಜಯಗಳಿಸಿದ್ದಾರೆ. ಹರಿಪಾಡ್ ಕ್ಷೇತ್ರದಲ್ಲಿ ರಮೇಶ್ ಚೆನ್ನಿತ್ತಲ 23,000ಕ್ಕೂ ಹೆಚ್ಚು ಮತಗಳ ಅಂತರದಿಂದ ಗೆಲುವು ಸಾಧಿಸಿದ್ದಾರೆ. ಮುಸ್ಲಿಂ ಲೀಗ್ ತಾನು ಸ್ಪರ್ಧಿಸಿದ್ದ 27 ಸ್ಥಾನಗಳಲ್ಲಿ 23ರಲ್ಲಿ ಮುನ್ನಡೆ ಸಾಧಿಸಿ ಯುಡಿಫ್ ಗೆಲುವಿಗೆ ಬಲ ತುಂಬಿದೆ.

**ಎಲ್‌ಡಿಎಫ್‌ಗೆ ಹಿನ್ನಡೆ:** ಮುಖ್ಯಮಂತ್ರಿ ಪಿಣರಾಯಿ ವಿಜಯನ್ ಅವರ ನೇತೃತ್ವದ ಎಡರಂಗ ಮೈತ್ರಿಕೂಟಕ್ಕೆ ಆಡಳಿತ ವಿರೋಧಿ ಅಲೆ ತೀವ್ರವಾಗಿ ತಟ್ಟಿದೆ. ಪ್ರಮುಖವಾಗಿ ಯುವಜನರಿಗೆ ಉದ್ಯೋಗಾವಕಾಶಗಳ ಕೊರತೆ ಮತ್ತು ಕೇರಳ ಕಾಂಗ್ರೆಸ್ (ಒ) ನಾಯಕ ಜೋಸ್ ಕೆ. ಮಾಣಿ ಅವರಂತಹ ಹಿರಿಯ ನಾಯಕರ ಸೋಲು ಎಲ್‌ಡಿಎಫ್‌ಗೆ ಭಾರಿ ಆಘಾತ ನೀಡಿದೆ. ಕಾಂಗ್ರೆಸ್ ಮೈತ್ರಿಕೂಟದ ಸಂಘಟಿತ ಹೋರಾಟ ಮತ್ತು ಜನಕಲ್ಯಾಣ ಯೋಜನೆಗಳ ಭರವಸೆಗಳು ಜನರನ್ನು ಸೆಳೆಯುವಲ್ಲಿ ಯಶಸ್ವಿಯಾಗಿವೆ.

### 2 ವರ್ಷಗಳ ಬಳಿಕ ಯುಡಿಎಫ್ ಕಮ್‌ಬ್ಯಾಕ್

**ಕೇರಳದಲ್ಲಿ ಸತತ ಎರಡು ವರ್ಷಗಳ ಕಾಲ ಅಧಿಕಾರದಿಂದ ಹೊರಗುಳಿದಿದ್ದ ಯುಡಿಎಫ್ ಮತ್ತೆ ಕಂಬ್ಯಾಕ್ ಮಾಡಿದೆ. ಹಿಂದಿನ ವಿಧಾನಸಭಾ ಚುನಾವಣೆಗಳಲ್ಲಿ 41 ಸ್ಥಾನಗಳನ್ನು ಗೆದಿದ್ದ ಯುಡಿಎಫ್ ಈ ಬಾರಿ 100ಕ್ಕೂ ಹೆಚ್ಚು ಸ್ಥಾನಗಳನ್ನು ಗಳಿಸಿದೆ.**

### ವಿವಿಧ ರಾಜ್ಯಗಳ ಉಪಚುನಾವಣೆ

## ಬಿಜೆಪಿ 4, ಕಾಂಗ್ರೆಸ್ 2 ಹಾಗೂ ಎನ್‌ಸಿಪಿ 1ರಲ್ಲಿ ಗೆಲುವು

ನವದೆಹಲಿ, ಮೇ 4: ಕರ್ನಾಟಕ, ಮಹಾರಾಷ್ಟ್ರ, ಗುಜರಾತ್, ನಾಗಾಲ್ಯಾಂಡ್, ತ್ರಿಪುರಾದಲ್ಲಿ ವಿವಿಧ ಕಾರಣಗಳಿಂದ ತೆರವಾಗಿದ್ದ ಕ್ಷೇತ್ರಗಳಿಗೆ ಇತ್ತೀಚೆಗೆ ನಡೆದ ಉಪಚುನಾವಣೆಯ ಫಲಿತಾಂಶ ಪ್ರಕಟವಾಗಿದೆ. ಬಿಜೆಪಿ ನಾಲ್ಕು, ಕಾಂಗ್ರೆಸ್ ಎರಡು ಹಾಗೂ ಎನ್‌ಸಿಪಿ ಒಂದರಲ್ಲಿ ಗೆಲುವು ದಾಖಲಿಸಿವೆ.

ನಾಗಾಲ್ಯಾಂಡ್‌ನ ಕೋರಿಡಾಂಗ್ ಕ್ಷೇತ್ರದಲ್ಲಿ ಬಿಜೆಪಿಯ ಡೋಷರ್ ಐ. ಮಿಚೆನ್ ಗೆಲುವು ಸಾಧಿಸಿದ್ದಾರೆ. ಗುಜರಾತ್‌ನ ಉಮ್ರೇತ್‌ನಲ್ಲಿ ಬಿಜೆಪಿಯ ಹರ್ಷದ್‌ಭಾಯ್ ಗೋವರ್ಧನ್‌ಭಾಯ್ ಪಾರ್ಮರ್, ತ್ರಿಪುರಾದಲ್ಲಿ ಧರ್ಮನಗರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಜಾಹರ್ ಚಕ್ರವರ್ತಿ ಗೆಲುವು ಸಾಧಿಸಿದ್ದಾರೆ. ಕರ್ನಾಟಕದ ಬಾಗಲಕೋಟೆಯಲ್ಲಿ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್‌ನ ಉಮೇಶ್ ಮೇಟಿ ಹಾಗೂ ಸಮರ್ಥ್ ಶಾಮನೂರು ಗೆಲುವು ದಾಖಲಿಸಿದ್ದಾರೆ.

ಗುಜರಾತ್‌ನ ಉಮ್ರೇತ್ ಕ್ಷೇತ್ರದಲ್ಲಿ ಬಿಜೆಪಿ ಗೆಲುವು ದಾಖಲಿಸಿದೆ. ಬಾರಾಮತಿಯಿಂದ ಸುನೇತ್ರಾ ಪವಾರ್ ಗೆಲುವು ದಾಖಲಿಸಿದ್ದಾರೆ. ಗುಜರಾತ್‌ನ ಉಮ್ರೇತ್ ಕ್ಷೇತ್ರದ ಶಾಸಕರಾಗಿದ್ದ ಗೋವಿರಭಾಯಿ ರೈಜಿಭಾಯಿ ಪಾರ್ಮರ್, ಕರ್ನಾಟದ ಬಾಗಲಕೋಟೆ ಕ್ಷೇತ್ರದ ಶಾಸಕರಾಗಿದ್ದ ಎಚ್.ವೈ. ಮೇಟಿ, ದಾವಣಗೆರೆ ದಕ್ಷಿಣ ಕ್ಷೇತ್ರದ ಶಾಮನೂರು ಶಿವಶಂಕರಪ್ಪ, ರಹುರಿ ಕ್ಷೇತ್ರದ ಶಿವಾಜಿ ಭಾನುದಾಸ್ ಕಾರ್ಡಿಲೆ,, ನಾಗಾಲ್ಯಾಂಡ್‌ನ ಕೊರಿಡಾಂಗ್ ಕ್ಷೇತ್ರದ ಬಿಸ್ವ ಬಂಧು ಸೇನ್ ಅವರ ನಿಧನದಿಂದ ತೆರವಾದ ಕ್ಷೇತ್ರಗಳಿಗೆ ಮತದಾನ ನಡೆದಿತ್ತು.

## ಭಯಮುಕ್ತ ಬಂಗಾಳ: ಪ್ರಧಾನಿ ಮೋದಿ ಘೋಷಣೆ



**ನವದೆಹಲಿ, ಮೇ 4:** ದಶಕಗಳ ರಾಜಕೀಯ ಇತಿಹಾಸದಲ್ಲಿ ಮಮತಾ ಬ್ಯಾನರ್ಜಿ ಅವರ ಅಭೇದ್ಯ ಕೋಟೆ ಎಂದು ಕರೆಯಲ್ಪಡುತ್ತಿದ್ದ ಪಶ್ಚಿಮ ಬಂಗಾಳವನ್ನು ಭಾರತೀಯ ಜನತಾ ಪಕ್ಷ ಧೂಳೀಪಟ ಮಾಡಿದೆ. ಭಾರತೀಯ ಚುನಾವಣಾ ಇತಿಹಾಸದಲ್ಲೇ ಪಶ್ಚಿಮ ಬಂಗಾಳದಲ್ಲಿ ಬಿಜೆಪಿಗೆ ಅಭೂತಪೂರ್ವ ಜಯ ಸಿಕ್ಕಿದೆ. ಪಕ್ಷದ ಸಾಧನೆ ಬಗ್ಗೆ ದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ಬಂಗಾಳದಲ್ಲಿ ಕಮಲ ಕೇವಲ ಅರಳಿಲ್ಲ, ಅದು ಹಿಮಾಲಯದ ತಪ್ಪಲಿನಿಂದ ಗಂಗಾಸಾಗರದವರೆಗೆ ಅಬ್ಬರಿಸಿದೆ. ಇಂದು ಬಿಜೆಪಿ ಗೆದ್ದಿದೆ ಎಂದರೆ ಅದರ ಗಮನ ಬದಲಾವಣೆಯ ಮೇಲಿರಬೇಕೇ ಹೊರತು ಸೇಡಿನ ಮೇಲಲ್ಲ. ನಮ್ಮ ಗುರಿ ಭವಿಷ್ಯದ ಮೇಲಿರಬೇಕು, ಭಯದ ಮೇಲಲ್ಲ. ರಾಜ್ಯವನ್ನು ದಶಕಗಳಿಂದ ಕಾಡುತ್ತಿರುವ ರಾಜಕೀಯ ಹಿಂಸಾಚಾರದ ಚಕ್ರವನ್ನು ಅಂತ್ಯಗೊಳಿಸುವಂತೆ ಅವರು ಎಲ್ಲಾ ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದರು. ಬಂಗಾಳದ ಪುತ್ರ ಶ್ಯಾಮ ಪ್ರಸಾದ್ ಮುಖರ್ಜಿ ಅವರ ಹೆಸರನ್ನು ಉಲ್ಲೇಖಿಸಿದ ಮೋದಿ, ಅವರು ಕಂಡಿದ್ದ ಬಲಿಷ್ಠ ಮತ್ತು ಸಮೃದ್ಧ ಬಂಗಾಳದ ಕನಸು ನನಸಾಗುವ ಕಾಲ ಬಂದಿದೆ. ಇಂದು ಬಂಗಾಳವು ಭಯ ಮುಕ್ತವಾಗಿದೆ ಎಂದು ಘೋಷಿಸಿದರು. ಪಕ್ಷದ ಅಧ್ಯಕ್ಷ ನಿತಿನ್ ನವೀನ್ ಅವರ ನಾಯಕತ್ವವನ್ನು ಶ್ಲಾಘಿಸಿದ ಮೋದಿ, ಕಾಂಗ್ರೆಸ್ ಪಕ್ಷವು 'ಅರ್ಬನ್ ನಕ್ಸಲ್' ಸಿದ್ಧಾಂತದತ್ತ ವಾಲಿ ಜನರಿಂದ ತಿರಸ್ಕರಿಸಲ್ಪಟ್ಟಿದೆ ಎಂದು ಟೀಕಿಸಿದರು. ದಶಕಗಳ ಕಾಲ ಬಿಜೆಪಿಗೆ ಸವಾಲಾಗಿದ್ದ ಬಂಗಾಳದಲ್ಲಿ ಈಗ ಕಮಲ ಅರಳಿದ್ದು, ಹೂಗ್ಲಿ ನದಿಯ ದಡದಲ್ಲಿ 'ಪರಿವರ್ತನೆ'ಯ ಪರ್ವ ಆರಂಭವಾಗಿದೆ ಎಂದರು.

### ಎನ್‌ಡಿಎ ಆಡಳಿತದ ರಾಜ್ಯಗಳ ಸಂಖ್ಯೆ 21ಕ್ಕೆ ಏರಿಕೆ

ರಾಷ್ಟ್ರೀಯ ಪ್ರಜಾಸತ್ತಾತ್ಮಕ ಮೈತ್ರಿಕೂಟ (ಎನ್‌ಡಿಎ) ಆಡಳಿತ ನಡೆಸುವ ರಾಜ್ಯಗಳ ಸಂಖ್ಯೆ 21ಕ್ಕೆ ಏರಿಕೆಯಾಗಿದೆ. ಪಶ್ಚಿಮ ಬಂಗಾಳ ಗೆಲುವಿನ ನಂತರ ಬಿಜೆಪಿ 15 ರಾಜ್ಯಗಳಲ್ಲಿ ಸ್ವತಂತ್ರವಾಗಿ ಆಡಳಿತ ನಡೆಸಲಿದ್ದು, ಬಿಹಾರ(ಜೆಡಿಯು) ಜೊತೆ), ಆಂಧ್ರಪ್ರದೇಶ (ಟಿಡಿಪಿ ಜೊತೆ), ನಾಗಾಲ್ಯಾಂಡ್ (ನಾಗಾ ಪೀಪಲ್ಸ್ ಫ್ರಂಟ್ ಜೊತೆ), ಮೇಘಾಲಯ (ನ್ಯಾಷನಲ್ ಪೀಪಲ್ಸ್ ಪಾರ್ಟಿ ಜೊತೆ) ಮೈತ್ರಿಕೂಟದಿಂದಾಗಿ ಮೈತ್ರಿಕೂಟ ಆಡಳಿತವಿರುವ ರಾಜ್ಯಗಳ ಸಂಖ್ಯೆ 21 ಕ್ಕೆ ಏರಿದೆ. ಏತನ್ಮಧ್ಯೆ, ಕೇಂದ್ರದಲ್ಲಿ ಪ್ರಮುಖ ವಿರೋಧ ಪಕ್ಷವಾದ ಇಂಡಿ ಬಣ, ತಮಿಳುನಾಡನ್ನು ಕಳೆದುಕೊಂಡಿದೆ. ಆದರೆ ಕೇರಳವನ್ನು ಗೆದ್ದ ನಂತರ ದೇಶಾದ್ಯಂತ ಆರು ರಾಜ್ಯಗಳಲ್ಲಿ ಅಧಿಕಾರ ಉಳಿಸಿಕೊಂಡಿದೆ.

### ಮೊದಲ ಬಾರಿಗೆ ಕೇರಳಂನ ಮೂರು ಕ್ಷೇತ್ರಗಳಲ್ಲಿ ಬಿಜೆಪಿಗೆ ಗೆಲುವು

ತಿರುವನಂತಪುರಂ, ಮೇ 4: ದೇವರ ನಾಡಿನಲ್ಲಿ ನೆಲೆ ಕಂಡುಕೊಳ್ಳಲು ದಶಕಗಳಿಂದ ಹೋರಾಡುತ್ತಿದ್ದ ಬಿಜೆಪಿಗೆ ಈ ಬಾರಿಯ ವಿಧಾನಸಭಾ ಚುನಾವಣೆ ಅಭೂತಪೂರ್ವ ಯಶಸ್ಸು ತಂದುಕೊಟ್ಟಿದೆ.

ಇದೇ ಮೊದಲ ಬಾರಿಗೆ ಮೂರು ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ಜಯಭೇರಿ ಬಾರಿಸುವ ಮೂಲಕ ಇತಿಹಾಸ ನಿರ್ಮಿಸಿದೆ. ಕೇರಳದ ಬಿಜೆಪಿ ರಾಜ್ಯಾಧ್ಯಕ್ಷ ರಾಜೀವ್ ಚಂದ್ರಶೇಖರ್ ನೇಮಮ್ ಕ್ಷೇತ್ರದಲ್ಲಿ, ಬಿ.ಬಿ. ಗೋಪಕುಮಾರ್ ಚಾತನೂರ್‌ನಲ್ಲಿ ಜಯಗಳಿಸಿದ್ದಾರೆ. ಮಾಜಿ ಕೇಂದ್ರ ಸಚಿವ ಮುರಳೀಧರನ್ ಅವರು ಕಲಕುಟ್ಟಂದಿಂದ ವಿಜಯ ಸಾಧಿಸಿದ್ದಾರೆ. ಇದು ಕೇರಳದ ರಾಜಕೀಯ ಇತಿಹಾಸದಲ್ಲಿ ಬಿಜೆಪಿಯ ಅತ್ಯಂತ ಯಶಸ್ವಿ ವಿಧಾನಸಭಾ ಚುನಾವಣೆಯಾಗಿದೆ. ಕೇರಳದಲ್ಲಿ ಬಿಜೆಪಿ ಅಧಿಕಾರ ಹಿಡಿಯಲು ತಳಮಟ್ಟದಿಂದ ಬಹಳ ಪ್ರಯತ್ನ ನಡೆಸುತ್ತಿದೆ. 2016ರಲ್ಲಿ ಓ. ರಾಜಗೋಪಾಲ್ ಅವರು ನೇಮಮ್ ಕ್ಷೇತ್ರದಲ್ಲಿ ಗೆಲ್ಲುವ ಮೂಲಕ ಬಿಜೆಪಿ ಮೊದಲ ಬಾರಿಗೆ ಕೇರಳ ವಿಧಾನಸಭೆ ಪ್ರವೇಶಿಸಿತ್ತು. ಆದರೆ 2021ರ ಚುನಾವಣೆಯಲ್ಲಿ ಪಕ್ಷವು ಯಾವುದೇ ಸ್ಥಾನ ಗೆಲ್ಲಲು ಸಾಧ್ಯವಾಗಿರಲಿಲ್ಲ.

# ಬಾಗಲಕೋಟೆ ಕಾಂಗ್ರೆಸ್ ಭದ್ರಕೋಟೆ, ದಾವಣಗೆರೆಯಲ್ಲಿ ಪ್ರಯಾಸದ ಗೆಲುವು

**ಬೆಂಗಳೂರು, ಮೇ 4:** ರಾಜ್ಯದಲ್ಲಿ ನಡೆದ ಬಾಗಲಕೋಟೆ, ದಾವಣಗೆರೆ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಗೆದ್ದಿದೆ. ಬಾಗಲಕೋಟೆಯಲ್ಲಿ ಕಾಂಗ್ರೆಸ್ ನಿರೀಕ್ಷೆಗೂ ಮೀರಿದ ರೀತಿಯಲ್ಲಿ ಗೆಲುವು ಸಾಧಿಸಿದ್ದರೆ, ದಾವಣಗೆರೆಯಲ್ಲಿ ಪ್ರಯಾಸದ ಗೆಲುವು ದಾಖಲಿಸಿದೆ.

ಜಿದ್ದಾಜಿದ್ದಿಯ ಹೋರಾಟದ ಕಣವಾಗಿದ್ದ ಬಾಗಲಕೋಟೆ ಉಪಚುನಾವಣೆಯಲ್ಲಿ ಕಾಂಗ್ರೆಸ್‌ನಲ್ಲಿ ಉಮೇಶ್ ಮೇಟಿ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ವಿರುದ್ಧ ಗೆದ್ದು ಬೀಗಿದ್ದಾರೆ. ಈ ಮೂಲಕ ತಮ್ಮ ತಂದೆ ದಿ. ಎಚ್.ವೈ. ಮೇಟಿ ಉತ್ತರಾಧಿಕಾರಿ ಹೊರಹೊಮ್ಮಿದ್ದಾರೆ.

ಈ ಉಪಚುನಾವಣೆಯಲ್ಲಿ ಉಮೇಶ್ ಮೇಟಿ 21,866 ಮತಗಳ ಅಂತರದಿಂದ ಜಯಗಳಿಸಿದ್ದಾರೆ. ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿಗೆ ಒಟ್ಟು 97,941 ಮತಗಳು ಲಭಿಸಿದರೆ, ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಅವರಿಗೆ 76,075 ಮತಗಳು ದೊರೆತಿವೆ. ಈ ಮೂಲಕ ಉಮೇಶ್ ಮೇಟಿ ಅವರು 21,866 ಮತಗಳ ಅಂತರದಲ್ಲಿ ಸ್ಪಷ್ಟ ಮುನ್ನಡೆಯೊಂದಿಗೆ ಗೆಲುವು ಸಾಧಿಸಿದ್ದಾರೆ .

ದಾವಣಗೆರೆ ದಕ್ಷಿಣ ಕ್ಷೇತ್ರದ ಉಪಚುನಾವಣೆಯಲ್ಲಿ ಒಟ್ಟು 24 ಸುತ್ತುಗಳ ಮುಕ್ತಾಯದ ಬಳಿಕ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಗೆಲುವಿನ ನಗೆ ಬೀರಿದ್ದಾರೆ. 5,708 ಮತಗಳ ಅಂತರದಿಂದ ಸಮರ್ಥ್ ಅವರು ತಮ್ಮ ಪ್ರತಿಸ್ಪರ್ಧಿ ಶ್ರೀನಿವಾಸ್ ದಾಸಕರಿಯಪ್ಪ ಅವರ ವಿರುದ್ಧ ಗೆದ್ದು ಬೀಗಿದ್ದು, ವಿಧಾನಸೌಧ ಪ್ರವೇಶಿಸಲು ಸಜ್ಜಾಗಿದ್ದಾರೆ.

ಸಮರ್ಥ್ ಒಟ್ಟು 69,578 ಮತಗಳನ್ನು ಪಡೆದರೆ, ಬಿಜೆಪಿಯ ಶ್ರೀನಿವಾಸ್ ದಾಸಕರಿಯಪ್ಪ ಅವರು 63, 870 ಮತಗಳನ್ನು ಗಳಿಸಿ ಪರಾಭವಗೊಂಡಿದ್ದಾರೆ. ಎಸ್‌ಡಿಪಿಐನ ಅಭ್ಯರ್ಥಿ ಅಪ್ಸರ್ ಕೊಡ್ಲಿಪೇಟೆ–18,975 ಮತಗಳನ್ನು ಗಳಿಸುವ ಮೂಲಕ ಮೂರನೇ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡಿದ್ದಾರೆ. ಒಟ್ಟಾರೆ ತಮ್ಮ ಅಜ್ಜ ಶಾಮನೂರು ಶಿವಶಂಕರಪ್ಪ ಅವರು ಪ್ರತಿನಿಧಿಸುತ್ತಿದ್ದ ಕ್ಷೇತ್ರವನ್ನು ಜಯಿಸುವ ಮೂಲಕ ಮೊಮ್ಮಗ ಉಳಿಸಿಕೊಂಡಿದ್ದಾರೆ.

ಆಡಳಿತಾರೂಢ ಕಾಂಗ್ರೆಸ್ ಹಾಗೂ ಪ್ರತಿಪಕ್ಷ ಬಿಜೆಪಿ ನಡುವೆ ತೀವ್ರ ಜಿದ್ದಾಜಿದ್ದಿಗೆ ಕಾರಣವಾಗಿದ್ದ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ, ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ ಸಮರ್ಥ್ ಶಾಮನೂರು ಕೊನೆಗೂ ಪ್ರಯಾಸದ ಗೆಲುವು ದಾಖಲಿಸಿದ್ದಾರೆ. ಐದು ರಾಜ್ಯಗಳ ಚುನಾವಣೆ ಫಲಿತಾಂಶದೊಂದಿಗೆ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ಉಪ ಚುನಾವಣೆಯ ಫಲಿತಾಂಶ ಸೋಮವಾರ ಪ್ರಕಟವಾಗಿದ್ದು, ಆಡಳಿತರೂಢ ಕಾಂಗ್ರೆಸ್ ಎರಡೂ ಕ್ಷೇತ್ರಗಳಲ್ಲಿ ಗೆದ್ದು ಬೀಗಿದೆ.

### ವಿಧಾನಸಭೆ ಪ್ರವೇಶಿಸಲು ಸಮರ್ಥ್ ಸಜ್ಜು



### ಚರಂತಿಮಠ ವಿರುದ್ಧ ಗೆದ್ದು ಬೀಗಿದ ಉಮೇಶ್ ಮೇಟಿ



## ನಿತ್ಯ ಪಂಚಾಂಗ 5.05.2026 ಮಂಗಳವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ-ವಸಂತ ಋತು, ಚಾಂದ್ರಮಾನ, ಚೈತ್ರ-ವೈಶಾಖ ಮಾಸ

ವೈಶಾಖ ಬಹುಳ, ಚೌತಿ, ಜ್ಯೇಷ್ಠ ನಕ್ಷತ್ರ,
ಸಂಕಷ್ಟ ಚತುರ್ಥಿ
ಹಂಪಾಪುರ, ಮೈಸೂರು ರಥ,
ಕೋಡಿಮಠ ಶಿವಲಿಂಗಜ್ಜಯ್ಯ ಪುಣ್ಯಸ್ಮರಣೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿಯ ಆಡಳಿತಕ್ಕೆ, ದೇಶದ ಸುಭದ್ರತೆಗೆ ಸಿಕ್ಕ ಗೆಲುವು

### ರಾಜ್ಯವನ್ನು ಸಾಲದ ಸುಳಿಯಲ್ಲಿ ಸಿಲುಕಿಸಿದ ಕಾಂಗ್ರೆಸ್ ಮುಂದಿನ ಚುನಾವಣೆಯಲ್ಲಿ ನೆಲಕಚ್ಚಲಿದೆ ಎಂಬುದು ಸ್ಪಷ್ಟ: ಪ್ರತಿಪಕ್ಷ ನಾಯಕ ಅಶೋಕ್



ಬೆಂಗಳೂರು, ಮೇ 4: ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿಯ ಆಡಳಿತಕ್ಕಾಗಿ ಹಾಗೂ ದೇಶದ ಸುಭದ್ರತೆಗಾಗಿ ಜನರು ಬಿಜೆಪಿಯನ್ನು ಗೆಲ್ಲಿಸಿದ್ದಾರೆ. ಈ ಚುನಾವಣಾ ಫಲಿತಾಂಶದಿಂದ ದೇಶದಲ್ಲಿ ಕಾಂಗ್ರೆಸ್ ಮುಕ್ತವಾಗುವ ಲಕ್ಷಣ ಕಂಡುಬಂದಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದ್ದಾರೆ.

ಪಂಚರಾಜ್ಯಗಳ ಚುನಾವಣಾ ಫಲಿತಾಂಶದ ಕುರಿತು ಪ್ರತಿಕ್ರಿಯೆ ನೀಡಿದ ಅವರು, ದೇಶವನ್ನು ಭದ್ರವಾಗಿ ಇಡಲು ಪ್ರಧಾನಿ ನರೇಂದ್ರ ಮೋದಿಯವರಿಂದ ಮಾತ್ರ ಸಾಧ್ಯ ಎಂದು ಮತದಾರರು ಸಂದೇಶ ನೀಡಿದ್ದಾರೆ. ಮುಖ್ಯವಾಗಿ ಪಶ್ಚಿಮ ಬಂಗಾಳದಲ್ಲಿ ಆಗಿರುವ ದೊಡ್ಡ ಬದಲಾವಣೆಯ ಬಗ್ಗೆ ಎಲ್ಲ ಕಡೆ ಚರ್ಚೆ ನಡೆಯುತ್ತಿದೆ. ಪಶ್ಚಿಮ ಬಂಗಾಳವನ್ನು ಭಯೋತ್ಪಾದಕರ ಹೆಬ್ಬಾಗಿಲಾಗಿಸಿದ, 2 ಕೋಟಿ ಬಾಂಗ್ಲಾ ವಲಸಿಗರಿಗೆ ಗುರುತಿನಚೀಟಿ ಕೊಟ್ಟ ಮಮತಾ ಬ್ಯಾನರ್ಜಿ ಅವರ ರಾಜಕೀಯ ಬದುಕು ಅಂತ್ಯಗೊಂಡಿದೆ. ದೇಶದ ಭದ್ರತೆಗೆ ಪ್ರಧಾನಿ ನರೇಂದ್ರ ಮೋದಿಯೇ ಸೂಕ್ತ ಎಂದು ಜನರು ತೀರ್ಮಾನಿಸಿದ್ದಾರೆ. ಅಲ್ಲಿ ಪ್ರತಿದಿನ ಟಿಎಂಸಿ ಗೂಂಡಾಗಳು ಜನರ ಮೇಲೆ, ಅಧಿಕಾರಿಗಳ ಮೇಲೆ ಹಲ್ಲೆ ಮಾಡುತ್ತಿದ್ದರು. ಅಂತಹ ಪಕ್ಷವನ್ನು ಜನರು ತಿರಸ್ಕರಿಸಿದ್ದಾರೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಮುಕ್ತ ದೇಶವಾಗಲು ಸಿದ್ಧತೆ ನಡೆದಿದೆ ಎಂದರು.

ದೇಶವಿರೋಧಿ ಚಟುವಟಿಕೆ ಮಾಡುವವರನ್ನು, ದೇಶದ್ರೋಹಿಗಳನ್ನು ದೇಶದಿಂದ ಹೊರಕ್ಕೆ ಹಾಕಲು ಮತದಾರರ ಪಟ್ಟಿಯ ಪರಿಷ್ಕರಣೆ ನೆರವಾಗುತ್ತದೆ. ಅಂಥವರು ದೇಶದಿಂದ ಹೊರಗೆ ಹೋದಾಗಲೇ ದೇಶ ಸಮೃದ್ಧವಾಗುತ್ತದೆ. ನಿಜವಾದ ಮತದಾರರು ದೇಶದ ಅಭಿವೃದ್ಧಿಗೆ ಮತ ನೀಡುತ್ತಾರೆ. ಹೊರಗಿನ ದೇಶದವರು ಇದ್ದರೆ, ದೇಶದ್ರೋಹಿ ಕೆಲಸ ಮಾಡುವ ಪಕ್ಷಕ್ಕೆ ಮತ ನೀಡುತ್ತಾರೆ.

ಮತದಾರರ ಪಟ್ಟಿಯ ಪರಿಷ್ಕರಣೆ ಸರಿಯಾಗಿ ನಡೆದಿದೆ. ಬೆಂಗಳೂರಿನಲ್ಲೂ ಹೀಗೆಯೇ ನಡೆಯುತ್ತಿದೆ. ರಾಮನಗರ, ಚನ್ನಪಟ್ಟಣ ಮೊದಲಾದ ಭಾಗಗಳಿಂದ ಬೆಂಗಳೂರಿಗೆ ಬಂದು ಮತ ಚಲಾಯಿಸುತ್ತಾರೆ. ಮತದಾರರ ಪಟ್ಟಿ ಪರಿಷ್ಕರಣೆಯಿಂದ ಬಿಜೆಪಿಗೆ ಲಾಭವೇ ನಷ್ಟವೇ ಎನ್ನುವ ಪ್ರಶ್ನೆಯೇ ಬರುವುದಿಲ್ಲ. ಇದು ದೇಶದ ಭದ್ರತೆಗೆ ಸಂಬಂಧಿಸಿದ ವಿಚಾರವಾಗಿದ್ದು, ಈ ಪ್ರಕ್ರಿಯೆಯಿಂದ ದೇಶಕ್ಕೆ ಲಾಭವಾಗುತ್ತದೆ ಎಂದರು.

ಅಸ್ಸಾಂ, ಪುದುಚೇರಿ, ಪಶ್ಚಿಮ ಬಂಗಾಳ ರಾಜ್ಯಗಳ ಚುನಾವಣಾ ಫಲಿತಾಂಶದಿಂದ ಕರ್ನಾಟಕದ ಕಾಂಗ್ರೆಸ್ ಸರ್ಕಾರ ಪಾಠ ಕಲಿಯಬೇಕಿದೆ. ಗ್ಯಾರಂಟಿಗಳ ಹೆಸರಲ್ಲಿ ಅಧಿಕಾರಕ್ಕೆ ಬಂದು, ಜನರ ಮೇಲೆ ತೆರಿಗೆಗಳ ಹೊರೆ ಹೇರಿ, ರಾಜ್ಯವನ್ನು ಸಾಲದ ಸುಳಿಯಲ್ಲಿ ಸಿಲುಕಿಸಿರುವ ಕಾಂಗ್ರೆಸ್ ಮುಂದಿನ ಚುನಾವಣೆಯಲ್ಲಿ ನೆಲಕಚ್ಚಲಿದೆ ಎಂಬುದು ಸ್ಪಷ್ಟವಾಗಿದೆ. ರೈತರ ಆತ್ಮಹತ್ಯೆ, ಸರ್ಕಾರಿ ಆಸ್ಪತ್ರೆಗಳಲ್ಲಿ ಬಾಣಂತಿಯರ ಸಾವು, ಬೆಂಗಳೂರಿನಲ್ಲಿ ಮಳೆಯಿಂದಾಗಿ ಜೀವಹಾನಿ, ಸಾರಿಗೆ ನೌಕರರು ಸೇರಿದಂತೆ ಎಲ್ಲ ಸಿಬ್ಬಂದಿಗೆ ವೇತನ ಬಾಕಿ, ಅಬಕಾರಿ ಇಲಾಖೆಯಲ್ಲಿ ಬ್ರಹ್ಮಾಂಡ ಭ್ರಷ್ಟಾಚಾರ ಹೀಗೆ ಅನೇಕ ತಪ್ಪುಗಳ ಮೂಲಕ ಕಾಂಗ್ರೆಸ್ ಜನರ ಕೆಂಗಣ್ಣಿಗೆ ಗುರಿಯಾಗಿದೆ. ಆಡಳಿತದ ಕಡೆಗೆ ಗಮನ ಕೊಡದೆ ಸಿಎಂ ಕುರ್ಚಿ ಕಚ್ಚಾಟದಲ್ಲೇ ನಿರತರಾಗಿರುವ ಕಾಂಗ್ರೆಸ್ ನಾಯಕರಿಗೆ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಜನರು ಉತ್ತರ ನೀಡಲಿದ್ದಾರೆ. ಪಶ್ಚಿಮ ಬಂಗಾಳದಂತೆಯೇ ಕರ್ನಾಟಕದಲ್ಲೂ ಕಾಂಗ್ರೆಸ್ ಸೋತು ಮನೆಗೆ ಹೋಗಲಿದೆ ಎಂದರು. ಕರ್ನಾಟಕದಲ್ಲಿ ಉಪಚುನಾವಣೆ ಸಿಂಪತಿ ಮೇಲೆ ನಡೆದಿದೆ. ಶಾಸಕರು ನಿಧನರಾಗಿದ್ದರಿಂದ ಆ ದಯೆಯ ಮೇಲೆ ಮತ ಕೇಳಲಾಗಿದೆ. ಬಾಗಲಕೋಟೆ ಹಾಗೂ ದಾವಣಗೆರೆಯಲ್ಲಿ ಬಿಜೆಪಿಗೆ ಜನರಿಂದ ಉತ್ತಮ ಬೆಂಬಲ ಸಿಕ್ಕಿದೆ. ಕಾಂಗ್ರೆಸ್‌ನಲ್ಲಿ ಆಗಿರುವ ಒಡಕಿನಿಂದ ಬಿಜೆಪಿಗೆ ಯಾವುದೇ ಲಾಭವಿಲ್ಲ. ಕಾಂಗ್ರೆಸ್ ಪಕ್ಷ ಮುಸ್ಲಿಮರಿಗೆ ಅನ್ಯಾಯ ಮಾಡುತ್ತಿದೆ ಎಂದು ಈಗಾದರೂ ಗೊತ್ತಾಗಿದೆ. ಈ ಬಗ್ಗೆ ಮುಸ್ಲಿಮರಲ್ಲಿ ಹೆಚ್ಚು ಅರಿವು ಮೂಡಬೇಕಿದೆ ಎಂದರು.

ಪ್ರಧಾನಿ ನರೇಂದ್ರ ಮೋದಿ, ಗೃಹಸಚಿವ ಅಮಿತ್ ಶಾ, ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಹಾಗೂ ಬಿಜೆಪಿಯ ಮುಖಂಡರು, ಕಾರ್ಯಕರ್ತರ ಒಟ್ಟಾದ ಶ್ರಮದಿಂದಾಗಿ ಕಮಲ ಇನ್ನಷ್ಟು ಅರಳಿ ಬಲವಾಗಿದೆ. ಚುನಾವಣೆಯಲ್ಲಿ ಶ್ರಮಿಸಿದ ಎಲ್ಲರಿಗೂ ಹೃತ್ಪೂರ್ವಕ ಅಭಿನಂದನೆ ಸಲ್ಲಿಸುತ್ತಿದ್ದೇನೆ ಎಂದು ಅವರು ಹೇಳಿದ್ದಾರೆ.

## ಬಂಗಾಳ ಫಲಿತಾಂಶದಿಂದ ಪಾಕ್, ಬಾಂಗ್ಲಾಕ್ಕೆ ಆಘಾತ

ಬೆಂಗಳೂರು, ಮೇ 5: ಪಂಚರಾಜ್ಯ ಚುನಾವಣಾ ಫಲಿತಾಂಶಗಳ ಕುರಿತು ರಾಜಕೀಯ ವಲಯದಲ್ಲಿ ಪರ-ವಿರೋಧದ ಚರ್ಚೆಗಳು ಜೋರಾಗಿವೆ. ಅದರಲ್ಲೂ ಪಶ್ಚಿಮ ಬಂಗಾಳದ ಫಲಿತಾಂಶ ರಾಷ್ಟ್ರಮಟ್ಟದಲ್ಲಿ ಗಮನ ಸೆಳೆದಿದೆ. ಈ ಕುರಿತು ರಾಜ್ಯದ ಬಿಜೆಪಿ ನಾಯಕ ಹಾಗೂ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ತಮ್ಮದೇ ಆದ ಶೈಲಿಯಲ್ಲಿ ವ್ಯಾಖ್ಯಾನಿಸಿದ್ದು, ಅಲ್ಲಿನ ರಾಜಕೀಯ ಬೆಳವಣಿಗೆಗಳಿಗೂ ಮತ್ತು ನೆರೆರಾಷ್ಟ್ರಗಳಿಗೂ ಇರುವ ಸಂಬಂಧದ ಕುರಿತು ಮಾತನಾಡಿದ್ದಾರೆ. ಬಂಗಾಳದ ರಾಜಕೀಯ ಸ್ಥಿತಿಗತಿಗಳು ಕೇವಲ ಒಂದು ರಾಜ್ಯಕ್ಕೆ ಸೀಮಿತವಾಗಿಲ್ಲ ಎಂದು ಅಭಿಪ್ರಾಯಪಟ್ಟಿರುವ ಅವರು, ಮತದಾನದ ಮಾದರಿ ಮತ್ತು ಅಲ್ಲಿನ ಪ್ರಸ್ತುತ ರಾಜಕೀಯ, ರಾಷ್ಟ್ರೀಯ ಭದ್ರತೆಯ ದೃಷ್ಟಿಯಿಂದಲೂ ಚರ್ಚೆಗೆ ಒಳಪಡಬೇಕು ಎಂದಿದ್ದಾರೆ. ಚುನಾವಣಾ ಕಣದಲ್ಲಿ ಎದುರಾದ ಸವಾಲುಗಳು ಮತ್ತು ಮತದಾರರ ಧ್ರುವೀಕರಣದ ಬಗ್ಗೆ ಅವರು ತಮ್ಮ ಆತಂಕವನ್ನು ವ್ಯಕ್ತಪಡಿಸಿದ್ದಾರೆ. ಪಶ್ಚಿಮ ಬಂಗಾಳದ ಈ ಚುನಾವಣಾ ಫಲಿತಾಂಶ ಭಾರತದ ನೆರೆರಾಷ್ಟ್ರಗಳಾದ ಪಾಕಿಸ್ತಾನ ಮತ್ತು ಬಾಂಗ್ಲಾದೇಶಗಳಿಗೆ ನೀಡಿದ ದೊಡ್ಡ ಆಘಾತವಾಗಿದೆ ಎಂದು ಆರ್. ಅಶೋಕ್ ಗುಡುಗಿದ್ದಾರೆ. ಭಾರತದಲ್ಲಿ ಎನ್‌ಡಿಎ ಮೈತ್ರಿಕೂಟವು ಮರಳಿ ಅಧಿಕಾರಕ್ಕೆ ಬಂದಿರುವುದು ಮತ್ತು ಬಂಗಾಳದಲ್ಲಿ ಬಿಜೆಪಿ ತನ್ನ ಪ್ರಭಾವವನ್ನು ಉಳಿಸಿಕೊಂಡಿರುವುದು ದೇಶವಿರೋಧಿ ಶಕ್ತಿಗಳಿಗೆ ಹಾಗೂ ಗಡಿಭಾಗದಲ್ಲಿ ಅಸ್ಥಿರತೆ ಬಯಸುವ ನೆರೆಹೊರೆಯ ರಾಷ್ಟ್ರಗಳಿಗೆ ನಡುಕ ಹುಟ್ಟಿಸಿದೆ ಎಂಬುದು ಅವರ ಪ್ರಬಲವಾದ ವಾದವಾಗಿದೆ.

## ಬಾಗಲಕೋಟೆ - ದಾವಣಗೆರೆ ಚುನಾವಣೆ: ಕಾಂಗ್ರೆಸ್ ಭರ್ಜರಿ ಗೆಲುವು ಸುರ್ಜೇವಾಲ ಧನ್ಯವಾದ



ಬೆಂಗಳೂರು, ಮೇ 4: ಕರ್ನಾಟಕದ ಸಹೋದರ ಮತ್ತು ಸಹೋದರಿಯರಿಗೆ ಧನ್ಯವಾದಗಳು!

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಮತ್ತು ಕರ್ನಾಟಕ ರಾಷ್ಟ್ರೀಯ ಕಾಂಗ್ರೆಸ್ ಅಭ್ಯರ್ಥಿಗಳು ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಉಪಚುನಾವಣೆ ಗಳೆರಡರಲ್ಲೂ ಬಿಜೆಪಿಯನ್ನು ಸೋಲಿಸಿ ಭರ್ಜರಿ ಜಯ ದಾಖಲಿಸಿದ್ದಾರೆ.

ಇದು ಕನ್ನಡ ಸ್ವಾಭಿಮಾನಕ್ಕೆ ಸಂದ ಜಯ!

ಇದು ಪ್ರತಿಯೊಬ್ಬ ಕನ್ನಡಿಗನ ಜಯ!

ಇದು ಕಾಂಗ್ರೆಸ್ ಗ್ಯಾರಂಟಿಗಳ ಜಯ!

ಇದು ಕಾಂಗ್ರೆಸ್ ಕಾರ್ಯಕರ್ತರ ಜಯ!


ಇದು ಶ್ರೀ @kharge ಮತ್ತು ಶ್ರೀ @RahulGandhi ಅವರ ನಾಯಕತ್ವಕ್ಕೆ ಸಂದ ಜಯ!

ಇದು ಮುಖ್ಯಮಂತ್ರಿ @siddaramaiah, ಕೆಪಿಸಿಸಿ ಅಧ್ಯಕ್ಷ @DKShivakumar ಮತ್ತು ನೆಲಮಟ್ಟದಲ್ಲಿ ಶ್ರಮಿಸಿದ ಪ್ರತಿಯೊಬ್ಬ ಕಾಂಗ್ರೆಸ್ ನಾಯಕರು, ಸಚಿವರು, ಶಾಸಕರು, ಸಂಸದರು, ವಿಧಾನ ಪರಿಷತ್ ಸದಸ್ಯರು, ಮಾಜಿ ಶಾಸಕರು ಹಾಗೂ ಪದಾಧಿಕಾರಿಗಳ ಜಯ!

ನಮ್ಮ ಕಾಂಗ್ರೆಸ್ ಅಭ್ಯರ್ಥಿಗಳಾದ ಉಮೇಶ್ ಮೇಟಿ (ಬಾಗಲಕೋಟೆ) ಮತ್ತು ಸಮರ್ಥ್ ಶಾಮನೂರು (ದಾವಣಗೆರೆ ದಕ್ಷಿಣ) ಅವರಿಗೆ ಸಿಕ್ಕ ಭವ್ಯ ಜಯವಿದು ಎಂದು ಕಾಂಗ್ರೆಸ್ ನಾಯಕ ರಣ್‌ದೀಪ್ ಸುರ್ಜೆವಾಲಾ ತಿಳಿಸಿದ್ದಾರೆ.

## ಬಂಗಾಳ, ಆಸ್ಸಾಂನಲ್ಲಿ ಬಿಜೆಪಿ ಗೆಲುವು: ಬೊಮ್ಮಾಯಿ ಸಂತಸ

### ರಾಜ್ಯದಲ್ಲಿ ಹಣ ಮತ್ತು ಹೆಂಡದ ಬಲದಿಂದ ಕಾಂಗ್ರೆಸ್‌ಗೆ ಜಯ: ಬಸವರಾಜ ಬೊಮ್ಮಾಯಿ



ಬೆಂಗಳೂರು: ಕರ್ನಾಟಕದಲ್ಲಿ ದಾವಣೆಗೆರೆ ಮತ್ತು ಬಾಗಲಕೊಟೆಯಲ್ಲಿ ಹಣ ಮತ್ತು ಹೆಂಡದ ಬಲದಿಂದ ಕಾಂಗ್ರೆಸ್ ಗೆ ಜಯ ಆಗಿದೆ. ಆದರೆ, ರಾಜ್ಯದ ವಾಸ್ತವಿಕ ಸ್ಥಿತಿಯೇ ಬೇರೆ ಇ ದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಈ ಕುರಿತು ಎಕ್ಸ್ ಮಾಡಿರುವ ಅವರು, ಆಸ್ಸಾಂ ಮತ್ತು ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸ್ಪಷ್ಟ ಬಹುಮತದಿಂದ ಅಧಿಕಾರಕ್ಕೆ ಬಂದಿದೆ. ಅಲ್ಲಿನ ಜನರು ಪ್ರಧಾನಿ ನರೇಂದ್ರ ಮೋದಿ, ಹಾಗೂ ಕೇಂದ್ರ ಗೃಹ ಸಚಿವ ಅಮಿತಾ ಅವರ ನಾಯಕತ್ವಕ್ಕೆ ಕೊಟ್ಟಿರುವ ಮನ್ನಣೆ ಮತ್ತು ಬೆಂಬಲ. ಹೀಗಾಗಿ ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಗೃಹ ಸಚಿವ ಅಮಿತ್ ಶಾ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ. ಅಲ್ಲದೇ ಆಸ್ಸಾಂ ಮುಖ್ಯಮಂತ್ರಿ ಹೇಮಂತ್ ಬಿಸ್ವಾಸ್ ಶರ್ಮಾ ಮತ್ತು ಪಶ್ಚಿಮ ಬಂಗಾಳದ ಬಿಜೆಪಿ ನಾಯಕ ಸುವೆಂಧು ಅಧಿಕಾರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದ್ದಾರೆ.

## ಮುಖ್ಯ ಮಾಹಿತಿ ಆಯುಕ್ತರಾಗಿ ಜಿ. ಸತ್ಯವತಿ ಪ್ರಮಾಣವಚನ



**ಬೆಂಗಳೂರು, ಮೇ 4:** ಲೋಕಸಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಮುಖ್ಯ ಆಯುಕ್ತರಾಗಿ ನಿವೃತ್ತ ಐ.ಎ.ಎಸ್ ಅಧಿಕಾರಿ ಜಿ. ಸತ್ಯವತಿ ಅವರು ಇಂದು ದೇವರ ಹೆಸರಿನಲ್ಲಿ ಪ್ರಮಾಣ ವಚನ ಸ್ವೀಕರಿಸಿದರು. ರಾಜ್ಯಪಾಲರಾದ ಗೌರವಾನ್ವಿತ ಥಾವರ್ ಚಂದ್ ಗೆಹ್ಲೋತ್ ಅವರು ಪ್ರಮಾಣವಚನ ಬೋಧಿಸಿದರು. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಾಟೀಲ್, ಇಂಧನ ಸಚಿವ ಕೆ.ಜೆ.ಜಾರ್ಜ್ ಸರ್ಕಾರದ ಮುಖ್ಯಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಮಾಹಿತಿ ಆಯೋಗದ ಆಯುಕ್ತರು ಉಪಸ್ಥಿತರಿದ್ದು, ನೂತನ ಮುಖ್ಯ ಆಯುಕ್ತರಿಗೆ ಶುಭಾಶಯ ಕೋರಿದರು.

## ಕೇರಳದಲ್ಲಿ ಯುಡಿಎಫ್ ಗೆಲುವು ನಿರೀಕ್ಷಿತ, ರಾಜ್ಯ ಉಪಚುನಾವಣೆ ಗೆಲುವು ಗ್ಯಾರಂಟಿ ಯೋಜನೆಗಳಿಗೆ ಸಿಕ್ಕ ಮನ್ನಣೆ: ಸಚಿವ ಎನ್.ಎಸ್. ಬೋಸರಾಜು ಹರ್ಷ



**ಮಡಿಕೇರಿ ಮೇ 04:** ಕೇರಳ ವಿಧಾನಸಭಾ ಚುನಾವಣೆಯಲ್ಲಿ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ಭರ್ಜರಿ ಬಹುಮತ ಸಾಧಿಸಿದ್ದು, ಇದು ನಾವು ನಿರೀಕ್ಷಿಸಿದ ಫಲಿತಾಂಶವೇ ಆಗಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್. ಬೋಸರಾಜು ತಿಳಿಸಿದ್ದಾರೆ.

ಮಡಿಕೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ಫಲಿತಾಂಶವು ಆಡಳಿತ ವಿರೋಧಿ ಅಲೆ ಹಾಗೂ ಕಾಂಗ್ರೆಸ್ ನಾಯಕರ ಮೇಲಿನ ಜನರ ವಿಶ್ವಾಸಕ್ಕೆ ಸಾಕ್ಷಿಯಾಗಿದೆ ಎಂದರು.

ಚುನಾವಣಾ ಪ್ರಚಾರದ ಸಂದರ್ಭದಲ್ಲಿ ಎರಡು ವಾರಗಳ ಕಾಲ ಎರಡು ಜಿಲ್ಲೆಗಳ ಉಸ್ತುವಾರಿಯನ್ನು ತಾವು ವಹಿಸಿಕೊಂಡಿದ್ದಾಗಿ ಸ್ಮರಿಸಿದ ಸಚಿವರು,

"ನಾವು ಪ್ರಚಾರ ಮಾಡುವಾಗಲೇ ಜನರ ಒಲವು ಕಾಂಗ್ರೆಸ್ ಪಕ್ಷದ ಪರವಾಗಿರುವುದು ಸ್ಪಷ್ಟವಾಗಿತ್ತು. ಹಿಂದಿನ ಮುಖ್ಯಮಂತ್ರಿಗಳ ಹಾಗೂ ಸರ್ಕಾರದ ಆಡಳಿತ ವೈಖರಿಯ ವಿರುದ್ಧ ಜನರು ಸಂಪೂರ್ಣವಾಗಿ ತಿರುಗಿಬಿದ್ದಿದ್ದರು. ಈ ಆಡಳಿತ ವಿರೋಧಿ ಅಲೆಯನ್ನು ನಾವು ಮೊದಲೇ ಗ್ರಹಿಸಿದ್ದೆವು," ಎಂದು ಹೇಳಿದರು.

ಚುನಾವಣೆಗೂ ಆರು ತಿಂಗಳ ಮುಂಚಿತವಾಗಿಯೇ ಎಐಸಿಸಿ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರ ಮಾರ್ಗದರ್ಶನದಲ್ಲಿ ಸೂಕ್ತ ಯೋಜನೆಗಳನ್ನು ರೂಪಿಸಿ, ಸಮರ್ಥ ಅಭ್ಯರ್ಥಿಗಳನ್ನು ಕಣಕ್ಕಿಳಿಸಲಾಗಿತ್ತು. ಇದರ ಜೊತೆಗೆ, ರಾಹುಲ್ ಗಾಂಧಿ ಹಾಗೂ ಪ್ರಿಯಾಂಕಾ ಗಾಂಧಿ ಅವರ ಬಗ್ಗೆ ಕೇರಳದ ಜನರಿಗಿರುವ ಅಪಾರ ಪ್ರೀತಿ ಮತ್ತು ಅವರ ಜನಪ್ರಿಯತೆಯು ಯುಡಿಎಫ್ ಗೆಲುವಿನಲ್ಲಿ ನಿರ್ಣಾಯಕ ಪಾತ್ರ ವಹಿಸಿದೆ ಎಂದು ಸಚಿವರು ವಿಶ್ಲೇಷಿಸಿದರು.

"ಇತರ ರಾಜ್ಯಗಳಲ್ಲಿ ನಾವು ಕೇವಲ ಮೈತ್ರಿ ಪಾಲುದಾರರಾಗಿದ್ದೆವು. ಆದರೆ ಕೇರಳದಲ್ಲಿ ನಾವು ಸಾಕಷ್ಟು ಮುಂಚಿತವಾಗಿಯೇ ಯೋಜನೆ ರೂಪಿಸಿ, ತಳಮಟ್ಟದಲ್ಲಿ ಕೆಲಸ ಮಾಡಿದ್ದೆವು. ಜನರ ಒಲವು ಮತ್ತು ನಮ್ಮ ವ್ಯವಸ್ಥಿತ ಕಾರ್ಯತಂತ್ರದಿಂದಾಗಿ ಇಂದು ಅಲ್ಲಿ ಅಧಿಕಾರ ಹಿಡಿಯುವಲ್ಲಿ ಯಶಸ್ವಿಯಾಗಿದ್ದೇವೆ," ಎಂದು ಸಚಿವರು ಹರ್ಷ ವ್ಯಕ್ತಪಡಿಸಿದರು.

ಉಪಚುನಾವಣೆ ಗೆಲುವು ಗ್ಯಾರಂಟಿ ಯೋಜನೆಗಳಿಗೆ ಸಂದ ಜಯ:

ಇದೇ ವೇಳೆ ರಾಜ್ಯದಲ್ಲಿ ನಡೆದ ಎರಡು ವಿಧಾನಸಭಾ ಉಪಚುನಾವಣೆಗಳ ಕುರಿತು ಪ್ರತಿಕ್ರಿಯಿಸಿದ ಸಚಿವರು, "ರಾಜ್ಯದಲ್ಲಿ ಎರಡು ಉಪಚುನಾವಣೆಗಳಲ್ಲಿ ನಮ್ಮ ಪಕ್ಷ ಭರ್ಜರಿ ಗೆಲುವು ಸಾಧಿಸಿದೆ. ಇದು ನಮ್ಮ ರಾಜ್ಯ ಸರ್ಕಾರ ಜಾರಿಗೆ ತಂದಿರುವ ಜನಪರ ಗ್ಯಾರಂಟಿ ಯೋಜನೆಗಳಿಗೆ ಜನತೆ ನೀಡಿರುವ ಸ್ಪಷ್ಟ ಮನ್ನಣೆ ಮತ್ತು ಆಶೀರ್ವಾದವಾಗಿದೆ," ಎಂದು ಸಂತಸ ವ್ಯಕ್ತಪಡಿಸಿದರು.

## ಮೋದಿ ನಾಯಕತ್ವಕ್ಕೆ ಶಕ್ತಿ ತುಂಬಿದ ಫಲಿತಾಂಶ: ಬಿ.ವೈ.ವಿಜಯೇಂದ್ರ



ಬೆಂಗಳೂರು,ಮೇ.4: ಪಶ್ಚಿಮ ಬಂಗಾಲ, ಅಸ್ಸಾಂ, ಪುದುಚೇರಿಯಲ್ಲಿ ಬಿಜೆಪಿ ಗೆಲುವು ಒಂದು ಕಡೆ ನರೇಂದ್ರ ಮೋದಿಜೀ ಅವರ ನಾಯಕತ್ವಕ್ಕೆ ದೊಡ್ಡ ಶಕ್ತಿಯನ್ನು ತುಂಬಿದಂತಾಗಿದೆ. ನಮ್ಮ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್‌ಜೀ ಅವರ ಮೊದಲ ಚುನಾವಣೆ ಇದಾಗಿದೆ. ಬಹುದೊಡ್ಡ ಸಂದೇಶವನ್ನು ನೀಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ವಿಶ್ಲೇಷಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ದೇಶದಲ್ಲಿ ಅಮಿತ್ ಶಾ ಜೀ ಅವರು ಚುನಾವಣಾ ಚಾಣಕ್ಯ ಎಂದು ಪ್ರತಿಯೊಬ್ಬರು ಮಾತನಾಡುತ್ತಿದ್ದಾರೆ. ಅಮಿತ್ ಶಾ ಜೀ ಅವರ ತಂತ್ರಗಾರಿಕೆಯೂ ಈ ಗೆಲುವಿನ ಹಿಂದಿದೆ. 3 ರಾಜ್ಯಗಳಲ್ಲಿ ಪಕ್ಷದ ಗೆಲುವಿಗಾಗಿ ಪಕ್ಷದ ಅಭಿನಂದನೆ ತಿಳಿಸುವುದಾಗಿ ಹೇಳಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಮಾಜಿ ಉಪಮುಖ್ಯಮಂತ್ರಿ ಮತ್ತು ಶಾಸಕ ಡಾ. ಸಿ.ಎನ್. ಅಶ್ವಥನಾರಾಯಣ್, ವಿಧಾನಪರಿಷತ್ ಸದಸ್ಯರಾದ ಸಿ.ಟಿ. ರವಿ, ಪ್ರತಾಪ್‌ಸಿಂಹ ನಾಯಕ್, ಶಾಸಕ ಹರೀಶ್ ಪೂಂಜಾ ಅವರು ಪತ್ರಿಕಾಗೋಷ್ಠಿಯಲ್ಲಿ ಇದ್ದರು.

# 2028ರಲ್ಲಿ ಮತ್ತೆ ಅಧಿಕಾರಕ್ಕೇರಲು ಬೆಂಬಲ ನೀಡುವ ಸಂದೇಶ

### ಉಪಚುನಾವಣೆ ಗೆಲುವಿನ ನಂತರ ಡಿಸಿಎಂ ಡಿ.ಕೆ. ಶಿವಕುಮಾರ್ ಬಣ್ಣನೆ



**ಬೆಂಗಳೂರು, ಮೇ 4:** ಕರ್ನಾಟಕದ ಎರಡು ಕ್ಷೇತ್ರಗಳ ಉಪಚುನಾವಣೆಯಲ್ಲಿ ಜನ ನಮ್ಮ ಮೇಲೆ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಸರ್ಕಾರ ಗ್ಯಾರಂಟಿ ಯೋಜನೆಗಳ ಜತೆಗೆ ದಕ್ಷ ಆಡಳಿತ ನೀಡುತ್ತಿರುವುದನ್ನು ಗಮನಿಸಿದ್ದಾರೆ. 2028ರಲ್ಲಿ ಮತ್ತೆ ಅಧಿಕಾರಕ್ಕೆ ಬರಲು ಬೆಂಬಲ ನೀಡುವ ಸಂದೇಶ ನೀಡಿದ್ದಾರೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಬಣ್ಣಿಸಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕರ್ನಾಟಕ ರಾಜ್ಯದಲ್ಲಿ ನಮ್ಮ ಇಬ್ಬರು ನಾಯಕರ ನಿಧನದಿಂದ ಎರಡು ವಿಧಾನಸಭಾ ಕ್ಷೇತ್ರಗಳು ತೆರವಾಗಿದ್ದವು. ಈ ಎರಡು ಕ್ಷೇತ್ರಗಳ ಜನತೆಗೆ ನಾನು ಕೃತಜ್ಞತೆ ಸಲ್ಲಿಸುತ್ತೇನೆ. ನಮ್ಮ ಪಕ್ಷದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪ್ರತಿ ಹಳ್ಳಿಗೆ ಭೇಟಿ ನೀಡಿ ಹಗಲಿರುಳು ಶ್ರಮಿಸಿದ್ದಾರೆ. ಅವರಿಗೂ ನಾನು ಪಕ್ಷ ಹಾಗೂ ಸರ್ಕಾರದ ಪರವಾಗಿ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

ನಮ್ಮ ಗ್ಯಾರಂಟಿ ಯೋಜನೆಗಳನ್ನು ರಾಜ್ಯದ ಜನ ಬಹಳ ಸಂತೋಷದಿಂದ ತಮ್ಮ ಮನೆಗೆ ಬರ ಮಾಡಿಕೊಂಡಿದ್ದಾರೆ. ಗೃಹಲಕ್ಷ್ಮಿ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ, ಯುವನಿಧಿ ಯೋಜನೆಗಳಿಂದ ಪ್ರಯೋಜನ ಪಡೆದಿರುವ ಜನ ಚುನಾವಣೆ ಪ್ರಚಾರದ ವೇಳೆ ನಮ್ಮ ಕಾರ್ಯಕರ್ತರನ್ನು ಗೌರವದಿಂದ ನೋಡುತ್ತಿದ್ದಾರೆ. ಈ ಗ್ಯಾರಂಟಿ ಸರ್ಕಾರದ ಕೈ ಬಿಡುವುದಿಲ್ಲ, ಮತ್ತಷ್ಟು ಶಕ್ತಿ ತುಂಬುತ್ತೇವೆ. 2028ಕ್ಕೂ ನಿಮಗೆ ಬೆಂಬಲ ನೀಡುತ್ತೇವೆ ಎಂಬ ಸಂದೇಶ ನೀಡಿದ್ದಾರೆ ಎಂದು ತಿಳಿಸಿದರು.

ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಎರಡು ಕ್ಷೇತ್ರಗಳ ಉಪಚುನಾವಣೆ ಗೆದ್ದಿದ್ದೇವೆ. ವಿರೋಧ ಪಕ್ಷಗಳು ಎಷ್ಟೇ ಟೀಕೆ ಮಾಡಿದರೂ ಜನ ನಮ್ಮ ಕೈಬಿಡಲಿಲ್ಲ. ಆತ್ಮವಿಶ್ವಾಸ ಹೆಚ್ಚಿಸಿದ್ದಾರೆ. ಅವರಿಗೆ ಮಾಡುತ್ತಿರುವ ಸೇವೆಯನ್ನು ಮುಂದುವರಿಸುವ ಸಂದೇಶ ನೀಡಿದ್ದಾರೆ. ಸಿಎ ಸಿದ್ದರಾಮಯ್ಯ, ಸಂಪುಟ ಸಹೋದ್ಯೋಗಿಗಳು, ಶಾಸಕರು, ಪಕ್ಷದ ಪದಾಧಿಕಾರಿಗಳು, ಜಿಲ್ಲಾಧ್ಯಕ್ಷರು, ಬ್ಲಾಕ್ ಅಧ್ಯಕ್ಷರುಗಳು ಹಗಲಿರುಳು ದುಡಿದಿದ್ದಾರೆ. ನಮ್ಮ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಬಗ್ಗೆ ಮಾಹಿತಿ ಪಡೆಯಲಾಗಿದೆ. ಎಲ್ಲಾ ವರ್ಗ ಹಾಗೂ ಎಲ್ಲಾ ಸಮಾಜದ ಜನ ನಮಗೆ ಬೆಂಬಲ ನೀಡಿದ್ದಾರೆ. ದಾವಣಗೆರೆಯಲ್ಲಿ 20% ಮತ ಕಡಿಮೆಯಾಗಿದ್ದರೂ ಎಲ್ಲಾ ವರ್ಗದ ಜನ ನಮಗೆ ಶಕ್ತಿ ತುಂಬಿದ್ದಾರೆ. ಮುಖ್ಯಮಂತ್ರಿಗಳ ನಾಯಕತ್ವ, ಕಾಂಗ್ರೆಸ್ ಪಕ್ಷದ ಮುಖಂಡತ್ವಕ್ಕೆ ಬೆಂಬಲ ವ್ಯಕ್ತಪಡಿಸಿರುವ ಎಲ್ಲರಿಗೂ ಕೃತಜ್ಞತೆ ಅರ್ಪಿಸುತ್ತೇನೆ ಎಂದು ತಿಳಿಸಿದರು.

ದಾವಣಗೆರೆ ಫಲಿತಾಂಶದಲ್ಲಿ ಒಳಏಟು ಬಿದ್ದಿದೆ ಎಂದು ಅನಿಸುತ್ತದೆಯೇ ಎಂದು ಕೇಳಿದಾಗ, 1995ರಿಂದ ಶಾಮನೂರು ಶಿವಶಂಕರಪ್ಪ ಅವರು ಆ ಕ್ಷೇತ್ರ ಉಳಿಸಿಕೊಂಡು ಬಂದಿದ್ದರು. ಅಲ್ಪಸಂಖ್ಯಾತ ನಾಯಕರು ನಮಗೆ ಸಹಕಾರ ನೀಡುತ್ತಾ ಬಂದಿದ್ದಾರೆ. ಅವರಿಗೆ ಸ್ಥಾನಮಾನ ನೀಡಲು ಮೂರು ಬಾರಿ ವಿಧಾನ ಪರಿಷತ್ ಸ್ಥಾನ ನೀಡಿ ಗೌರವ ನೀಡಿದ್ದೇವೆ.

ವ್ಯಕ್ತಿಗಳಲ್ಲಿ ಅಭಿಪ್ರಾಯ ಬೇರೆ ಇದ್ದರೂ ಪಕ್ಷದಲ್ಲಿ ನಾಯಕತ್ವದಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದರು. ಮತ ಪ್ರಮಾಣ ಕಡಿಮೆಯಾಗಿರುವ ಬಗ್ಗೆ ಪರಾಮರ್ಶೆ ಮಾಡುತ್ತೀರಾ ಎಂದು ಕೇಳಿದಾಗ, ಈಗ ಆ ಚರ್ಚೆ ಬೇಡ ಸಮಯ ಬಂದಾಗ ನೋಡೋಣ ಎಂದರು.

ಕೇರಳದಲ್ಲಿ ಬಹುದೊಡ್ಡ ಅಂತರದಿಂದ ಯುಡಿಎಫ್ ಸರ್ಕಾರವನ್ನು ಜನ ಅಧಿಕಾರಕ್ಕೆ ತಂದಿದ್ದಾರೆ. ಎಲ್‌ಡಿಎಫ್ ಹಾಗೂ ಬಿಜೆಪಿ ಒಳಒಪ್ಪಂದ ಮಾಡಿಕೊಂಡರೂ ಜನ ಆಶೀರ್ವಾದ ಮಾಡಿದ್ದಾರೆ. ತಮಿಳುನಾಡಿನಲ್ಲಿ ಡಿಎಂಕೆ ಸೋತಿದ್ದರೂ ಬಿಜೆಪಿ ಅಂಗಪಕ್ಷವನ್ನು ಜನ ಸೋಲಿಸಿದ್ದಾರೆ. ಆ ಮೂಲಕ ಕೋಮುವಾದಿ ಶಕ್ತಿಯನ್ನು ದೂರವಿಟ್ಟಿದ್ದಾರೆ. ಹೀಗಾಗಿ ಅಲ್ಲಿನ ಮತದಾರರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದರು.

ಕೆಪಿಸಿಸಿ ಅಧ್ಯಕ್ಷರಾಗಿ ಪಂಚರಾಜ್ಯ ಚುನಾವಣೆಯನ್ನು ಹೇಗೆ ವ್ಯಾಖ್ಯಾನ ಮಾಡುತ್ತೀರಿ ಎಂದು ಕೇಳಿದಾಗ, ಜನರಿಗೆ ಭಾವನೆ ಮೇಲೆ ರಾಜಕಾರಣ ಮಾಡಬೇಕು. ಇನ್ನು ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ ಅಧಿಕಾರ ದುರುಪಯೋಗ ಮಾಡಿಕೊಂಡಿದೆ. ವಿಶೇಷವಾಗಿ ಪಶ್ಚಿಮ ಬಂಗಾಳ, ಅಸ್ಸಾಂ ಹಾಗೂ ತಮಿಳುನಾಡಿನಲ್ಲಿ ದೊಡ್ಡಮಟ್ಟದಲ್ಲಿ ಅಧಿಕಾರ ದುರುಪಯೋಗ ಮಾಡಿಕೊಂಡಿದ್ದಾರೆ. 2.50 ಲಕ್ಷ ಕೇಂದ್ರ ಸಶಸ್ತ್ರ ಮೀಸಲು ಪಡೆ ಸಿಬ್ಬಂದಿ ನಿಯೋಜಿಸಿ 96 ಲಕ್ಷ ಮತದಾರರನ್ನು ಮತಪಟ್ಟಿಯಿಂದ ತೆಗೆದುಹಾಕಿ ಚುನಾವಣೆ ಮಾಡಿದ್ದಾರೆ ಎಂದು ತಿಳಿಸಿದರು.

### ಟಿವಿಕೆಗೆ ಬೆಂಬಲ ನೀಡುವ ಬಗ್ಗೆ ಮಾತನಾಡಲ್ಲ

ತಮಿಳುನಾಡಿನಲ್ಲಿ ಟಿವಿಕೆ ಬಹುಮತಕ್ಕೆ ಬೆಂಬಲದ ಅಗತ್ಯವಿದ್ದು ಕಾಂಗ್ರೆಸ್ ಬೆಂಬಲ ನೀಡುವುದೇ ಎಂದು ಕೇಳಿದಾಗ, ನಮ್ಮ ಪಕ್ಷ ಏನು ತೀರ್ಮಾನ ಮಾಡುತ್ತದೋ ಗೊತ್ತಿಲ್ಲ. ನಾನು ಅದರ ಬಗ್ಗೆ ಪ್ರತಿಕ್ರಿಯೆ ನೀಡುವುದಿಲ್ಲ. ಬಿಜೆಪಿ ಹಾಗೂ ಅದರ ಮೈತ್ರಿಯನ್ನು ದೂರವಿಡುವುದು ನಮ್ಮ ಗುರಿ ಎಂದರು. ನೀವು ಪ್ರಚಾರ ಮಾಡಿದ ಕಡೆ ಸೋಲಾಗಿದೆ ಎಂಬ ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ, ಬಿಜೆಪಿ ನಾಯಕರು ಬಾಗಲಕೋಟೆ, ದಾವಣಗೆರೆ ದಕ್ಷಿಣಕ್ಕೆ ಹೋಗಿದ್ದರು. ಅಲ್ಲಿ ಯಾಕೆ ಅವರು ಗೆಲ್ಲಲಿಲ್ಲ. ನೀವು ಅವರನ್ನು ತೋರಿಸುತ್ತೀರಿ ಎಂಬ ಕಾರಣಕ್ಕೆ ಅವರು ಏನೋ ಟೀಕೆ ಮಾಡಿ ಮಾತನಾಡುತ್ತಾರೆ ಎಂದು ಡಿ.ಕೆ. ಶಿವಕುಮಾರ್ ತಿಳಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ದೇಶದಲ್ಲೇ ಕಾಂಗ್ರೆಸ್ ಅಸ್ತಿತ್ವ ಶೂನ್ಯ; ಭವಿಷ್ಯದಲ್ಲಿ ಕರ್ನಾಟಕದಲ್ಲೂ ಸೋಲು

* ದೆಹಲಿಯಲ್ಲಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಭವಿಷ್ಯ
* ಪಂಚರಾಜ್ಯ ಚುನಾವಣೆಯಲ್ಲಿ ಮೋದಿ ನೇತೃತ್ವಕ್ಕೆ ಬಹುದೊಡ್ಡ ಗೆಲುವು
* ಪ್ರಧಾನಿ ನಿಂದನೆ, ತುಷ್ಟೀಕರಣ ಪರಾಕಾಷ್ಠೆಯೇ ಕಾಂಗ್ರೆಸ್‌ಗೆ ಮುಳುವು
* ಕೇರಳ ಕಮ್ಯುನಿಸ್ಟ್, ಕಾಂಗ್ರೆಸ್ ಮುಕ್ತ
* ಪಶ್ಚಿಮ ಬಂಗಾಳದಲ್ಲಿ ರೌಡಿಸಂಗೆ ಜನರ ಪ್ರತ್ಯುತ್ತರ



**ನವದೆಹಲಿ, ಮೇ 4:** ಕೇರಳ ಬಿಟ್ಟರೆ ದೇಶದಲ್ಲಿ ಕಾಂಗ್ರೆಸ್ ಅಸ್ತಿತ್ವ ಶೂನ್ಯ. ಮುಂಬರುವ ಚುನಾವಣೆಯಲ್ಲಿ ಕರ್ನಾಟಕದಲ್ಲಿಯೂ ಇದೇ ಸ್ಥಿತಿ ಎದುರಾಗಲಿದೆ ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಭವಿಷ್ಯ ನುಡಿದಿದ್ದಾರೆ.

ದೆಹಲಿಯಲ್ಲಿ ಸೋಮವಾರ ಸುದ್ದಿಗೋಷ್ಠಿಯಲ್ಲಿ ಪಂಚರಾಜ್ಯ ಚುನಾವಣೆ ಫಲಿತಾಂಶ ಕುರಿತು ಪ್ರತಿಕ್ರಿಯಿಸಿ, ದುರಾಡಳಿತ, ಮಿತಿಮೀರಿದ ತುಷ್ಟೀಕರಣ, ಭ್ರಷ್ಟಾಚಾರ, ಗೂಂಡಾಗಿರಿ ವಿರುದ್ಧ ಅತ್ಯಂತ ಸ್ಪಷ್ಟ ಜನಾದೇಶ ಇದಾಗಿದೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎ–ಬಿಜೆಪಿ ಆಡಳಿತಕ್ಕೆ ಬಹುದೊಡ್ಡ ಗೆಲುವು ತಂದುಕೊಟ್ಟಿದ್ದಾರೆಂದು ಹೇಳಿದರು.

ಅಸ್ಸಾಂ, ಪಶ್ಚಿಮ ಬಂಗಾಳ ಮತ್ತು ಪುದುಚೆರಿಯಲ್ಲಿ ಓಆಂಗೆ ಅಭೂತಪೂರ್ವ ಗೆಲುವು ಸಿಕ್ಕಿದೆ. ಮೋದಿ ಅವರ 12 ವರ್ಷಗಳ ಸಮರ್ಥ ಆಡಳಿತ, ಅದ್ಭುತ ಕಾರ್ಯ ಕಂಡು ಬಿಜೆಪಿಗೆ ಮನ್ನಣೆ ನೀಡಿದ್ದಾರೆ. ಕೇರಳದಲ್ಲಿ ನಮಗೆ ಯಶಸ್ಸು ಸಿಕ್ಕಿಲ್ಲ. ಆದರೆ, ಕಮ್ಯುನಿಸ್ಟ್ ಮತ್ತು ಕಾಂಗ್ರೆಸ್ ಮುಕ್ತವಾಗಿದೆ ಎಂದು ವ್ಯಾಖ್ಯಾನಿಸಿದರು.

**ದೇಶಾದ್ಯಂತ ಕಾಂಗ್ರೆಸ್ ಶೂನ್ಯ:** ಒಂದು ರಾಷ್ಟ್ರೀಯ ಪಕ್ಷವಾಗಿ ಕಾಂಗ್ರೆಸ್ ದೇಶಾದ್ಯಂತ ಶೂನ್ಯಕ್ಕೆ ತಳ್ಳಲ್ಪಟ್ಟಿದೆ. ಕೇರಳ ಬಿಟ್ಟರೆ ಬೇರೆಲ್ಲೆಡೆ ಅಸ್ತಿತ್ವ ಕಳೆದುಕೊಂಡಿದೆ. ಪಶ್ಚಿಮ ಬಂಗಾಳ–0, ತಮಿಳುನಾಡು–0, ಅಸ್ಸಾಂ–22–24 ಸ್ಥಾನ ಗೆದ್ದಿದೆ ಅಷ್ಟೇ. ಕಾಂಗ್ರೆಸ್ ನ ತುಷ್ಟೀಕರಣದ ಪರಮಾವಧಿ, ಭ್ರಷ್ಟಾಚಾರ, ಬಹುಸಂಖ್ಯಾತ ಹಿಂದೂಗಳ ತಿರಸ್ಕಾರ, ವೋಟ್ ಬ್ಯಾಂಕ್ ರಾಜಕಾರಣಕ್ಕೆ ಜನ ತಕ್ಕಪಾಠ ಕಲಿಸಿದ್ದಾರೆ ಎಂದು ಜೋಶಿ ವಿಶ್ಲೇಷಿಸಿದರು.

ತಮಿಳುನಾಡಲ್ಲಿ ವಿಜಯ್ ಜತೆ ಹೋಗುತ್ತೇವೆ ಎಂದಿದ್ದಾರೆ. ಅಲ್ಲಿ ಹೋಗಲು ಅವರಲ್ಲೇನೂ ಉಳಿದಿಲ್ಲ. ಇನ್ನೇನು ಹೋಗುತ್ತಾರೆ. ಇನ್ನು ಕೇರಳದಲ್ಲಿ ದೇಶ ಇಬ್ಭಾಗ ಮಾಡುವ ಮನಸ್ಥಿತಿಯ ಮುಸ್ಲಿಂ ಲೀಗ್ ಜತೆ ಒಪ್ಪಂದದೊಂದಿಗೆ ಹಿಂದೂ ವಿರೋಧಿಯಾಗಿ ವರ್ತಿಸಿದ್ದರ ಪರಿಣಾಮ ದೇಶದೆಲ್ಲೆಡೆಯೂ ಕಾಂಗ್ರೆಸ್ ಧೂಳೀಪಟವಾಗಿದೆ ಎಂದು ಟೀಕಿಸಿದರು.

ಪ್ರಧಾನಿ ನಿಂದನೆ ಮುಳುವು; ಕಾಂಗ್ರೆಸ್ ಇಷ್ಟರ ಮಟ್ಟಿಗೆ ನೆಲಕಚ್ಚಲು ಸದಾ ನೆಗೆಟಿವ್ ಪ್ರಚಾರ, ಪ್ರಧಾನಿ ಮೋದಿ ಅವರ ನಿಂದನೆಯಲ್ಲಿ ತೊಡಗಿದ್ದೇ ಮುಳುವಾಗಿದೆ. ಜನಪ್ರಿಯ ಪ್ರಧಾನಿ ಅವರನ್ನು ವಿಷಸರ್ಪ, ಟೆರರಿಸ್ಟ್ ಎಂದೆಲ್ಲಾ ನಿಂದಿಸಿತ್ತು. ಜನ ಅದಕ್ಕೆಲ್ಲ ತಕ್ಕ ಉತ್ತರ ಕೊಟ್ಟಿದ್ದಾರೆ. ಅನಾಗರಿಕ ರಾಜಕೀಯ ಸಂಸ್ಕೃತಿ, ರೌಡಿಸಂ, ತುಷ್ಟೀಕರಣ, ಹಿಂದೂ ವಿರೋಧಿ ನಡೆ ಒಪ್ಪುವುದಿಲ್ಲ ಎಂಬ ಸ್ಪಷ್ಟ ಸಂದೇಶ ರವಾನಿಸಿದ್ದಾರೆ, ಎಚ್ಚರಿಕೆ ಕೊಟ್ಟಿದ್ದಾರೆ ಎಂದರು. ಪಶ್ಚಿಮ ಬಂಗಾಳದಲ್ಲಿ ಜನ ಹೊರಬಂದು ಮತದಾನಕ್ಕೂ ಹೆದರುತ್ತಿದ್ದರು. ನಾಮಿನೇಷನ್ ಗೂ ಬಿಡುತ್ತಿರಲಿಲ್ಲ. ಅಷ್ಟರಮಟ್ಟಿಗೆ ರೌಡಿಸಂ ಇತ್ತು. ಆದರೆ, ಕಟ್ಟುನಿಟ್ಟಿನ ಕಾನೂನು ಸುವ್ಯವಸ್ಥೆ ರೂಪಿಸಿದ್ದರ ಪರಿಣಾಮ ಇಂದು ಜನ ಧೈರ್ಯದಿಂದ ಮತದಾನ ಮಾಡಿದ್ದಾರೆ. ರೌಡಿಸಂ ಮೆಟ್ಟಿ ನಿಂತು ಚುನಾವಣೆಯಲ್ಲಿ ಭಾಗಿಯಾದರು. ಇದಕ್ಕಾಗಿ ಅಲ್ಲಿನ ಜನಕ್ಕೆ ವಿಶೇಷ ಅಭಿನಂದನೆ ಸಲ್ಲಿಸುತ್ತೇನೆ ಎಂದರು.


**ತಡರಾತ್ರಿ ಕೊಟ್ಟಿದ್ದಾರೆ ಫಲಿತಾಂಶ:** ಶೃಂಗೇರಿ ವಿಧಾನಸಭೆ ಕ್ಷೇತ್ರದ ಅಂಚೆ ಮತ ಮರು ಎಣಿಕೆ ಫಲಿತಾಂಶವನ್ನು ಲೀಗಲ್ ನೋಟಿಸ್ ಜಾರಿ ಮಾಡಿದ ಬಳಿಕ ರಾತ್ರೋರಾತ್ರಿ ಈ ಮೇಲ್ ಅಲ್ಲಿ ಫಲಿತಾಂಶದ ಪತ್ರ ರವಾನಿಸಿದ್ದಾರೆ. ಪಕ್ಷದ ಬೆಂಬಲದಿಂದ ಬಿಜೆಪಿ ಅಭ್ಯರ್ಥಿ ಜೀವರಾಜ್ ಅವರು ನಡೆಸಿದ ಸತತ ಹೋರಾಟ ಮತ್ತು ನ್ಯಾಯಕ್ಕೆ ಸಂದ ಜಯ ಇದಾಗಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಪ್ರತಿಪಾದಿಸಿದರು.

ಡಿಸಿಎಂ ಬೇಜವಾಬ್ದಾರಿ ಹೇಳಿಕೆ: ಕಳೆದ ಮೂರು ವರ್ಷದಿಂದ ಕಾಂಗ್ರೆಸ್ ಸರ್ಕಾರವೇ ಇದೆ. ಕೋಲಾರದಲ್ಲಿ ಕಾಂಗ್ರೆಸ್ ಗೆದ್ದರೆ ಸಂಭ್ರಮಿಸಿದರು. ಶೃಂಗೇರಿಯಲ್ಲಿ ಬಿಜೆಪಿ ಗೆದ್ದರೆ ಕ್ಷುಲ್ಲಕ ಆರೋಪ ಮಾಡುತ್ತಾರೆ. ಹಾಗಾದರೆ, ಇಲ್ಲಾದ ಮತ ಎಣಿಕೆ ಲೋಪಕ್ಕೆ ಎಸಿ, ಡಿಸಿ ಅವರನ್ನು ಸಸ್ಪೆಂಡ್ ಮಾಡುತ್ತಾರೆಯೇ ಎಂದು ಪ್ರಶ್ನಿಸಿದರು ಸಚಿವ ಪ್ರಲ್ಹಾದ ಜೋಶಿ.



ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣಾ ಫಲಿತಾಂಶದ ದಿನದಂದು ನವದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಸೋಮವಾರ ನಡೆದ ಮತ ಎಣಿಕೆಯ ಸಮಯದಲ್ಲಿ ಬಿಜೆಪಿ ಬೆಂಬಲಿಗರು ಪಕ್ಷ ಮುನ್ನಡೆ ಸಾಧಿಸಿದ್ದಕ್ಕಾಗಿ ಸಂಭ್ರಮಿಸಿದರು.

# ಕಾಂಗ್ರೆಸ್‌ಗೆ ಭವಿಷ್ಯವಿಲ್ಲ ಬಿ.ಎಸ್.ಯಡಿಯೂರಪ್ಪ



**ಬೆಂಗಳೂರು, ಮೇ 4:** ಪಶ್ಚಿಮ ಬಂಗಾಳದಲ್ಲಿ ಟಿಎಂಸಿ ಧೂಳೀಪಟವಾದಂತೆ ರಾಜ್ಯದಲ್ಲೂ ಕಾಂಗ್ರೆಸ್ ಮುಂದಿನ ಚುನಾವಣೆಯಲ್ಲಿ ನೆಲಕಚ್ಚಲಿದೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್‌ಗೆ ಯಾವುದೇ ಭವಿಷ್ಯ ಇಲ್ಲ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ಪಂಚರಾಜ್ಯ ವಿಧಾನಸಭಾ ಚುನಾವಣೆ ಫಲಿತಾಂಶದ ಕುರಿತು ನಗರದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಒಂದೆರಡು ಸ್ಥಾನಗಳನ್ನೂ ಗೆಲ್ಲಲೂ ಆಗದ ಕಾಂಗ್ರೆಸ್‌ಗೆ ಬಿಜೆಪಿ ಬಗ್ಗೆ ಮಾತನಾಡುವ ನೈತಿಕ ಹಕ್ಕಿಲ್ಲ. ಪ್ರಧಾನಿ ನರೇಂದ್ರ ಮೋದಿ ನಾಯಕತ್ವದಲ್ಲಿ ಜನತೆಯ ದೃಢವಿಶ್ವಾಸವನ್ನು ಮತ್ತೊಮ್ಮೆ ದೃಢಪಡಿಸಿದೆ. ಇದೊಂದು ಐತಿಹಾಸಿಕ ಫಲಿತಾಂಶ. ಇದಕ್ಕಾಗಿ ಗೃಹ ಸಚಿವ ಅಮಿತ್ ಶಾ ಹಾಗೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ನಿರಂತರ ಮಾರ್ಗದರ್ಶನ ನೀಡಿದ್ದಾರೆ ಮತ್ತು ಪಕ್ಷವನ್ನು ಸೂಕ್ತವಾಗಿ ಮುನ್ನಡೆಸಿದ್ದಾರೆ. ಅವರಿಗೆ ಅಭಿನಂದನೆಗಳು ಎಂದರು.

ಅಭಿವೃದ್ಧಿ ಮತ್ತು ವಿಕಸಿತ ಭಾರತ ನಿರ್ಮಾಣ ಮಾಡಬೇಕು ಎಂಬ ಎನ್‌ಡಿಎ ಬದ್ಧತೆಗೆ ಮತದಾರರು ಆಶೀರ್ವಾದ ಮಾಡಿದ್ದಾರೆ ಎಂದು ನುಡಿದರು. ಜನರಿಗೆ ಕೇವಲ ಉಚಿತ ಘೋಷಣೆಗಳನ್ನು ಮಾಡಿ ದೀರ್ಘಕಾಲ ಮರುಳು ಮಾಡಲು ಸಾಧ್ಯವಿಲ್ಲ ಎಂಬುದನ್ನು ಸಾಬೀತು ಮಾಡಿದ್ದಾರೆ. ಮೌಲ್ಯಾಧಾರಿತ ಅಭಿವೃದ್ಧಿ, ಸ್ಥಿರತೆ ಮತ್ತು ಪಾರದರ್ಶಕತೆಯ ಸರ್ಕಾರವನ್ನು ಜನರು ಬಯಸಿದ್ದಾರೆ. ಆದ್ದರಿಂದಲೇ ಬಿಜೆಪಿಗೆ ಗೆಲುವು ತಂದುಕೊಟ್ಟಿದ್ದಾರೆ ಎಂದರು.

ನಾವು ಜನರ ತೀರ್ಪನ್ನು ಒಪ್ಪಿಕೊಳ್ಳಬೇಕು. ಈ ಗೆಲುವಿಗಾಗಿ ಅಸಂಖ್ಯಾತ ಕಾರ್ಯಕರ್ತರು ಬದ್ಧತೆಯಿಂದ ಹಗಲಿರುಳು ಶ್ರಮಿಸಿದ್ದಾರೆ. ಅವರೇ ಒಂದು ರೀತಿ ಪಕ್ಷದ ಬೆನ್ನೆಲುಬು ಎಂದು ಪ್ರಶಂಸಿಸಿದರು.



ಒಡಿಶಾ ರಾಜಧಾನಿ ಭುವನೇಶ್ವರದಲ್ಲಿ ನಡೆದ 61ನೇ "ಫೆಮಿನಾ ಮಿಸ್ ಇಂಡಿಯಾ ಕಿರೀಟ ಮುಡಿಗೇರಿಸಿಕೊಂಡಿರುವ ಕಾರವಾರದ ಕಾಂಗ್ರೆಸ್ ಶಾಸಕ ಸತೀಶ್ ಸೈಲ್ ಅವರ ಪುತ್ರಿ ಸಾಧ್ವಿ ಅವರನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಭಿನಂದಿಸಿದರು. ಶಾಸಕರಾದ, ಯಾಸೀರ್ ಖಾನ್ ಪಠಾಣ್, ವಿಧಾನ ಪರಿಷತ್ ಮುಖ್ಯ ಸಚೇತಕ ಸಲೀಂ ಅಹಮದ್, ಸದಸ್ಯರಾದ ಐವಾನ್ ಡಿಸೋಜಾ ಹಾಜರಿದ್ದರು.

# ಸಿದ್ದರಾಮಯ್ಯ ಕೆಳಗಿಳಿಸುವ ಪ್ರಶ್ನೆಯೇ ಇಲ್ಲ

**ಮಿಕ್ಕ ಅವಧಿಗೂ ಸಿಎಂ ಆಗಿ ಮುಂದುವರಿಯುತ್ತಾರೆ: ಶಾಸಕ ಬಸವರಾಜ ರಾಯರೆಡ್ಡಿ**

**ಕೊಪ್ಪಳ, ಮೇ 4:** ರಾಜ್ಯ ರಾಜಕೀಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತ ಊಹಾಪೋಹ ಗರಿಗೆದರಿರುವ ನಡುವೆಯೇ, ಹಿರಿಯ ಕಾಂಗ್ರೆಸ್ ಶಾಸಕ ಹಾಗೂ ಸಿಎಂ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ ಅವರು ಸಿದ್ದರಾಮಯ್ಯ ಅವರ ಪರವಾಗಿ ಬ್ಯಾಟ್ ಬೀಸಿದ್ದಾರೆ.

ಕೊಪ್ಪಳ ತಾಲೂಕಿನ ಕೊಳೂರು–ಕಾತ್ರಳ್ಳಿ ಗ್ರಾಮದಲ್ಲಿ ಗವಿಮಠ ಮಹಿಳಾ ಪಿಯು ಕಾಲೇಜು ಮತ್ತು ವಸತಿ ನಿಲಯ ಉದ್ಘಾಟನಾ ಕಾರ್ಯಕ್ರಮದ ಬಳಿಕ ರಾಯರೆಡ್ಡಿ ಅವರು ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸುವ ಪ್ರಶ್ನೆಯೇ ಇಲ್ಲ. ಅವರು ಉಳಿದಿರುವ ಅವಧಿಗೂ ಸಿಎಂ ಆಗಿ ಮುಂದುವರಿಯುತ್ತಾರೆ ಎಂದು ಹೇಳಿದರು.

ನಾಯಕತ್ವ ಬದಲಾವಣೆ ಕುರಿತು ಹೈಕಮಾಂಡ್ ನಿರ್ಧಾರ ಕೈಗೊಂಡರೆ, ಮೊದಲು ಶಾಸಕರ ಅಭಿಪ್ರಾಯ ಪಡೆಯಬೇಕು. ಹಾಗೆ ಆಗಿದ್ದೇ ಆದರೆ ಮಲ್ಲಿಕಾರ್ಜುನ ಖರ್ಗೆ ಅವರನ್ನು ಮುಖ್ಯಮಂತ್ರಿ ಮಾಡುವುದನ್ನು ಶಾಸಕರು ಪರಿಗಣಿಸಬಹುದು ಎಂದು ಅಭಿಪ್ರಾಯಪಟ್ಟರು.ಇದೇ ವೇಳೆ ಡಿ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಆಗುವುದನ್ನು ನಾವು ವಿರೋಧಿಸುವುದಿಲ್ಲ ಎಂದು ಸ್ಪಷ್ಟಪಡಿಸಿದ ಅವರು, ನಾನು ಯಾರೊಬ್ಬರ ಪರವೂ ಇಲ್ಲ, ನಾನು ಕಾಂಗ್ರೆಸ್ ಪಕ್ಷದ ಬೆಂಬಲಿಗ. ಡಿ.ಕೆ. ಶಿವಕುಮಾರ್ ಅವರು ತಾವು ಸಿಎಂ ಆಗಬೇಕೆಂದು ಎಲ್ಲಿಯೂ ಹೇಳಿಕೊಂಡಿಲ್ಲ ಎಂದು ತಿಳಿಸಿದರು.

# ಶೃಂಗೇರಿ ಮರು ಎಣಿಕೆ ಫಲಿತಾಂಶ ಮಾರಕ

**ಸರ್ಕಾರದ ಮಟ್ಟದಲ್ಲಿ ತನಿಖೆ, ಕಾನೂನು ಹೋರಾಟ: ಡಿ.ಕೆ. ಶಿವಕುಮಾರ್**



**ಬೆಂಗಳೂರು, ಮೇ 4:** ಶೃಂಗೇರಿ ಮರು ಎಣಿಕೆ ಫಲಿತಾಂಶವು ಇಡೀ ದೇಶಕ್ಕೇ ಮಾರಕ. ಬಿಜೆಪಿಯಲ್ಲಿ ಇಷ್ಟರಮಟ್ಟಿಗಿನ ಕ್ರಿಮಿನಲ್‌ಗಳಿದ್ದಾರೆ ಎಂದು ಎಣಿಸಿರಲಿಲ್ಲ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸೋಲು, ಗೆಲುವು ಸಾಮಾನ್ಯ. ಆದರೆ ಇಲ್ಲಿ ನಡೆದಿರುವುದು ಷಡ್ಯಂತ್ರ. ಅತ್ಯಂತ ಆಘಾತಕಾರಿ ವಿಚಾರ. ನಾವು ಈ ಬಗ್ಗೆ ಸರ್ಕಾರದ ಮಟ್ಟದಲ್ಲಿ ತನಿಖೆ ಮಾಡಿಸುತ್ತೇವೆ. ಕಾನೂನಾತ್ಮಕವಾಗಿಯೂ ಹೋರಾಟ ಮಾಡುತ್ತೇವೆ ಎಂದು ಹೇಳಿದರು.

ಇದೊಂದು ಅಂತಾರಾಷ್ಟ್ರೀಯ ಸಂಚಿನ ರೀತಿ ನಡೆದಿದ. ನಮಗೆ ಅನುಮಾನ ಇದ್ದರೆ ಸುಪ್ರೀಂ ಕೋರ್ಟಿಗೆ ಹೋಗುತ್ತಿದ್ದೆವು. ಇಲ್ಲಿ ಮತ ಎಣಿಕೆ ಬಾಕ್ಸ್ ಗಳನ್ನು ತೆರೆಯಲಾಗಿದೆ. ಕೆಲವರನ್ನು ಉಪಯೋಗಿಸಿಕೊಂಡು ನಮಗೆ ಮತ ಬಿದ್ದ ಬ್ಯಾಲೆಟ್ ಪೇಪರ್‌ಗಳ ಮೇಲೆ ಮತ್ತೊಂದು ಗುರುತು ಹಾಕಲಾಗಿದೆ. ಎಲ್ಲಾ ಬಂಡಲ್‌ಗಳು ಮಾನ್ಯ ಎಂದು ತೀರ್ಮಾನ ಆದ ಮೇಲೆ ಈ ತಿದ್ದುಪಡಿ ಹೇಗಾಯಿತು ಎಂದರು.

ಇಂತಹವರಿಗೆ ಮತ ಬಿದ್ದಿದೆ ಎಂದು ಪ್ರತಿ ಮತಗಳನ್ನು ಎಲ್ಲರಿಗೂ ತೋರಿಸಿರುತ್ತಾರೆ. ಇದನ್ನು ಕ್ಯಾಮರಾದಲ್ಲಿಯೂ ದಾಖಲೀಕರಣ ಮಾಡಿಕೊಳ್ಳಲಾಗಿರುತ್ತದೆ. ಎಲ್ಲಾ ಎಣಿಕೆಯಾದ ಮೇಲೆ ಬಂಡಲ್‌ಗಳನ್ನು ಒಳಗೆ ಹಾಕಿ ಸೀಲ್ ಮಾಡಲಾಗಿರುತ್ತದೆ. ಇದಾದ ನಂತರ ಬಂಡಲ್ ತೆಗೆದು ಮತ್ತೊಂದು ಗುರುತು ಮಾಡಲಾಗಿದೆ. ಈಗ ಅದು ಮಾತ್ರ ಎಣಿಕೆಯಾಗಬೇಕು ಎಂದು ನ್ಯಾಯಲಯದ ಮೂಲಕ ಆದೇಶ ತಂದು ಈ ರೀತಿ ಮಾಡಲಾಗಿದೆ ಎಂದರು.

ಇದರ ಬಗ್ಗೆ ದೊಡ್ಡ ತನಿಖೆ ಅವಶ್ಯಕತೆಯಿದೆ. ಈ ಹಿಂದೆ ಫಲಿತಾಂಶ ಸರಿಯಾಗಿತ್ತು ಎಂದು ಎಲ್ಲರೂ ಸಹಿ ಮಾಡಿದ್ದಾರೆ. ಚುನಾವಣಾ ಆಯೋಗದ ಬಳಿಯೂ ದಾಖಲೆಯಿದೆ. ಆದರೆ ಮರುಎಣಿಕೆಯಲ್ಲಿ ಬದಲಾವಣೆಯಾಗಿದೆ. ಒಬ್ಬರಿಗೆ ಮತ ಬಿದ್ದ ಕಡೆ ಇನ್ನೊಬ್ಬರಿಗೂ ಗುರುತು ಹಾಕಲಾಗಿದೆ. ಇದರ ಬಗ್ಗೆ ದೂರನ್ನು ಸಹ ನೀಡಲಾಗಿದೆ ಎಂದರು. ಫಲಿತಾಂಶದ ಬಗ್ಗೆ ರಿಟರ್ನಿಂಗ್ ಆಫೀಸರ್ ನ್ಯಾಯಲಯಕ್ಕೆ ಕಳುಹಿಸಬೇಕಿತ್ತು. ಸಂಬಂಧಿಸಿದ ಅಧಿಕಾರಿ ಇದನ್ನೆಲ್ಲಾ ಗಮನಿಸಿದ್ದಾರೆ. ಇದು ಇಡೀ ರಾಜ್ಯಕ್ಕೆ ಕಳಂಕದ ಪ್ರಕರಣ ಎಂದರು.

# ಬೆಂಬಲ ಬೆಲೆಯಲ್ಲಿ 9023 ಮೆಟ್ರಿಕ್ ಟನ್ ಸೂರ್ಯಕಾಂತಿ ಖರೀದಿ

**ಕ್ವಿಂಟಾಲ್ 7721 ರೂ. ನಿಗದಿ: ಕರ್ನಾಟಕದ ಬೆಳೆಗಾರರ ಬೆನ್ನಿಗೆ ನಿಂತ ಕೇಂದ್ರ ಸರ್ಕಾರ**

**ನವದೆಹಲಿ, ಮೇ 4:** ಬೆಲೆ ಕುಸಿತದಿಂದ ಕಂಗೆಟ್ಟಿದ್ದ ಕರ್ನಾಟಕದ ಸೂರ್ಯಕಾಂತಿ ಬೆಳೆಗಾರರ ನೆರವಿಗೆ ಮುಂದಾದ ಕೇಂದ್ರ ಸರ್ಕಾರ ಇದೀಗ ಬೆಂಬಲ ಬೆಲೆಯಲ್ಲಿ 9,023 ಒಖಿ ಸೂರ್ಯಕಾಂತಿ ಖರೀದಿಗೆ ಅಸ್ತು ಎಂದಿದೆ.

ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರ ಮನವಿ ಮೇರೆಗೆ ಕೇಂದ್ರ ಸರ್ಕಾರ ಈ ಮಹತ್ವದ ನಿರ್ಧಾರ ತೆಗೆದುಕೊಂಡು ರಾಜ್ಯದ ಸೂರ್ಯಕಾಂತಿ ಬೆಳೆಗಾರರ ಬೆನ್ನಿಗೆ ನಿಂತಿದೆ. ಸಚಿವ ಪ್ರಲ್ಹಾದ ಜೋಶಿ ಅವರ ಮಾರ್ಗದರ್ಶನದಂತೆ ಕೇಂದ್ರ ಕೃಷಿ ಸಚಿವಾಲಯ ಇದೀಗ ಕ್ವಿಂಟಲ್‌ಗೆ 7721 ಬೆಂಬಲ ಬೆಲೆ ಯೋಜನೆಯಲ್ಲಿ ಸೂರ್ಯಕಾಂತಿ ಖರೀದಿಗೆ ಅನುಮೋದನೆ ನೀಡಿದೆ.

ರಾಜ್ಯದ ಪ್ರಸ್ತಾವನೆಯಂತೆ ಸೂರ್ಯಕಾಂತಿ ಬೆಳೆಗಾರರಿಗೆ ಆಸರೆಯಾಗುವಂತೆ ಸಚಿವ ಪ್ರಲ್ಹಾದ ಜೋಶಿ ಈ ಹಿಂದೆ ಕೇಂದ್ರ ಕೃಷಿ ಸಚಿವರು ಮತ್ತು ಪ್ರಧಾನಿ ನರೇಂದ್ರ ಮೋದಿಯವರ ಗಮನ ಸೆಳೆದಿದ್ದರು.

**ಕೃಷಿ ಸಚಿವರಿಗೆ ಜೋಶಿ ಪತ್ರ:** ಸೂರ್ಯಕಾಂತಿ ಕರ್ನಾಟಕದ ಪ್ರಮುಖ ಎಣ್ಣೆ ಬೀಜಗಳಲ್ಲಿ ಒಂದಾಗಿದ್ದು, 0.59 ಲಕ್ಷ ಹೆಕ್ಟೇರ್‌ನಲ್ಲಿ 0.44 ಲಕ್ಷ ಮೆಟ್ರಿಕ್ ಟನ್ ಉತ್ಪಾದನೆ ಹೊಂದಿದೆ. ಆದರೆ, ಪ್ರಸ್ತುತ ಮಾರುಕಟ್ಟೆಯಲ್ಲಿ ಸರ್ಕಾರ ನಿಗದಿಪಡಿಸಿದ 7721 ಕನಿಷ್ಠ ಬೆಲೆಗಿಂತ ಕಡಿಮೆಯಿದೆ. ಹಾಗಾಗಿ ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ ಖರೀದಿಸಿ ರಾಜ್ಯದ ರೈತರ ನೆರವಿಗೆ ಧಾವಿಸಬೇಕೆಂದು ಸಚಿವ ಪ್ರಲ್ಹಾದ ಜೋಶಿ ಕೃಷಿ ಸಚಿವರಿಗೆ ಪತ್ರ ಬರೆದು ಒತ್ತಾಯಿಸಿದ್ದರು.

ಮುಂದಿನ ದಿನಗಳಲ್ಲಿ ಸೂರ್ಯಕಾಂತಿ ಬೆಲೆ ಮತ್ತಷ್ಟು ಕುಸಿಯುವ ಆತಂಕವಿದೆ.

ಹಾಗಾಗಿ ತಕ್ಷಣವೇ ನೆರವಾಗುವಂತೆ ಕೋರಿದ್ದರು. ಸಚಿವ ಜೋಶಿ ಅವರ ಮನವಿ ಪುರಸ್ಕರಿಸಿ ಕೇಂದ್ರ ಸರ್ಕಾರ ಇದೀಗ ರಾಜ್ಯದಿಂದ 9,023 ಮೆಟ್ರಿಕ್ ಟನ್ ಸೂರ್ಯಕಾಂತಿ ಖರೀದಿಗೆ ಅಸ್ತು ಎಂದಿದೆ.

**ಕೃಷಿ ಸಚಿವರಿಂದ ಪತ್ರ:** ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಈ ಸಂಬಂಧ ಜೋಶಿ ಅವರಿಗೆ ಪತ್ರ ಬರೆದು ಮಾಹಿತಿ ಹಂಚಿಕೊಂಡಿದ್ದಾರೆ. ತಮ್ಮ ಒತ್ತಾಸೆಯಂತೆ ಕರ್ನಾಟಕದಿಂದ ಬೆಂಬಲ ಬೆಲೆಯಲ್ಲಿ ಸೂರ್ಯಕಾಂತಿ ಖರೀದಿಗೆ ಅನುಮೋದನೆ ನೀಡಿದ್ದಾಗಿ ತಿಳಿಸಿದ್ದಾರೆ.

**ರೈತರಿಗೆ ಸೂಕ್ತ ಬೆಲೆ ನೀಡುವಲ್ಲಿ ಬದ್ಧ:** ಪ್ರಧಾನಿ ನರೇಂದ್ರ ಮೋದಿ ಅವರು ಯಾವತ್ತೂ ರೈತರಿಗೆ ಸೂಕ್ತ ಬೆಲೆ ದೊರಕಿಸಿಕೊಡುವಲ್ಲಿ ಬದ್ಧರಾಗಿದ್ದಾರೆ. ಮಾರುಕಟ್ಟೆಯಲ್ಲಿ ಬೆಲೆ ಕುಸಿತ ಎದುರಿಸುತ್ತಿರುವ ರೈತರಿಗೆ ಈ ಮೂಲಕ ಆಸರೆಯಾಗಿದ್ದಾರೆ ಎಂದಿರುವ ಸಚಿವ ಪ್ರಲ್ಹಾದ ಜೋಶಿ, ಇದಕ್ಕಾಗಿ ಪ್ರಧಾನಿ ಮತ್ತು ಕೃಷಿ ಸಚಿವರಿಗೆ ಧನ್ಯವಾದ ಹೇಳಿದ್ದಾರೆ.

# ಕೇರಳ ಜನಾದೇಶಕ್ಕೆ ಕಾಂಗ್ರೆಸ್ ಹರ್ಷ: ಮತದಾರರಿಗೆ ಪ್ರಿಯಾಂಕ, ಜೈರಾಮ್ ರಮೇಶ್





**ನವದೆಹಲಿ, ಮೇ 4:** ಕೇರಳ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನೇತೃತ್ವದ ಮೈತ್ರಿಕೂಟ (ಯುಡಿಎಫ್) ದಾಖಲಿಸಿದ ಭರ್ಜರಿ ಜಯವನ್ನು ಕಾಂಗ್ರೆಸ್ ಹಿರಿಯ ನಾಯಕರು ಸೋಮವಾರ ಸ್ವಾಗತಿಸಿದ್ದಾರೆ. ಮತದಾರರಿಗೆ ಕೃತಜ್ಞತೆ ಸಲ್ಲಿಸಿರುವ ನಾಯಕರು, ಈ ಜನಾದೇಶವನ್ನು ಜವಾಬ್ದಾರಿಯುತ ಆಡಳಿತವಾಗಿ ಪರಿವರ್ತಿಸುವುದಾಗಿ ಭರವಸೆ ನೀಡಿದ್ದಾರೆ. ಇದೇ ವೇಳೆ, ಇತರ ರಾಜ್ಯಗಳ ಫಲಿತಾಂಶಗಳು ನಿರೀಕ್ಷೆಗಿಂತ ಕಡಿಮೆ ಇರುವುದನ್ನು ಅವರು ಒಪ್ಪಿಕೊಂಡಿದ್ದಾರೆ.

ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ, ಕೇರಳದ ನನ್ನ ಎಲ್ಲಾ ಸಹೋದರ ಸಹೋದರಿಯರೇ, ನಮ್ಮ ಮೇಲಿಟ್ಟ ನಂಬಿಕೆ ಮತ್ತು ನೀಡಿದ ಅಪಾರ ಬೆಂಬಲಕ್ಕಾಗಿ ಧನ್ಯವಾದಗಳು. ನೀವು ನಮ್ಮ ಮೇಲಿಟ್ಟಿರುವ ಈ ನಂಬಿಕೆಯೇ ಮುಂದಿನ ಐದು ವರ್ಷಗಳ ಕಾಲ ಪ್ರಾಮಾಣಿಕ ಮತ್ತು ವಿನಮ್ರ ಆಡಳಿತ ನೀಡಲು ಯುಡಿಎಫ್‌ಗೆ ಮಾರ್ಗದರ್ಶಕ ಶಕ್ತಿಯಾಗಲಿದೆ," ಎಂದು ಹೇಳಿದ್ದಾರೆ.

ವಯನಾಡಿನ ಭರ್ಜರಿ ಜಯದ ಬಗ್ಗೆ ವಿಶೇಷ ಉಲ್ಲೇಖ: ವಯನಾಡಿನಲ್ಲಿ ಯುಡಿಎಫ್ ಸಾಧಿಸಿದ ಸಾಧನೆಯನ್ನು ಶ್ಲಾಘಿಸಿದ

ಕಾಂಗ್ರೆಸ್ ಸಂವಹನ ವಿಭಾಗದ ಉಸ್ತುವಾರಿ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಮಾತನಾಡಿ, "ಭರ್ಜರಿ ಬಹುಮತದೊಂದಿಗೆ ಸೇವೆ ಸಲ್ಲಿಸಲು ಅವಕಾಶ ನೀಡಿದ ಕೇರಳದ ಜನತೆಗೆ ಕಾಂಗ್ರೆಸ್ ಹೃತ್ಪೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತದೆ. ಜನರ ನಂಬಿಕೆಗೆ ದ್ರೋಹವಾಗದಂತೆ ನಾವು ಜವಾಬ್ದಾರಿಯಿಂದ ಕೆಲಸ ಮಾಡುತ್ತೇವೆ," ಎಂದು ತಿಳಿಸಿದ್ದಾರೆ. ಇದೇ ವೇಳೆ ರಾಷ್ಟ್ರೀಯ ಮಟ್ಟದ ಫಲಿತಾಂಶಗಳ ಬಗ್ಗೆ ಮುಕ್ತವಾಗಿ ಮಾತನಾಡಿದ ಜೈರಾಮ್ ರಮೇಶ್, "ಕೇರಳ ಹೊರತುಪಡಿಸಿ ಇತರ ಪ್ರದೇಶಗಳ ಫಲಿತಾಂಶಗಳು ನಮ್ಮ ನಿರೀಕ್ಷೆಗಿಂತ ಕಡಿಮೆಯಿವೆ. ಆದರೆ ಇದರಿಂದ ನಾವು ಧೃತಿಗೆಟ್ಟಿಲ್ಲ. ಇದು ಸಿದ್ಧಾಂತಗಳ ನಡುವಿನ ಹೋರಾಟ. ಪ್ರಜಾಪ್ರಭುತ್ವ ಮತ್ತು ಸತ್ಯದ ಹಾದಿ ಯಾವಾಗಲೂ ದೀರ್ಘ ಮತ್ತು ಕಠಿಣವಾಗಿರುತ್ತದೆ. ನಾವು ದೃಢ ಸಂಕಲ್ಪದೊಂದಿಗೆ ಮುನ್ನಡೆಯುತ್ತೇವೆ ಎಂದು ಹೇಳಿದ್ದಾರೆ.

# ಸಮುದ್ರದಾಳದಲ್ಲಿ ಭಾರತದ ಬೃಹತ್ ತ್ರಿವರ್ಣ ಧ್ವಜ ಅನಾವರಣ: ಗಿನ್ನೆಸ್ ದಾಖಲೆ



**ಬೆಂಗಳೂರು, ಮೇ 4:** ಅಂಡಮಾನ್ ಮತ್ತು ನಿಕೋಬಾರ್ ದ್ವೀಪ ಸಮೂಹದ ಸ್ವರಾಜ್ ದ್ವೀಪದಲ್ಲಿ ಭಾರತದ ಸಾಹಸ ಯಾನದ ಸುವರ್ಣ ಅಧ್ಯಾಯವೊಂದು ಬರೆಯಲ್ಪಟ್ಟಿದೆ.

ಸಮುದ್ರದ ಆಳದಲ್ಲಿ ಭಾರತದ ಅತಿ ದೊಡ್ಡ ತ್ರಿವರ್ಣ ಧ್ವಜವನ್ನು ಯಶಸ್ವಿಯಾಗಿ ಅನಾವರಣಗೊಳಿಸುವ ಮೂಲಕ 'ಗಿನ್ನೆಸ್ ವರ್ಲ್ಡ್ ರೆಕಾರ್ಡ್' ನಿರ್ಮಿಸಲಾಗಿದೆ. ಈ ಐತಿಹಾಸಿಕ ಸಾಹಸದಲ್ಲಿ ಬೆಂಗಳೂರಿನ ಪ್ರತಿಭಾವಂತ ಸಾಹಸ ಕ್ರೀಡಾ ತಜ್ಞ ಶರತ್ ಆರ್. ಅಶೋಕ್ ಅವರು ಸಕ್ರಿಯವಾಗಿ ಪಾಲ್ಗೊಳ್ಳುವ ಮೂಲಕ ಕರ್ನಾಟಕದ ಕೀರ್ತಿಯನ್ನು ರಾಷ್ಟ್ರಮಟ್ಟದಲ್ಲಿ ಎತ್ತಿ ಹಿಡಿದಿದ್ದಾರೆ.

ಶರತ್ ಆರ್. ಅಶೋಕ್ ಅವರು ಸಾಹಸ ಕ್ರೀಡಾ ಕ್ಷೇತ್ರದಲ್ಲಿ ಕಳೆದ ಒಂದು ದಶಕದಿಂದ ನಿರಂತರವಾಗಿ ತೊಡಗಿಸಿಕೊಂಡಿದ್ದು, ಅಪಾರ ಅನುಭವ ಹೊಂದಿದ್ದಾರೆ. ಆಟೋಮೊಬೈಲ್ ಇಂಜಿನಿಯರಿಂಗ್ ಪದವೀಧರರಾಗಿರುವ ಇವರು, ಪ್ರಮಾಣೀಕೃತ 'ಡೈವ್ ಮಾಸ್ಟರ್' ಮತ್ತು ಸ್ಕೂಬಾ ಇನ್ಸ್ಟ್ರಕ್ಟರ್ ಆಗಿ ಅಂತರಾಷ್ಟ್ರೀಯ ಮಟ್ಟದ ಪರಿಣತಿ ಪಡೆದಿದ್ದಾರೆ.

ಜಲ ಸಾಹಸ ಮಾತ್ರವಲ್ಲದೆ, ಪ್ಯಾರಾಗ್ಲೈಡಿಂಗ್ ಮತ್ತು ಪ್ಯಾರಾಮೋಟರ್ ಪೈಲಟ್ ಆಗಿ ಆಕಾಶದಲ್ಲೂ ಸಾಹಸ ಮೆರೆದಿರುವ ಇವರು, ಮೋಟೊಕ್ರಾಸ್ ಮತ್ತು ಪರ್ವತಾರೋಹಣದಲ್ಲಿಯೂ ಸಿದ್ಧಹಸ್ತರು. ಇಂತಹ ಹತ್ತು ವರ್ಷಗಳ ವೈವಿಧ್ಯಮಯ ಸಾಹಸೀ ಹಿನ್ನೆಲೆಯೇ ಇಂದು ಸಮುದ್ರದಾಳದ ಈ ಕಠಿಣ ಸವಾಲನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಅವರಿಗೆ ಸಹಕಾರಿಯಾಗಿದೆ.

ಮೇ 2ರಂದು ನಡೆದ ಈ ಬೃಹತ್ ಕಾರ್ಯಾಚರಣೆಯಲ್ಲಿ ದೇಶದ ವಿವಿಧ ಭಾಗಗಳ ಸುಮಾರು 200ಕ್ಕೂ ಹೆಚ್ಚು ನುರಿತ ಸ್ಕೂಬಾ ಡೈವರ್‌ಗಳು ಭಾಗವಹಿಸಿದ್ದರು. ಅಂಡಮಾನ್ ಆಡಳಿತ ಮತ್ತು ಭಾರತೀಯ ರಕ್ಷಣಾ ಪಡೆಗಳ ಸಹಯೋಗದೊಂದಿಗೆ ನಡೆದ ಈ ಅಭಿಯಾನದಲ್ಲಿ, 60ಥ40 ಮೀಟರ್ (2,400 ಚದರ ಮೀಟರ್) ವಿಸ್ತೀರ್ಣದ ಬೃಹತ್ ರಾಷ್ಟ್ರಧ್ವಜವನ್ನು ಅಲೆಗಳ ಅಬ್ಬರ ಮತ್ತು ನೀರಿನ ತೀವ್ರ ಒತ್ತಡದ ನಡುವೆ ಸಮುದ್ರದಾಳದಲ್ಲಿ ಅನಾವರಣಗೊಳಿಸಲಾಯಿತು. ಈ ಅಪ್ರತಿಮ ಸಾಧನೆಯನ್ನು ಗುರುತಿಸಿ ಅಂಡಮಾನ್ ಮತ್ತು ನಿಕೋಬಾರ್‌ನ ಲೆಫ್ಟಿನೆಂಟ್ ಗವರ್ನರ್ ಡಿ.ಕೆ. ಜೋಶಿ ಅವರು ಗಿನ್ನೆಸ್ ವಿಶ್ವ ದಾಖಲೆಯ ಪ್ರಮಾಣಪತ್ರವನ್ನು ನೀಡಿ ಗೌರವಿಸಿದ್ದಾರೆ.

ಈ ಐತಿಹಾಸಿಕ ಕ್ಷಣದ ಬಗ್ಗೆ ಪ್ರತಿಕ್ರಿಯಿಸಿರುವ ಶರತ್ ಅಶೋಕ್, "ನಮ್ಮ ತ್ರಿವರ್ಣ ಧ್ವಜವು 140 ಕೋಟಿ ಭಾರತೀಯರ ಶಕ್ತಿ ಮತ್ತು ಏಕತೆಯ ಪ್ರತೀಕ. ಸಾಹಸವು ನನ್ನ ಆಸಕ್ತಿಯಾಗಿದ್ದು, ಅಲೆಗಳ ಅಂತರಾಳದಲ್ಲಿ ರಾಷ್ಟ್ರಧ್ವಜವನ್ನು ಅರಳಿಸಿದ ಆ ಕ್ಷಣ ನನ್ನ ಬದುಕಿನ ಅತ್ಯಂತ ಗೌರವದ ಸಂದರ್ಭ. ವನ್ಯಜೀವಿ ಸಂರಕ್ಷಣೆ ಮತ್ತು ಸಾಹಸ ಕ್ರೀಡೆಗಳಲ್ಲಿನ ನನ್ನ ಅನುಭವವು ಇಂತಹ ರಾಷ್ಟ್ರಮಟ್ಟದ ಸಾಧನೆಯಲ್ಲಿ ಭಾಗಿಯಾಗಲು ನನಗೆ ಸ್ಫೂರ್ತಿ ನೀಡಿದೆ" ಎಂದು ತಿಳಿಸಿದ್ದಾರೆ.

ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರ ಪುತ್ರರಾಗಿರುವ ಶರತ್ ಅವರ ಈ ಅಂತರಾಷ್ಟ್ರೀಯ ಮಟ್ಟದ ಸಾಧನೆಯು ರಾಜ್ಯದ ಯುವಜನತೆಗೆ ದೊಡ್ಡ ಪ್ರೇರಣೆಯಾಗಿದೆ.

# ಅಭಿವೃದ್ಧಿ–ಸುಸ್ಥಿರ ಆಡಳಿತದ ಪರವಾಗಿ ಮತದಾರರ ತೀರ್ಪು

**ಪಂಚರಾಜ್ಯ ಚುನಾವಣೆ ಫಲಿತಾಂಶಕ್ಕೆ ಎಚ್.ಡಿ. ಕುಮಾರಸ್ವಾಮಿ ಪ್ರತಿಕ್ರಿಯೆ**

**ಮೋದಿ ನಾಯಕತ್ವವನ್ನು ಹಾಡಿ ಹೊಗಳಿದ ಕೇಂದ್ರ ಸಚಿವ**



**ನವದೆಹಲಿ, ಮೇ 4:** ಪ್ರಧಾನಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವ ಮತ್ತು ವಿಕಸಿತ ಭಾರತದ ಮೇಲೆ ಜನರು ಹೊಂದಿರುವ ನಂಬಿಕೆಯಿಂದಾಗಿ ಎನ್‌ಡಿಎ ಭರ್ಜರಿ ಗೆಲುವು ಸಾಧಿಸಿದೆ ಎಂದು ಕೇಂದ್ರ ಸಚಿವ ಎಚ್.ಡಿ ಕುಮಾರಸ್ವಾಮಿ ಅವರು ಅಭಿನಂದನೆ ಸಲ್ಲಿಸಿದ್ದಾರೆ.

ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡು ಪ್ರಧಾನಿ ಮೋದಿ ಅವರಿಗೆ ಹೃತ್ಪೂರ್ವಕ ಅಭಿನಂದನೆ ತಿಳಿಸಿದ್ದಾರೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿಯ ನಾಯಕತ್ವ ಮತ್ತು ವಿಕ್ಷಿತ ಭಾರತದ ಮೇಲೆ ಜನರು ಹೊಂದಿರುವ ನಂಬಿಕೆಯ ಪ್ರತಿಫಲವೇ ಎನ್‌ಡಿಎ ಇಂದು ಭರ್ಜರಿ ಗೆಲುವು ಸಾಧಿಸಿದೆ ಎಂದಿದ್ದಾರೆ.


ಈ ನಿರ್ಣಾಯಕ ಜನಾದೇಶವು ಜನರ ಆಕಾಂಕ್ಷೆಗಳು ಮತ್ತು ಸಬ್ಕಾ ಸಾಥ್, ಸಬ್ಕಾ ವಿಕಾಸ್, ಸಬ್ಕಾ ವಿಶ್ವಾಸ್‌ನ ಮಾರ್ಗದರ್ಶಿ ತತ್ವಗಳ ನಡುವಿನ ಆಳವಾದ ಹೊಂದಾಣಿಕೆಯನ್ನು ಎತ್ತಿ ತೋರಿಸುತ್ತದೆ. ಇದು ಎನ್‌ಡಿಎಯನ್ನು ವಿಶ್ವಾಸಾರ್ಹತೆ, ಕಾರ್ಯಕ್ಷಮತೆಯ ವೇದಿಕೆಯಾಗಿ ಬಲಪಡಿಸುತ್ತದೆ. ಈ ಮೂಲಕ ಯಂಗ್ ಇಂಡಿಯಾ, ಸಮಗ್ರತೆ ಮತ್ತು ನಾಗರಿಕರೊಂದಿಗೆ ನಿಜವಾದ ಸಂಪರ್ಕವನ್ನು ಗೌರವಿಸುತ್ತದೆ ಎಂಬುದನ್ನು ತಿಳಿಸಿದೆ ಎಂದು ಹೇಳಿದ್ದಾರೆ.

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಕಾರ್ಯತಂತ್ರದ ನಾಯಕತ್ವ ಮತ್ತು ರಾಷ್ಟ್ರೀಯ ಏಕತೆಗೆ ಅಚಲ ಬದ್ಧತೆಯು ಈ ಫಲಿತಾಂಶವನ್ನು ರೂಪಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ದೇಶಾದ್ಯಂತ ಎನ್‌ಡಿಎಯ ವ್ಯಾಪ್ತಿ ಮತ್ತು ಸಾಂಸ್ಥಿಕ ಆಳವನ್ನು ಮತ್ತಷ್ಟು ಬಲಪಡಿಸುತ್ತದೆ. ಇನ್ನೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರಾದ ನಿತಿನ್ ನಬಿನ್ ಅವರು ಸಂಘಟನೆಗೆ ಶಕ್ತಿ ತುಂಬುವಲ್ಲಿ ಮತ್ತು ಕಾರ್ಯಕರ್ತರೊಂದಿಗೆ ಸಂಪರ್ಕ ಸಾಧಿಸುವಲ್ಲಿ ಮಾಡಿದ ಪ್ರಯತ್ನಗಳು ಈ ಮಹತ್ವದ ಜನಾದೇಶಕ್ಕೆ ಕಾರಣವಾಗಿವೆ ಎಂದಿದ್ದಾರೆ.

ಪ್ರಧಾನಿ ನರೇದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್, ಎಲ್ಲಾ ಎನ್‌ಡಿಎ ವಿಜೇತರು, ಸಮರ್ಪಿತ ಕಾರ್ಯಕರ್ತರು ಮತ್ತು ಈ ಐತಿಹಾಸಿಕ ಜನಾದೇಶಕ್ಕಾಗಿ ಜನತೆಗೆ ನನ್ನ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸುತ್ತೇನೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

# ಕಡೆಗೂ ಬಂಗಾಳ ಗೆದ್ದ ಮೋದಿ-ಅಮಿತ್ ಶಾ ಜೋಡಿ

**ಕೋಲ್ಕತ್ತಾ, ಮೇ 4:** ಈ ಬಾರಿ ಪಶ್ಚಿಮ ಬಂಗಾಳದ ಚುನಾವಣೆಯಲ್ಲಿ ಬಿಜೆಪಿಯನ್ನು ಗೆಲ್ಲಿಸಲೇಬೇಕೆಂದು ಪ್ರಧಾನಿ ಮೋದಿ ಮತ್ತು ಅಮಿತ್ ಶಾ ಖುದ್ದಾಗಿ ಅಖಾಡಕ್ಕೆ ಇಳಿದಿದ್ದರು. ಕಳೆದ 2 ತಿಂಗಳಲ್ಲಿ ಅನೇಕ ಬಾರಿ ನರೇಂದ್ರ ಮೋದಿ ಬಂಗಾಳಕ್ಕೆ ಆಗಮಿಸಿ ಚುನಾವಣಾ ಪ್ರಚಾರ ನಡೆಸಿದ್ದಾರೆ. ಅಮಿತ್ ಶಾ ಬಂಗಾಳದಲ್ಲೇ ಬೀಡುಬಿಟ್ಟು ರಾಜ್ಯದ ಬಿಜೆಪಿ ನಾಯಕರಿಗೆ ಸಲಹೆ-ಸೂಚನೆಗಳನ್ನು ನೀಡುತ್ತಾ ಬಂಗಾಳದಲ್ಲಿ ಬಿಜೆಪಿ ಪರ ಅಲೆ ಮೂಡಲು ಸಾಕಷ್ಟು ಶ್ರಮಿಸಿದ್ದಾರೆ. ಹೀಗಾಗಿ ಈ ಗೆಲುವು ಸಿಗಲು ಪಶ್ಚಿಮ ಬಂಗಾಳ ರಾಜ್ಯದ ಬಿಜೆಪಿ ನಾಯಕರಿಗಿಂತ ಹೆಚ್ಚಾಗಿ ಹೈಕಮಾಂಡ್ ನಾಯಕರ ಪರಿಶ್ರಮವೇ ಕಾರಣ ಎನ್ನಬಹುದು.



ಚುನಾವಣಾ ಪ್ರಚಾರದ ಸಮಯದಲ್ಲಿ, ಪ್ರಧಾನಿ ಮೋದಿ ಹಲವಾರು ಸಾರ್ವಜನಿಕ ರ್‍ಯಾಲಿಗಳನ್ನು ನಡೆಸಿ ರಾಜ್ಯದಲ್ಲಿ ಬದಲಾವಣೆಗೆ ಕರೆ ನೀಡಿದರು. ಬಂಗಾಳದಲ್ಲಿ ಕೇಂದ್ರ ಸರ್ಕಾರದ ಯೋಜನೆಗಳನ್ನು ಜಾರಿಗೆ ತರುವ ಭರವಸೆ ನೀಡಿದರು. ಹಾಗೇ, ಕೇಂದ್ರ ಗೃಹ ಸಚಿವ ಅಮಿತ್ ಶಾ ಸುಮಾರು 15 ದಿನಗಳ ಕಾಲ ಬಂಗಾಳದಲ್ಲಿಯೇ ಇದ್ದು, ರಾಜ್ಯದ ವಿವಿಧ ಪ್ರದೇಶಗಳಲ್ಲಿ ಸಭೆಗಳನ್ನು ನಡೆಸಿ, ಪ್ರತಿ ವಿಧಾನಸಭಾ ಸ್ಥಾನಕ್ಕೆ ಪ್ರತ್ಯೇಕ ಕಾರ್ಯತಂತ್ರ ರೂಪಿಸಿದರು. ಈ ಕಾರ್ಯತಂತ್ರವು ಈಗ ಚುನಾವಣಾ ಫಲಿತಾಂಶಗಳಲ್ಲಿ ಗೋಚರಿಸುತ್ತಿದೆ.

ಬಿಜೆಪಿ 82,000 ಬೂತ್‌ಗಳಲ್ಲಿ 71,000 ಬೂತ್‌ಗಳ ಮೇಲೆ ನಿಯಂತ್ರಣ ಸಾಧಿಸಿದೆ. ಮುಸ್ಲಿಂ ಪ್ರಾಬಲ್ಯದ ಪ್ರದೇಶಗಳನ್ನು ಹೊರತುಪಡಿಸಿ, ಪ್ರತಿಯೊಂದು ಬೂತ್‌ನಲ್ಲಿ ಸಂಘಟನೆಯನ್ನು ಬಲಪಡಿಸಲಾಗಿದೆ. ಹಿಂಸಾಚಾರಕ್ಕೆ ಬಲಿಯಾದ ಕಾರ್ಯಕರ್ತರನ್ನು ಪುನಃ ಸಕ್ರಿಯಗೊಳಿಸುವ ಮೂಲಕ ಬಿಜೆಪಿ ತುಳಿತಕ್ಕೆ ಒಳಗಾದವರನ್ನು ತನ್ನ ಚುನಾವಣಾ ಅಸ್ತ್ರವನ್ನಾಗಿ ಬಳಸಿಕೊಂಡಿತು. ಅಮಿತ್ ಶಾ ಅವರ ಮೇಲ್ವಿಚಾರಣೆಯಲ್ಲಿ ಕೇಂದ್ರ ನಾಯಕರಿಗೆ ಸ್ಥಾನವಾರು ಜವಾಬ್ದಾರಿಗಳನ್ನು ವಹಿಸಲಾಯಿತು. ರಾಷ್ಟ್ರೀಯ ಸ್ವಯಂಸೇವಕ ಸಂಘದ (ಆರ್‌ಎಸ್‌ಎಸ್) ಡ್ರಾಯಿಂಗ್ ರೂಮ್ ಸಭೆಗಳು ಮನೆಮನೆಗೆ ಬಿಜೆಪಿ ತಲುಪಲು ಕಾರಣವಾಯಿತು. ಇದಕ್ಕೆ ಆರ್‌ಎಸ್‌ಎಸ್ ಕಾರ್ಯಕರ್ತರು ಕೈಜೋಡಿಸಿದ್ದರಿಂದ ಬಿಜೆಪಿಗೆ ಬಹಳ ಸಹಾಯವಾಯಿತು. ಬಿಜೆಪಿಯ ಚುನಾವಣಾ ಪ್ರಚಾರದಲ್ಲಿ ಟಾಲಿವುಡ್ ತಾರೆಯರು ಮತ್ತು ಕಳಂಕಿತ ರಾಜಕಾರಣಿಗಳನ್ನು ದೂರವಿಡಲಾಯಿತು.

ಪೂರ್ವಾಂಚಲಿ, ಮಾರ್ವಾಡಿ ಸಮುದಾಯ ಮತ್ತು ಸ್ಥಳೀಯ ಫುಟ್ಬಾಲ್ ಕ್ಲಬ್‌ಗಳನ್ನು ತಲುಪುವ ಮೂಲಕ ಹೊಸ ಮತ ಬ್ಯಾಂಕ್ ಅನ್ನು ರಚಿಸಲಾಯಿತು. ಜೈ ಶ್ರೀರಾಮ್, ಒಳನುಸುಳುವಿಕೆ, ಮಹಿಳಾ ಸುರಕ್ಷತೆ – ಇವುಗಳನ್ನು ಒಟ್ಟುಗೂಡಿಸಿ ಬಲವಾದ ಸೈದ್ಧಾಂತಿಕ ಚೌಕಟ್ಟನ್ನು ರಚಿಸಲಾಯಿತು. ಇದು ಬಿಜೆಪಿಯತ್ತ ಜನರು ಒಲವು ತೋರಲು ಕಾರಣವಾಯಿತು. **3,000 ರೂ. ವರ್ಸಸ್ 1,500 ರೂ. ಆಫರ್:** ಟಿಎಂಸಿ 1,500 ರೂ. ನಿರುದ್ಯೋಗ ಭತ್ಯೆಯನ್ನು ನೀಡಿದರೆ, ಬಿಜೆಪಿ ಅದನ್ನು 3,000 ರೂ.ಗೆ ದ್ವಿಗುಣಗೊಳಿಸುವುದಾಗಿ ಭರವಸೆ ನೀಡಿತು.

**ಮಹಿಳೆಯರಿಗೆ ಡಬಲ್ ಡೋಸ್:** ಮಮತಾ ಬ್ಯಾನರ್ಜಿಯವರ ಲಕ್ಷ್ಮಿ ಭಂಡಾರ್ 1,500 ರೂ.ಗೆ ಹೋಲಿಸಿದರೆ, ಬಿಜೆಪಿ ಪ್ರತಿ ಮಹಿಳೆಗೆ ತಿಂಗಳಿಗೆ 3,000 ರೂ. ನೀಡುವುದಾಗಿ ಭರವಸೆ ನೀಡಿತು. ಇದು ಮಹಿಳೆಯರನ್ನು ತನ್ನತ್ತ ಸೆಳೆಯಲು ಬಿಜೆಪಿಗೆ ಸಹಾಯವಾಯಿತು.

**ಸರ್ಕಾರಿ ನೌಕರರಿಗೆ 7ನೇ ವೇತನ ಆಯೋಗ:** ಟಿಎಂಸಿ ವಿರುದ್ಧ ಡಿಎ ಮತ್ತು ವೇತನ ವ್ಯತ್ಯಾಸದ ಆರೋಪ ಮಾಡಿತು. ಅಧಿಕಾರಕ್ಕೆ ಬಂದ 45 ದಿನಗಳಲ್ಲಿ 7ನೇ ವೇತನ ಆಯೋಗವನ್ನು ಜಾರಿಗೆ ತರುವುದಾಗಿ ಬಿಜೆಪಿ ಭರವಸೆ ನೀಡಿದೆ. ಸರ್ಕಾರಿ ಉದ್ಯೋಗಗಳಲ್ಲಿ 33% ಮಹಿಳಾ ಮೀಸಲಾತಿಯ ಭರವಸೆ: ಹಣಕಾಸಿನ ನೆರವು ಮಾತ್ರವಲ್ಲದೆ, ಉದ್ಯೋಗದಲ್ಲಿ ಕೂಡ ಮಹಿಳೆಯರಿಗೆ ಹೆಚ್ಚಿನ ಆದ್ಯತೆಯ ಭರವಸೆಯನ್ನು ಬಿಜೆಪಿ ನೀಡಿದೆ.

## ಏಕರೂಪ ನಾಗರಿಕ ಸಂಹಿತೆಯ ಭರವಸೆ

ಏಕರೂಪ ನಾಗರಿಕ ಸಂಹಿತೆ (ಯುಸಿಸಿ) ಬಿಜೆಪಿ ಇದನ್ನು ಎಲ್ಲರಿಗೂ ಒಂದೇ ಕಾನೂನು ಎಂದು ಪ್ರಸ್ತುತಪಡಿಸಿತು. ಇದು ಟಿಎಂಸಿ ನಿರೂಪಣೆಗಿಂತ ಭಿನ್ನವಾಗಿದೆ. ಒಳನುಸುಳುವಿಕೆಗೆ ಶೂನ್ಯ ಸಹಿಷ್ಣುತೆ: ಪಶ್ಚಿಮ ಬಂಗಾಳದಲ್ಲಿ ಒಳನುಸುಳುವವರನ್ನು ಹೊರಹಾಕಲಾಗುವುದು ಎಂದು ಬಿಜೆಪಿ ಸ್ಪಷ್ಟವಾಗಿ ಹೇಳಿದೆ. **ಕೈಗಾರಿಕೆ ಮತ್ತು ಸಿಂಗೂರ್ ಪುನರುಜ್ಜೀವನ:** ಸಿಂಗೂರ್ ಅನ್ನು ಮತ್ತೆ ಕೈಗಾರಿಕಾ ಕೇಂದ್ರವನ್ನಾಗಿ ಮಾಡುವ ಭರವಸೆಯನ್ನು ಬಿಜೆಪಿ ನೀಡಿದೆ. ಇದು ಉದ್ಯೋಗ ಮತ್ತು ಹೂಡಿಕೆಗೆ ಅನುಕೂಲ ನೀಡುತ್ತದೆ. ಕೇಂದ್ರ ಯೋಜನೆಗಳ ಸಂಪೂರ್ಣ ಲಾಭ: ಬಂಗಾಳದಲ್ಲಿ ಆಯುಷ್ಮಾನ್ ಭಾರತ್ ನಂತಹ ಯೋಜನೆಗಳನ್ನು ಸಂಪೂರ್ಣವಾಗಿ ಜಾರಿಗೆ ತರುವ ಭರವಸೆ ನೀಡಲಾಗಿದೆ.


ಈ ಬಾರಿ ಪಶ್ಚಿಮ ಬಂಗಾಳವು ಸ್ವಾತಂತ್ರ್ಯದ ನಂತರ ಅತಿ ಹೆಚ್ಚು ಮತದಾನವನ್ನು ದಾಖಲಿಸಿದೆ. ವಿಧಾನಸಭಾ ಚುನಾವಣೆಯ ಎರಡನೇ ಹಂತದಲ್ಲಿ ಶೇ. 91.66ರಷ್ಟು ಮತದಾನವಾಗಿದೆ. ಮೊದಲ ಹಂತದ ಚುನಾವಣೆಯಲ್ಲಿ ಶೇ.93.19ರಷ್ಟು ಜನರು ಮತದಾನದಲ್ಲಿ ಭಾಗವಹಿಸಿದ್ದು, ಒಟ್ಟಾರೆ ಮತದಾನದ ಪ್ರಮಾಣ ಶೇ.92.47ಕ್ಕೆ ತಲುಪಿದೆ.

2021ರ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ, ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ ಪಕ್ಷವು 294 ಸ್ಥಾನಗಳಲ್ಲಿ 213 ಸ್ಥಾನಗಳನ್ನು ಗೆದ್ದು ಸುಮಾರು ಶೇ.48ರಷ್ಟು ಮತಗಳನ್ನು ಗಳಿಸಿ ನಿರ್ಣಾಯಕ ಬಹುಮತ ಗಳಿಸಿತು. ಆದರೆ ಬಿಜೆಪಿ 77 ಸ್ಥಾನಗಳನ್ನು ಅಂದರೆ ಸರಿಸುಮಾರು ಶೇ.38ರಷ್ಟು ಮತಗಳನ್ನು ಗಳಿಸಿ ಪ್ರಮುಖ ವಿರೋಧ ಪಕ್ಷವಾಗಿ ಹೊರಹೊಮ್ಮಿತ್ತು. ಈ ಬಾರಿ ಬಿಜೆಪಿ ನಿರೀಕ್ಷೆಗೂ ಮೀರಿ ಗೆಲುವು ಸಾಧಿಸಿದೆ.

## ನೋಟಾಗೆ ಈ ಬಾರಿ ಆಸಕ್ತಿ ತೋರದ ಮತದಾರ

### 2014ರ ಲೋಕಸಭಾ ಚುನಾವಣೆಯಲ್ಲಿ ಶೇ.1.08ರಷ್ಟಿದ್ದ ಪ್ರಮಾಣ 2024ರಲ್ಲಿ ಶೇ.0.99ಕ್ಕೆ ಇಳಿಕೆ: ಚುನಾವಣಾ ಆಯೋಗ

**ನವದೆಹಲಿ, ಮೇ 4:** ಇತ್ತೀಚೆಗೆ ನಡೆದ ಐದು ರಾಜ್ಯಗಳ ವಿಧಾನಸಭಾ ಚುನಾವಣಾ ಫಲಿತಾಂಶಗಳು ಹೊರಬಿದ್ದಿದ್ದು, ಮತದಾರರು ನೋಟಾ (ಯಾರಿಗೂ ಮತವಿಲ್ಲ) ಎಂಬ ಆಯ್ಕೆಯ ಬಗ್ಗೆ ಅಷ್ಟಾಗಿ ಆಸಕ್ತಿ ತೋರಿಲ್ಲ ಎಂಬುದು ಚುನಾವಣಾ ಆಯೋಗದ ಅಂಕಿ-ಅಂಶಗಳಿಂದ ತಿಳಿದುಬಂದಿದೆ.




ಅಸ್ಸಾಂ ಹೊರತುಪಡಿಸಿ, ಉಳಿದ ಯಾವುದೇ ರಾಜ್ಯಗಳಲ್ಲಿ 'ನೋಟಾ' ಮತಗಳ ಪ್ರಮಾಣ ಶೇಕಡಾ ಒಂದರ ಗಡಿಯನ್ನು ದಾಟಿಲ್ಲ. ಐದು ರಾಜ್ಯಗಳ ಪೈಕಿ ಅಸ್ಸಾಂನಲ್ಲಿ ಅತಿಹೆಚ್ಚು ಅಂದರೆ ಶೇ. 1.29ರಷ್ಟು ಮತದಾರರು ನೋಟಾ ಬಟನ್ ಒತ್ತಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ಶೇ. 0.81, ಪುದುಚೇರಿಯಲ್ಲಿ ಶೇ. 0.73, ಕೇರಳದಲ್ಲಿ ಶೇ. 0.58 ಮತ್ತು ತಮಿಳುನಾಡಿನಲ್ಲಿ ಅತ್ಯಂತ ಕಡಿಮೆ ಅಂದರೆ ಕೇವಲ ಶೇ. 0.41 ರಷ್ಟು ನೋಟಾ ಮತಗಳು ದಾಖಲಾಗಿವೆ.2013ರಲ್ಲಿ ನೋಟಾ ಆಯ್ಕೆಯನ್ನು ಜಾರಿಗೆ ತಂದ ನಂತರ, 2024ರ ಲೋಕಸಭಾ ಚುನಾವಣೆಯಲ್ಲಿ ಇದುವರೆಗಿನ ಅತ್ಯಂತ ಕಡಿಮೆ ಪ್ರಮಾಣದ ಮತಗಳು ದಾಖಲಾಗಿವೆ. 2014ರ ಲೋಕಸಭಾ ಚುನಾವಣೆಯಲ್ಲಿ ಶೇ. 1.08 ರಷ್ಟಿದ್ದ ನೋಟಾ ಮತಗಳ ಪ್ರಮಾಣ, 2024ರ ವೇಳೆಗೆ ಶೇ. 0.99ಕ್ಕೆ ಇಳಿಕೆಯಾಗಿದೆ ಎಂದು ಚುನಾವಣಾ ಆಯೋಗದ 'ಅಟ್ಲಾಸ್-2024' ದತ್ತಾಂಶ ತಿಳಿಸಿದೆ.

ಸುಪ್ರೀಂ ಕೋರ್ಟ್‌ನ 2013ರ ಆದೇಶದ ಮೊದಲು, ಮತದಾರರು 'ಫಾರ್ಮ್ 49-ಓ' ಮೂಲಕ ಈ ಹಕ್ಕನ್ನು ಚಲಾಯಿಸಬಹುದಿತ್ತು. ಆದರೆ ಅದು ಗೌಪ್ಯವಾಗಿರುತ್ತಿರಲಿಲ್ಲ. ಇವಿಎಂನಲ್ಲಿ ನೋಟಾ ಬಟನ್ ಅಳವಡಿಸಿದ ನಂತರ ಮತದಾರರ ಗೌಪ್ಯತೆ ಕಾಯ್ದುಕೊಳ್ಳಲಾಗಿದೆ.ನೋಟಾ ಮತಗಳು ಬಹುಮತ ಪಡೆದರೂ ಸಹ, ಆ ಕ್ಷೇತ್ರದಲ್ಲಿ ಮರು ಚುನಾವಣೆ ನಡೆಸುವಂತೆ ಚುನಾವಣಾ ಆಯೋಗಕ್ಕೆ ನಿರ್ದೇಶನ ನೀಡಲು ಸುಪ್ರೀಂ ಕೋರ್ಟ್ ಈ ಹಿಂದೆ ನಿರಾಕರಿಸಿತ್ತು.ಪಶ್ಚಿಮ ಬಂಗಾಳ, ಅಸ್ಸಾಂ, ಕೇರಳ, ತಮಿಳುನಾಡು ಮತ್ತು ಪುದುಚೇರಿ ರಾಜ್ಯಗಳಿಗೆ ಏಪ್ರಿಲ್ ತಿಂಗಳಿನಲ್ಲಿ ಮತದಾನ ನಡೆದಿದ್ದು, ಸೋಮವಾರದ ಫಲಿತಾಂಶದಲ್ಲಿ ಈ ಕುತೂಹಲಕಾರಿ ಅಂಕಿ-ಅಂಶಗಳು ಬೆಳಕಿಗೆ ಬಂದಿವೆ.

## ತಮಿಳುನಾಡಿನಲ್ಲಿ ಕಾಂಗ್ರೆಸ್-ಟಿವಿಕೆ ಮೈತ್ರಿ ಸಾಧ್ಯವೇ?

**ಚೆನ್ನೈ, ಮೇ 4:** ತಮಿಳುನಾಡಿನ ವಿಧಾನಸಭಾ ಫಲಿತಾಂಶ ಹೊರಬಿದ್ದಿದ್ದು ನಟ-ರಾಜಕೀಯ ನಾಯಕ ವಿಜಯ್ ದಳಪತಿ ನೇತೃತ್ವದ ಟಿವಿಕೆ 110 ಕ್ಷೇತ್ರಗಳಲ್ಲಿ ಜಯ ಸಾಧಿಸುವ ಮೂಲಕ ಮೊದಲ ಪ್ರಯತ್ನದಲ್ಲೇ ಹೊಸ ಅಲೆ ಸೃಷ್ಟಿಸಿದೆ. ಆದರೆ ಅಧಿಕಾರಕ್ಕೇರಲು ಬೇಕಾದ ಸರಳ ಬಹುಮತ ಪಡೆಯಲು ವಿಫಲವಾಗಿರುವ ಟಿವಿಕೆ ಇದೀಗ ಯಾವ ಪಕ್ಷದ ಜೊತೆ ಮೈತ್ರಿಗೆ ಮುಂದಾಗಲಿದೆ ಎಂಬ ಕುತೂಹಲ ಉಂಟಾಗಿದೆ.

ತಮಿಳುನಾಡಿನಲ್ಲಿ ಅಧಿಕಾರಕ್ಕೇರಲು ಮ್ಯಾಜಿಕ್ ನಂಬರ್ 118 ಆಗಿದೆ. ಹೀಗಾಗಿ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ ಮತ್ತು ಕಾಂಗ್ರೆಸ್ ನಡುವಿನ ಮೈತ್ರಿ ಸಾಧ್ಯತೆ ರಾಜಕೀಯ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ. ಕರ್ನಾಟಕದಲ್ಲಿ ಹಿಂದೆ ಕಾಂಗ್ರೆಸ್ ಮತ್ತು ಜೆಡಿಎಸ್ ಮೈತ್ರಿ ಮೂಲಕ ಬಿಜೆಪಿಯನ್ನು ಅಧಿಕಾರದಿಂದ ದೂರವಿಡಲು ಪ್ರಯತ್ನಿಸಿದ ಅನುಭವದ ಹಿನ್ನಲೆಯಲ್ಲಿ, ಇದೇ ಮಾದರಿಯ ರಾಜಕೀಯ ಸಮೀಕರಣ ತಮಿಳುನಾಡಿನಲ್ಲೂ ಮರುಕಳಿಸುವ ಸಾಧ್ಯತೆ ಕುರಿತು ವಿಶ್ಲೇಷಣೆ ನಡೆಯುತ್ತಿದೆ. ಆದರೆ ಕರ್ನಾಟಕದ ಮೈತ್ರಿ ನಾಯಕತ್ವದ ಭಿನ್ನಾಭಿಪ್ರಾಯ ಹಾಗೂ ಒಳಜಗಳಗಳಿಂದ ಹೆಚ್ಚು ಕಾಲ ಉಳಿಯಲಿಲ್ಲ ಎಂಬುದೂ ಗಮನಾರ್ಹ.

ಪ್ರಸ್ತುತ ತಮಿಳುನಾಡಿನಲ್ಲಿ ದ್ರಾವಿಡ ಮುನ್ನೇತ್ರ ಕಳಗಂ ಮತ್ತು ಅಖಿಲ ಭಾರತ ಅಣ್ಣಾ ದ್ರಾವಿಡ ಮುನ್ನೇತ್ರ ಕಳಗಂ ಪ್ರಮುಖ ರಾಜಕೀಯ ಶಕ್ತಿಗಳಾಗಿದ್ದು, ಕಾಂಗ್ರೆಸ್ ಈಗಾಗಲೇ ಡಿಎಂಕೆ ನೇತೃತ್ವದ ಮೈತ್ರಿಯ ಭಾಗವಾಗಿದೆ. ಈ ಹಿನ್ನೆಲೆದಲ್ಲಿ ಟಿವಿಕೆ ಜೊತೆ ಮೈತ್ರಿ ಕೈಗೊಳ್ಳುವ ಸಾಧ್ಯತೆ ಇದ್ದರೆ, ಅದು ರಾಜ್ಯದ ರಾಜಕೀಯ ಸಮೀಕರಣದಲ್ಲಿ ಮಹತ್ತರ ಬದಲಾವಣೆಗೆ ಕಾರಣವಾಗಬಹುದಾಗಿದೆ.

ರಾಜಕೀಯ ವಿಶ್ಲೇಷಕರ ಪ್ರಕಾರ, ಕಾಂಗ್ರೆಸ್‌ಗೆ ತಮಿಳುನಾಡಿನಲ್ಲಿ ಸ್ವತಂತ್ರವಾಗಿ ದೊಡ್ಡ ಮಟ್ಟದ ಬೆಂಬಲದ ಕೊರತೆ ಇದ್ದು, ಟಿವಿಕೆಗೆ ಸಂಘಟನಾ ಬಲ ಇನ್ನೂ ಆರಂಭಿಕ ಹಂತದಲ್ಲಿದೆ. ಇಂತಹ ಸಂದರ್ಭದಲ್ಲಿ ಎರಡೂ ಪಕ್ಷಗಳ ಮೈತ್ರಿ ಪರಸ್ಪರ ಪೂರಕವಾಗುವ ಸಾಧ್ಯತೆ ಇದೆ. ವಿಶೇಷವಾಗಿ ವಿಜಯ್ ಅವರ ಯುವಜನರಲ್ಲಿ ಇರುವ ಪ್ರಭಾವ ಕಾಂಗ್ರೆಸ್ ಗೆ ಹೆಚ್ಚುವರಿ ಲಾಭ ತರುವ ಸಾಧ್ಯತೆ ಇದೆ.

ಆದರೆ ಈ ಮೈತ್ರಿಗೆ ಸವಾಲುಗಳೂ ಕಡಿಮೆ ಇಲ್ಲ. ಕಾಂಗ್ರೆಸ್ ಈಗಾಗಲೇ ಡಿಎಂಕೆ ಮೈತ್ರಿಯಲ್ಲಿರುವುದರಿಂದ, ಹೊಸ ಮೈತ್ರಿ ರೂಪುಗೊಂಡರೆ ರಾಜಕೀಯ ಗೊಂದಲ ಸೃಷ್ಟಿಯಾಗುವ ಸಾಧ್ಯತೆ ಇದೆ. ಜೊತೆಗೆ ಮುಖ್ಯಮಂತ್ರಿ ಅಭ್ಯರ್ಥಿ ಯಾರು ಎಂಬ ಪ್ರಶ್ನೆಯೂ ಪ್ರಮುಖವಾಗುತ್ತದೆ. ನೆಲಮಟ್ಟದ ಕಾರ್ಯಕರ್ತರ ನಡುವೆ ಸಮನ್ವಯ ಸಾಧಿಸುವುದು ಮತ್ತೊಂದು ಸವಾಲಾಗಿದೆ.

ಒಟ್ಟಾರೆ, ಟಿವಿಕೆ- ಕಾಂಗ್ರೆಸ್ ಮೈತ್ರಿ ತಮಿಳುನಾಡಿನಲ್ಲಿ ಹೊಸ ರಾಜಕೀಯ ಪರ್ಯಾಯವಾಗಿ ಹೊರಹೊಮ್ಮುವ ಸಾಧ್ಯತೆ ಇದ್ದರೂ, ಅದು ಯಶಸ್ವಿಯಾಗಲು ಸ್ಪಷ್ಟ ನಾಯಕತ್ವ ಮತ್ತು ಸಾಮಾನ್ಯ ಕಾರ್ಯಯೋಜನೆ ಅಗತ್ಯವೆಂದು ರಾಜಕೀಯ ವಲಯದಲ್ಲಿ ಅಭಿಪ್ರಾಯ ವ್ಯಕ್ತವಾಗುತ್ತಿದೆ. ಕರ್ನಾಟಕದ ಅನುಭವದ ಬೆಳಕಿನಲ್ಲಿ ಈ ಮೈತ್ರಿಯ ಭವಿಷ್ಯ ಅನಿಶ್ಚಿತವಾಗಿದ್ದು, ಮುಂದಿನ ಬೆಳವಣಿಗೆಗಳ ಮೇಲೆ ಎಲ್ಲರ ಕಣ್ಣು ನೆಟ್ಟಿದೆ.

## ವೇಣುಗೋಪಾಲ್ ಕೇರಳ ಸಿಎಂ: ಸನ್ನಿ ಜೋಸೆಫ್ ಸುಳಿವು

**ತಿರುವನಂತಪುರ, ಮೇ 4:** ಕೇರಳದಲ್ಲಿ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ಗೆಲುವಿನತ್ತ ಸಾಗುತ್ತಿದೆ. ಈಗ ಕೇರಳದ ಮುಂದಿನ ಮುಖ್ಯಮಂತ್ರಿ ಯಾರು ಎಂಬ ಚರ್ಚೆ ಶುರುವಾಗಿದೆ. ಈ ನಡುವೆ ಸಂಘಟನಾ ಪ್ರಧಾನ ಕಾರ್ಯದರ್ಶಿಯಾದ ಕೆ.ಸಿ. ವೇಣುಗೋಪಾಲ್ ಅವರು ಕೇರಳದ ಮುಂದಿನ ಸಿಎಂ ಆಗಬಹುದು ಎಂಬ ಸುಳಿವನ್ನು ಕೇರಳ ಕಾಂಗ್ರೆಸ್ ಮುಖ್ಯಸ್ಥ ಸನ್ನಿ ಜೋಸೆಫ್ ನೀಡಿದ್ದಾರೆ.



ಶಾಸಕರಲ್ಲದ ಒಬ್ಬರು ಮುಖ್ಯಮಂತ್ರಿಯಾಗುವ ಬಗ್ಗೆ ಮಾಧ್ಯಮದವರು ಕೇಳಿದ ಪ್ರಶ್ನೆಗೆ, ಸನ್ನಿ ಜೋಸೆಫ್ ಉತ್ತರಿಸುತ್ತಾ ಅದು ಸಾಧ್ಯವಿದೆ ಎಂದಿದ್ದಾರೆ. ಏಕೆ ಸಾಧ್ಯವಿಲ್ಲ. ಅಚ್ಯುತ ಮೆನನ್ ಅವರು ಸಿಎಂ ಆದಾಗ ಶಾಸಕರಾಗಿರಲಿಲ್ಲ ಎಂದು ಸನ್ನಿ ಜೋಸೆಫ್ ಹೇಳಿದ್ದಾರೆ. ಆದರೆ ಕಾಂಗ್ರೆಸ್ ಕೆ.ಸಿ. ವೇಣುಗೋಪಾಲ್ ಅವರನ್ನು ಸಿಎಂ ಎಂದು ಹೆಸರಿಸುತ್ತದೆಯೇ ಎಂದು ನಿರ್ದಿಷ್ಟವಾಗಿ ಕೇಳಿದಾಗ, ನಾನು ಈ ಸಂದರ್ಭದಲ್ಲಿ ಹೆಚ್ಚಿಗೆ ಮಾತನಾಡಲು ಬಯಸಲ್ಲ ಎಂದಿದ್ದಾರೆ.

ಸಿಪಿಐನ ಸಿ ಅಚ್ಯುತ ಮೆನನ್ 1969ರ ನವೆಂಬರ್ 1ರಂದು ಕೇರಳದ ಐದನೇ ಮುಖ್ಯಮಂತ್ರಿಯಾದರು. ಆದರೆ ಅವರು ಶಾಸಕರಾಗಿರಲಿಲ್ಲ. 1964ರಲ್ಲಿ, ಕಮ್ಯುನಿಸ್ಟ್ ಪಕ್ಷವು ಸಿಪಿಐ ಮತ್ತು ಸಿಪಿಐಎಂ ಆಗಿ ವಿಭಜನೆಯಾಯಿತು. ಮುಂದಿನ ಚುನಾವಣೆಯಲ್ಲಿ, ಎರಡೂ ಪಕ್ಷಗಳು ಏಳು ಪಕ್ಷಗಳ ಮೈತ್ರಿಕೂಟದಲ್ಲಿ ಒಟ್ಟಾಗಿ ಹೋರಾಡಿದವು. ಕಾಂಗ್ರೆಸ್ ವಿರುದ್ಧ ಗೆಲುವು ಕಂಡಿತು.

ಸಿಪಿಐಎಂ ನ ಇಎಂಎಸ್ ನಂಬೂದಿರಿಪಾಡ್ ಮುಖ್ಯಮಂತ್ರಿಯಾದರು. ಆದರೆ ಎರಡು ವರ್ಷಗಳಲ್ಲಿ, ಸಚಿವ ಸಂಪುಟ ಕುಸಿಯಿತು. ಎರಡು ಕಮ್ಯುನಿಸ್ಟ್ ಪಕ್ಷಗಳ ನಡುವಿನ ವ್ಯತ್ಯಾಸಗಳೇ ಇದಕ್ಕೆ ಕಾರಣ. ಈ ವೇಳೆ ರಾಜ್ಯಸಭಾ ಸದಸ್ಯರಾದ ಸಿಪಿಐನ ಅಚ್ಯುತ ಮೆನನ್ ನೇತೃತ್ವದ ಸರ್ಕಾರವು ಕೆಲವು ತಿಂಗಳುಗಳ ಕಾಲ ಅಧಿಕಾರಕ್ಕೆ ಬಂದಿತ್ತು. ಅಚ್ಯುತ ಮೆನನ್ 1969 ಲ್ಲಿ ಶಾಸಕರಾಗಿರಲಿಲ್ಲ (ಶಾಸಕ) ಮತ್ತು ಕೆಲವೇ ತಿಂಗಳುಗಳಲ್ಲಿ ಕೊಟ್ಟಾರಕ್ಕರದಿಂದ ಉಪಚುನಾವಣೆಯಲ್ಲಿ ಗೆದ್ದರು.

ವೇಣುಗೋಪಾಲ್ ಮೊದಲು ಉಮ್ಮನ್ ಚಾಂಡಿ (2004-06) ಅವರ ಅಡಿಯಲ್ಲಿ ಸಚಿವರಾಗಿದ್ದವರು. ಲೋಕಸಭೆಯಲ್ಲಿ (2009-14) ತಮ್ಮ ಮೊದಲ ಅವಧಿಯಲ್ಲಿ ಕೇಂದ್ರ ಸಚಿವರಾಗಿ ಸೇವೆ ಸಲ್ಲಿಸಿದರು. ರಾಹುಲ್ ಗಾಂಧಿಯವರ ವಿಶ್ವಾಸವನ್ನು ಗಳಿಸುವ ವೇಣುಗೋಪಾಲ್ ಸಾಮರ್ಥ್ಯವೇ ಅವರನ್ನು ರಾತ್ರೋರಾತ್ರಿ ಕೇರಳದಲ್ಲಿ ಪಕ್ಷದ ಹೈಕಮಾಂಡ್ ಆಗುವಂತೆ ಮಾಡಿತು.

ಏನೇ ಆದರೂ ಪ್ರತಿ ಭಾನುವಾರ ತಮ್ಮ ಕ್ಷೇತ್ರವಾದ ಆಲಪ್ಪುಳಕ್ಕೆ ಮೀಸಲಿಡುತ್ತಾ ಬಂದಿದ್ದಾರೆ. ಇತ್ತೀಚೆಗೆ, ಕೇರಳದಲ್ಲೇ ಹೆಚ್ಚುವರಿ ಸಮಯವನ್ನು ಕಳೆಯುತ್ತಿದ್ದಾರೆ. ಸ್ಥಳೀಯ ಮಟ್ಟದಲ್ಲಿ ಕೆಲಸಕ್ಕೆ ಇಳಿದಿದ್ದಾರೆ. ಸಿಎಂ ಸ್ಥಾನಕ್ಕೆ ಸಿದ್ಧತೆ ನಡೆಸಲೆಂದೇ ಈ ತಯಾರಿ ಎಂಬ ಮಾತುಗಳೂ ಇವೆ. ಕಳೆದ ಐದು ವರ್ಷಗಳಲ್ಲಿ, ರಾಜ್ಯದಲ್ಲಿ ಕಾಂಗ್ರೆಸ್ ಬಣಗಳ ಸಂಬಂಧ ಬಿಗಡಾಯಿಸಿದ್ದಾಗ ವೇಣುಗೋಪಾಲ್, ಚೆನ್ನಿತ್ತಲ ಅವರ ನಿಷ್ಠಾವಂತರನ್ನು ತಮ್ಮ ಪಾಳಯಕ್ಕೆ ಸೇರಿಸಿಕೊಳ್ಳುವಲ್ಲಿ ಯಶಸ್ವಿಯಾದರು.

## ಸ್ಟಾಲಿನ್‌ಗೆ ಸೋಲು, ಉದಯನಿಧಿ ಹೆಗಲಿಗೆ ಡಿಎಂಕೆ ಹೊಣೆ?

**ಚೆನ್ನೈ, ಮೇ 4:** ತಮಿಳುನಾಡಿನ ದ್ರಾವಿಡ ರಾಜಕಾರಣದಲ್ಲಿ ಅನಿರೀಕ್ಷಿತ ಹಾಗೂ ಮಹತ್ವದ ಬೆಳವಣಿಗೆಯೊಂದು ನಡೆದಿದೆ. ಮುಖ್ಯಮಂತ್ರಿ ಹಾಗೂ ಡಿಎಂಕೆ ಅಧ್ಯಕ್ಷ ಎಂ.ಕೆ. ಸ್ಟಾಲಿನ್ ಅವರು ಕೊಳತ್ತೂರು ಕ್ಷೇತ್ರದಲ್ಲಿಯೇ ಪರಾಭವಗೊಂಡಿದ್ದಾರೆ. ಆದರೆ, ಅವರ ಪುತ್ರ ಉದಯನಿಧಿ ಸ್ಟಾಲಿನ್ ಅವರು ಚೇಪಾಕ್-ತಿರುವಲ್ಲಿಕೇಣಿ ಕ್ಷೇತ್ರದಲ್ಲಿ ಜಯಭೇರಿ ಬಾರಿಸಿದ್ದಾರೆ.



ಸ್ಟಾಲಿನ್ ಅವರಿಗೆ ಎದುರಾಗಿರುವ ಈ ಸೋಲು ಡಿಎಂಕೆ ಪಾಳಯದಲ್ಲಿ ಭಾರಿ ಆಘಾತ ಮೂಡಿಸಿದೆ. ಇತ್ತ, ಚೇಪಾಕ್-ತಿರುವಲ್ಲಿಕೇಣಿ ಅಖಾಡದಲ್ಲಿ ಟಿವಿಕೆ ಅಭ್ಯರ್ಥಿ (ಚುನಾವಣೆಗೂ ಮುನ್ನ ಕಾಂಗ್ರೆಸ್ ತೊರೆದು ಬಂದಿದ್ದರು) ಡಿ. ಸೆಲ್ವಂ ಅವರನ್ನು ಮಣಿಸುವ ಮೂಲಕ ಉದಯನಿಧಿ ಅವರು ಸತತ ಎರಡನೇ ಬಾರಿ ಶಾಸಕರಾಗಿ ಆಯ್ಕೆಯಾಗಿದ್ದಾರೆ.

ಮುಖ್ಯಮಂತ್ರಿಗಳೇ ಸೋಲುಂಡಿರುವುದರಿಂದ, ವಿಧಾನಸಭೆಯಲ್ಲಿ ಡಿಎಂಕೆ ಪಕ್ಷವನ್ನು ಮುನ್ನಡೆಸುವ ಹಾಗೂ ವಿರೋಧ ಪಕ್ಷದ ನಾಯಕರಾಗಿ ಕಾರ್ಯನಿರ್ವಹಿಸುವ ಸಂಪೂರ್ಣ ಜವಾಬ್ದಾರಿ ಈಗ ಪುತ್ರ ಉದಯನಿಧಿ ಅವರ ಹೆಗಲೇರುವುದು ಬಹುತೇಕ ಖಚಿತವಾಗಿದೆ.

ರಾಜಧಾನಿ ಚೆನ್ನೈ ಭಾಗದಲ್ಲಿ ಈ ಬಾರಿ ಡಿಎಂಕೆ ತೀವ್ರ ಹಿನ್ನಡೆ ಅನುಭವಿಸಿದೆ. ಉದಯನಿಧಿ ಸ್ಟಾಲಿನ್ ಹಾಗೂ ಹಾರ್ಬರ್ ಕ್ಷೇತ್ರದಲ್ಲಿ ಗೆದ್ದ ನಿರ್ಗಮಿತ ಸಚಿವ ಪಿ.ಕೆ. ಶೇಖರ್ ಬಾಬು ಅವರನ್ನು ಹೊರತುಪಡಿಸಿ, ಚೆನ್ನೈನಲ್ಲಿ ಬೇರೆ ಯಾವುದೇ ಡಿಎಂಕೆ ಅಭ್ಯರ್ಥಿಗಳು ಗೆಲುವಿನ ನಗೆ ಬೀರಿಲ್ಲ.

ಈ ಬಾರಿಯ ಚುನಾವಣೆಯಲ್ಲಿ ಅತ್ಯಂತ ಪ್ರಮುಖ ಘಟ್ಟವೆಂದರೆ, ನಟ ದಳಪತಿ ವಿಜಯ್ ನೇತೃತ್ವದ ತಮಿಳಗ ವೆಟ್ರಿ ಕಳಗಂ (ಟಿವಿಕೆ) ಪಕ್ಷದ ಭರ್ಜರಿ ಉದಯ. ರಾಜ್ಯ ರಾಜಕಾರಣದಲ್ಲಿ ಟಿವಿಕೆ ಅಕ್ಷರಶಃ ಬಿರುಗಾಳಿ ಎಬ್ಬಿಸಿದ್ದು, ಆಡಳಿತಾರೂಢ ಡಿಎಂಕೆ ಪಕ್ಷಕ್ಕೆ ನೇರ ಹೊಡೆತ ನೀಡಿದೆ. ಕೊಳತ್ತೂರಿನಲ್ಲಿ ಸ್ಟಾಲಿನ್ ಅವರ ಸೋಲು ಹಾಗೂ ಚೆನ್ನೈ ಭಾಗದಲ್ಲಿ ಡಿಎಂಕೆಯ ಕಳಪೆ ಸಾಧನೆಗೆ ಟಿವಿಕೆ ಬೀರಿದ ಪ್ರಭಾವವೇ ಪ್ರಮುಖ ಕಾರಣವಾಗಿದೆ.

## ಗೊಗೊಯ್ ಸೋಲು



**ಗೌಹಾತಿ, ಮೇ 4:** ಅಸ್ಸಾಂನಲ್ಲಿ ಆಡಳಿತರೂಢ ಬಿಜೆಪಿ ಹ್ಯಾಟ್ರಿಕ್ ಗೆಲುವು ಸಾಧಿಸಿ, ಸತತ ಮೂರನೇ ಬಾರಿಗೆ ಅಧಾರಕ್ಕೇರುತ್ತಿದೆ. ಪ್ರತಿಪಕ್ಷ ಕಾಂಗ್ರೆಸ್ ಹೀನಾಯ ಸೋಲು ಅನುಭವಿಸಿದ್ದು, ಅಸ್ಸಾಂ ಕಾಂಗ್ರೆಸ್ ಅಧ್ಯಕ್ಷ ಗೌರವ್ ಗೊಗೊಯ್ ಅವರು ಜೋರ್ಹತ್ ವಿಧಾನಸಭಾ ಕ್ಷೇತ್ರದಲ್ಲಿ ಪ್ರತಿಸ್ಪರ್ಧಿ ಬಿಜೆಪಿಯ ಹಿತೇಂದ್ರನಾಥ್ ಗೋಸ್ವಾಮಿ ವಿರುದ್ಧ 23,182 ಮತಗಳಿಂದ ಸೋತಿದ್ದಾರೆ.

ಅಸ್ಸಾಂ ಶಿಕ್ಷಣ ಸಚಿವ ರನೋಜ್ ಪೆಗು ಧೇಮಾಜಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪ್ರತಿಸ್ಪರ್ಧಿ ಸೈಲೆನ್ ಸೋನೋವಾಲ್ ವಿರುದ್ಧ 32,229 ಮತಗಳ ಭಾರೀ ಅಂತರದಿಂದ ಗೆದ್ದಿದ್ದಾರೆ. ಅಸ್ಸಾಂ ಕ್ಯಾಬಿನೆಟ್ ಸಚಿವ ಮತ್ತು ಬಿಪಿಎಫ್ ನಾಯಕ ಚರಣ್ ಬೊರೊ ತಮ್ಮ ಮಜ್ಬತ್ ಕ್ಷೇತ್ರವನ್ನು ಉಳಿಸಿಕೊಂಡಿದ್ದು, ಪ್ರತಿಸ್ಪರ್ಧಿ ಜೆಎಂಎಂ ಅಭ್ಯರ್ಥಿಯನ್ನು 55,000ಕ್ಕೂ ಹೆಚ್ಚು ಮತಗಳಿಂದ ಸೋಲಿಸಿದ್ದಾರೆ.

## ಕೆಂಪಿನಿಂದ ಹಸಿರನ್ನು ಹಾದು ಕೇಸರಿಯತ್ತ ಹೊರಳಿದ ಬಂಗಾಳ

**ಕೋಲ್ಕತ್ತಾ, ಮೇ 4:** 2024ರಲ್ಲಿ ಸರಳ ಬಹುಮತವನ್ನೂ ಗಳಿಸದೆ ಅಪಮಾನಿತರಾಗಿದ್ದ ಮೋದಿ-ಶಾ 2029ರ ಲೋಕಸಭಾ ಚುನಾವಣೆಯ ಗೆಲುವಿಗೆ ಇದೀಗ ಗಟ್ಟಿ ಸೋಪಾನ ಹಾಕಿಕೊಂಡಿದ್ದಾರೆ. ದೇಶದ ಪ್ರತಿಪಕ್ಷ ಒಕ್ಕೂಟದ ಬೆನ್ನು ಮೂಳೆಗಳಂತಿದ್ದ ತೃಣಮೂಲ ಕಾಂಗ್ರೆಸ್ ಮತ್ತು ದ್ರಾವಿಡ ಮುನ್ನೇತ್ರ ಕಳಗಂ ಕೋಟೆಗಳು ಉರುಳಿ ಬಿದ್ದಿವೆ. ಒಂದನ್ನು ತಾನೇ ಉರುಳಿಸಿದೆ. ಡಿಎಂಕೆಯನ್ನು ಕಿತ್ತು ಹಾಕಿರುವ ಅನನುಭವಿ ವಿಜಯ್ ಅವರನ್ನು ನಿಭಾಯಿಸುವುದು ಮೋ-ಶಾ ಬಿಜೆಪಿಗೆ ಅಷ್ಟೇನೂ ಕಷ್ಟವಾಗದು. ಗುರಿ ಮುಖ್ಯವೇ ವಿನಾ, ಅದನ್ನು ತಲುಪುವ ದಾರಿ ಮುಖ್ಯ ಅಲ್ಲ ಎಂದು ಎಲ್ಲಕ್ಕೂ ತಯಾರಾಗಿ ಬಂಗಾಳ ಗೆಲ್ಲಲು ಯುದ್ಧ ಸಾರಿತ್ತು ದೆಹಲಿ.

ಬಿಜೆಪಿಯ ಕೋಮುವಾದಿ ಧ್ರುವೀಕರಣ ಕಡೆಗೂ ಬಂಗಾಳವನ್ನು ಗೆದ್ದಿದೆ. ಹತ್ತು ವರ್ಷಗಳ ಹಿಂದೆ ಯಾರಾದರೂ ಈ ಮಾತನ್ನು ಹೇಳಿದ್ದರೆ ನಂಬುವವರು ಬಹಳ ಮಂದಿ ಇರಲಿಲ್ಲ. ಹಾಲಿ ವಿಧಾನಸಭೆ ಚುನಾವಣೆಗಳಲ್ಲಿ ಕೆಂಪು-ಹಸಿರನ್ನು ಮಣಿಸಿದೆ ಕೇಸರಿ ರಾಜಕಾರಣ.

ದೇಶದ ಪ್ರತಿಪಕ್ಷ ಒಕ್ಕೂಟದ ಬೆನ್ನುಮೂಳೆಗಳಂತಿದ್ದ ತೃಣಮೂಲ ಕಾಂಗ್ರೆಸ್ ಮತ್ತು ದ್ರಾವಿಡ ಮುನ್ನೇತ್ರ ಕಳಗಂ ಕೋಟೆಗಳು ಉರುಳಿ ಬಿದ್ದಿವೆ. ಒಂದನ್ನು ತಾನೇ ಉರುಳಿಸಿದೆ. ಡಿಎಂಕೆಯನ್ನು ಕಿತ್ತು ಹಾಕಿರುವ ಅನನುಭವಿ ವಿಜಯ್ ಅವರನ್ನು ನಿಭಾಯಿಸುವುದು ಮೋಶಾ ಬಿಜೆಪಿಗೆ ಅಷ್ಟೇನೂ ಕಷ್ಟವಾಗದು. ಬಿಜೆಪಿಯ ಧೃತರಾಷ್ಟ್ರಾಲಿಂಗನದಿಂದ ಪುಟ್ಟ ರಾಜ್ಯ ಕೇರಳ ಉಳಿದು ಪಾರಾಗಿದೆ. ಆದರೆ ಅಲ್ಲಿಯೂ ತನ್ನ ಹೆಜ್ಜೆ ಗುರುತುಗಳನ್ನು ಹೆಚ್ಚಿಸಿಕೊಂಡಿದೆ ಕೇಸರಿ ಪಕ್ಷ.

ಗುರಿ ಮುಖ್ಯವೇ ವಿನಾ, ಅದನ್ನು ತಲುಪುವ ದಾರಿ ಮುಖ್ಯ ಅಲ್ಲವೇ ಅಲ್ಲ ಎಂದು ಎಲ್ಲಕ್ಕೂ ತಯಾರಾಗಿ ಬಂಗಾಳ ಗೆಲ್ಲಲು ಯುದ್ಧ ಸಾರಿತ್ತು ದೆಹಲಿ. ಕೋಮುವಾದಿ ಧ್ರುವೀಕರಣವನ್ನು ಮಾತ್ರವೇ ನಂಬಿ ಕುಳಿತುಕೊಳ್ಳಲಿಲ್ಲ ಮೋದಿ-ಅಮಿತ್ ಶಾ ಜೋಡಿ. ಸಾಂವಿಧಾನಿಕ ಸ್ವಾಯತ್ತ ಸಂಸ್ಥೆಗಳನ್ನು ಬಗಲಿಗೆ ಇಟ್ಟುಕೊಂಡರು. ಎಸ್.ಐ.ಆರ್ ಎಂಬ ಹೊಸ ಹತಾರನ್ನು ಮಸೆದು ಹರಿತಗೊಳಿಸಿದರು. ಬಂಗಾಳವನ್ನು ಗೆಲ್ಲಲು ಯಾವ ದಾರಿಯೂ ದುಷ್ಟ ದಾರಿಯಲ್ಲ, ಯಾವ ತಂತ್ರವೂ ಕುತಂತ್ರ ಅಲ್ಲ, ಯಾವ ದಮನವೂ ದಬ್ಬಾಳಿಕೆಯಲ್ಲ ಎಂಬ ದೃಢ ಸಂಕಲ್ಪದೊಂದಿಗೆ ರಣಕಣಕ್ಕೆ ಇಳಿದರು. ರಚಿಸಿದ್ದ ಚಕ್ರವ್ಯೂಹವನ್ನು ಶತಾಯಗತಾಯ, ಆರು ಮೂರಾದರೂ, ಮೂರು ಆರಾದರೂ ಸರಿ ಎಂದು ತಾರ್ಕಿಕ ಅಂತ್ಯ ಕಾಣಿಸಿದ್ದಾರೆ.

2029ರ ಲೋಕಸಭೆ ಚುನಾವಣೆಗಳಿಗೆ ಮುನ್ನ ಇಂಡಿಯಾ ಒಕ್ಕೂಟದ ಬೆನ್ನುಮೂಳೆಯನ್ನು ಮುರಿಯಬೇಕಿತ್ತು. ಭಾರತೀಯ ಜನಸಂಘದ ಸ್ಥಾಪಕ ಅಧ್ಯಕ್ಷ ಶ್ಯಾಮಪ್ರಸಾದ ಮುಖರ್ಜಿ ಹುಟ್ಟಿದ ನೆಲವನ್ನು ಗೆಲ್ಲಬೇಕಿತ್ತು. ಸೈದ್ಧಾಂತಿಕವಾಗಿ ಬಿಸಿಲುಗುದುರೆಯಾಗಿ ಉಳಿದಿದ್ದ ಬಂಗಾಳದ ನೆಲದ ಮೇಲೆ ಕೇಸರಿಯ ವಿಜಯಧ್ವಜ ಏರಿಸಬೇಕಿತ್ತು. 2024ರಲ್ಲಿ ಸರಳ ಬಹುಮತವನ್ನೂ ಗಳಿಸದೆ ಅಪಮಾನಿತರಾಗಿದ್ದ ಮೋದಿ-ಶಾ 2029ರ ಲೋಕಸಭಾ ಚುನಾವಣೆಯ ಗೆಲುವಿಗೆ ಇದೀಗ ಗಟ್ಟಿ ಸೋಪಾನ ಹಾಕಿಕೊಂಡಿದ್ದಾರೆ.

## 5 ದಶಕಗಳ ಇತಿಹಾಸದಲ್ಲಿ ಮೊದಲ ಬಾರಿಗೆ ಕಮ್ಯುನಿಸ್ಟ್ ಮುಕ್ತ ಭಾರತ

**ನವದೆಹಲಿ, ಮೇ 4:** ಕೇರಳದಲ್ಲಿ ಸತತ ಎರಡನೇ ಬಾರಿಗೆ ಗೆಲುವು ಕಂಡು ದಾಖಲೆ ನಿರ್ಮಿಸಿದ್ದ ಎಲ್‌ಡಿಎಫ್ ಮೂರನೇ ಬಾರಿಗೆ ಗದ್ದುಗೆ ಪಡೆಯುವಲ್ಲಿ ವಿಫಲವಾಗಿದೆ. ಎಡಕೋಟೆಯನ್ನು ಕೆಡವಿ ಯುಡಿಎಫ್ ಭರ್ಜರಿ ಗೆಲುವನ್ನು ಸಾಧಿಸಿದೆ. ಇದರಿಂದಾಗಿ ಐದು ದಶಕಗಳ ಇತಿಹಾಸದಲ್ಲಿ ಮೊದಲ ಬಾರಿಗೆ ಕಮ್ಯುನಿಸ್ಟ್ ಸರ್ಕಾರವಿಲ್ಲದ ಭಾರತವನ್ನು ನಾವು ಕಾಣುವಂತಾಗಿದೆ.

ಪಶ್ಚಿಮ ಬಂಗಾಳದಲ್ಲಿ 1977ರಿಂದ 2011 ರವರೆಗೆ ಎಡಪಕ್ಷಗಳು ಅಧಿಕಾರದಲ್ಲಿದ್ದವು. 1993ರಿಂದ 2018ರವರೆಗೆ ತ್ರಿಪುರದಲ್ಲಿ ಎಡರಂಗ ಆಡಳಿತ ನಡೆಸಿತ್ತು. ಕೇರಳದಲ್ಲಿ ಪ್ರತಿ ಐದು ವರ್ಷಗಳಿಗೊಮ್ಮೆ ಎಲ್ಡಿಎಫ್ ಅಧಿಕಾರಕ್ಕೆ ಬರುತ್ತಿತ್ತು. ಆದರೆ 2021ರಲ್ಲಿ ಮೊದಲ ಬಾರಿಗೆ ಸತತ ಎರಡು ಬಾರಿಗೆ ಎಲ್ಡಿಎಫ್ ಗೆಲುವು ಕಂಡಿತ್ತು. ಮಮತಾ ಬ್ಯಾನರ್ಜಿ 2011ರಲ್ಲಿ ಪಶ್ಚಿಮ ಬಂಗಾಳದಲ್ಲಿ 34 ವರ್ಷಗಳ ಎಡಪಕ್ಷ ಆಡಳಿತವನ್ನು ಕೆಡವಿ ಟಿಎಂಸಿ ಸರ್ಕಾರ ರಚಿಸಿದ್ದರು. ತ್ರಿಪುರಾದಲ್ಲಿ 25 ವರ್ಷಗಳ ಹಳೆಯ ಎಡಪಕ್ಷ ಆಡಳಿತವು 2018ರಲ್ಲಿ ಕೊನೆಗೊಂಡಿದ್ದು, ಆಶ್ಚರ್ಯವೆಂಬಂತೆ ಬಿಜೆಪಿ ಅಧಿಕಾರ ಪಡೆಯಿತು. 2023ರಲ್ಲಿ ಬಿಜೆಪಿ ಅಧಿಕಾರವನ್ನು ತನ್ನಲ್ಲೇ ಉಳಿಸಿಕೊಂಡಿತು.

ಇವೆಲ್ಲವುದರ ನಡುವೆ 2016ರಲ್ಲಿ ಕೇರಳದಲ್ಲಿ ಅಧಿಕಾರಕ್ಕೆ ಬಂದ ಪಿಣರಾಯಿ ವಿಜಯನ್ ನೇತೃತ್ವದ ಎಡಪಕ್ಷಗಳ ಪ್ರಜಾಪ್ರಭುತ್ವ ರಂಗ ಸರ್ಕಾರವೊಂದೇ ಈವರೆಗೆ ದೇಶದಲ್ಲಿ ಎಡರಂಗಕ್ಕೆ ಆಶಾಕಿರಣವಾಗಿತ್ತು. ಆದರೆ ಇದೀಗ ಆ ಬೆಳಕೂ ಆರಿದೆ. 1977ರ ನಂತರ ಮೊದಲ ಬಾರಿಗೆ, ಭಾರತದಲ್ಲಿ ಕಮ್ಯುನಿಸ್ಟ್ ಮುಖ್ಯಮಂತ್ರಿ ಇಲ್ಲದಂತಾಗಿದೆ.

2004ರಲ್ಲಿ ಎಡರಂಗಗಳು ದೇಶದ ರಾಜಕಾರಣದಲ್ಲಿ ಅತ್ಯಂತ ಪ್ರಭಾವಶಾಲಿ ಪಾತ್ರ ವಹಿಸಿದ್ದವು. ಆ ವರ್ಷ ನಡೆದ ಲೋಕಸಭಾ ಚುನಾವಣೆಯಲ್ಲಿ ಎಡಪಕ್ಷಗಳು ತಮ್ಮ ಇತಿಹಾಸದಲ್ಲೇ ಗರಿಷ್ಠ ಸ್ಥಾನಗಳನ್ನು ಗೆಲ್ಲುವ ಮೂಲಕ ಕೇಂದ್ರದಲ್ಲಿ ಸರ್ಕಾರ ರಚನೆಯ ನಿರ್ಣಾಯಕ ಶಕ್ತಿಯಾಗಿ ಹೊರಹೊಮ್ಮಿದ್ದವು. 2004ರ ಚುನಾವಣೆಯಲ್ಲಿ ಸಿಪಿಐ(ಎಂ), ಸಿಪಿಐ, ಆರ್.ಎಸ್.ಪಿ ಮತ್ತು ಫಾರ್ವರ್ಡ್ ಬ್ಲಾಕ್ ಒಳಗೊಂಡ ಎಡರಂಗವು ಒಟ್ಟು 61 ಸ್ಥಾನಗಳನ್ನು ಗೆದ್ದುಕೊಂಡಿತು. ಇದು ಎಡಪಕ್ಷಗಳ ಸಾರ್ವಕಾಲಿಕ ಅತ್ಯುತ್ತಮ ಪ್ರದರ್ಶನ.

2008ರಲ್ಲಿ ಭಾರತ-ಅಮೆರಿಕ ನಡುವಿನ ನಾಗರಿಕ ಪರಮಾಣು ಒಪ್ಪಂದವನ್ನು ವಿರೋಧಿಸಿ ಎಡಪಕ್ಷಗಳು ಯುಪಿಎ-1 ಸರ್ಕಾರಕ್ಕೆ ನೀಡಿದ್ದ ಬೆಂಬಲವನ್ನು ಹಿಂತೆಗೆದುಕೊಂಡಿದ್ದವು. ಇದರಿಂದಾಗಿ 2009ರ ಚುನಾವಣೆಯನ್ನು ಎಡಪಕ್ಷಗಳು ಕಾಂಗ್ರೆಸ್ ವಿರುದ್ಧವಾಗಿ ಸ್ಪರ್ಧಿಸಿದವು. ಆದರೆ 2009ರಲ್ಲಿ ಎಡರಂಗ ತೀವ್ರ ಹಿನ್ನಡೆ ಕಂಡಿದೆ. 2004ರಲ್ಲಿ 61 ಸ್ಥಾನಗಳನ್ನು ಗೆದ್ದಿದ್ದ ಎಡರಂಗವು, 2009ರ ಚುನಾವಣೆಯಲ್ಲಿ ಕೇವಲ 24 ಸ್ಥಾನಗಳಿಗೆ ಕುಸಿಯಿತು. ಈ ಚುನಾವಣಾ ಫಲಿತಾಂಶವು 2011ರಲ್ಲಿ ಬಂಗಾಳದಲ್ಲಿ ಎಡರಂಗದ 34 ವರ್ಷಗಳ ಆಳ್ವಿಕೆ ಕೊನೆಗೊಳ್ಳಲು ಮುನ್ಸೂಚನೆಯಾಗಿತ್ತು. ಅದಾದ ಬಳಿಕ 2014ರಲ್ಲಿ 10 ಮತ್ತು 2019ರಲ್ಲಿ 5 ಸ್ಥಾನಗಳಿಗೆ ಕುಸಿದಿದೆ. ಎಡಪಕ್ಷಗಳು ಈಗ ಲೋಕಸಭೆಯಲ್ಲಿ 9 ಸಂಸದರನ್ನು ಹೊಂದಿವೆ. ಸಿಪಿಐಎಂನ ನಾಲ್ವರು, ಸಿಪಿಐನ ಇಬ್ಬರು, ಸಿಪಿಐ(ಎಂಎಲ್) ಲಿಬರೇಷನ್‌ನ ಇಬ್ಬರು ಮತ್ತು ಆರ್‌ಎಸ್ಪಿ ಒಬ್ಬರು ಸಂಸದರು ಇದ್ದಾರೆ.

## ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಕುಸಿತ ಪ್ರಕರಣ

# ಪರಿಹಾರ ಮೊತ್ತ ಹೆಚ್ಚಿಸಿ, ನ್ಯಾಯಾಂಗ ತನಿಖೆ ಮಾಡಿ ಬೀದಿಬದಿ ವ್ಯಾಪಾರಿಗಳ ಸಂಘಟನೆ ಒತ್ತಾಯ

**ಬೆಂಗಳೂರು, ಮೇ 4:** ಏಪ್ರಿಲ್ 29ರಂದು ಸಂಭವಿಸಿದ ಬೌರಿಂಗ್ ಆಸ್ಪತ್ರೆ ಕಾಂಪೌಂಡ್ ಗೋಡೆ ಕುಸಿತ ದುರಂತ ಹಿನ್ನೆಲೆಯಲ್ಲಿ ನಗರದಲ್ಲಿನ ಬೀದಿ ವ್ಯಾಪಾರಿಗಳ ಸಂಘಟನೆ ಸರ್ಕಾರದ ವಿರುದ್ಧ ತೀವ್ರ ಅಸಮಾಧಾನ ವ್ಯಕ್ತಪಡಿಸಿದ್ದು, ಪರಿಹಾರ ಮೊತ್ತವನ್ನು ಹೆಚ್ಚಿಸಿ, ನ್ಯಾಯಾಂಗ ತನಿಖೆ ನಡೆಸುವಂತೆ ಒತ್ತಾಯಿಸಿದೆ. ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಪತ್ರ ಬರೆದಿರುವ ಕರ್ನಾಟಕ ಪ್ರಗತಿಪರ ಬೀದಿ ವ್ಯಾಪಾರಿಗಳ ಸಂಘ, ಈ ದುರಂತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ನೀಡಲಾಗುತ್ತಿರುವ ರೂ.5 ಲಕ್ಷ ಪರಿಹಾರವನ್ನು ರೂ.25 ಲಕ್ಷಕ್ಕೆ ಹೆಚ್ಚಿಸಬೇಕು ಎಂದು ಆಗ್ರಹಿಸಿದೆ. ಜೊತೆಗೆ ಗಾಯಗೊಂಡ ಪ್ರತಿಯೊಬ್ಬ ವ್ಯಾಪಾರಿಗೂ ರೂ.10 ಲಕ್ಷ ಪರಿಹಾರ ನೀಡಬೇಕೆಂದು ಒತ್ತಾಯಿಸಿದೆ.

ಗಾಯಗೊಂಡವರು ಸಂಪೂರ್ಣ ಚೇತರಿಸಿಕೊಳ್ಳಲು ಹಲವು ತಿಂಗಳುಗಳು ಬೇಕಾಗುವ ಕಾರಣ, ಅವರ ಜೀವನೋಪಾಯದ ಮೇಲೆ ಗಂಭೀರ ಪರಿಣಾಮ ಬೀರಿದೆ ಎಂದು ಸಂಘಟನೆ ಹೇಳಿದೆ. ಇದಲ್ಲದೆ, ಈ ದುರಂತದಲ್ಲಿ ಹಲವಾರು ವ್ಯಾಪಾರಿಗಳು ತಮ್ಮ ಸರಕುಗಳನ್ನು ಕಳೆದುಕೊಂಡಿರುವುದ'ರಿಂದ, ಆ ನಷ್ಟಕ್ಕೂ ಪರಿಹಾರ ನೀಡಬೇಕು. ಅಪಾಯಕಾರಿ ಕಟ್ಟಡಗಳ ಸಮೀಪ ವ್ಯಾಪಾರ ನಡೆಸಬಾರದು ಎಂಬ ಸೂಚನೆ ಹಿನ್ನೆಲೆ ಸುರಕ್ಷಿತ ಮತ್ತು ಸೂಕ್ತ ಪರ್ಯಾಯ ವ್ಯಾಪಾರ ಸ್ಥಳಗಳನ್ನು ಗುರುತಿಸಿ ಸ್ಥಳ ಒದಗಿಸಲು ಸರ್ಕಾರ ತಕ್ಷಣವೇ ವ್ಯಾಪಾರಿಗಳೊಂದಿಗೆ ಸಮಾಲೋಚನೆ ನಡೆಸಬೇಕು ಎಂದು ಸಂಘ ಒತ್ತಾಯಿಸಿದೆ. ಇದೇ ವೇಳೆ ಗೋಡೆ ಕುಸಿತಕ್ಕೆ ಕಾರಣರಾದವರನ್ನು ಗುರುತಿಸಲು ನ್ಯಾಯಾಂಗ ತನಿಖೆ ನಡೆಸಬೇಕು ಎಂದು ಸಂಘಟನೆ ಒತ್ತಾಯಿಸಿದ್ದು, ಹವಾಮಾನ ಬದಲಾವಣೆಯಿಂದ ಕಾರ್ಮಿಕರು ಬೀದಿ ವ್ಯಾಪಾರಿಗಳು, ಗಿಗ್ ಮತ್ತು ಪ್ಲಾಟ್‌ಫಾರ್ಮ್ ಕಾರ್ಮಿಕರು, ಪೌರ ಕಾರ್ಮಿಕರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಚರ್ಚೆ ನಡೆಸಬೇಕು ಎಂದೂ ಒತ್ತಾಯಿಸಿದೆ.

# ತುಮಕೂರುವರೆಗೆ ಮೆಟ್ರೋ ವಿಸ್ತರಣೆ: ವಾರದೊಳಗೆ ಡಿಪಿಆರ್ ಸಲ್ಲಿಕೆ - ಡಾ.ಜಿ. ಪರಮೇಶ್ವರ್

**ಬೆಂಗಳೂರು, ಮೇ 4:** ಬೆಂಗಳೂರಿನ ಮಾದಾವರದಿಂದ ತುಮಕೂರಿಗೆ ನಮ್ಮ ಮೆಟ್ರೋ ವಿಸ್ತರಣೆ ಯೋಜನೆಗೆ ಸಂಬಂಧಿಸಿದ ವಿವರವಾದ ಯೋಜನಾ ವರದಿ (ಆಕಖ) ಒಂದು ವಾರದೊಳಗೆ ಸಲ್ಲಿಸಲಾಗುತ್ತದೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಹೇಳಿದ್ದಾರೆ.

ತುಮಕೂರಿನಲ್ಲಿ ಮಾತನಾಡಿದ ಅವರು, ಮಾದಾವರದಿಂದ ತುಮಕೂರಿಗೆ ಮೆಟ್ರೋ ಸಂಪರ್ಕ ವಿಸ್ತರಣೆಗೊಂಡರೆ, ಎರಡು ನಗರಗಳ ನಡುವೆ ಸಂಚಾರ ಸುಗಮವಾಗಲಿದೆ. ಆಕಖ ಸಿದ್ಧವಾಗುತ್ತಿದ್ದು, ಶೀಘ್ರದಲ್ಲೇ ಸರ್ಕಾರಕ್ಕೆ ಸಲ್ಲಿಸಲಾಗುತ್ತದೆ ಎಂದು ಹೇಳಿದರು.



ಇದೇ ವೇಳೆ ತುಮಕೂರನ್ನು ಕ್ರೀಡಾ ಕೇಂದ್ರವಾಗಿ ರೂಪಿಸುವ ಉದ್ದೇಶವನ್ನೂ ವಿವರಿಸಿದ ಅವರು. ಇತ್ತೀಚೆಗೆ ತುಮಕೂರಿನಲ್ಲಿ ರಾಷ್ಟ್ರೀಯ ಮಟ್ಟದ ಜೂನಿಯರ್ ಅಥ್ಲೆಟಿಕ್ಸ್ ಸ್ಪರ್ಧೆಗಳು ನಡೆದಿದ್ದು, ಪ್ರಸ್ತುತ ಮಹಿಳಾ ಖಊಈ ಟೆನಿಸ್ ಟೂರ್ ಪಂದ್ಯಾವಳಿ ನಡೆಯುತ್ತಿದೆ ಎಂದು ತಿಳಿಸಿದರು. ತುಮಕೂರಿನ ಪಿ. ಗೊಲ್ಲಹಳ್ಳಿ ಸಮೀಪ 42 ಎಕರೆ ಪ್ರದೇಶವನ್ನು ಅಂತರಾಷ್ಟ್ರೀಯ ಕ್ರಿಕೆಟ್ ಮೈದಾನ ನಿರ್ಮಾಣಕ್ಕೆ ಮೀಸಲಿರಿಸಲಾಗಿದ್ದು, ಶೀಘ್ರದಲ್ಲೇ ಕಾಮಗಾರಿ ಪ್ರಾರಂಭವಾಗಲಿದೆ. ಈ ಮೈದಾನ ಪೂರ್ಣಗೊಂಡ ಬಳಿಕ ಅಂತರಾಷ್ಟ್ರೀಯ ಪಂದ್ಯಗಳಿಗೆ ಆತಿಥ್ಯ ವಹಿಸುವ ಸಾಮರ್ಥ್ಯ ಹೊಂದಲಿದೆ. ಮುಂದಿನ ದಿನಗಳಲ್ಲಿ ತುಮಕೂರು ಸ್ಪೋರ್ಟ್ಸ್ ಸಿಟಿ ಆಗಿ ಬೆಳೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

# ಕೆ.ಸಿ. ರೆಡ್ಡಿ ಸಮರ್ಥ ಆಡಳಿತಗಾರ: ಸಿಎಂ ಸಿದ್ದರಾಮಯ್ಯ ಬಣ್ಣನೆ



**ಬೆಂಗಳೂರು, ಮೇ.4:** ಮಾಜಿ ಮುಖ್ಯಮಂತ್ರಿ ದಿವಂಗತ ಕೆ.ಸಿ ರೆಡ್ಡಿಯವರು ಒಬ್ಬ ಸಮರ್ಥ, ಪ್ರಾಮಾಣಿಕ ಆಡಳಿತಗಾರಾಗಿದ್ದು ಸಾರ್ವಜನಿಕ ಜೀವನದಲ್ಲಿ ಅತ್ಯಂತ ಪ್ರಾಮಾ ಣಿಕತೆಯಿಂದ ನಡೆದುಕೊಂಡವರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದರು. ಮಾಜಿ ಮುಖ್ಯಮಂತ್ರಿ ದಿವಂಗತ ಕೆ.ಸಿ. ರೆಡ್ಡಿಯವರ ಜನ್ಮದಿನದ ಅಂಗವಾಗಿ ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿ, ಕೆ.ಸಿ.ರೆಡ್ಡಿ ಯವರು ಸ್ವಾತಂತ್ರ್ಯದ ನಂತರ ಮೊದಲ ಮುಖ್ಯಮಂತ್ರಿಯಾದವರು. ಸ್ವಾತಂತ್ರ್ಯ ಹೋರಾಟದಲ್ಲಿಯೂ ಭಾಗಿಯಾಗಿದ್ದರು ಎಂದರು.

ಕೋಲಾರ ಮೂಲದವರಾದ ಅವರು ಮೈಸೂರು ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷವನ್ನು ಕಟ್ಟಿದವರು. ಕಾಂಗ್ರೆಸ್ ಪಕ್ಷ ಸದೃಢವಾಗಿರಲು ಅವರು ಕಾರಣಕರ್ತರು ಎಂದರು. ಐಟಿಐ, ಎಚ್.ಎಂ.ಟಿ, ಇಸ್ರೋ ಮುಂತಾದ ಸಂಸ್ಥೆಗಳು ರಾಜ್ಯದಲ್ಲಿ ಸ್ಥಾಪನೆಯಾಗಿದ್ದರೆ ಅದಕ್ಕೆ ಅವರು ಮೂಲ ಕಾರಣ ಎಂದರು. ಕೆ.ಸಿ.ರೆಡ್ಡಿಯವರ ಆಡಳಿತದ ಹೆಜ್ಜೆಗಳು ನಮಗೆ ದಾರಿದೀಪ ಎಂದು ಮುಖ್ಯಮಂತ್ರಿಗಳು ಹೇಳಿದರು.

## ರೇಣುಕಾಸ್ವಾಮಿ ಕೊಲೆ ಪ್ರಕರಣ:

# ಸೆಷನ್ಸ್ ಕೋರ್ಟ್‌ನಿಂದ ವರದಿ ಕೇಳಿದ ಸುಪ್ರೀಂ ಕೋರ್ಟ್



**ಬೆಂಗಳೂರು, ಮೇ 4:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ನಟ ದರ್ಶನ್ ಸಲ್ಲಿಸಿರುವ ಹೊಸ ಜಾಮೀನು ಅರ್ಜಿ ಇಂದು ಸುಪ್ರೀಂ ಕೋರ್ಟ್‌ನಲ್ಲಿ ವಿಚಾರಣೆ ನಡೆಯಿತು. ನ್ಯಾಯಮೂರ್ತಿ ಪರ್ದಿವಾಲಾ ಮತ್ತು ನ್ಯಾಯಮೂರ್ತಿ ವಿಜಯ್ ಬಿಷ್ಣೋಯಿ ಅವರ ಪೀಠದಲ್ಲಿ ವಿಚಾರಣೆ ನಡೆಯಿತು.


ಪ್ರಕರಣದ ಎ 2 ಆರೋಪಿ ದರ್ಶನ್ ಪರವಾಗಿ ಹಿರಿಯ ವಕೀಲ ಮುಕುಲ್ ರೋಹ್ಟಗಿ ವಾದ ಮಂಡಿಸಿದರು. ಎಂಟು ತಿಂಗಳು ಕಳೆದರೂ ಕೂಡ ಈ ಸಾಕ್ಷಿಗಳ ವಿಚಾರಣೆ ಮುಕ್ತಾಯವಾಗಿಲ್ಲ. 273 ಸಾಕ್ಷಿಗಳ ಪೈಕಿ ಕೇವಲ 15 ಸಾಕ್ಷಿಗಳ ವಿಚಾರಣೆಯಷ್ಟೇ ಆಗಿದೆ. ಇದೇ ರೀತಿಯಾದರೆ ವಿಚಾರಣೆ ಮುಗಿಯಲು ಹಲವು ವರ್ಷಗಳೇ ಬೇಕು. ದರ್ಶನ್‌ಗೆ ಜಾಮೀನು ಮಂಜೂರು ಮಾಡಿ ಎಂದು ದರ್ಶನ್ ಪರ ವಕೀಲರು ಅರ್ಜಿಯಲ್ಲಿ ಹೇಳಿದ್ದಾರೆ. ಕನಿಷ್ಠ ಸೌಲಭ್ಯಗಳೂ ದರ್ಶನ್‌ಗೆ ಸಿಗುತ್ತಿಲ್ಲ, ಕ್ವಾರೆಂಟೇನ್ ಸೆಲ್‌ನಲ್ಲಿ ಇಡಲಾಗಿದೆ ಕನಿಷ್ಟ ಸೌಲಭ್ಯಗಳ ಕುರಿತು ಕೋರ್ಟ್‌ಗೆ ಹೋದರೆ ಸುಪ್ರೀಂ ಕೋರ್ಟ್‌ನಲ್ಲಿ ಆದೇಶ ಆಗಿದೆ ಎಂದು ಸೆಷನ್ಸ್ ಕೋರ್ಟ್ ಹೇಳಿದೆ ಎಂದು ದರ್ಶನ್ ಪರ ವಕೀಲರು ವಾದ ಮಂಡಿಸಿದರು

**ವರದಿ ಕೇಳಿದ ಸುಪ್ರೀಂ:** ಎಷ್ಟು ಸಾಕ್ಷಿಗಳ ವಿಚಾರಣೆ ಈವರೆಗೆ ನಡೆದಿದೆ ಎಷ್ಟು ಸಾಕ್ಷಿಗಳನ್ನು ವಿಚಾರಣೆಗಾಗಿ ಪ್ರಾಸಿಕ್ಯೂಷನ್ ಸೂಚಿಸಿದೆ ಟ್ರಯಲ್ ಮುಗಿಯಲು ಎಷ್ಟು ದಿನ ಬೇಕಾಗುತ್ತದೆ. ದರ್ಶನ್‌ಗೆ ಕನಿಷ್ಟ ಸೌಲಭ್ಯ ನೀಡಲಾಗುತಿದೆಯೇ. ಇಲ್ಲವೆ ಎಂದು ಒಂದು ವಾರದಲ್ಲಿ ವರದಿ ನೀಡುವಂತೆ ಸುಪ್ರೀಂ ಸೂಚನೆ ನೀಡಿದೆ. ಸೆಷನ್ಸ್ ಕೋರ್ಟ್‌ನಿಂದ ಸುಪ್ರೀಂ ಕೋರ್ಟ್ ವರದಿ ಕೇಳಿದೆ. ವರದಿ ಸಲ್ಲಿಕೆ ಬಳಿಕ ಮುಂದಿನ ವಿಚಾರಣೆ ದಿನಾಂಕ ನೀಡುವುದಾಗಿ ಸುಪ್ರೀಂ ಹೇಳಿದೆ. ಪ್ರಕರಣದ ವಿಚಾರಣೆ ತೀರಾ ನಿಧಾನಗತಿಯಲ್ಲಿ ನಡೆಯುತ್ತಿದೆ, 7ತಿಂಗಳ ವಿಚಾರಣೆಯಲ್ಲಿ ಕೇವಲ 10 ಸಾಕ್ಷಿಗಳ ವಿಚಾರಣೆ ಮಾತ್ರ ಮುಗಿದಿದೆ, 262ಸಾಕ್ಷಿಗಳಿದ್ದು ಇದೇ ರೀತಿ ವಿಚಾರಣೆ ನಡೆದರೆ ಸಾಕಷ್ಟು ಸಮಯ ತೆಗೆದುಕೊಳ್ಳಲಿದೆ ನಿಯಮ ಗಳಿಗೆ ವಿರುದ್ಧವಾಗಿ ಕ್ವಾರಂಟೈನ್ ಸೆಲ್‌ನಲ್ಲಿ ಇಡಲಾಗಿದೆ. ಬೇರೆ ಕೈದಿಗಳಿಗೆ ಸಿಗುವ ಕನಿಷ್ಠ ಸೌಲಭ್ಯಗಳೂ ಸಿಗುತ್ತಿಲ್ಲ. ಎಂದು ದರ್ಶನ್ ಪರವಕೀಲರು ದೂರಿದ್ದಾರೆ.



ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವನ್ನು ಸೋಮವಾರ ಚಿಕ್ಕಮಗಳೂರಿನಲ್ಲಿ ಬಿಜೆಪಿ ಕಾರ್ಯಕರ್ತರು ಆಚರಿಸಿದರು.

# ಕರ್ತವ್ಯದಲ್ಲೇ ಜೀವತ್ಯಾಗ ಮಾಡಿದ ಧೀರಯೋಧ ನಿರಂಜನ್‌ಗೆ ಅಂತಿಮ ನಮನ: ಸಂಸದ ಡಾ. ಸಿ.ಎನ್. ಮಂಜುನಾಥ್ ಸಂತಾಪ"



**ಬೆಂಗಳೂರು, ಮೇ.4**–ರಾಜರಾಜೇಶ್ವರಿ ನಗರದ ಜ್ಞಾನಭಾರತಿ ವಾರ್ಡ್‌ನ ಚನ್ನಪ್ಪ ಬಡಾವಣೆಯ ರಾಮಯ್ಯ ಅವರ ಪುತ್ರ ಧೀರಯೋಧ ನಿರಂಜನ್ ಅವರು ಭಾರತೀಯ ಸೇನೆಯಲ್ಲಿ ಸುಮಾರು 25 ವರ್ಷಗಳ ಕಾಲ ಅಪಾರ ನಿಷ್ಠೆ, ಪ್ರಾಮಾಣಿಕತೆ ಮತ್ತು ಅಪ್ರತಿಮ ದೇಶಭಕ್ತಿಯಿಂದ ಸೇನಾಧಿಕಾರಿಯಾಗಿ ಸೇವೆ ಸಲ್ಲಿಸಿ, ಕರ್ತವ್ಯದಲ್ಲಿರುವಾಗ ವಿಧಿವಶರಾದುದು ಅತ್ಯಂತ ವಿಷಾದನೀಯ ಹಾಗೂ ಹೃದಯವಿದ್ರಾವಕ ಸಂಗತಿ.

ಈ ದುಃಖದ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಲೋಕಸಭಾ ಸದಸ್ಯರಾದ ಡಾ.ಸಿ.ಎನ್. ಮಂಜುನಾಥ್ ಅವರು ಬೆಂಗಳೂರಿನ ಅವರ ನಿವಾಸಕ್ಕೆ ಭೇಟಿ ನೀಡಿ, ಪಾರ್ಥಿವ ಶರೀರದ ಅಂತಿಮ ನಮನ ಸಲ್ಲಿಸಿ, ದುಃಖಿತ ಕುಟುಂಬಕ್ಕೆ ದುಃಖವನ್ನು ಸಹಿಸುವ ಶಕ್ತಿ ದೊರಕಲಿ ಎಂದು ತಿಳಿಸಿದರು.

ದೇಶ ಸೇವೆಗೆ ತಮ್ಮ ಸಂಪೂರ್ಣ ಜೀವನವನ್ನೇ ಅರ್ಪಿಸಿದ ಈ ಮಹಾನ್ ಯೋಧನ ಅಗಲಿಕೆ ನಮ್ಮ ಸಮಾಜಕ್ಕೆ ಹಾಗೂ ರಾಷ್ಟ್ರಕ್ಕೆ ಅಪಾರ ನಷ್ಟವಾಗಿದೆ. ಅವರ ಶೌರ್ಯ, ಶಿಸ್ತು, ಕರ್ತವ್ಯನಿಷ್ಠೆ ಮತ್ತು ಮಾನವೀಯ ಮೌಲ್ಯಗಳು ಸದಾ ನಮ್ಮೆಲ್ಲರಿಗೂ ಪ್ರೇರಣೆಯಾಗಿರುತ್ತವೆ ಎಂದು ಮಾನ್ಯ ಸಂಸದರು ಹೇಳಿದರು.

# ವಾಣಿಜ್ಯ ಎಲ್‌ಪಿಜಿ ಬೆಲೆ ಏರಿಕೆ: ಶೀಘ್ರ ಪರಿಹಾರಕ್ಕಾಗಿ ಕೇಂದ್ರ ಸರ್ಕಾರಕ್ಕೆ ಎಫ್.ಕೆ.ಸಿ.ಸಿ.ಐ ಆಗ್ರಹ

**ಬೆಂಗಳೂರು, ಮೇ 4:** ಎಲ್‌ಪಿಜಿ ಸಿಲಿಂಡರ್ ಬೆಲೆಯಲ್ಲಿ ರೂ.993 ದರ ಏರಿಕೆ ತೀವ್ರ ಆತಂಕ ಮೂಡಿಸಿದ್ದು, ಬೆಲೆ ಏರಿಕೆ ಅನೇಕ ಉದ್ಯಮಗಳಿಗೆ ಮತ್ತು ಕೈಗಾರಿಕೆಗಳಿಗೆ ತೀವ್ರ ಪರಿಣಾಮ ಬೀರಲಿದೆ. ಕೇಂದ್ರ ಸರ್ಕಾರ ಶೀಘ್ರ ಸೂಕ್ತ ಪರಿಹಾರ ರೂಪಿಸಬೇಕು ಎಂದು ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ ಎಫ್.ಕೆ.ಸಿ.ಸಿ ಅಧ್ಯಕ್ಷೆ ಉಮಾ ರೆಡ್ಡಿ ಆಗ್ರಹಿಸಿದ್ದಾರೆ.




ಇತ್ತೀಚಿನ ಪರಿಷ್ಕರಣೆ ಒಂದೇ ಬಾರಿ ಸುಮಾರು 45%–50%ರಷ್ಟು ಏರಿಕೆಯಾಗಿದ್ದು, ಬೆಂಗಳೂರಿನಲ್ಲಿ ಪ್ರತಿ ಸಿಲಿಂಡರ್ ಬೆಲೆ ರೂ.3,100–3,200ರಷ್ಟಾಗಿದೆ. ದೇಶದ ಪ್ರಮುಖ ನಗರಗಳಲ್ಲಿ ರೂ.3,000 ಮೀರಿದ್ದು, ಇತ್ತೀಚಿನ ಅವಧಿಯಲ್ಲಿ ಕಂಡುಬಂದ ಅತ್ಯಂತ ತೀವ್ರ ಏರಿಕೆಗಳಲ್ಲಿ ಇದೂ ಒಂದಾಗಿದೆ ಎಂದು ಅವರು ಕಳವಳ ವ್ಯಕ್ತಪಡಿಸಿದ್ದಾರೆ.

ಹೋಟೆಲ್ ಮತ್ತು ಆತಿಥ್ಯ ವಲಯವು ವಾಣಿಜ್ಯ ಎಲ್‌ಪಿಜಿ ಮೇಲೆ ಹೆಚ್ಚಿನ ಅವಲಂಬನೆ ಹೊಂದಿರುವುದರಿಂದ ಅತ್ಯಂತ ಹೆಚ್ಚು ಸಂಕಷ್ಟ ಅನುಭವಿಸುತ್ತಿದೆ. ರೆಸ್ಟೋರೆಂಟ್‌ಗಳು, ಕ್ಯಾಟರಿಂಗ್ ಸೇವೆಗಳು ಮತ್ತು ಸಣ್ಣ ಆಹಾರ ಸಂಸ್ಥೆಗಳು ಈಗಾಗಲೇ ಕಡಿಮೆ ಲಾಭಾಂಶದಲ್ಲಿ ಕಾರ್ಯನಿರ್ವಹಿಸುತ್ತಿದ್ದು, ಇದೀಗ ಈ ಭಾರವನ್ನು ಹೊರುವ ಸಾಧ್ಯತೆ ಇಲ್ಲದೇ ಗ್ರಾಹಕರಿಗೆ ವರ್ಗಾಯಿಸುವ ಪರಿಸ್ಥಿತಿಯಲ್ಲಿವೆ. ಈ ದರ ಏರಿಕೆ ಆತಿಥ್ಯ ವಲಯಕ್ಕೆ ಭಾರೀ ಹೊಡೆತವಾಗಿದೆ. ಒಂದೇ ಬಾರಿ ಸುಮಾರು 50% ಏರಿಕೆ ಸಂಪೂರ್ಣ ಅಸಹನೀಯವಾಗಿದ್ದು, ಗ್ರಾಹಕರು ಹೆಚ್ಚುವರಿ ಬೆಲೆ ತೆರಬೇಕಾದ ಪರಿಸ್ಥಿತಿ ಎದುರಾಗಿದೆ ಎಂದು ಹೇಳಿದ್ದಾರೆ.

ಈ ತೀವ್ರ ಏರಿಕೆಯ ಪರಿಣಾಮ ಸಣ್ಣ ಉದ್ಯಮಗಳಲ್ಲಿ ಕೆಲಸ ಮಾಡುವ ಬಹುತೇಕ ಕಾರ್ಮಿಕರು ಗ್ರಾಮೀಣ ಪ್ರದೇಶಗಳಿಂದ ಬಂದವರಾಗಿದ್ದು, ತಮ್ಮ ದೈನಂದಿನ ಊಟಕ್ಕಾಗಿ ಕಡಿಮೆ ದರದ ಸ್ಥಳೀಯ ಹೋಟೆಲ್‌ಗಳ ಮೇಲೆ ಅವಲಂಬಿತರಾಗಿದ್ದು, ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಇದು ಕೇವಲ ಉದ್ಯಮದ ಸಮಸ್ಯೆಯಾಗದೆ, ಬದುಕಿನ ಪ್ರಶ್ನೆಯಾಗಿದೆ ಎಂದಿದ್ದಾರೆ.

ವೆಲ್ಡಿಂಗ್ ಮತ್ತು ಫ್ಯಾಬ್ರಿಕೇಶನ್ ಕೈಗಾರಿಕೆ, ವಿಶೇಷವಾಗಿ ಎಂಎಸ್‌ಎಂಇಗಳು, ಎಲ್‌ಪಿಜಿ ಬಳಕೆಯು ಪ್ರಮುಖ ವಾಗಿರುವುದರಿಂದ ಹೆಚ್ಚಿನ ವೆಚ್ಚದ ಒತ್ತಡವನ್ನು ಎದುರಿಸುತ್ತಿವೆ. ಬ್ಯಾಟರಿ ತಯಾರಿಕಾ ವಲಯವೂ ಏರಿದ ಇಂಧನ ವೆಚ್ಚದಿಂದ ಸಂಕಷ್ಟದಲ್ಲಿದ್ದು, ಉತ್ಪಾದನಾ ವೆಚ್ಚ ಮತ್ತು ಮಾರುಕಟ್ಟೆ ಬೆಲೆಗಳ ಮೇಲೆ ಪರಿಣಾಮ ಬೀರುತ್ತದೆ. ಇಂಧನ ವೆಚ್ಚದ ಇಂತಹ ಏರಿಕೆ ಸ್ಪರ್ಧಾತ್ಮಕತೆಯನ್ನು ತಕ್ಷಣವೇ ಕುಗ್ಗಿಸುತ್ತದೆ, ವಿಶೇಷವಾಗಿ ವಾರ್ಷಿಕ ಒಪ್ಪಂದಗಳಡಿಯಲ್ಲಿ ಕಾರ್ಯನಿರ್ವಹಿಸುವ ಸಣ್ಣ ಉದ್ಯಮಿಗಳಿಗೆ ಇದು ದೊಡ್ಡ ಹೊಡೆತವಾಗಿದೆ. ಸಾವಿರಾರು ಎಂಎಸ್‌ಎಂಇಗಳು ಅಪಾಯದಲ್ಲಿವೆ, ಎಂದು ಅವರು ಹೇಳಿದರು.

ಈ ಕುರಿತು ಕೇಂದ್ರ ಸರ್ಕಾರ ತಕ್ಷಣ ಕ್ರಮ ಕೈಗೊಂಡು ವಾಣಿಜ್ಯ ಎಲ್‌ಪಿಜಿ ಮೇಲಿನ ತೆರಿಗೆಗಳನ್ನು ಕಡಿತಗೊಳಿಸಿ, ಎಂಎಸ್‌ಎಂಇಗಳಿಗೆ ನೆರವು ನೀಡುವುದು ಮತ್ತು ಇಂಧನ ಬೆಲೆ ಸ್ಥಿರೀಕರಣಕ್ಕಾಗಿ ನೀತಿ ಕ್ರಮಗಳನ್ನು ಕೈಗೊಳ್ಳಬೇಕು. ?ಈ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರ ತುರ್ತು ಕ್ರಮಗಳನ್ನು ಕೈಗೊಂಡು ತೀವ್ರ ಏರಿಕೆಯನ್ನು ತಕ್ಷಣ ಹಿಂತೆಗೆದುಕೊಳ್ಳಬೇಕು ಎಂದರು.

## ಸಾಮಾಜಿಕ ನ್ಯಾಯದ ಗರ್ಜನೆ

# ವಿಜಯ ದಳಪತಿ ನಾಯಕತ್ವದಲ್ಲಿ ತಮಿಳುನಾಡಿನಲ್ಲಿ ಹೊಸ ರಾಜಕೀಯ ಕ್ರಾಂತಿ: ಎಸ್. ಸಂಗಮೇಶ್

**ಬೆಂಗಳೂರು, ಮೇ 5:** ದಶಕಗಳಿಂದ ಹಿಂದುಳಿದ ಸಮುದಾಯಗಳ ಮೇಲೆ ನಡೆಯುತ್ತಿರುವ ಅನ್ಯಾಯಕ್ಕೆ ಅಂತ್ಯ ಹಾಡಬೇಕಾದ ಸಮಯ ಬಂದಿದೆ. ಸಾಮಾಜಿಕ ನ್ಯಾಯ, ಸಮಾನ ಹಕ್ಕುಗಳು ಹಾಗೂ ತಳಹದಿ ವರ್ಗಗಳ ಸಬಲೀಕರಣಕ್ಕಾಗಿ ನಡೆಯುತ್ತಿರುವ ಹೋರಾಟಕ್ಕೆ ಇಂದು ಹೊಸ ದಿಕ್ಕು ಸಿಕ್ಕಿದ್ದು, ಆ ಪರಿವರ್ತನೆಯ ಶಕ್ತಿಯಾಗಿ ವಿಜಯ ದಳಪತಿ ಹೊರಹೊಮ್ಮಿದ್ದಾರೆ ಎಂದು ಕರ್ನಾಟಕ ರಾಜ್ಯ ಯುವ ಸಮೂಹದ ರಾಜ್ಯಾಧ್ಯಕ್ಷ ಎಸ್. ಸಂಗಮೇಶ್ ಹೇಳಿದ್ದಾರೆ.



ಇದು ಕೇವಲ ರಾಜಕೀಯವಲ್ಲ ಹೋರಾಟ. ಇದು ಕೇವಲ ಮಾತಲ್ಲ ದಮನಿತ ವರ್ಗಗಳ ಸ್ವಾಭಿಮಾನದ ಘರ್ಜನೆ. ದಶಕಗಳಿಂದ ತುಳಿಯಲ್ಪಟ್ಟ ಜನರ ನೋವಿಗೆ ಉತ್ತರ ನೀಡುವ ಸಮಯ ಬಂದಿದೆ. ಆ ಹೋರಾಟಕ್ಕೆ ದಿಕ್ಕು ತೋರಿಸುವ ನಾಯಕತ್ವ ವಿಜಯ ದಳಪತಿ ಅವರದು ಎಂದಿದ್ದಾರೆ. ತಮಿಳುನಾಡಿನ ರಾಜಕೀಯದಲ್ಲಿ ಇಂದು ಉಂಟಾಗುತ್ತಿರುವ ಬದಲಾವಣೆ ಸಾಮಾನ್ಯವಲ್ಲ. ಇದು ದಮನಿತ ವರ್ಗಗಳ ಎದ್ದೇಳುವ ಧ್ವನಿ. ಸ್ವಾಭಿಮಾನಕ್ಕಾಗಿ, ಸಮಾನತೆಗೆ ಈಗ ಅಧಿಕಾರವೂ ತಳಹದಿ ವರ್ಗಗಳ ಕೈಗೆ ಬರಬೇಕು ಎಂದು ಅವರು ಹೇಳಿದ್ದಾರೆ.

ಈ ಕುರಿತು ಹೇಳಿಕೆ ನೀಡಿರುವ ಅವರು, ಯುವಜನರ ಆಶೋತ್ತರಗಳು, ಹಿಂದುಳಿದವರ ಹಕ್ಕುಗಳು ಮತ್ತು ಸಮಾನತೆಯ ಕನಸುಗಳನ್ನು ಒಟ್ಟುಗೂಡಿಸುವ ಶಕ್ತಿ ವಿಜಯ ದಳಪತಿ ಅವರಲ್ಲಿದ್ದು, ಸಮಾಜದ ಪ್ರತಿಯೊಂದು ವರ್ಗವನ್ನೂ ಜೊತೆ ಗೂಡಿಸಿಕೊಂಡು ಸಾಗುವ ದೃಢಸಂಕಲ್ಪ ಹೊಂದಿದ್ದಾರೆ. ಸಾಮಾಜಿಕ ನ್ಯಾಯದ ಇತಿಹಾಸವನ್ನು ಮರುಬರೆಯುವ ಸಮಯ ಬಂದಿದೆ. ಮಾದಿಗರ ಹೆಮ್ಮೆಯ ಮಗ ತಮಿಳುನಾಡಿನ ಮುಖ್ಯಮಂತ್ರಿ ಯಾಗುವುದು ಕೇವಲ ಕನಸು ಅಲ್ಲ ? ಅದು ನಮ್ಮ ಗೌರವ, ನಮ್ಮ ಹಕ್ಕು, ನಮ್ಮ ಹೋರಾಟದ ಜಯ!? ಮುಂದಿನ ಬೆಂಗಳೂರು ಬಿಬಿಎ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಟಿವಿಕೆ ಪಕ್ಷ ಪ್ರವೇಶಿಸುವುದು ಖಚಿತವಾಗಿದ್ದು, ಸಂಘಟಿತ ಯುವಶಕ್ತಿ ಮತ್ತು ಹಿಂದುಳಿದ ವರ್ಗಗಳ ಭಾರೀ ಬೆಂಬಲದ ಹಿನ್ನೆಲೆ ಟಿವಿಕೆ ಅಭ್ಯರ್ಥಿಗಳು ಗಮನಾರ್ಹ ಸಾಧನೆ ಮಾಡಲಿದ್ದಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

## ಎಇಸಿಎಸ್ ಬಡಾವಣೆಯಲ್ಲಿ 60 ಅಡಿ ರಸ್ತೆಬದಿ ಅಕ್ರಮ ಅಂಗಡಿಗಳ ತೆರವು ಕಾರ್ಯಾಚರಣೆ ನಡೆಸಿದ ಅಧಿಕಾರಿಗಳಿಗೆ ಸಂಗಮೇಶ್ ಅಭಿನಂದನೆ





**ಬೆಂಗಳೂರು, ಮೇ.4**– ಕುಂದಲಹಳ್ಳಿ ಗೇಟ್ ಸಮೀಪದ ಎಇಸಿಎಸ್ ಬಡಾವಣೆಯ 60 ಅಡಿ ರಸ್ತೆಯಲ್ಲಿ ರಸ್ತೆಬದಿ ಅಕ್ರಮ ಅಂಗಡಿಗಳನ್ನು ತೆರವುಗೊಳಿಸಲು ಕರ್ನಾಟಕ ರಾಜ್ಯ ಯುವ ಸಮೂಹದ ಮನವಿಗೆ ಸ್ಪಂದಿಸಿ ಶನಿವಾರ ರಾತ್ರಿ ತುರ್ತು ಕಾರ್ಯಾಚರಣೆ ನಡೆಸಿದ್ದು, ಅಧಿಕಾರಿಗಳ ಸಕಾಲಿಕ ಕಾರ್ಯವೈಖರಿ ಶ್ಲಾಘನೀಯ ಎಂದು ಕರ್ನಾಟಕ ರಾಜ್ಯ ಯುವ ಸಮೂಹದ ರಾಜ್ಯಾಧ್ಯಕ್ಷ ಎಸ್. ಸಂಗಮೇಶ್ ಹೇಳಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಜಿಬಿಎ ಕಾರ್ಯಪಾಲ ಅಭಿಯಂತರರಾದ ರವಿಕುಮಾರ್, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶ್ರೀಕಾಂತ್, ಸಂತೋಷ್, ಕಾರ್ಯ ಪರಿಶೀಲಕರಾದ ಶ್ರೀನಿವಾಸ್ ಮತ್ತು ರಾಜಪ್ಪ ಅವರ ನೇತೃತ್ವದಲ್ಲಿ ಕಾರ್ಯಾಚರಣೆ ನಡೆದಿದೆ. ಎಚ್.ಎ.ಎಲ್ ಪೊಲೀಸರು, ಸಂಚಾರಿ ಪೊಲೀಸ್ ಸಿಬ್ಬಂದಿ ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಾರೆ. ಎಸ್ ಲೋಹಿತ್. ಎ.ಇ.ಸಿ.ಎಸ್ ನಿವಾಸಿಗಳ ಕಲ್ಯಾಣ ಸಂಘ, ಎಲ್ಲಾ ನಿವಾಸಿಗಳ ಜಾಗೃತಿಯಿಂದಲೇ ಈ ಯಶಸ್ವಿ ಕಾರ್ಯಾಚರಣೆ ಸಾಧ್ಯವಾಗಿದೆ ಎಂದು ಎಸ್. ಸಂಗಮೇಶ್ ಹೇಳಿದ್ದಾರೆ.

## ಪಶುಸಂಗೋಪನೆ, ಬಿಎಸ್ಸಿ ಕೃಷಿ, ಬಿಎಸ್ಸಿ ತೋಟಗಾರಿಕೆ ಮುಂತಾದ 12 ಕೋರ್ಸುಗಳ ಪ್ರವೇಶಕ್ಕೆ

# ನಾಳೆಯಿಂದ 10 ರವರೆಗೆ ಕೃಷಿ ಪ್ರಾಯೋಗಿಕ ಪರೀಕ್ಷೆಗಾಗಿ ತರಬೇತಿ ಕಾರ್ಯಾಗಾರ



**ಬೆಂಗಳೂರು, ಮೇ.4**– ಪಶುಸಂಗೋಪನೆ, ಬಿಎಸ್ಸಿ ಕೃಷಿ, ಬಿಎಸ್ಸಿ ತೋಟಗಾರಿಕೆ ಮುಂತಾದ 12 ಕೋರ್ಸುಗಳ ಪ್ರವೇಶಕ್ಕೆ ಕೃಷಿಕರ ಕೋಟಾದ ಅಡಿಯಲ್ಲಿ ರಾಜ್ಯದ ಕೃಷಿ ವಿಶ್ವವಿದ್ಯಾಲಯಗಳಲ್ಲಿ ರೈತರ ಮಕ್ಕಳಿಗೆ 50% ಮೀಸಲಾತಿ ಲಭ್ಯವಿದ್ದು, ಇದನ್ನು ಸದುಪಯೋಗ ಪಡಿಸಿಕೊಳ್ಳಲು ಜಿಕೆವಿಕೆ ಬಳಿ ಇರುವ ಅರಬಿಂದೋ ಶಾಲೆಯಲ್ಲಿ ವಿಕಸಿತ 47 ಅಕಾಡೆಮಿಯಿಂದ ಕೃಷಿ ಪ್ರಾಯೋಗಿಕ ಪರೀಕ್ಷೆಗೆ ಸನ್ನದ್ಧಗೊಳ್ಳಲು ಮೇ. 6 ರಿಂದ 10 ರವರೆಗೆ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ.

ರೈತ ಮಕ್ಕಳಿಗೆ ಲಭ್ಯವಿರುವ 50% ಮೀಸಲಾತಿ ಸೌಲಭ್ಯ ಪಡೆಯಲು ಕೆಸಿಇಟಿ ಪರೀಕ್ಷೆಯ ಜೊತೆಗೆ ಕೃಷಿ ವಿಶ್ವವಿದ್ಯಾಲಯಗಳಲ್ಲಿ ನಡೆಸುವ ಪ್ರಾಯೋಗಿಕ ಪರೀಕ್ಷೆಯನ್ನು ಬರೆಯಬೇಕಾಗಿದೆ. ಈ ಪರೀಕ್ಷೆಗೆ ತಯಾರಾಗಲು ಮೇ 6 ರ ಸೋಮವಾರದಂದು ಅರಬಿಂದೋ ಶಾಲೆಯಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ವಿಕಸಿತ 47 ಅಕಾಡೆಮಿಯ ಮುಖ್ಯಸ್ಥರಾದ ತೇಜಸ್ ಎಚ್.ಎನ್. ತಿಳಿಸಿದ್ದಾರೆ.

ಈ ಕಾರ್ಯಾಗಾರದಲ್ಲಿ ಕೃಷಿ ಪ್ರಾಯೋಗಿಕ ಪರೀಕ್ಷೆಯ ಕುರಿತು ಸಂಪೂರ್ಣ ತರಬೇತಿ ನೀಡಲಾಗುತ್ತದೆ. ದ್ವಿತೀಯ ಪಿಯುಸಿ ಮುಗಿಸಿ ಅಗ್ರಿ ಪ್ರಾಕ್ಟಿಕಲ್ ಪರೀಕ್ಷೆಗೆ ಸಿದ್ಧತೆ ನಡೆಸುತ್ತಿರುವ ವಿದ್ಯಾರ್ಥಿಗಳು ಈ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳಬೇಕು. ವಿದ್ಯಾರ್ಥಿಗಳು ನೋಂದಣಿ ಮಾಡಿಕೊಳ್ಳಲು 8217413646 ಗೆ ಕರೆಮಾಡುವಂತೆ ಕೋರಲಾಗಿದೆ.



ದಾವಣಗೆರೆ ದಕ್ಷಿಣದ ಸಮರ್ಥ್ ಶಾಮನೂರು ಸೋಮವಾರ ದಾವಣಗೆರೆಯಲ್ಲಿ ಹೆತ್ತವರಾದ ಮಲ್ಲಿಕಾರ್ಜುನ ಎಸ್.ಎಸ್ ಮತ್ತು ಡಾ. ಪ್ರಭಾ ಮಲ್ಲಿಕಾರ್ಜುನ್ ಅವರೊಂದಿಗೆ ಸಂಭ್ರಮಿಸಿದರು.

# ಅನ್ನಭಾಗ್ಯ ಯೋಜನೆ ಬಸವಣ್ಣನವರ ದಾಸೋಹ ಪ್ರೇರಣೆ: ಈಶ್ವರ ಖಂಡ್ರೆ



**ಬೀದರ, ಮೇ. 4:** ರಾಜ್ಯ ಸರ್ಕಾರ ಜಾರಿಗೆ ತಂದಿರುವ ಅನ್ನಭಾಗ್ಯ ಯೋಜನೆಗೆ ವಿಶ್ವಗುರು ಬಸವಣ್ಣನವರ ದಾಸೋಹ ಪ್ರೇರಣೆಯಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

ಭಾಲ್ಕಿಯ ಹಿರೇಮಠದಲ್ಲಿ ನಡೆಯುತ್ತಿರುವ ಡಾ.ಬಸವಲಿಂಗ ಪಟ್ಟದ್ದೇವರ ಅಮೃತಮಹೋತ್ಸವ ಹಾಗೂ ಲಿಂ.ಚನ್ನಬಸವಪಟ್ಟದ್ದೇವರ 27ನೇ ಸಂಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬಸವಣ್ಣನವರು ಕಾಯಕವೇ ಕೈಲಾಸ ಎಂಬ ಸಂದೇಶದೊಂದಿಗೆ ದುಡಿಯಬೇಕು, ದುಡಿದು ಗಳಿಸಬೇಕು, ಗಳಿಸಿದ್ದನ್ನು ಉಳಿಸಬೇಕು, ಉಳಿಸಿದ್ದನ್ನು ದಾಸೋಹದ ಮೂಲಕ ಸಮಾಜಕ್ಕೆ ಮರಳಿ ನೀಡಬೇಕು ಎಂದು ಸಾರಿದರು. ಅವರ ಜಯಂತಿಯನ್ನು ಈ ಕಾರ್ಯಕ್ರದ ಜೊತೆಗೆಯಲ್ಲಿ ಆಚರಿಸುತ್ತಿರುವುದು ಅರ್ಥಪೂರ್ಣ ಎಂದರು.

ನಮ್ಮ ಬೀದರ್ ಜಿಲ್ಲೆಯ ಬಸವಕಲ್ಯಾಣದಲ್ಲಿ ಬಸವಾದಿ ಪ್ರಮಥರು ಅನುಭವಮಂಟಪದಲ್ಲಿ ಎಲ್ಲ, ಜಾತಿ ಜನಾಂಗದವರಿಗೂ ಸಮಾನ ಅವಕಾಶ ನೀಡಿದ್ದರು. ಇಲ್ಲಿ ಲಿಂಗತಾರತಮ್ಯವೂ ಇರಲಿಲ್ಲ, ಅಕ್ಕಮಹಾದೇವಿ, ಸತ್ಯಕ್ಕ, ಐದಕ್ಕಿ ಲಕ್ಕಮ್ಮ, ನೀಲಾಂಬಿಕೆ, ಮುಕ್ತಾಯಕ್ಕ ಮೊದಲಾದವರು ತಮ್ಮ ವಿಚಾರಧಾರೆಗಳನ್ನು ಮುಂಡಿಸುತ್ತಿದ್ದರು. ಇದು ಮಹಿಳಾ ಸಬಲೀಕರಣದ ಸಂಕೇತವಾಗಿದ್ದು, ನಮ್ಮ ಸರ್ಕಾರ ಗೃಹಲಕ್ಷ್ಮೀ, ಶಕ್ತಿ ಯೋಜನೆಯ ಮೂಲಕ ಮುಂದುವರಿಸಿದೆ ಎಂದರು.

ಇಂದು ನಾವು ನಡೆದಾಡುವ ದೇವರು ಎಂದೇ ಖ್ಯಾತರಾಗಿದ್ದ ಶತಾಯುಷಿ ಶ್ರೀ ಚನ್ನಬಸವ ಪಟ್ಟದ್ದೇವರ 27ನೇ ಸಂಸ್ಮರಣೋತ್ಸವ ನಡೆಸುತ್ತಿದ್ದೇವೆ. ಅವರು, ಕ್ರಾಂತಿಪುರುಷರು. ಮುಟ್ಟಿತಟ್ಟಿಯಂತಹ ಅಸ್ಪೃಶ್ಯತೆಯ ಆಚರಣೆ ತೊಡೆದುಹಾಕಲು ನಮ್ಮ ತಂದೆ ಲಿಂಗೈಕ್ಯ ಲೋಕನಾಯಕ ಡಾ. ಭೀಮಣ್ಣ ಖಂಡ್ರೆ ಅವರಿಗೆ ಬೆಂಬಲವಾಗಿ ನಿಂತು ಭಾಲ್ಕೇಶ್ವರ ದೇವಾಲಯಕ್ಕೆ ಅಶೋಕನಗರ ನಿವಾಸಿಗಳ ಪ್ರವೇಶಕ್ಕೆ ಅವಕಾಶ ಕಲ್ಪಿಸಿದರು. ಇಂದು ನಾವು ಕಾಣುತ್ತಿರುವ ಶಿವಲಿಂಗದಾಕಾರದ ಅನುಭವ ಮಂಟಪದ ನಿರ್ಮಾದ ಶ್ರೇಯಸ್ಸು ಚನ್ನಬಸವಪಟ್ಟದ್ದೇವರಿಗೆ ಸಲ್ಲುತ್ತದೆ ಎಂದರು.

ನಿಜಾಮರ ಆಳ್ವಿಕೆಯ ಕಾಲದಲ್ಲಿ ಬೀದರ್ ನಲ್ಲಿ ಕನ್ನಡ ಕಲಿಸಲು ಅವಕಾಶ ಇರಲಿಲ್ಲ. ಆಗ ಹೊರಗೆ ಉರ್ದು ಫಲಕ ಹಾಕಿ ಒಳಗೆ ಕನ್ನಡ ಕಲಿಸಲು ಶ್ರಮಿಸಿದ ಪಟ್ಟದ್ದೇವರು, ಬೀದರ್ ಮಕ್ಕಳಿಗೆ ವಚನ ಸಾರ ತಿಳಿಯುವಂತೆ ಮಾಡಿದ್ದರು. ತಮ್ಮ ದೀಕ್ಷಾ ಗುರು ಚನ್ನಬಸವ ಪಟ್ಟದ್ದೇವರ ಶತಮಾನೋತ್ಸವವನ್ನು ಭೀಮಣ್ಣ ಖಂಡ್ರೆ ಅವರು ಅದ್ದೂರಿಯಾಗಿ ನಡೆಸಿದ್ದರು, ಆಗ ಅಂದಿನ ರಾಷ್ಟ್ರಪತಿ ಡಾ. ಶಂಕರದಯಾಳ್ ಶರ್ಮಾ ಆಗಮಿಸಿದ್ದರು. ಇಂದಿನ ಪೀಠಾಧಿಪತಿಗಳ ಅಮೃತ ಮಹೋತ್ಸವಕ್ಕೆ ಉಪ ರಾಷ್ಟ್ರಪತಿಗಳು ಆಗಮಿಸಿರುವುದು ಯೋಗಾಯೋಗ ಎಂದು ಈಶ್ವರ ಖಂಡ್ರೆ ಹೇಳಿದರು.

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು, ಮಾಸಿಕ ಶರಣ ಸಂಗಮ, ಶಿವಾನುಭವ ಪ್ರವಚನ, ವಚನ ಗಾಯನದಂತಹ ಕಾರ್ಯಕ್ರಮಗಳ ಮೂಲಕ ಶರಣರ ವಚನಗಳ ಪ್ರಚಾರ ಪ್ರಸಾರ ಮಾಡುತ್ತಿದ್ದಾರೆ, ಸರಳ ಸಾಮೂಹಿಕ ವಿವಾಹಗಳನ್ನು ಆಯೋಜಿಸುವ ಮೂಲಕ ಬಡವರರು ಸಾಲದ ಸುಳಿಗೆ ಸಿಲುಕದಂತೆ ರಕ್ಷಿಸಿದ್ದಾರೆ. ಇವರ ಸಾಧನೆಗಳನ್ನು ಗುರುತಿಸಿ ಹಂಪಿ ವಿಶ್ವವಿದ್ಯಾಲಯ ಅವರಿಗೆ ನಾಡೋಜ ಗೌರವ ನೀಡಿದೆ. ಅವರು ನೂರ್ಕಾಲ ಬಾಳಲಿ ನಮಗೆ ಮಾರ್ಗದರ್ಶನ ನೀಡಲಿ ಎಂದರು.

# ಅಭಿವೃದ್ಧಿಗೆ ಮತದಾರರ ಒಲವು: ಫಲಿತಾಂಶಕ್ಕೆ ವೀರೇಶ ಮಹಾಂತಯ್ಯನ ಮಠ ಸಂತಸ



**ಕೊಪ್ಪಳ, ಮೇ.4–** ಪಂಚ ರಾಜ್ಯ ಚುನಾವಣೆಯಲ್ಲಿ ಮೂರು ರಾಜ್ಯಗಳಲ್ಲಿ ಎನ್ ಡಿಎಗೆ ಬೆಂಬಲಿಸುವ ಮೂಲಕ ಮತದಾರರು, ಅಭಿವೃದ್ಧಿ ರಾಜಕಾರಣಕ್ಕೆ ಬೆಂಬಲಿಸಿರುವುದು ಸಂತಸ ತಂದಿದೆ ಎಂದು ಜೆಡಿಎಸ್ ರಾಜ್ಯ ಕಾರ್ಯದರ್ಶಿ ವೀರೇಶ ಮಹಾಂತಯ್ಯನಮಠ ಹೇಳಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಪುದುಚೇರಿ, ಅಸ್ಸಾಂ, ಪಶ್ಚಿಮ ಬಂಗಾಳ ರಾಜ್ಯಗಳ ಚುನಾವಣೆಯಲ್ಲಿ ಎನ್‌ಡಿಎ ಬಹುಮತ ಗಳಿಸಿರುವುದು ಮಹತ್ವದ ಬೆಳವಣಿಗೆಯಾಗಿದೆ.

ಅದರಲ್ಲಿಯೂ ಕಳೆದ 15 ವರ್ಷಗಳಿಂದ ಪಶ್ಚಿಮ ಬಂಗಾಳದಲ್ಲಿ ಆಡಳಿತ ನಡೆಸಿರುವ ಟಿಎಂಸಿ ಮಮತಾ ಬ್ಯಾನರ್ಜಿ ಆಡಳಿತಕ್ಕೆ ಬೇಸತ್ತಿದ್ದ ಅಲ್ಲಿನ ಮತದಾರರು, ಕೊನೆಗೆ ಎನ್‌ಡಿಎ ಪಕ್ಷ ಬೆಂಬಲಿಸುವ ಮೂಲಕ ಹೊಸ ಇತಿಹಾಸ ನಿರ್ಮಿಸಿದ್ದಾರೆ.

ದೇಶದ ಇತಿಹಾಸದ ಚುನಾವಣೆಯಲ್ಲಿಯೇ ಇದೊಂದು ಐತಿಹಾಸಿಕ ಮೈಲುಗಲ್ಲಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿಯ ಸಂಕಲ್ಪಗಳು,ದೇಶದ ಭದ್ರತೆಯ ವಿಚಾರವನ್ನಿಟ್ಟುಕೊಂಡು ಪಶ್ಚಿಮ ಬಂಗಾಳದ ಮತದಾರರು ಕೊನೆಗೆ ತಮ್ಮ ನಿಲುವು ಬದಲಿಸಿದ್ದಾರೆ.

ಇನ್ನೂ ಅಸ್ಸಾಂನಲ್ಲಿ ಸತತ ಮೂರನೇ ಬಾರಿ ಎನ್‌ಡಿಎಗೆ ಬಹುಮತ ದೊರತಿದೆ. ಪುದುಚೇರಿಯಲ್ಲಿ ಜನರು ಎನ್‌ಡಿಎಗೆ ಅವಕಾಶ ನೀಡಿದ್ದಾರೆ.

ಕೇರಳ, ತಮಿಳುನಾಡಿನಲ್ಲಿಯೂ ಎನ್ ಡಿಎ ಉತ್ತಮ ಸ್ಪರ್ಧೆಯೊಡ್ಡಿದ್ದು, ಮುಂದಿನ ಚುನಾವಣೆಗಳಲ್ಲಿ ಇಲ್ಲಿಯೂ ಬಹುಮತ ಗಳಿಸುವ ಮೂಲಕ ಕಾಂಗ್ರೆಸ್ ಮುಕ್ತ ಭಾರತ ಮಾಡುವ ವಿಶ್ವಾಸವಿದೆ ಎಂದು ಸಂತಸ ವ್ಯಕ್ತಪಡಿಸಿದ್ದಾರೆ.

# ಪ್ರತಿ ಕ್ಷೇತ್ರದಲ್ಲೂ ಕಾರ್ಮಿಕರ ಶ್ರಮವಿದೆ: ನ್ಯಾಯಾಧೀಶ ಶ್ರೀನಿವಾಸ ನವಲೆ



**ಕಲಬುರಗಿ, ಮೇ. 4:** ಜಗತ್ತಿನ ಪ್ರತಿ ಕ್ಷೇತ್ರದಲ್ಲೂ ಕಾರ್ಮಿಕರ ಬೆವರಿನ ಶ್ರಮ ಅಡಗಿದೆ. ಕಾರ್ಮಿಕರು ದುಡಿಮೆಯಿಂದ ತಮ್ಮ ಕುಟುಂಬಗಳನ್ನು ಪೋಷಿಸುವುದರ ಜೊತೆಗೆ ಸಂಸ್ಥೆಯ ಮತ್ತು ದೇಶದ ಅಭಿವೃದ್ಧಿಗೂ ಕಾರಣರಾಗುತ್ತಾರೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಹೇಳಿದರು.

ನಗರದ ನಂದೂರ ಕೈಗಾರಿಕಾ ವಸಹಾತು ಪ್ರದೇಶದ ವೆಂಕಟೇಶ್ವರ ಪ್ರೈವೇಟ್ ಲಿಮಿಟೆಡ್‌ನಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ವೆಂಕಟೇಶ್ವರ ಫುಡ್ ಪ್ರೈವೇಟ್ ಲಿಮಿಟೆಡ್ ಆಶ್ರಯದಲ್ಲಿ ಅಂತರರಾಷ್ಟ್ರೀಯ ಕಾರ್ಮಿಕ ದಿನಾಚರಣೆಯಲ್ಲಿ ಆಯೋಝಿಸಿದ ಕಾನೂನು ಅರಿವು–ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಹಾಗೆ ನೋಡಿದರೆ ಸಂಬಳಕ್ಕಾಗಿ ದುಡಿಯುವವರೆಲ್ಲರೂ ಕಾರ್ಮಿಕರೇ. ಆದರೆ, ಅವರ ಹೊರತಾಗಿ ಕೆಲಸ ಮಾಡುವ ಶ್ರಮಿಕ ವರ್ಗದವರನ್ನು ಮಾತ್ರ ಕಾರ್ಮಿಕರೆಂದು ಪರಿಗಣಿಸಲಾಗುತ್ತದೆ. ಇದಕ್ಕೆ ಮುಖ್ಯ ಕಾರಣ, ಬಹಳಷ್ಟು ಶ್ರಮಿಕರು ಅನಕ್ಷರಸ್ಥರಿದ್ದಾರೆ ಮತ್ತು ಕೌಶಲ್ಯ ಹೊಂದಿದವರೂ ಇದ್ದಾರೆ.

ಆದರೆ ಅವರಲ್ಲಿ ಸಂಘಟನೆಯಿಲ್ಲ. ನಿಯಮಿತ ಸಂಬಳ ಇತ್ಯಾದಿ ಸೌಕರ್ಯಗಳಿಲ್ಲದ್ದರಿಂದ ಅವರ ಹಕ್ಕುಗಳ ಅರಿವು ಮೂಡಿಸುವ ಮೂಲಕ ಸಂಘಟಿತರನ್ನಾಗಿ ಮಾಡಬೇಕು. ಅದಕ್ಕಾಗಿ ಪ್ರತಿ ವರ್ಷ ಭಾರತವೂ ಸೇರಿದಂತೆ ವಿಶ್ವದಾದ್ಯಂತ ಕಾರ್ಮಿಕರ ದಿನವನ್ನು ಆಚರಿಸಲಾಗುತ್ತದೆ. ದುಡಿಯುವ ವರ್ಗದ ಮೇಲಿನ ದಬ್ಬಾಳಿಕೆಯನ್ನು ತಡೆಗಟ್ಟಿ, ಅವರ ಹಕ್ಕುಗಳ ರಕ್ಷಣೆ ಮತ್ತು ಸಾಮರ್ಥ್ಯದ ಅರಿವು ಮೂಡಿಸುವುದು ಆಚರಣೆಯ ಮುಖ್ಯ ಉದ್ದೇಶವಾಗಿದೆ. ಈ ದಿಸೆಯಲ್ಲಿ ಸಂಘಟನೆಗಳು ಕಾರ್ಯ ನಿರ್ವಹಿಸಬೇಕಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಾರ್ಮಿಕ ಅಧಿಕಾರಿ ಶರಣಪ್ಪ ಆರ್.ಹಳಿಮನಿ ಅವರು, ಕಾರ್ಮಿಕ ದಿನಾಚರಣೆಯು ಕಾರ್ಮಿಕರ ಸಂಘಟಿತ ಚಳವಳಿಯ ಫಲವಾಗಿ ಹುಟ್ಟಿಕೊಂಡಿದೆ. ದುಡಿಮೆಗೆ 8 ಗಂಟೆ, ಮನರಂಜನೆಗೆ 8 ಗಂಟೆ ಮತ್ತು ವಿಶ್ರಾಂತಿಗೆ 8 ಗಂಟೆ ಎಂಬ ತತ್ವವನ್ನು ಇದು ಪ್ರತಿಪಾದಿಸುತ್ತದೆ. ಭಾರತದಲ್ಲಿ ಮೊದಲ ಬಾರಿಗೆ 1923ರಲ್ಲಿ ಚೆನ್ನೈನಲ್ಲಿ ಲೇಬರ್ ಕಿಸಾನ್ ಪಾರ್ಟಿ ಆಫ್ ಹಿಂದೂಸ್ತಾನ್ ಈ ದಿನವನ್ನು ಆಚರಿಸಿತ್ತು ಸ್ಮರಿಸಿಕೊಂಡರು.

# ಬೇಸೂರಿನಲ್ಲಿ ಅಣುವಿದ್ಯುತ್ ಸ್ಥಾವರ ಶಿವಮೊಗ್ಗ ಡಿಸಿ ನಿರಾಕರಣೆ



**ಶಿವಮೊಗ್ಗ, ಮೇ 4:** ಜಿಲ್ಲೆಯ ಸಾಗರ ತಾಲ್ಲೂಕಿನ ಬೇಸೂರು ಗ್ರಾಮದಲ್ಲಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪನೆಯಾಗಲಿದೆ ಎಂಬ ಸುದ್ದಿಯನ್ನು ಶಿವಮೊಗ್ಗ ಜಿಲ್ಲಾಧಿಕಾರಿ ಹೇಮಂತ್ ಎನ್ ನಿರಾಕರಿಸಿದ್ದಾರೆ.

ಕಳೆದ ಕೆಲವು ದಿನಗಳಿಂದ ಸಾಮಾಜಿಕ ಜಾಲತಾಣಗಳಲ್ಲಿ ಎನ್‌ಟಿಪಿಸಿ ಸಂಸ್ಥೆಯು ಬೇಸೂರು ಗ್ರಾಮದಲ್ಲಿ ಪರಮಾಣು ವಿದ್ಯುತ್ ಸ್ಥಾವರ ಸ್ಥಾಪಿಸಲು ಜಮೀನು ಗುರುತಿಸಿದೆ ಮತ್ತು ಈ ಸಂಬಂಧ ಪ್ರಕ್ರಿಯೆಗಳು ನಡೆಯುತ್ತಿವೆ ಎಂಬ ಸುದ್ದಿ ವ್ಯಾಪಕವಾಗಿ ಹರಿದಾಡುತ್ತಿತ್ತು. ಈ ಸುದ್ದಿಯಿಂದಾಗಿ ಸ್ಥಳೀಯ ಗ್ರಾಮಸ್ಥರು ಹಾಗೂ ಸಾರ್ವಜನಿಕರು ಆತಂಕಕ್ಕೆ ಒಳಗಾಗಿರುವುದು ಗಮನಕ್ಕೆ ಬಂದಿದೆ. ಪರಮಾಣು ವಿದ್ಯುತ್ ಸ್ಥಾವರ ಸ್ಥಾಪಿಸುವ ಉದ್ದೇಶದಿಂದ ಶಿವಮೊಗ್ಗ ಜಿಲ್ಲಾಡಳಿತದಿಂದ ಸರ್ಕಾರಕ್ಕೆ ಯಾವುದೇ ರೀತಿಯ ಪ್ರಸ್ತಾವನೆಯನ್ನು ಸಲ್ಲಿಸಲಾಗಿಲ್ಲ. ಜಮೀನು ಗುರುತಿಸುವಿಕೆ ಅಥವಾ ಸ್ಥಾವರ ಸ್ಥಾಪನೆಯ ಕ್ರಮಗಳು ನಡೆಯುತ್ತಿವೆ ಎಂಬುದು ಕೇವಲ ವದಂತಿಯಾಗಿದ್ದು, ಸಾರ್ವಜನಿಕರು ಅನಾವಶ್ಯಕವಾಗಿ ಆತಂಕಕ್ಕೊಳಗಾಗುವ ಅಗತ್ಯವಿಲ್ಲ ಎಂದು ಅವರು ತಿಳಿಸಿದ್ದಾರೆ.

# ಬಿಎಸ್‌ವೈ ಜನಸೇವೆಯ ಸಾರ್ಥಕ 50ನೇ ವರ್ಷದ ಅಭಿಮಾನೋತ್ಸವದ ಪೂರ್ವಭಾವಿ ಸಭೆ- ಸೋಮಲಿಂಗಪ್ಪ




**ಬಳ್ಳಾರಿ, ಮೇ.04–** ದಣಿವರಿಯದ ನಾಯಕ ರೈತ ನಾಯಕ ದಿನದಲಿತರ ನಾಯಕ ಮಾಜಿ ಮುಖ್ಯಮಂತ್ರಿ " ಬಿ.ಎಸ್.ಯಡಿಯೂರಪ್ಪ ಜೀ " ಅವರ "ಜನಸೇವೆಯಲ್ಲಿ ಸಾರ್ಥಕ 50ನೇ ವರ್ಷದ ಅಭಿಮಾನೋತ್ಸವದ" ಇಂದು ಸಿರುಗುಪ್ಪ ತಾಲೂಕಿನ ತೆಕ್ಕಲಕೋಟೆ ಪಟ್ಟಣದ ಮಾಜಿ ಶಾಸಕ ಎಂ ಎಸ್ ಸೋಮಲಿಂಗಪ್ಪ ಅವರ ನೇತೃತ್ವದಲ್ಲಿ ಪೂರ್ವಭಾವಿ ಸಭೆಯನ್ನು ಮಾಡಲಾಯಿತು. ಮತ್ತು ಅಭಿಮಾನೋತ್ಸವದ ಕರಪತ್ರಗಳನ್ನು ಹಂಚಿ, ಕಾರ್‌ಗಳಿಗೆ ಅಂಟಿಸಲಾಯಿತು.

9 ನೇ ತಾರೀಕಿನಂದು ಚಿತ್ರದುರ್ಗದಲ್ಲಿ ನಡೆಯುವ ಅಭಿಮಾನೋತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಿರುಗುಪ್ಪ ವಿಧಾನಸಭಾ ಕ್ಷೇತ್ರದಿಂದ ಕರೆದುಕೊಂಡು ಹೋಗಿ ಬಿಎಸ್ ಯಡಿಯೂರಪ್ಪನವರಿಗೆ ಶಕ್ತಿಯನ್ನು ತುಂಬುವಂತ ಕೆಲಸ ನಾವೆಲ್ಲರೂ ಮಾಡೋಣ ಎಂದು ಮಾಜಿ ಶಾಸಕರು ಈ ಸಭೆಯಲ್ಲಿ ತಿಳಿಸಿದರು.

ಹೆಚ್ಚಿನ ಸಂಖ್ಯೆಯಲ್ಲಿ ಹಿರಿಯ ಮುಖಂಡರು ಕಾರ್ಯಕರ್ತರುಗಳು ಪಕ್ಷದ ಪದಾಧಿಕಾರಿಗಳು ಬಿಎಸ್ ವೈ ಅವರ ಅಭಿಮಾನಿಗಳು ಈ ಸಭೆಯಲ್ಲಿ ಭಾಗವಹಿಸಿ 9ನೇ ತಾರೀಖಿನಂದು ಅಭಿಮಾನೋತ್ಸವಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಬರುವುದಾಗಿ ತಿಳಿಸಿದ್ದಾರೆ ಎಂದು ಎಂ ಎಸ್ ಸಿದ್ದಪ್ಪ. ತೆಕ್ಕಲಕೋಟೆ 92 ಸಿರುಗುಪ್ಪ ವಿಧಾನಸಭಾ ಕ್ಷೇತ್ರ ತಿಳಿಸಿದ್ದಾರೆ.

# ಪರಿಪೂರ್ಣ ಮಾನವನಾಗುವುದೇ 'ಷಟಸ್ಥಲ': ಭಾರತಿ ಹುಳಗೋಳ

**ಕಲಬುರಗಿ, ಮೇ. 4:** ಷಟಸ್ಥಲಗಳು ಮಾನವನ ಉನ್ನತಿಗೆ ಕ್ರಮಿಸುವ ಆರು ಹಂತಗಳಾಗಿವೆ. ಪರಿಪೂರ್ಣ ಮಾನವನಾಗುವುದೇ ಷಟ್‌ಸ್ಥಳ ಎಂದು ಸರ್ಕಾರಿ ಐಟಿಐ ಕಾಲೇಜಿನ ತರಬೇತಿ ಅಧಿಕಾರಿ ಭಾರತಿ ಹುಳಗೋಳ ಹೇಳಿದರು.



ಇಲ್ಲಿನ ಜಯನಗರದ ಬಸವ ಸಮಿತಿ ಅನುಭವ ಮಂಟಪ, ಡಾ. ಬಿ.ಡಿ. ಜತ್ತಿ ವಚನ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದಲ್ಲಿ ಬಸವಾದಿ ಶರಣರ ಸ್ಮರಣಾರ್ಥ ಹಮ್ಮಿಕೊಂಡಿದ್ದ ಅರಿವಿನ ಮನೆ 890ನೇ ದತ್ತಿ ಕಾರ್ಯಕ್ರಮದಲ್ಲಿ 'ಷಟಸ್ಥಲ ಯಾತ್ರೆ ಮಾನವ ಪ್ರಜ್ಞೆಯ ಉನ್ನತಿಯ ಕಡೆಗೆ' ವಿಷಯದ ಕುರಿತು ಅವರು ಮಾತನಾಡಿದರು.

ಭಕ್ತಸ್ಥಲ ಜಾಗೃತಿಯ ಹಂತವಾಗಿದೆ. ಮಹೇಶ್ವರ ಸ್ಥಲ ಆಂತರಂಗಿಕ ಶುದ್ಧಿಯಾಗಿದೆ. ಪ್ರಸಾದಿ ಸ್ಥಲ ಅನುಗ್ರಹದ ಹಂತವಾಗಿದೆ. ಪ್ರಾಣಲಿಂಗಿ ಸ್ಥಲ ಅಸಾಧಾರಣವಾದುದನ್ನು ಬಯಸುತ್ತದೆ. ನಾವು ದೈವಿ ಸ್ವರೂಪ ಎಂಬ ಭಾವ ಬಲಿಯುತ್ತದೆ. ಅಂತರಂಗದಲ್ಲಿ ದೇವರಿದ್ದಾನೆ ಎಂಬ ಭಾವ ಗಟ್ಟಿಗೊಳ್ಳುವ ಹಂತವಾಗಿದೆ. ಶರಣ ಸ್ಥಲವೆಂದರೆ ಶರಣಾಗತಿಯ ಹಂತವಾಗಿದೆ. ಇದು ಅಹಂಕಾರ ತೊರೆದ ಹಂತವಾಗಿದೆ. ಐಕ್ಯಸ್ಥಲ ವೆಂದರೆ ಪ್ರತಿಯೊಂದರಲ್ಲಿ ದೇವರನ್ನು ಕಾಣುವ ಹಂತವಾಗಿದೆ ಎಂದು ವಿವರಿಸಿದರು.

ಒಟ್ಟಾರೆ ಷಟಸ್ಥಲವೆಂದರೆ ನಿರ್ಭೀತವಾಗಿ ಮಾನವನಾಗುವ ಮತ್ತು ದೇವನಾಗುವ ಹಂತಗಳೇ ಆಗಿವೆ. ಇವು ಕೇವಲ ಲಿಂಗಾಯತ ಧರ್ಮದ ಆಚರಣೆಗಳಲ್ಲ. ಪ್ರತಿಯೊಬ್ಬ ಮಾನವನು ಪಾಲಿಸಬೇಕಾದ ಆಚರಣೆಗಳಾಗಿವೆ ಎಂದು ನುಡಿದರು.

# ಕಲೆಯಲ್ಲೂ ಕಲಬುರಗಿ ಅತ್ಯಂತ ಶ್ರೀಮಂತ: ದತ್ತಾತ್ರೇಯ ಪಾಟೀಲ



**ಕಲಬುರಗಿ, ಮೇ. 4:** ಸಂಪತ್ತು ಎಂದರೆ ಕೇವಲ ಧನ–ಕನಕಗಳು ಕೋಟಿ ಕೋಟಿ ಆಸ್ತಿಗಳು ಮಾತ್ರವಲ್ಲ. ಯಾವ ದೇಶದಲ್ಲಿ ಕಲೆ, ಸಾಹಿತ್ಯ, ಸಂಗೀತ, ಶಿಲ್ಪಕಲೆ, ಚಿತ್ರಕಲೆ, ಅಭಿನಯ ಮತ್ತು ನೃತ್ಯ ಮುಂತಾದ ಕಲಾ ಸಂಪತ್ತಿ ಇರುತ್ತದೋ ಅದುವೇ ನಿಜವಾದ ಶ್ರೀಮಂತ ದೇಶ ಎನಿಸಿಕೊಳ್ಳುತ್ತದೆ. ಈ ದಿಸೆಯಲ್ಲಿ ನಮ್ಮ ಜಿಲ್ಲೆಯು ವ್ಯಾಪಾರ–ವಹಿವಾಟುಗಳು, ಕೈಗಾರಿಕೋದ್ಯಮಿಗಳಿಂದ ಅಷ್ಟೇ ಮುಂದುವರಿದಿಲ್ಲ. ಕಲೆಯಲ್ಲೂ ಅತ್ಯಂತ ಶ್ರೀಮಂತವಾಗಿರುವುದು ಅತ್ಯಂತ ಹೆಮ್ಮೆಯ ಸಂಗತಿಯಘಿದೆ ಎಂದು ಮಾಜಿ ಶಾಸಕ ದತ್ತಾತ್ರೇಯ ಪಾಟೀಲ ರೇವೂರ ಹೇಳಿದರು.

ನಗರದ ಕೆಕೆಸಿಸಿಐನ ಎಸ್. ಎಸ್. ಪಾಟೀಲ ಸಭಾಂಗಣದಲ್ಲಿ ಚೈತನ್ಯಮಯಿ ಟ್ರಸ್ಟ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕೆಕೆಸಿಸಿಐ, ಹಂಪಿ ಕನ್ನಡ ವಿಶ್ವವಿದ್ಯಾಲಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಚೈತನ್ಯಮಯಿ ಆರ್ಟ್ ಗ್ಯಾಲರಿಯ 23ನೇ ವಾರ್ಷಿಕ ಕಲಾ ಮಹೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಹಿಂದೆ ಮುಂಬೈನಂಥ ಮಹಾನಗರಗಳಲ್ಲಿ ಮಾತ್ರ ದೊಡ್ಡ ಆರ್ಟ್ ಗ್ಯಾಲರಿಗಳಿದ್ದವು. ಡಾ.ಎ.ಎಸ್. ಪಾಟೀಲ ಅವರು ಕಲಬುರಗಿಯಲ್ಲೂ ಇಂಥ ಆರ್ಟ್ ಗ್ಯಾಲರಿ ಮಾಡಿ ನಮ್ಮ ಭಾಗಕ್ಕೆ ಕೀರ್ತಿ ತಂದಿದ್ದಾರೆ. ಖ್ಯಾತ ಕಲಾವಿದರಾದ ಡಾ.ಎಸ್. ಎಂ.ಪಂಡಿತ, ಪ್ರೊ.ಜೆ.ಎಸ್. ಖಂಡೇರಾವ ಅವರ ಸಾಲಿನಲ್ಲಿ ಡಾ.ಎ.ಎಸ್. ಪಾಟೀಲ ಕೂಡ ನಿಲ್ಲುತ್ತಾರೆ ಎಂದರು.

ನಟ ನಾಗರಾಜ್ ಕುಂಬಾರ ನಿರ್ದೇಶನದ ಡಾ.ಎ.ಎಸ್. ಪಾಟೀಲ ಅವರ 'ಚೈತನ್ಯ ಕಲಾ ದಾಸೋಹ' ಸಾಕ್ಷ್ಯಚಿತ್ರವನ್ನು ಬಿಡುಗಡೆಗೊಳಿಸಿದ ಡಾ.ಎಸ್.ಎಸ್. ಗುಬ್ಬಿ, ಕಲೆಯು ನಮ್ಮ ಸಂಸ್ಕೃತಿ, ಸಂಸ್ಕಾರ, ಪರಂಪರೆ ಬಿಂಬಿಸುತ್ತದೆ. ನೂರು ಪುಟಗಳಲ್ಲಿನ ವಿಷಯಗಳನ್ನು ಒಂದೇ ಕ್ಯಾನ್ವಾಸ್‌ನಲ್ಲಿ ಹೇಳಬಹುದು. ಚೈತನ್ಯಮಯಿ ಆರ್ಟ್ ಗ್ಯಾಲರಿಗೆ ಹೋದರೆ ಅಲ್ಲಿನ ಕಲಾಕೃತಿಗಳಲ್ಲಿ ಆಧ್ಯಾತ್ಮಿಕ ತೃಪ್ತಿ ಸಿಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕಲ್ಯಾಣ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಶರಣಬಸಪ್ಪ ಎಂ.ಪಪ್ಪಾ ಮಾತನಾಡಿ, ನಮ್ಮ ಸಂಸ್ಥೆಯು ಕಲೆ ಸೇರಿದಂತೆ ವ್ಯಾಪಾರಿಗಳಿಗೆ ಪ್ರಾಮುಖ್ಯತೆ ನೀಡುತ್ತಿದೆ. ಚೈತನ್ಯಮಯಿ ಆರ್ಟ್ ಗ್ಯಾಲರಿಯೊಂದಿಗೆ ಕೆಕೆಸಿಸಿಐ ಎಂಒಯು ಮಾಡಿಕೊಂಡಿದ್ದು, ಅಗತ್ಯ ಸಹಕಾರ ನೀಡಲಾಗುವುದು. ಸರ್ಕಾರ ಮಾಡುವಂಥ ಕೆಲಸಗಳನ್ನೂ ಸಂಸ್ಥೆ ಮಾಡುತ್ತಿದೆ ಎಂದು ತಿಳಿಸಿದರು.

# ಕಾಂಗ್ರೆಸ್ ಸಂಘಟನೆ ಬಲಪಡಿಸುವ ಅಗತ್ಯವಿದೆ: ರಾಜಶೇಖರ ಪಾಟೀಲ್



**ಬೀದರ್, ಮೇ. 4:** ಮುಂಬರುವ ಸ್ಥಳೀಯ ಸಂಸ್ಥೆಯ ಚುನಾವಣೆಗಳೂ ಸೇರಿದಂತೆ ಎಲ್ಲ ಚುನಾವಣೆಗಳನ್ನು ಗಮನದಲ್ಲಿ ಇಟ್ಟುಕೊಂಡು ಇಂದಿನಿಂದಲೇ ಕಾರ್ಯಕರ್ತರು, ಮುಖಂಡರು ಬೂತ್ ಮಟ್ಟದಿಂದ ಕಾಂಗ್ರೆಸ್ ಸಂಟನೆಗೆ ಬಲಪಡಿಸುವಲ್ಲಿ ತೊಡಗಿಸಿಕೊಳ್ಳಬೇಕು ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.

ಜಿಲ್ಲೆಯ ಹಳ್ಳಿಖೇಡ(ಬಿ) ಪಟ್ಟಣದಲ್ಲಿ ಜಿ.ಎಸ್.ತೀರ್ಥ ಕಲ್ಯಾಣ ಮಂಟಪದಲ್ಲಿ ಬ್ಲಾಕ್ ಕಾಂಗ್ರೆಸ್ ಸಮಿತಿ ಆಯೋಜಿಸಿದ್ದ ಹಳ್ಳಿಖೇಡ(ಬಿ) ಜಿಲ್ಲಾ ಪಂಚಾಯಿತಿ ವೃತ್ತದ ಕಾರ್ಯಕರ್ತರ ಬೃಹತ್ ಸಮಾವೇಶ ಉದ್ಘಾಟಿಸಿ ಮಾತನಾಡಿದ ಅವರು, ಕಳೆದುಹೋದ ಸಮಯ ಮರೆತು ಮುಂಬರುವ ಎಲ್ಲ ಹಂತದ ಚುನಾವಣೆಗಳಲ್ಲಿ ಪದ ಅಭ್ಯರ್ಥಿಗಳನ್ನು ಗೆಲ್ಲಿಸಿಕೊಂಡು ಬರುವ ನಿಟ್ಟಿನಲ್ಲಿ ಕಾರ್ಯಕರ್ತರು, ಮುಖಂಡರು ತಮ್ಮ ತಮ್ಮಲ್ಲಿರುವ ಸಣ್ಣಪುಟ್ಟ ಭಿನ್ನಾಭಿಪ್ರಾಯ ಬದಿಗೊತ್ತಿ ಸಂಘಟನೆಗೆ ಶ್ರಮಿಸಬೇಕೆಂದು ಕರೆ ನೀಡಿದರು.

ನಾನು ಶಾಸಕನಾಗಿದ್ದಾಗ ಈ ಭಾಗ ಮತ್ತು ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದೇನೆ. ಇದೀಗ ಅಧಿಕಾರದಲ್ಲಿ ಇಲ್ಲದಿದ್ದರೂ ಜನರ ಮಧ್ಯೆ ಸದಾ ಇದ್ದು ಸೇವೆ ಸಲ್ಲಿಸುವ ಕೆಲಸ ಮುಂದುವರಿಸಿದ್ದೇನೆ. ರಾಜ್ಯ ಸರ್ಕಾರದ ಜನಪರ ಯೋಜನೆ, ಪಂಚ ಗ್ಯಾರಂಟಿಗಳು ಬಡ ಜನತೆಗೆ ಸಾಕಷ್ಟು ಉಪಯುಕ್ತವಾಗಿವೆ ಎಂದರು.

ಕ್ಷೇತ್ರದ ಜನತೆಗೆ ನಿಜ ಯಾವುದು, ಸುಳ್ಳು ಯಾವುದು ಎಂಬುದು ಗೊತ್ತಿದೆ. ಬರುವ ದಿನಗಳು ಉತ್ತಮವಾಗಿದ್ದು, ಈಗಿನಿಂದಲೇ ಕಾರ್ಯಕರ್ತರು ಹುಮ್ಮಸ್ಸಿನಿಂದ ಸರ್ಕಾರದ ಯೋಜನೆಗಳ ಲಾಭ ಜನತೆಗೆ ತಲುಪಿಸುವ ಮೂಲಕ ವ್ಯಾಪಕ ಪ್ರಚಾರ ನಡೆಸಿ ಸಂಟನೆಗೆ ಒತ್ತು ನೀಡಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯರಾದ ಡಾ.ಚಂದ್ರಶೇಖರ ಪಾಟೀಲ್, ಭೀಮರಾವ ಪಾಟೀಲ್, ಮಾಜಿ ಎಂಎಲ್‌ಸಿ ಅರವಿಂದ ಅರಳಿ, ಕೆಪಿಸಿಸಿ ಸಹಕಾರ ವಿಭಾಗದ ಅಧ್ಯ ಧನರಾಜ ತಾಳಂಪಳ್ಳಿ, ಮುಖಂಡರಾದ ಗುಂಡುರೆಡ್ಡಿ ಕಮಲಾಪುರೆ, ಕೇಶವರಾವ ತಳಟಕರ, ರಮೇಶ ಡಾಕುಳಗಿ, ಮಲ್ಲಿಕಾರ್ಜುನ ಪ್ರಭಾ ಇತರರು ಮಾತನಾಡಿ, ಕ್ಷೇತ್ರದ ಅಭಿವೃದ್ಧಿಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಸಾಕಷ್ಟು ಶ್ರಮಿಸಿದ್ದಾರೆ. ಮುಂದೆ ಅವರು ಅಧಿಕಾರಕ್ಕೆ ಬರುವುದು ಶತಸಿದ್ಧ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪದ ಪ್ರತಿಯೊಬ್ಬ ಕಾರ್ಯಕರ್ತ ಕ್ಷೇತ್ರದ ಪ್ರತಿ ಬೂತ್ ಮಟ್ಟದಲ್ಲಿ ಕಾಂಗ್ರೆಸ್ ಸಂಘಟನೆಯನ್ನು ಇನ್ನಷ್ಟು ಬಲಪಡಿಸಲು ಮುಂದಾಗಬೇಕು. ಕಾರ್ಯಕರ್ತರನ್ನು ಸಕ್ರಿಯಗೊಳಿಸಿ ಪದ ತತ್ವ ಸಿದ್ಧಾಂತ ಹಾಗೂ ಸರ್ಕಾರದ ಯೋಜನೆಗಳನ್ನು ಜನರಿಗೆ ಪರಿಣಾಮಕಾರಿಯಾಗಿ ತಲುಪಿಸಬೇಕು ಎಂದು ಕೋರಿದರು.

ಪ್ರಮುಖರಾದ ಅಭಿಷೇಕ ಪಾಟೀಲ್, ದಿಲೀಪಕುಮಾರ ತಾಳಂಪಳ್ಳಿ, ಮಹಾಂತಯ್ಯ ತೀರ್ಥ, ಲಕ್ಷ್ಮಣರಾವ್ ಬುಳ್ಳಾ, ರಾಜಶೇಖರ ಪಾಟೀಲ್ ಮದರಗಾಂವ, ಶಿವರಾಜ ಗಂಗಶೆಟ್ಟಿ, ಇಸೂಫ್ ಸೌದಾಗರ್, ನಾಗರಾಜ ಹಿಬಾರೆ, ಆರಿಫ್ ಬಾವಗಿ, ರಜಾಕ್, ವಿಜಯಕುಮಾರ ಶಹಾಪುರಕರ್, ಅಫ್ಸರ್ ಮಿಯಾ, ಓಂಕಾರ ತುಂಬಾ ಇತರರಿದ್ದರು.

# ಡಾ. ರಾಜಕುಮಾರ್ ಜೀವನವೇ ಒಂದು ವಿಶ್ವವಿದ್ಯಾಲಯ: ಬಳ್ಳಾರಿ ಮೇಯರ್ ಗಾದೆಪ್ಪ




**ಬಳ್ಳಾರಿ. ಮೇ. 04:** ಡಾ. ರಾಜಕುಮಾರ್ ಚಲನಚಿತ್ರಗಳನ್ನು ನೋಡುವ ಮೂಲಕ ಅವರ ಜೀವನದ ಪಾಠವನ್ನು ಕಲಿತುಕೊಂಡಿದ್ದೇವೆ ನಾನು ಡಾ. ರಾಜಕುಮಾರ್ ಅವರ ದೊಡ್ಡ ಅಭಿಮಾನಿ, ಅವರ ಜೀವನವೇ ಒಂದು ವಿಶ್ವವಿದ್ಯಾಲಯ ಇದ್ದಂತೆ ಅವರನ್ನು ನೋಡಿ ತಿಳಿದುಕೊಂಡು ಕಲಿಯಬೇಕಾದದ್ದು ಬಹಳಷ್ಟು ಇದೆ ಎಂದು ಬಳ್ಳಾರಿ ಮಹಾನಗರ ಪಾಲಿಕೆ ಮೇಯರ್ ಪಿ ಗಾದೆಪ್ಪ ಹೇಳಿದರು.

ಡಾ. ರಾಜಕುಮಾರ್ ರಸ್ತೆಯ ಕನ್ನಡ ಭವನದಲ್ಲಿ ಹಮ್ಮಿಕೊಂಡ ಡಾ. ರಾಜಕುಮಾರ್ ರವರ 98ನೇ ಜಯಂತಿ ಕಾರ್ಯಕ್ರಮದಲ್ಲಿ ವೀರ ಕನ್ನಡಿಗ ಪ್ರಶಸ್ತಿ ಸ್ವೀಕರಿಸಿ, ಗಾಂಧಿನಗರ ಸರ್ಕಲ್ ಇನ್ಸ್ಪೆಕ್ಟರ್ ರವಿ ಚಂದನ್ ಟ ನಾನು ಡಾ.ರಾಜ್ ಅಭಿಮಾನಿ ಅವರ ಜೀವನ ಚರಿತ್ರವನ್ನು ಅವರ ಚಿತ್ರಗಳ ಮುಖಾಂತರ ನೋಡಿ ಇವತ್ತು ಇಲಾಖೆಯಲ್ಲಿ ಉತ್ತಮ ವ್ಯಕ್ತಿಯಾಗಿ ಸೇವೆ ಸಲ್ಲಿಸುತ್ತಿದ್ದೇನೆ ಎಲ್ಲರೂ ಡಾ ರಾಜ್ ಅವರ ಚಲನಚಿತ್ರಗಳಲ್ಲಿನ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಕರವೇ ಕಾವಲುಪಡೆಯ ರಾಜ್ಯಾಧ್ಯಕ್ಷ ಸುರೇಶ್ ಮಾತನಾಡಿ, ಡಾ.ರಾಜಕುಮಾರ್ ಒಬ್ಬ ಚಿತ್ರನಟ ಮಾತ್ರ ಆಗಿರದೆ ಅವರು ಕನ್ನಡದ ಆಸ್ಮಿತೆಯಾಗಿ ಗುರುತಿಸಿಕೊಂಡಿದ್ದರು ಚಿತ್ರರಂಗದಲ್ಲಿ ಎಲ್ಲಾ ರೀತಿಯ ಪಾತ್ರಗಳನ್ನು ಮಾಡುತ್ತಾ ಆಡುಮುಟ್ಟದ ಸೊಪ್ಪಿಲ್ಲ ಡಾ.ರಾಜ್ ಅಭಿನಯಿಸಿದ ಪಾತ್ರವಿಲ್ಲ ಎಂಬಂತೆ ಇಡೀ ಕನ್ನಡ ಚಿತ್ರರಂಗಕ್ಕೆ ಒಂದು ಮಹಾ ವಿಶ್ವವಿದ್ಯಾಲಯವಾಗಿದ್ದರು ಎಂದರು.

# ಏಳು ತಿಂಗಳ ನಂತರ 2025ರ ದಸರಾ ಖರ್ಚು-ವೆಚ್ಚದ ಮಾಹಿತಿ ಬಿಡುಗಡೆ ಮಾಡಿದ ಜಿಲ್ಲಾಡಳಿತ



**ಮೈಸೂರು, ಮೇ 4:** 2025ರಲ್ಲಿ ವಿಜೃಂಭಣೆಯಿಂದ ನಡೆಸಲಾದ ವಿಶ್ವವಿಖ್ಯಾತ ನಾಡಹಬ್ಬ ಮೈಸೂರು ದಸರಾ ಮಹೋತ್ಸವಕ್ಕೆ ಬರೋಬ್ಬರಿ 42.95 ಕೋಟಿ ರೂ. ಖರ್ಚು ಮಾಡಲಾಗಿದೆ. 2024ರ ಉತ್ಸವಕ್ಕೆ 41.69 ಕೋಟಿ ರೂ. ಖರ್ಚಾಗಿತ್ತು. ಹೋದ ವರ್ಷ ಸೆ.22ರಿಂದ ಅ.2ರವರೆಗೆ ಅಂದರೆ 11 ದಿನಗಳವರೆಗೆ ದಸರಾ ನಡೆದಿತ್ತು. ಉತ್ಸವಕ್ಕೆ ಅಂತರರಾಷ್ಟ್ರೀಯ 'ಬುಕರ್' ಪ್ರಶಸ್ತಿ ಪುರಸ್ಕೃತ ಸಾಹಿತಿ ಬಾನು ಮುಷ್ತಾಕ್ ಚಾಲನೆ ನೀಡಿದ್ದರು. 'ಗಾಂಧಿ ಜಯಂತಿ'ಯ ದಿನವಾದ ಅ.2ರಂದು ಜಂಬೂಸವಾರಿ ಅದ್ದೂರಿಯಾಗಿ ನಡೆದಿತ್ತು. ಇದಾಗಿ, ಏಳು ತಿಂಗಳ ನಂತರ ಜಿಲ್ಲಾಡಳಿತ ಖರ್ಚು–ವೆಚ್ಚದ ಮಾಹಿತಿಯನ್ನು ಮಾಧ್ಯಮಕ್ಕೆ ಸೋಮವಾರ ಬಿಡುಗಡೆ ಮಾಡಿದೆ.

ನಾಡಹಬ್ಬವನ್ನು ವಿಜೃಂಭಣೆಯಿಂದ ನಡೆಸಲಾಗುವುದು ಎಂದು ಮೈಸೂರಿನವರೇ ಆದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಘೋಷಿಸಿದ್ದರು. ಅದರಂತೆ, ಅನುದಾನವನ್ನೂ ಒದಗಿಸಿದ್ದರು. ಸರ್ಕಾರದಿಂದ 30 ಕೋಟಿ ರೂ., ಮೈಸೂರು ಅಭಿವೃದ್ಧಿ ಪ್ರಾಧಿಕಾರ (ಎಂಡಿಎ)ದಿಂದ 10 ಕೋಟಿ ರೂ., ಪ್ರಾಯೋಜಕತ್ವದಿಂದ ಬಂದ ಮೊತ್ತ 1.81 ಕೋಟಿ ಹಾಗೂ 'ಗೋಲ್ಡ್‌ಕಾರ್ಡ್' ಸೇರಿದಂತೆ ವಿವಿಧ ಟಿಕೆಟ್ ಮಾರಾಟದಿಂದ 3.21 ಕೋಟಿ ರೂ. ಸೇರಿದಂತೆ 45.03 ಕೋಟಿ ರೂ. ಅನುದಾದ ಸ್ವೀಕೃತವಾಗಿತ್ತು. ಇದರಲ್ಲಿ 42.95 ಕೋಟಿ ರೂ. ವೆಚ್ಚವಾಗಿದೆ ಎಂದು ಜಿಲ್ಲಾಡಳಿತ ಮಾಹಿತಿ ನೀಡಿದೆ. ಹೊರವಲಯದ ಉತ್ತನಹಳ್ಳಿ ಬಳಿ ನಡೆಸಲಾದ, ಖ್ಯಾತ ಹಾಗೂ ಬಹುಭಾಷಾ ಹಿನ್ನೆಲೆ ಗಾಯಕರನ್ನು ಆಹ್ವಾನಿಸಲಾಗಿದ್ದ 'ಯುವ ದಸರಾ' ಕಾರ್ಯಕ್ರಮಕ್ಕೆಂದೇ ಬರೋಬ್ಬರಿ ರೂ.15.94 ಕೋಟಿ ಖರ್ಚು ಮಾಡಲಾಗಿದೆ! ವೈಮಾನಿಕ ಪ್ರದರ್ಶನ (ಏರ್‌ಶೋ) 55 ಲಕ್ಷ ರೂ. ವಿನಿಯೋಗಿಸಲಾಗಿದೆ. ಒಟ್ಟು 37,27,185 ರೂ. ಮೊತ್ತವನ್ನು ಐಟಿ + ಜಿಎಸ್‌ಟಿ ಪಾವತಿಸಲಾಗಿದೆ



ಪಶ್ಚಿಮ ಬಂಗಾಳ ಮತ್ತು ಅಸ್ಸಾಂ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಗೆಲುವನ್ನು ಸೋಮವಾರ ಬೆಂಗಳೂರಿನಲ್ಲಿ ಬಿಜೆಪಿ ನಾಯಕರು ಆಚರಿಸಿದರು.

# ಕಾಡಿಗೆ ಸಿಂಹ ರಾಜವಾದರೆ, ದೇಶಕ್ಕೆ ಬಿಜೆಪಿಯೇ ರಾಜ: ಭಗವಂತ ಖೂಬಾ

**ಬೀದರ್, ಮೇ.4–**ಪಂಚರಾಜ್ಯಗಳ ಚುನಾವಣೆಯಲ್ಲಿ ಜನತೆಯೂ ಭಾರತಿಯ ಜನತಾ ಪಕ್ಷಕ್ಕೆ ಬೆಂಬಲಿಸಿ, ಮೋದಿಜೀಯವರ ಮೇಲೆ ವಿಶ್ವಾಸವಿಟ್ಟು, ಪಾಕಿಸ್ತಾನ, ಬಾಂಗ್ಲಾ ದೇಶಿಯವರಿಗೆ ಸಹಕರಿಸುತ್ತಿದ್ದ ದೇಶದ್ರೋಹಿಗಳಿಗೆ ಅಧಿಕಾರದಿಂದ ದೂರವಿಟ್ಟು ತಕ್ಕ ಪಾಠ ಕಲಿಸಿದ್ದಾರೆ, 33% ಮಹಿಳಾ ಮೀಸಲಾತಿ ವಿರೋಧಿಸಿದ್ದ ಕಾಂಗ್ರೆಸ್ ಹಾಗೂ ಮಿತ್ರಪಕ್ಷಗಳಿಗೆ ಜನರು ಬುದ್ಧಿ ಕಲಿಸಿದ್ದಾರೆ,

ಪಶ್ಚಿಮ ಬಂಗಾಳ, ಪುದುಚೇರಿ, ಆಸ್ಸಾಂ ರಾಜ್ಯಗಳಲ್ಲಿ ಪೂರ್ಣ ಬಹುಮತ ಪಡೆಯುವುದರ ಜೊತೆಗೆ, ಕೆರಳ ಮತ್ತು ತಮಿಳುನಾಡಿನಲ್ಲೂ ನಮ್ಮ ಪಕ್ಷ ನೀರಿಕ್ಷೆಗೂ ಮೀರಿ ಜನಬೆಂಬಲ ಪಡೆದಿದೆ. ಮುಂದಿನ ದಿನಗಳಲ್ಲಿ ಈ ರಾಜ್ಯದಲ್ಲೂ ಇನ್ನು ಹೆಚ್ಚಿನ ಸ್ಥಾನಗಳು ಪಡೆದುಕೊಳ್ಳುತ್ತೇವೆ, ಒಟ್ಟಿನಲ್ಲಿ ಬಿಜೆಪಿ ಪಕ್ಷ ಏಕಾಂಗಿಯಾಗಿ ದೇಶದೆಲ್ಲೆಡೆ ತನ್ನ ಸಾಮರ್ಥ್ಯ ಸಾಬಿತುಪಡಿಸಿದೆ, ಜನತೆಯ ಬೆಂಬಲ ನಮ್ಮ ಪಕ್ಷದ ಜೊತೆಯಿದೆ ಎಂಬುದು ಮತ್ತೊಮ್ಮೆ ಸಾಬಿತಾಗಿದ್ದು, ಜನರು ಕಾಂಗ್ರೆಸ್ ಪಕ್ಷಕ್ಕೆ ಸಂಪೂರ್ಣವಾಗಿ ಮರೆತಿರುವುದು ಈ ಪಂಚರಾಜ್ಯಗಳ ಫಲಿತಾಂಶದಿಂದ ಗೊತ್ತಾಗುತ್ತಿದೆ ಎಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ತಿಳಿಸಿದ್ದಾರೆ.

ದೇಶದ ಸುರಕ್ಷತೆಗೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಗೆಲುವು ಅತಿ ಅಗತ್ಯವಾಗಿತ್ತು, ಬಾಂಗ್ಲಾದೇಶಿಯರಿಂದ, ರೋಹಿಂಗ್ಯಾಗಳಿಂದ ಅಮಾಯಕ ಪಶ್ಚಿಮಬಂಗಾಳಿಯರನ್ನು ರಕ್ಷಿಸಬೇಕಾಗಿತ್ತು, ಈ ನಿಟ್ಟಿನಲ್ಲಿ ಈ ಬಾರಿ ಪಶ್ಚಿಮ ಬಂಗಾಳದಲ್ಲಿ ನಮ್ಮ ಪಕ್ಷ ಗೆದ್ದಿರುವುದು ಹೆಮ್ಮೆಯ ಸಂಗತಿಯಾಗಿದೆ ಹಾಗೂ ಪಕ್ಷದ ಸಂಸ್ಥಾಪಕರಲ್ಲಿ ಒಬ್ಬರಾದ ಡಾ.ಶ್ಯಾಮಪ್ರಸಾದ ಮುಖರ್ಜಿ ಯವರು ಹುಟ್ಟಿ ಬೆಳೆದ ನಾಡಲ್ಲಿ ಪಕ್ಷವು ಅಧಿಕಾರಕ್ಕೆ ಬಂದಿದ್ದು ಅತ್ಯಂತ ಸಂತಸದ ವಿಷಯವಾಗಿದೆ.

ರಾಜ್ಯದ ಉಪಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವು ರಾಜ್ಯದ ಆಡಳಿತ ಮರೆತು, ಸ್ವತಃ ಮುಖ್ಯಮಂತ್ರಿ ಮತ್ತು ಸಂಪೂರ್ಣ ಕ್ಯಾಬಿನೇಟ್ ಸಚಿವರು ಪ್ರಚಾರ ಮಾಡಿದ್ದರು ಜೊತೆಗೆ ಕೋಟಿ ಕೋಟಿ ಹಣ ಸುರಿದು ಈ ಎರಡು ಸ್ಥಾನಗಳು ಗೆದ್ದಿದೆ, ಇದು ರಾಜ್ಯದ ಜನರಲ್ಲಿ ಕಾಂಗ್ರೆಸ್ ಪಕ್ಷದ ಬಗ್ಗೆ ಇರುವ ತಿರಸ್ಕಾರ ಭಾವನೆ ಮೂಡಿರುವುದು ಈ ಉಪ ಚುನಾವಣೆಯಿಂದ ಸ್ಪಷ್ಟವಾಗಿದೆ, ಇದು 2028ರಲ್ಲಿ ಕರ್ನಾಟಕದಲ್ಲಿ ಬಿಜೆಪಿ ಪಕ್ಷ ಅಧಿಕಾರಕ್ಕೆ ಬರಲಿದೆ ಎನ್ನುವ ಮುನ್ಸೂಚನೆ ನೀಡುತ್ತಿವೆ ಎಂದು ಖೂಬಾ ಅಭಿಪ್ರಾಯ ಪಟ್ಟಿದ್ದಾರೆ.

ಪಂಚ ರಾಜ್ಯಗಳ ಚುನಾವಣೆಯಲ್ಲಿ ಅಭೂತಪೂರ್ವ ಸಾಧನೆ ಮಾಡಿರುವ ಪ್ರಧಾನಿ ನರೇಂದ್ರ ಮೋದಿ ಯವರಿಗೆ, ಗೃಹ ಸಚಿವ ಅಮಿತ್ ಶಾ, ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬೀನ್ ಅವರಿಗೆ ಮತ್ತು ಎಲ್ಲಾ ಸಂಘಟನೆಯ ಹಿರಿಯರಿಗೆ, ಕಾರ್ಯಕರ್ತರಿಗೆ ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಅಭಿನಂದನೆ ತಿಳಿಸಿದ್ದಾರೆ.



## ಶಾಸಕ ಜೀವರಾಜ್ ಸೇರಿ ಮೂವರ ವಿರುದ್ಧ ಎಫ್ಐಆರ್

# ಶೃಂಗೇರಿ ವಿಧಾನಸಭಾ ಕ್ಷೇತ್ರದ ಮರುಎಣಿಕೆಯಲ್ಲಿ ಅಂಚೆಮತ ತಿದ್ದಿದ ಆರೋಪ

**ಬೆಂಗಳೂರು, ಮೇ.4:** ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆಮತಗಳ ಮರು ಎಣಿಕೆ ವೇಳೆ ಮತಗಳನ್ನು ತಿದ್ದಿದ್ದಾರೆಂಬ ಆರೋಪದ ಹಿನ್ನೆಲೆ ಯಲ್ಲಿ ಶಾಸಕ ಡಿ.ಎನ್.ಜೀವರಾಜ್ ಸೇರಿ ಮೂವರ ವಿರುದ್ಧ ಎಫ್ಐಆರ್ ದಾಖಲಾಗಿದೆ.

ಕಾಂಗ್ರೆಸ್ ಅಭ್ಯರ್ಥಿ ಟಿ.ಡಿ.ರಾಜೇಗೌಡ ಅವರ ಅಂಚೆ ಮತದ ಏಜೆಂಟ್, ವಕೀಲರು ಹಾಗೂ ಕಾಂಗ್ರೆಸ್ ಮುಖಂಡರಾದ ಸುಧೀರ್ ಕುಮಾರ್ ಮುರೊಳ್ಳಿ ಅವರು ನೀಡಿದ ದೂರಿನ ಮೇರೆಗೆ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆಯಲ್ಲಿ ಡಿ.ಎನ್.ಜೀವರಾಜ್, ಅಂದಿನ ಜಿಲ್ಲಾಧಿಕಾರಿ ರಮೇಶ ಹಾಗೂ ಚುನಾವಣಾಧಿಕಾರಿ ವೇದಮೂರ್ತಿ ಅವರ ವಿರುದ್ಧ ಜನಪ್ರತಿನಿಧಿ ಕಾಯ್ದೆ 143, 465, 468, 471, 170 ಬಿ, 149 ಮತ್ತು 136 ಸೆಕ್ಷನ್ ಅಡಿ ಎಫ್ಐಆರ್ ದಾಖಲಿಸಿಕೊಳ್ಳಲಾಗಿದೆ.


2023 ರ ಮೇ 13 ರಂದು ನಡೆದ ಮತ ಎಣಿಕೆ ಸಂದರ್ಭದಲ್ಲಿ ಟಿ.ಡಿ.ರಾಜೇಗೌಡ ಅವರಿಗೆ ಸಂದಾಯವಾಗಿದ್ದ ಮತಗಳನ್ನು ಮಾತ್ರ ಒಂದು ಕಟ್ಟಿನ 170 ಮತಗಳನ್ನು ತಿದ್ದುಪಡಿ ಮಾಡಿದ್ದಾರೆಂದು ಸುಧೀರ್ ಕುಮಾರ್ ಮುರೊಳ್ಳಿ ತಮ ದೂರಿನಲ್ಲಿ ಆರೋಪಿಸಿದ್ದರು. ಮತ ಎಣಿಕೆ ನಂತರ ಅಂದಿನ ಚುನಾವಣಾಧಿಕಾರಿ ವೇದಮೂರ್ತಿ ಅಭ್ಯರ್ಥಿ ಡಿ.ಎನ್.ಜೀವರಾಜ್ ಹಾಗೂ ಜಿಲ್ಲಾಧಿಕಾರಿ ರಮೇಶ ಹಾಗೂ ಇತರರು ಸಂಚು ರೂಪಿಸಿ ಪೆಟ್ಟಿಗೆಗಳ ಸೀಲುಗಳನ್ನು ತೆಗೆದು ಅಕ್ರಮ ಎಸಗಿರುವುದರಿಂದ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

ಇದೇ ರೀತಿ ಅಕ್ರಮ ಎಸಗಿರುವ ಸಂಚಿನ ಬಗ್ಗೆ ಸ್ಟ್ರಾಂಗ್ ರೂಂ ಬಳಿಯಲ್ಲಿ 2026 ರ ಮೇ 2 ರಂದು ಬೆಳಿಗ್ಗೆ 7 ಗಂಟೆಗೆ ಮತ ಎಣಿಕೆ ಸಂದರ್ಭದಲ್ಲಿ ಆಕ್ಷೇಪಣೆ ವ್ಯಕ್ತಪಡಿಸಿದ್ದೆವು. 257 ಬ್ಯಾಲೆಟ್‌ಗಳನ್ನು 2023 ರ ಮೇ 13 ರಂದು ಮತ ಎಣಿಕೆ ನಂತರವೇ ತಿದ್ದಿರುವುದು ಮೇಲ್ನೋಟಕ್ಕೆ ಗೋಚರಿಸುತ್ತದೆ ಎಂದು ದೂರಿನಲ್ಲಿ ಉಲ್ಲೇಖಿಸಿದ್ದರು.

ಚುನಾವಣಾ ಪ್ರಕ್ರಿಯೆ ನಿರ್ಣಯ ಪುಸ್ತಕದಲ್ಲಿ ಬರೆದು ಎಲ್ಲರೂ ಒಪ್ಪಿ ಸಹಿ ಮಾಡಿರುವ ಸಂಗತಿಗಳೇ ಈಗ ವ್ಯತ್ಯಯವಾಗಿರುವುದನ್ನು ನೋಡಿದಲ್ಲಿ ಅಕ್ರಮ ಕೂಟ ಕಟ್ಟಿಕೊಂಡು ಒಳಸಂಚು ರೂಪಿಸಿ ಚುನಾವಣಾ ಅಕ್ರಮಗಳ ಮೂಲಕ ಬ್ಯಾಲೆಟ್‌ಗಳನ್ನು ವೈಯಕ್ತಿಕ ಲಾಭಕ್ಕಾಗಿ ತಿದ್ದಿದ್ದಾರೆಂದು ದೂರಿದ್ದಾರೆ.

ಈ ದೂರು ದಾಖಲಿಸಿಕೊಂಡಿದ್ದ ಚಿಕ್ಕಮಗಳೂರು ನಗರ ಪೊಲೀಸ್ ಠಾಣೆ ಇನ್‌ಸ್ಪೆಕ್ಟರ್ ಅವರು ಬಿಜೆಪಿ ಅಭ್ಯರ್ಥಿ ಜೀವರಾಜ್, ವೇದಮೂರ್ತಿ ಹಾಗೂ ರಮೇಶ್ ಅವರುಗಳ ವಿರುದ್ಧ ಎಫ್ಐಆರ್ ದಾಖಲು ಮಾಡಿದ್ದಾರೆ.

## ಎಫ್.ಐ.ಆರ್ ಪ್ರಶ್ನಿಸಿ ಹೈಕೋರ್ಟ್ ಮೊರೆಹೋದ ಡಿ.ಎನ್. ಜೀವರಾಜ್




**ಚಿಕ್ಕಮಗಳೂರು, ಮೇ4:** ಅಂಚೆ ಮತಗಳ ಮರು ಎಣಿಕೆಯಲ್ಲಿ ಗೆಲುವು ಸಾಧಿಸಿದ ಬೆನ್ನಿಗೇ ಮತಗಳನ್ನು ತಿರುಚಿದ ಆರೋಪದ ಕುರಿತು ದಾಖಲಾಗಿರುವ ಕ್ರಿಮಿನಲ್ ಪ್ರಕರಣ ರದ್ದತಿ ಕೋರಿ ಬಿಜೆಪಿಯ ಶೃಂಗೇರಿ ಶಾಸಕ ಡಿ ಎನ್ ಜೀವರಾಜ್ ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಅರ್ಜಿಯು ಇನ್ನಷ್ಟೇ ವಿಚಾರಣೆಗೆ ನಿಗದಿಯಾಗಬೇಕಿದೆ. 2023ರ ಮೇ 13ರಂದು ಮತ ಎಣಿಕೆ ಮುಗಿದ ಬಳಿಕ ದೇವರಾಜ್, ಹಿಂದಿನ ಚುನಾವಣಾಧಿಕಾರಿ ವೇದಮೂರ್ತಿ ಮತ್ತು ಚಿಕ್ಕಮಗಳೂರಿನ ಅಂದಿನ ಜಿಲ್ಲಾಧಿಕಾರಿ ರಮೇಶ್ ಅವರು ಸಂಚು ರೂಪಿಸಿ ಮತ ಪೆಟ್ಟಿಗೆಗಳ ಸೀಲು ತೆಗೆದು ರಾಜೇಗೌಡರಿಗೆ ಬಿದ್ದಿದ್ದ ಒಂದು ಕಟ್ಟಿನ 170 ಮತಗಳನ್ನು ತಿದ್ದುಪಡಿ ಮಾಡಿದ್ದಾರೆ. ಈ ವಿಚಾರವನ್ನು 2026ರ ಮೇ 2ರಂದು ಮತ ಮರು ಎಣಿಕೆ ಆರಂಭಿಸುವುದಕ್ಕೂ ಮುನ್ನವೇ ಪ್ರಸ್ತಾಪಿಸಿ 2026ರ ಮೇ 3ರಂದು ಕಾಂಗ್ರೆಸ್‌ನ ಮತ ಎಣಿಕೆಯಲ್ಲಿ ಭಾಗಿಯಾಗಿದ್ದ ಏಜೆಂಟ್ ಸುಧೀರ್ ಕುಮಾರ್ ಮುರೊಳ್ಳಿ ಚಿಕ್ಕಮಗಳೂರು ನಗರ ಠಾಣೆಗೆ ದೂರು ನೀಡಿದ್ದಾರೆ. ಇದರ ಅನ್ವಯ ಆರೋಪಿಗಳ ವಿರುದ್ಧಐಪಿಸಿ ಸೆಕ್ಷನ್‌ಗಳಾದ 143 (ಅಕ್ರಮ ಕೂಟ), 465 (ಸುಳ್ಳು ದಾಖಲೆ ಸೃಷ್ಟಿ), 468 (ವಂಚಿಸಲು ಸುಳ್ಳು ದಾಖಲೆ ಸೃಷ್ಟಿ), 471 (ಸುಳ್ಳು ದಾಖಲೆಗಳನ್ನು ಅಸಲಿ ಎಂದು ಬಿಂಬಿಸುವುದು), 120ಃ (ಪಿತೂರಿ), ಚಿಟಿಜ 149 (ಸಮಾನ ಉದ್ದೇಶ) ಜೊತೆಗೆ ಪ್ರಜಾಪ್ರತಿನಿಧಿ ಕಾಯಿದೆ ಸೆಕ್ಷನ್ 136ರ (ಚುನಾವಣಾ ಅಕ್ರಮ) ಅಡಿ ಪ್ರಕರಣ ದಾಖಲಿಸಲಾಗಿದೆ. ಇದನ್ನು ದೇವರಾಜ್ ಪ್ರಶ್ನಿಸಿದ್ದಾರೆ.

## ಶೃಂಗೇರಿ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆ

# ಜೀವರಾಜ್‌ಗೆ ಗೆಲುವು ಅಧಿಕೃತ ಘೋಷಣೆ, ಪ್ರಮಾಣಪತ್ರ ವಿತರಣೆ



**ಚಿಕ್ಕಮಗಳೂರು, ಮೇ. 4:** ಶೃಂಗೇರಿ ಕ್ಷೇತ್ರದ ಅಂಚೆ ಮತಗಳ ಮರು ಎಣಿಕೆಯಲ್ಲಿ ಬಿಜೆಪಿ ಅಭ್ಯರ್ಥಿ ಡಿ.ಎನ್.ಜೀವರಾಜ್ ಅವರು ಜಯ ಸಾಧಿಸಿದ್ದಾರೆ. ಎರಡು ದಿನಗಳ ಹಿಂದೆ ನಡೆದ ಅಂಚೆ ಮತಗಳ ಮರು ಎಣಿಕೆ ಪ್ರಕ್ರಿಯೆಯಲ್ಲಿ ಜೀವರಾಜ್ ಅವರು 52 ಮತಗಳ ಅಂತರದಿಂದ ಮುನ್ನಡೆ ಕಾಯ್ದು ಕೊಂಡಿದ್ದರು. ಉಚ್ಚನ್ಯಾಯಾಲಯದ ಆದೇಶದಂತೆ 123 – ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತ ಪತ್ರಗಳ ಮರು ಎಣಿಕೆ ಕಾರ್ಯವನ್ನು ಮುಕ್ತಾಯಗೊಳಿಸಿದ್ದು, ಚುನಾವಣಾಧಿ ಕಾರಿ ಫಲಿತಾಂಶವನ್ನು ಘೋಷಣೆ ಮಾಡಿದ್ದಾರೆ.

ಶೃಂಗೇರಿಯ ಶಾರದಾ ಮಠಕ್ಕೆ ಭೇಟಿ ನೀಡಿ ಶಾರದಾಂಬೆಯ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು. ಮರು ಎಣಿಕೆಯಲ್ಲಿ ಗೆಲುವಿನ ಜಯಭೇರಿ ಬಾರಿಸಿದ ಬೆನ್ನಲ್ಲೇ ದೇವಸ್ಥಾನದ ಸಮೀಪವೇ ಬಿಜೆಪಿ ಕಾರ್ಯಕರ್ತರು ಜೀವರಾಜ್ ಅವರಿಗೆ ಅಭಿನಂದನೆ ಸಲ್ಲಿಸಿ ಸಂಭ್ರಮಿಸಿದರು.ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ ವಿಧಾನಸಭಾ ಕ್ಷೇತ್ರ ಅಂಚೆ ಮತದಾನದ ಮರು ಎಣಿಕೆ ಕುರಿತಂತೆ ಮೊನ್ನೆ, ಮತ ಎಣಿಕೆ ಕಾರ್ಯವನ್ನು ನಗರದ ಐಡಿಎಸ್ಜಿ ಕಾಲೇಜಿನಲ್ಲಿ ಮಾಡಲಾಯಿತು. ಈ ವೇಳೆ ಫಲಿತಾಂಶವನ್ನು ಮುಚ್ಚಿದ ಲಕೋಟೆಯಲ್ಲಿ ಹೈಕೋರ್ಟ್‌ಗೆ ಚುನಾವಣಾ ಅಧಿಕಾರಿ ಗೌರವ ಕುಮಾರ್ ಶೆಟ್ಟಿ ಸಲ್ಲಿಕೆ ಮಾಡಿದ್ದರು. ಈಗ ಮಾನ್ಯ ಉಚ್ಚ ನ್ಯಾಯಾಲಯದ ಆದೇಶದಂತೆ 123 – ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತ ಪತ್ರಗಳ ಮರು ಎಣಿಕೆ ಕಾರ್ಯವನ್ನು ಮುಕ್ತಾಯಗೊಳಿಸಿದ್ದು, ಚುನಾವಣಾಧಿಕಾರಿ ಫಲಿತಾಂಶವನ್ನು ಘೋಷಣೆ ಮಾಡಿದ್ದಾರೆ. ಚುನಾವಣಾ ಅಧಿಕಾರಿ ಗೌರವ್ ಕುಮಾರ್ ಶೆಟ್ಟಿ ಅವರು ನೂತನ ಶಾಸಕರಾಗಿ ಆಯ್ಕೆಯಾದ ಶೃಂಗೇರಿಯ ಡಿ.ಎನ್. ಜೀವರಾಜ್ ಅವರಿಗೆ ಪ್ರಮಾಣ ಪತ್ರವನ್ನು ವಿತರಣೆ ಮಾಡಿದರು.ಈ ಕುರಿತು ನೂತನ ಶಾಸಕ ಡಿ.ಎನ್. ಜೀವರಾಜ್ ಪ್ರತಿಕ್ರಿಯಿಸಿ, 2023 ಮೇ.13ರಂದು ಚುನಾವಣಾ ಕೌಂಟಿಂಗ್ ನಡೆದಿದ್ದು, ಕೌಂಟಿಂಗ್‌ನಲ್ಲಿ ಅಸಿಂಧು ಮತಗಳನ್ನು ಈವರೆಗೆ ಶಾಸಕರಾಗಿದ್ದ ಟಿ.ಡಿ. ರಾಜೇಗೌಡರಿಗೆ ಹಾಕಿದ್ದಾರೆ ಎಂದು ನಾನು ನನ್ನ ಚುನಾವಣಾ ಏಜೆಂಟರ ಮೂಲಕ ಆರ್‌ಒಗೆ ಆ ದಿನವೇ ದೂರು ಸಲ್ಲಿಕೆ ಮಾಡಿದ್ದೆ. ಆ ದಿನ ಎರಡು ದೂರುಗಳನ್ನು ದಾಖಲು ಮಾಡಿದ್ದೆ. ನನ್ನ ದೂರು ಇದ್ದ ಹಾಗೆಯೇ ಅವರಿಗೆ ಪ್ರಮಾಣ ಪತ್ರವನ್ನು ನೀಡಿದ್ದರು. ಎರಡು ದಿನಗಳ ನಂತರ ಅಂಚೆ ಮೂಲಕ ಉತ್ತರವನ್ನು ನನಗೆ ಕಳಿಸಿಕೊಟ್ಟಿದ್ದರು. ನಾನು ಆ ದಿನವೇ ಗೆದ್ದಿದ್ದೆ, ಆದರೆ ನನಗೆ ಮೋಸ ಮಾಡಿ ಇವರು ಗೆಲುವನ್ನು ಪಡೆದುಕೊಂಡಿದ್ದರು. ಈಗ ನ್ಯಾಯ ಸಿಕ್ಕಿದೆ ಹಾಗೂ ತುಂಬಾ ಸಂತೋಷವಾಗಿದೆ . ಟಿ.ಡಿ. ರಾಜೇಗೌಡ ಅವರು ಈಗ ನನ್ನ ಮೇಲೆ ಆರೋಪ ಮಾಡುತ್ತಿದ್ದಾರೆ. ಅಂಚೆ ಮತಗಳ ಬಂಡಲ್ ತೆಗೆದರೆ 25ಕ್ಕೆ 25 ಅಸಿಂಧು ಆಗಿತ್ತು ಎಂದು ನಾನು ಈ ದೂರನ್ನು 2023 ಮೇ 13ಕ್ಕೆ ಸಲ್ಲಿಕೆ ಮಾಡಿದ್ದೆ. ಅಸಿಂಧು ಮತಗಳನ್ನು ಅವರಿಗೆ ಹಾಕಿ ನೀವು ಗೆಲ್ಲಿಸಿದ್ದೀರಿ. ಇದು ಅವರ ಅರ್ಹ ಗೆಲುವು ಆಗಿರಲಿಲ್ಲ. ನೀವು ಮತಗಳ ಬಂಡಲ್ ತೆಗೆದಾಗ ಏನು ಇರಬೇಕು, ಅದೇ ಇರಬೇಕು. ಬೇರೆ ಇರಲು ಸಾಧ್ಯವೇ ಇಲ್ಲ. ನಾನು ಕೋರ್ಟ್‌ನಲ್ಲಿ ಕೇಸ್ ಹಾಕಿದ್ದು ಕಾನೂನಿನ ಚೌಕಟ್ಟಿನಲ್ಲಿ, ಅದು 45 ದಿನದ ಒಳಗೆ ದೂರು ದಾಖಲು ಮಾಡಿದ್ದೆ. 45 ದಿನದ ಒಳಗೆ ಮೊಕದ್ದಮೆ ದಾಖಲಿಸಿಕೊಳ್ಳಲಾಗಿತ್ತು. ಈ ಪ್ರಕರಣದಲ್ಲಿ ನಮಗೆ ಸಂಬಂಧಪಟ್ಟ ಅನುಮಾನ ನಾವು ವ್ಯಕ್ತಪಡಿಸಿದ್ದೇವೆ. ಈಗ ನನಗೆ ಗೆಲುವಾಗಿದೆ ಎಂದರು.


ಈ ಫಲಿತಾಂಶದ ಕುರಿತಂತೆ ಅಂತರ್ಜಾಲದಲ್ಲಿ ನಿನ್ನೆ ಮಧ್ಯರಾತ್ರಿ ನನಗೆ ಮಾಹಿತಿ ನೀಡಿದ್ದಾರೆ. ಈ ಗೆಲುವಿನ ಸರ್ಟಿಫಿಕೇಟ್ ಭಾನುವಾರ ರಾತ್ರಿ ನಾನು ತೆಗೆದುಕೊಳ್ಳ ಬಹುದಾಗಿತ್ತು. ಅಧಿಕಾರಿಯನ್ನು ರಾತ್ರಿಯಲ್ಲಿ ಎಬ್ಬಿಸುವುದು ಸರಿಯಲ್ಲ ಎಂದು ಇಂದು ಬೆಳಗ್ಗೆ ಬಂದು ಪ್ರಮಾಣಪತ್ರ ಸ್ವೀಕಾರ ಮಾಡಿದ್ದೇನೆ. ನ್ಯಾಯಾಲಯ ನಿಖರ ವಾಗಿ ಅಂದೇ ಫಲಿತಾಂಶವನ್ನು ಘೋಷಣೆ ಮಾಡಿ ಎಂದು ಹೇಳಿದ್ದರೂ, ಆದರೆ ಆರ್‌ಒ ಕೋರ್ಟ್ ಆದೇಶವನ್ನು ಪಾಲನೆ ಮಾಡಿರಲಿಲ್ಲ.

ಈಗ ನಾನು ಅಧಿಕಾರಿಗಳ ಮೇಲೆ ಯಾವುದೇ ಆರೋಪವನ್ನು ಮಾಡಲು ಇಷ್ಟ ಪಡುವುದಿಲ್ಲ. ಸರ್ಕಾರದ ಒತ್ತಡ ಈ ರೀತಿ ಇದ್ದಾಗ ಯಾವ ಅಧಿಕಾರಿ ಯಾದರು ಏನು ಮಾಡಲು ಸಾಧ್ಯ. ಈಗ ನಾನು ಪ್ರಮಾಣ ಪತ್ರವನ್ನು ಸ್ವೀಕಾರ ಮಾಡಿದ್ದೇನೆ ಎಂದರು.

# ವೆಚ್ಚ ಭರಿಸಲು ಕರ್ನಾಟಕ ನಕಾರ, ನಾಂದೇಡ್-ಬೀದರ್ ರೈಲ್ವೆ ಯೋಜನೆಗೆ ಹಿನ್ನೆಡೆ

**ಬೀದರ್, ಮೇ. 4:** ಮಹಾರಾಷ್ಟ್ರ ಮತ್ತು ಕರ್ನಾಟಕ ರಾಜ್ಯಗಳ ನಡುವೆ ಸಂಪರ್ಕ ಕಲ್ಪಿಸುವ ಬಹುನಿರೀಕ್ಷಿತ, ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ ಅವರ ಸತತ ಪ್ರಯತ್ನದ ಫಲವಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಲಾ 50 ಶೇಕಡಾ ವೆಚ್ಚ ಭರಿಸಲು ಹಿಂದಿನ ಸರ್ಕಾರದ ಒಪ್ಪಿಗೆಯ ಮೇರೆಗೆ ಮಂಜೂರಾದ 'ನಾಂದೇಡ್–ಬೀದರ್ ರೈಲ್ವೆ ಯೋಜನೆಗೆ' ಇದೀಗ ದೊಡ್ಡ ಹಿನ್ನೆಡೆಯಾಗಿದೆ. ಈ ಯೋಜನೆಯ ಶೇಕಡಾ 50ರಷ್ಟು ವೆಚ್ಚವನ್ನು ಭರಿಸಲು ಕರ್ನಾಟಕ ಸರ್ಕಾರ ನಿರಾಕರಿಸಿದ್ದು, ಯೋಜನೆಯ ಭವಿಷ್ಯ ಅತಂತ್ರವಾಗಿದೆ. ಇದೇ ಸಂದರ್ಬದಲ್ಲಿ ಮಹಾರಾಷ್ಟ್ರ ಸರ್ಕಾರ ತನ್ನ ಭಾಗದ ಶೇಕಡಾ 50 ರಷ್ಟು ಹಣವನ್ನು ನೀಡಲು ಒಪ್ಪಿಕೊಂಡಿದ್ದು, ಈ ವರ್ಷದ ಬಜೆಟ್‌ನಲ್ಲಿ ಅನುದಾನವನ್ನೂ ನಿಡಿದ್ದರಿಂದ ಮಹಾರಾಷ್ಟ್ರ ಭಾಗದಲ್ಲಿ ಕಾಮಗಾರಿ ಇನ್ನೇನು ಆರಂಭವಾಗಲಿದ್ದು, ಕರ್ನಾಟಕ ಸರ್ಕಾರ ಹಣ ನೀಡಲು ನಿರಾಕರಿಸಿದ್ದರಿಂದ ಇಡೀ ಯೋಜನೆಯೇ ಅತಂತ್ರವಾಗಿದೆ.

ನಾಂದೇಡ್‌ನಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಮೇಲ್ವಿಚಾರಣಾ ಸಮಿತಿ ಸಭೆಯಲ್ಲಿ ರೈಲ್ವೆ ಇಲಾಖೆ ಅಧಿಕಾರಿಗಳು ಮಂಡಿಸಿದ ಪ್ರಗತಿ ವರದಿಯಲ್ಲಿ ಕರ್ನಾಟಕ ಶೇ.50ರಷ್ಟು ಹಣ ನೀಡಲು ನಿರಾಕರಿಸಿದ ವಿಚಾರ ಬೆಳಕಿಗೆ ಬಂದಿದೆ. ವರದಿಯ ಪ್ರಕಾರ, ಮಹಾರಾಷ್ಟ್ರ ಸರ್ಕಾರವು ಫೆಬ್ರವರಿ 5, 2024ರಂದೇ ತನ್ನ ಪಾಲಿನ ಶೇ 50ರಷ್ಟು ವೆಚ್ಚವನ್ನು ಭರಿಸಲು ಒಪ್ಪಿಗೆ ನೀಡಿತ್ತು. ಆದರೆ, ಕರ್ನಾಟಕ ಸರ್ಕಾರವು ಸೆಪ್ಟೆಂಬರ್ 27, 2024ರಂದು ಬರೆದ ಪತ್ರದಲ್ಲಿ ತನ್ನ ಪಾಲಿನ ಹಣವನ್ನು ನೀಡಲು ಸಾಧ್ಯವಿಲ್ಲ. ತಮಗೆ ಆರ್ಥಿಕ ಸಂಕಷ್ಟವಿದೆ. ಕೇಂದ್ರವೇ ಅದನ್ನು ಭರಿಸಲಿ ಎಂದು ಸ್ಪಷ್ಟಪಡಿಸಿದೆ.



**ರಾಜಕೀಯ ನಾಯಕರ ತೀವ್ರ ಅಸಮಾಧಾನ:** ಕರ್ನಾಟಕ ಸರ್ಕಾರದ ಈ ನಿರ್ಧಾರಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿರುವ ಬಿಜೆಪಿ ರಾಜ್ಯಸಭಾ ಸಂಸದ ಅಶೋಕ್ ಚವ್ಹಾಣ್, ಇದೊಂದು "ನಿರಾಸೆ ತರುವ ಬೆಳವಣಿಗೆ" ಎಂದಿದ್ದಾರೆ. ಕರ್ನಾಟಕದ ಈ ನಿರಾಕರಣೆಯು ಎರಡೂ ರಾಜ್ಯಗಳ ಜನರ ನಿರೀಕ್ಷೆಗಳನ್ನು ಹುಸಿಗೊಳಿಸಿದ್ದು, ಪ್ರಾದೇಶಿಕ ಸಂಪರ್ಕ ಹಾಗೂ ಅಭಿವೃದ್ಧಿಯ ಮೇಲೆ ಗಂಭೀರ ಪರಿಣಾಮ ಬೀರಲಿದೆ ಎಂದು ಅವರು ಹೇಳಿದ್ದಾರೆ. ಈ ಅನ್ಯಾಯದ ಬಗ್ಗೆ ಕೇಂದ್ರ ಮಟ್ಟದಲ್ಲಿ ದನಿ ಎತ್ತುವುದರ ಜೊತೆಗೆ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರೊಂದಿಗೂ ಚರ್ಚಿಸುವುದಾಗಿ ಅವರು ತಿಳಿಸಿದ್ದಾರೆ.

**ಯೋಜನೆಯ ಮಹತ್ವ ಹಾಗೂ ಹಿನ್ನೆಲೆ:** ಸುಮಾರು 157 ಕಿ.ಮೀ ಉದ್ದದ ಈ ನಾಂದೇಡ್–ಬೀದರ್ ರೈಲು ಮಾರ್ಗವನ್ನು ಕೇಂದ್ರ ಸರ್ಕಾರ ಮತ್ತು ಎರಡು ರಾಜ್ಯ ಸರ್ಕಾರಗಳ ಸಮಾನ ವೆಚ್ಚ ಹಂಚಿಕೆ ಮಾದರಿಯಲ್ಲಿ ನಿರ್ಮಿಸಲು ಕೇಂದ್ರ ಸರ್ಕಾರ ತಾತ್ವಿಕ ಒಪ್ಪಿಗೆ ನೀಡಿತ್ತು. ಉದ್ದೇಶಿತ ಮಾರ್ಗದಲ್ಲಿ ಸುಮಾರು 101 ಕಿ.ಮೀ ಮಹಾರಾಷ್ಟ್ರದ ವ್ಯಾಪ್ತಿಯಲ್ಲಿದ್ದರೆ, 56 ಕಿ.ಮೀ ಕರ್ನಾಟಕದ ವ್ಯಾಪ್ತಿಯಲ್ಲಿದೆ.

ಈ ಯೋಜನೆಯು ಧಾರ್ಮಿಕ, ಆರ್ಥಿಕ ಹಾಗೂ ಪ್ರಾದೇಶಿಕವಾಗಿ ಅತ್ಯಂತ ಮಹತ್ವದ್ದಾಗಿದ್ದು. ಎರಡು ಪ್ರಮುಖವಾಗಿ ಸಿಖ್ ಸಮುದಾಯದ ಪುಣ್ಯಕ್ಷೇತ್ರಗಳಾದ ನಾಂದೇಡ್‌ನ 'ಹಜೂರ್ ಸಾಹಿಬ್' ಮತ್ತು ಬೀದರ್‌ನ 'ಗುರುನಾನಕ್ ಜೀರಾ ಸಾಹಿಬ್ ಝೀರಾ' ನಡುವೆ ನೇರ ಸಂಪರ್ಕ ಕಲ್ಪಿಸುತ್ತದೆ.

ಪ್ರವಾಸೋದ್ಯಮದ ಜೊತೆಗೆ ವ್ಯಾಪಾರ–ವಹಿವಾಟು ಮತ್ತು ಉದ್ಯೋಗ ಸೃಷ್ಟಿಗೆ ಈ ಯೋಜನೆ ಪೂರಕವಾಗಲಿದೆ. ನಾಂದೇಡ್ ಮತ್ತು ಬೆಂಗಳೂರು ನಡುವಿನ ಪ್ರಯಾಣದ ದೂರ ಹಾಗೂ ಸಮಯವನ್ನು ಈ ಮಾರ್ಗ ಗಣನೀಯವಾಗಿ ಕಡಿಮೆ ಮಾಡುತ್ತದೆ. ಹಲವು ವರ್ಷಗಳಿಂದ ಈ ಯೋಜನೆಗಾಗಿ ಸಕ್ರಿಯ ಪ್ರಯತ್ನಗಳು ನಡೆಯುತ್ತಿದ್ದು, ಕೇಂದ್ರ ಸರ್ಕಾರ ಮತ್ತು ಎರಡೂ ರಾಜ್ಯ ಸರ್ಕಾರಗಳ ಮುಂದಿನ ಮಾತುಕತೆಗಳ ಮೇಲೆಯೇ ಈ ಯೋಜನೆಯ ಭವಿಷ್ಯ ನಿಂತಿದೆ.

## ಜಿಲ್ಲಾ ಉಸ್ತುವಾರಿ ಸಚಿವರ ನಿವಾಸಕ್ಕೆ ಜನಗಣತಿ ಅಧಿಕಾರಿಗಳ ಭೇಟಿ



**ವಿಜಯಪುರ, ಮೇ.4–** ವಿಜಯಪುರದಲ್ಲಿ ತಂಗಿರುವ ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಎಂ. ಬಿ. ಪಾಟೀಲ ಅವರ ನಿವಾಸಕ್ಕೆ ಭೇಟಿ ನೀಡಿದ ಜನಗಣತಿ ಅಧಿಕಾರಿಗಳು ಭಾರತ ಜನಗಣತಿ 2027ರ ಮಾಹಿತಿ ವಿವರಿಸಿದರು. ಈ ಸಂದರ್ಭದಲ್ಲಿ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ, ವಲಯ ಆಯುಕ್ತ ಎಚ್. ಎಸ್. ಚಿತ್ತರಗಿ ಗಣತಿದಾರರಾದ ನೀಲಮ್ಮ ಸಜ್ಜನ ಹಾಗೂ ಮೇಲ್ವಿಚಾರಕ ಸಿದ್ದಪ್ಪ ದಾನಿ ಹಾಗೂ ಕಂದಾಯ ನಿರೀಕ್ಷಕರಾದ ಕುಮಾರ ಚವಾಣ್ ಉಪಸ್ಥಿತರಿದ್ದರು ಎಂದು ಪ್ರಕಟಣೆಗೆ ತಿಳಿಸಿದೆ.

## ಐಟಿಐ ಪ್ರವೇಶಕ್ಕೆ ಆನ್‌ಲೈನ್ ಅರ್ಜಿ ಆಹ್ವಾನ

**ವಿಜಯಪುರ, ಮೇ.4–** ನಗರದ ಹತ್ತು ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಎನ್ ಸಿವಿಟಿ ಸಂಯೋಜಿತ ವೃತ್ತಿಗಳಿಗೆ 2026ರ ಆಗಸ್ಟ್ ಸಾಲಿನ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

10ನೇ ತರಗತಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳೂ ಅಭ್ಯರ್ಥಿಗಳು ಸಿಐಟಿಇ Karnataka Portal (www.cite.karnataka.gov.in) ಮೂಲಕ ಏ.27 ರಿಂದ ಮೇ.8ರ ವರೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9035434381, 9886437517, 9972682184, 9448986381, 08352–280360, ಸಂಪರ್ಕಿಸ ಬಹುದಾಗಿದೆ ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಕಟಣೆ ತಿಳಿಸಿದೆ.

## ಜೀವನದಲ್ಲಿ ಯಶಸ್ಸಿಗೆ ಅಡ್ಡದಾರಿ ಇಲ್ಲ: ಎಸ್.ಆರ್.ರೆಡ್ಡಿ




**ರಾಯಚೂರು, ಮೇ. 4:** ಯಶಸ್ಸಿಗೆ ಯಾವುದೇ ಅಡ್ಡದಾರಿಗಿರುವುದಿಲ್ಲ. ನಿರಂತರ ಪರಿಶ್ರಮ, ಅವಿರತ ಪ್ರಯತ್ನ, ಯೋಜನಾ ಬದ್ಧವಾದ ಕಾರ್ಯವೈಖರಿ ಮತ್ತು ಶಿಸ್ತುಬದ್ಧ ವೃತ್ತಿಪರತೆ, ಆರ್ಥಿಕ ಶಿಸ್ತು ಕಾಪಾಡುವುದು ಯಶಸ್ಸಿನ ಮೂಲ ಮಂತ್ರವಾಗಿವೆ ಎಂದು ನವೋದಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಎಸ್. ಆರ್. ರೆಡ್ಡಿ ಅಭಿಪ್ರಾಯಪಟ್ಟರು.

ನಗರದ ನವೋದಯ ಶಿಕ್ಷಣ ಸಂಸ್ಥೆಯ ಎನ್‌ಇಟಿ ಫಾರ್ಮಸಿ ಕಾಲೇಜಿನಲ್ಲಿ ಆಯೋಜಿಸಿದ ಹಳೆ ವಿದ್ಯಾರ್ಥಿಗಳ ಸಭೆಯಲ್ಲಿ, ಇಂದಿನ ಯುವಕರು ಯಶಸ್ಸು ಬೇಗನೆ ಗಳಿಸಬೇಕೆಂದು ಆಶಿಸುತ್ತಾರೆ ಮತ್ತು ತಮ್ಮ ಯೋಜನೆಗಳಲ್ಲಿ ಫಲ ಸಿಗದೇ ಇದ್ದಾಗ ಸಿನಿಕರಾಗುತ್ತಾರೆ. ನವೋದಯ ಶಿಕ್ಷಣ ಸಂಸ್ಥೆಯನ್ನು ರಾಜ್ಯದ ಬಹುದೊಡ್ಡ ಸ್ವಾಯತ್ತ ವಿಶ್ವವಿದ್ಯಾಲಯ ವನ್ನಾಗಿ ಮಾಡುವ ಪ್ರಯತ್ನಗಳು ನಡೆದಿವೆ. ಸಂಸ್ಥೆಯ ಈ ಮಟ್ಟದ ಯಶಸ್ಸಿಗೆ ಹಳೆಯ ವಿದ್ಯಾರ್ಥಿಗಳ ಕೊಡುಗೆಯೂ ಇದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಎನ್.ಇ.ಟಿ ಫಾರ್ಮಸಿ ಕಾಲೇಜಿನ ಪ್ರಾಂಶುಪಾಲ ಡಾ. ಎಚ್. ದೊಡ್ಡಯ್ಯ ಮಾತನಾಡಿ, ಹಳೆಯ ವಿದ್ಯಾರ್ಥಿಗಳು ಸಂಸ್ಥೆಯು ವ್ಯಾಖ್ಯಾನಿಸುವ ಮೌಲ್ಯಗಳು, ನೈತಿಕತೆ, ಜ್ಞಾನ ಮತ್ತು ಆತ್ಮಸ್ಫೂರ್ತಿಯನ್ನು ಮುಂದುವರಿಸುವ ನಿಜವಾದ ರಾಯಭಾರಿಗಳು ಎಂದರು.

ಇಂದಿನ ಸಭೆಯು ಹಳೆಯ ವಿದ್ಯಾರ್ಥಿಗಳ ಪುನರ್ ಮಿಲನಕ್ಕೆ ಮತ್ತು ಕಾಲೇಜಿನ ಅಧ್ಯಾಪಕರೊಂದಿಗೆ ಮತ್ತೆ ಸಂಪರ್ಕ ಹೊಂದಲು ವೇದಿಕೆ ಯಾಗುತ್ತದೆ. ಹಳೆ ವಿದ್ಯಾರ್ಥಿಗಳು ತಮ್ಮ ವೃತ್ತಿಜೀವನದ ಯಶೋಗಾಥೆಗಳನ್ನು ಹಂಚಿ ಕೊಳ್ಳುವುದರ ಮುಖಾಂತರ, ಕಿರಿಯ ವಿದ್ಯಾರ್ಥಿಗಳಿಗೆ ಪ್ರೇರಣೆ ಹೊಂದಲು ಅವಕಾಶ ನೀಡುತ್ತದೆ ಎಂದು ತಿಳಿಸಿದರು.

ಸಂಸ್ಥೆಯ ಕುಲಸಚಿವ ಡಾ. ಟಿ ಶ್ರೀನಿವಾಸ್, ಆಡಳಿತ ನಿರ್ದೇಶಕ ಪ್ರೊಫೆಸರ್ ಸಿ. ಸುರೇಶ ಬಾಬು ಮತ್ತು ಶೈಕ್ಷಣಿಕ ಮತ್ತು ಸಂಶೋಧನೆಗಳ ನಿರ್ದೇಶಕ ಡಾ. ರಾಮಮೋಹನ್ ಗುಪ್ತ ಉಪಸ್ಥಿತರಿದ್ದರು. ಹಳೆಯ ವಿದ್ಯಾರ್ಥಿಗಳು ಕಿರಿಯ ವಿದ್ಯಾರ್ಥಿಗಳು ಮತ್ತು ಅಧ್ಯಾಪಕರುಗಳೊಂದಿಗೆ ಪ್ರಸ್ತುತ ಫಾರ್ಮಸಿಟಿಕಲ್ ಕೈಗಾರಿಕಾ ಕ್ಷೇತ್ರಗಳಲ್ಲಿ ನಡೆಯುತ್ತಿರುವ ವಿದ್ಯಮಾನ ಗಳ ಕುರಿತು ಸಂವಾದ ನಡೆಸಿದರು.

## ತುಂಗಭದ್ರಾ ಡ್ಯಾಮ್‌ಗೆ ಆಯ್ತು ಹೊಸ ಗೇಟ್

# ನವಲಿ ಸಮಾನಾಂತರ ಜಲಾಶಯದ ಕನಸು ನನಸಾಗುವುದೇ



**ರಾಯಚೂರು, ಮೇ.4:** ತುಂಗಭದ್ರಾ ಜಲಾಶಯವು ರಾಯಚೂರು, ಕೊಪ್ಪಳ, ವಿಜಯನಗರ, ಬಳ್ಳಾರಿ ಮತ್ತು ಆಂಧ್ರಪ್ರದೇಶ, ತೆಲಂಗಾಣ ರಾಜ್ಯದ ರೈತರ ಜೀವನಾಡಿಯಾಗಿದೆ. ಜಲಾಶಯ 75 ವರ್ಷ ಹಳೆಯದಾಗಿದ್ದು, ಈ ಜಲಾಶಯಕ್ಕೆ ಈಗ 33 ಹೊಸ ಕ್ರಸ್ಟ್ ಗೇಟ್‌ಗಳನ್ನು ಅಳವಡಿಸುವ ಮೂಲಕ ಜಲಾಶಯವು ಮುಂದಿನ 50–60 ವರ್ಷಗಳ ಸುಭದ್ರವಾಗಲಿದೆ.

ಈಗಾಗಲೇ ಜಲಾಶಯದಲ್ಲಿ ಸುಮಾರು 30 ಟಿಎಂಸಿ ಹೂಳು ತುಂಬಿದ್ದರಿಂದ, ನೀರಿನ ಸಂಗ್ರಹಣೆ ಕಡೆಇಮೆಯಾಗುತ್ತಿದೆ. ಈ ಕೊರತೆ ತುಂಬಿಕೊಳ್ಳಲು ಈಗಾಗಲೇ ಯೋಜಿಸಿ ರುವ ನವಲಿ ಸಮಾನಾಂತರ ಜಲಾ ಶಯ ನಿರ್ಮಾಣ ಯಾವಾಗ ಎನ್ನುವ ಪ್ರಶ್ನೆ ಈ ಭಾಗದ ರೈತರದ್ದಾಗಿದೆ.75 ವರ್ಷಗಳ ಹಿಂದೆ ನಿರ್ಮಾಣ ವಾದ ತುಂಗಭದ್ರಾ ಜಲಾಶಯ 2024ರ ವರೆಗೆ ಗಟ್ಟಿಮುಟ್ಟಾಗಿತ್ತು. ಆದರೆ 2024ರ ಆಗಸ್ಟ್ 10ರ ರಾತ್ರಿ ಜಲಾಶಯದ 19ನೇ ಕ್ರಸ್ಟ್‌ಗೇಟ್‌ನ ಚೈನ್ ತುಂಡರಿಸಿ ಕೊಂಡು ನೀರಿನಲ್ಲಿ ಕೊಚ್ಚಿಕೊಂಡು ಹೋಗಿತ್ತು. 60–70 ಟಿಎಂಸಿ ನೀರು ನದಿ ಪಾಲಾಗಿತ್ತು. ಅವಘಡ ನಡೆದಾಗ ಜಲಾಶಯದ ಭದ್ರತೆ ಬಗ್ಗೆ ಆತಂಕ ಮೂಡಿತ್ತು. ತಕ್ಷಣವೇ ರಾಜ್ಯ ಸರ್ಕಾರ ಜಲಾಶಯ ತಜ್ಞರು, ತುಂಗಭದ್ರಾ ಮಂಡಳಿಯ ಅಧಿಕಾರಿಗಳು ನಿರಂತರವಾಗಿ ಶ್ರಮಿಸಿದ ಫಲವಾಗಿ ಜಲಾಶಯದ ಎಲ್ಲ 33 ಹಳೆಯ ಕ್ರಸ್ಟ್ ಗೇಟ್‌ಗಳನ್ನು ಬದಲಾಯಿಸಿ ಹೊಸ ಕ್ರಸ್ಟ್ ಗೇಟ್ ಅಳವಡಿಸುವ ಮೂಲಕ ರೈತರಲ್ಲಿ ಸಂತಸ ಮೂಡಿಸಿದ್ದಾರೆ.

**30 ಟಿಎಂಸಿ ಹೂಳು:** ಆದರೆ, ಜಲಾಶಯದಲ್ಲಿ ಈಗ ಕೇವಲ 10.629 ಟಿಎಂಸಿ ನೀರು ಉಳಿದಿದೆ. ಕುಡಿಯುವ ನೀರಿಗೆ ಆದ್ಯತೆ ನೀಡಬೇಕಾಗಿದೆ. ಜಲಾಶಯದಲ್ಲಿ ಈಗಾಗಲೇ 30 ಟಿಎಂಸಿಗಿಂತ ಹೆಚ್ಚು ಹೂಳು ತುಂಬಿಕೊಂಡಿದೆ. ಜಲಾಶಯದ ನೀರಿನ ಸಂಗ್ರಹ ಸಾಮರ್ಥ್ಯ ಕಡಿಮೆಯಾಗಿರುವುದರಿಂದ ಇದಕ್ಕೆ ಪರ್ಯಾಯವಾಗಿ ನವಲಿ ಸಮಾನಾಂತರ ಜಲಾಶಯ ಯೋಜನೆ ನಿರ್ಮಿಸುವ ಬಗ್ಗೆ ಅನೇಕ ವರ್ಷಗಳಿಂದ ಈ ಭಾಗದ ರೈತರು, ಪ್ರಗತಿಪರ ಹೋರಾಟಗಾರರು ಹೋರಾಟ ನಡೆಸುತ್ತಾ ಬಂದಿದ್ದಾರೆ.

ಆದರೆ ಹಿಂದಿನ ಸರ್ಕಾರಗಳು, ಈಗಿನ ಸರ್ಕಾರ ನವಲಿ ಜಲಾಶಯ ಯೋಜನೆ ಬಗ್ಗೆ ಡಿಪಿಆರ್ ಸಿದ್ಧವಾಗಿದೆ ಎಂದು ಹೇಳುತ್ತಾ ಬರುತ್ತಿದ್ದಾರೆ. ಆಂಧ್ರಪ್ರದೇಶ, ತೆಲಂಗಾಣ, ತುಂಗ ಭದ್ರಾ ಮಂಡಳಿ ಅನುಮತಿ ಬೇಕಿರುವುದರಿಂದ ಯೋಜನೆ ನಿಧಾನವಾಗಿದೆ ಎಂದು ರಾಜಕಾರಣಿಗಳು ಹೇಳುತ್ತಿದ್ದಾರೆ. ನವಲಿ ಸಮಾನಾಂತರ ಜಲಾಶಯ ಯೋಜನೆ ಇನ್ನೂ ಕಾಗದದಲ್ಲೇ ಇದೆ. ಕೆಲಸ ಮಾತ್ರ ನೆಲಮಟ್ಟದಿಂದ ಆರಂಭವಾಗಿಲ್ಲ.

**ನವಲಿ ಯೋಜನೆಗೆ ಡಿಸಿಎಂ ಬೆಂಬಲ:** ಸಿಎಂ ಸಿದ್ದರಾಮಯ್ಯ 2026–27ನೇ ಬಜೆಟ್‌ನಲ್ಲಿ ನವಲಿ ಸಮಾನಾಂತರ ಜಲಾಶಯ ಬಗ್ಗೆ ಪ್ರಸ್ತಾಪಿಸಿದ್ದಾರೆ. ಈ ಕುರಿತು ಡಿಸಿಎಂ ಡಿ.ಕೆ. ಶಿವಕುಮಾರ್ ಕೂಡ ನವಲಿ ಯೋಜನೆಗೆ ಬೆಂಬಲ ವ್ಯಕ್ತಪಡಿಸಿದ್ದರು. ಜಲಸಂಪನ್ಮೂಲ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಈ ಮೊದಲು ತುಂಗಭದ್ರಾ ಜಲಾಶಯಕ್ಕೆ ಭೇಟಿ ನೀಡಿ ಕ್ರಸ್ಟ್ ಗೇಟ್ ಅಳವಡಿಸುವ ಕಾರ್ಯ ವೀಕ್ಷಿಸಿದ್ದರು. ಈಗ ಕ್ರಸ್ಟ್ ಗೇಟ್ ಅಳವಡಿಕೆ ಪೂರ್ಣಗೊಂಡಿ ರುವುದರಿಂದ ವೀಕ್ಷಣೆಗೆ ಭಾನುವಾರ ಮತ್ತೆ ಜಲಾಶಯಕ್ಕೆ ಆಗಮಿಸುತ್ತಿರುವುದ ರಿಂದ ನವಲಿ ಸಮಾನಾಂತರ ಜಲಾಶಯದ ಯೋಜನೆ ಬಗ್ಗೆ ಸವಿಸ್ತಾರವಾಗಿ ಚರ್ಚಿಸಿ, ಮುಂದಿನ ದಿನಗಳಲ್ಲಿ ಸಮಾನಾಂತರ ಜಲಾಶಯ ನಿರ್ಮಾಣಕ್ಕೆ ಸರ್ಕಾರದಿಂದ ಘೋಷಿಸ ಬಹುದು ಎನ್ನುವುದು ರೈತರ ಆಶಾಭಾವನೆ.

# ಅಟ್ಲಾಂಟಿಕ್ ಮಹಾಸಾಗರದಲ್ಲಿ ಕ್ರೂಸ್ ಹಡಗಿನಲ್ಲಿ ಹ್ಯಾಂಟವೈರಸ್‌ಗೆ ಮೂವರ ಬಲಿ

**ಕೇಪ್‌ಟೌನ್, ಮೇ 4:** ಅಟ್ಲಾಂಟಿಕ್ ಮಹಾಸಾಗರದಲ್ಲಿ ಕ್ರೂಸ್ ಹಡಗಿನಲ್ಲಿ ಅಪರೂಪದ ಹ್ಯಾಂಟವೈರಸ್ ಸೋಂಕಿಗೆ ವೃದ್ಧ ದಂಪತಿ ಸೇರಿದಂತೆ ಮೂವರು ಬಲಿಯಾಗಿದ್ದಾರೆ ಮತ್ತು ಕನಿಷ್ಠ ಮೂವರು ಅಸ್ವಸ್ಥರಾಗಿದ್ದಾರೆ ಎಂದು ವಿಶ್ವ ಆರೋಗ್ಯ ಸಂಸ್ಥೆ ಮತ್ತು ದಕ್ಷಿಣ ಆಫ್ರಿಕಾದ ಆರೋಗ್ಯ ಇಲಾಖೆ ತಿಳಿಸಿದೆ.

ಅಸೋಸಿಯೇಟೆಡ್ ಪ್ರೆಸ್‌ಗೆ ನೀಡಿದ ಹೇಳಿಕೆಯಲ್ಲಿ, ತನಿಖೆ ನಡೆಯುತ್ತಿದೆ ಆದರೆ ಕನಿಷ್ಠ ಒಂದು ಹ್ಯಾಂಟವೈರಸ್ ಪ್ರಕರಣ ದೃಢಪಟ್ಟಿದೆ ಎಂದು ಹೇಳಿದೆ. ರೋಗಿಗಳಲ್ಲಿ ಒಬ್ಬರು ದಕ್ಷಿಣ' ಆಫ್ರಿಕಾದ ಆಸ್ಪತ್ರೆಯಲ್ಲಿ ತೀವ್ರ ನಿಗಾ ಘಟಕದಲ್ಲಿದ್ದಾರೆ ಎಂದು ಆರೋಗ್ಯ ಸಂಸ್ಥೆ ತಿಳಿಸಿದೆ ಮತ್ತು ರೋಗಲಕ್ಷಣಗಳೊಂದಿಗೆ ಇನ್ನಿಬ್ಬರನ್ನು ಹಡಗಿನಿಂದ ಸ್ಥಳಾಂತರಿಸಲು ಅಧಿಕಾರಿಗಳೊಂದಿಗೆ ಕೆಲಸ ಮಾಡುತ್ತಿದೆ.

ಕ್ರೂಸ್ ನಿರ್ವಹಿಸುವ ಡಚ್ ಕಂಪನಿಯು ಹಡಗು ಈಗ ಆಫ್ರಿಕಾದ ಪಶ್ಚಿಮ ಕರಾವಳಿಯ ದ್ವೀಪ ರಾಷ್ಟ್ರವಾದ ಕೇಪ್‌ವರ್ಡೆ ಕರಾವಳಿಯಲ್ಲಿದೆ ಮತ್ತು ಸ್ಥಳೀಯ ಅಧಿಕಾರಿಗಳು ಸಹಾಯ ಮಾಡುತ್ತಿದ್ದಾರೆ ಆದರೆ ಯಾರನ್ನೂ ಇಳಿಯಲು ಅನುಮತಿಸಲಿಲ್ಲ ಎಂದು ಹೇಳಿದೆ.

ತುರ್ತು ವೈದ್ಯಕೀಯ ಆರೈಕೆಯ ಅಗತ್ಯವಿರುವ ಹಡಗಿನಲ್ಲಿರುವ ಇಬ್ಬರು ಅಸ್ವಸ್ಥರು ಸಿಬ್ಬಂದಿ ಸದಸ್ಯರಾಗಿದ್ದರು ಎಂದು ಅದು ಹೇಳಿದೆ.ಹ್ಯಾಂಟವೈರಸ್ ಸೋಂಕುಗಳು ಮುಖ್ಯವಾಗಿ ದಂಶಕಗಳಿಂದ ಹರಡುತ್ತವೆ.



ಪ್ರಪಂಚದಾದ್ಯಂತ ಕಂಡುಬರುವ ಹ್ಯಾಂಟವೈರಸ್ಗಳು, ಇಲಿಗಳು ಮತ್ತು ಇಲಿಗಳಂತಹ ಸೋಂಕಿತ ದಂಶಕಗಳ ಮೂತ್ರ ಅಥವಾ ಮಲದ ಸಂಪರ್ಕದಿಂದ ಹರಡುವ ವೈರಸ್‌ಗಳ ಕುಟುಂಬವಾಗಿದೆ. ಕಳೆದ ವರ್ಷ ನ್ಯೂ ಮೆಕ್ಸಿಕೋದಲ್ಲಿ ನಟ ಜೀನ್ ಹ್ಯಾಕ್ಮನ್ ಅವರ ಪತ್ನಿ ಬೆಟ್ಸಿ ಅರಕಾವಾ ಹ್ಯಾಂಟವೈರಸ್ ಸೋಂಕಿನಿಂದ ನಿಧನರಾದ ನಂತರ ಅವು ಗಮನ ಸೆಳೆದವು.

ಹ್ಯಾಂಟಮನ್ ಸುಮಾರು ಒಂದು ವಾರದ ನಂತರ ತಮ್ಮ ಮನೆಯಲ್ಲಿ ಹೃದಯ ಕಾಯಿಲೆಯಿಂದ ನಿಧನರಾದರು. ಹ್ಯಾಂಟವೈರಸ್‌ಗಳು ಎರಡು ಗಂಭೀರ ರೋಗಲಕ್ಷಣಗಳನ್ನು ಉಂಟುಮಾಡುತ್ತವೆ ಎಂದು ಯುಎಸ್ ಸೆಂಟರ್ಸ್ ಫಾರ್ ಡಿಸೀಸ್ ಕಂಟ್ರೋಲ್ ಅಂಡ್ ಪ್ರಿವೆನ್ಷನ್ ತಿಳಿಸಿದೆ. ಹ್ಯಾಂಟವೈರಸ್ ಪಲ್ಮನರಿ ಸಿಂಡೋಮ್, ಶ್ವಾಸಕೋಶದ ಮೇಲೆ ಪರಿಣಾಮ ಬೀರುವ ತೀವ್ರ ಕಾಯಿಲೆ ಮತ್ತು ಮೂತ್ರಪಿಂಡದ ಸಿಂಡೋಮ್‌ನೊಂದಿಗೆ ರಕ್ತಸ್ರಾವದ ಜ್ವರ, ಮೂತ್ರಪಿಂಡಗಳ ಮೇಲೆ ಪರಿಣಾಮ ಬೀರುವ ತೀವ್ರ ಕಾಯಿಲೆ.

ಅವರೂಪವಾಗಿದ್ದರೂ, ಹ್ಯಾಂಟವೈರಸ್ ಸೋಂಕುಗಳು ಜನರ ನಡುವೆ ಹರಡಬಹುದು ಎಂದು ಹೇಳಿದೆ.

ನಿರ್ದಿಷ್ಟ ಚಿಕಿತ್ಸೆ ಅಥವಾ ಚಿಕಿತ್ಸೆ ಇಲ್ಲ, ಆದರೆ ಆರಂಭಿಕ ವೈದ್ಯಕೀಯ ಗಮನವು ಬದುಕುಳಿಯುವ ಸಾಧ್ಯತೆಯನ್ನು ಹೆಚ್ಚಿಸುತ್ತದೆ. ಅಟ್ಲಾಂಟಿಕ್ ಸಾಗರದಲ್ಲಿ ಕ್ರೂಸ್ ಹಡಗಿನಲ್ಲಿ ನೌಕಾಯಾನ ಮಾಡುವ ಸಾರ್ವಜನಿಕ ಆರೋಗ್ಯ ಕಾರ್ಯಕ್ರಮದ ಬಗ್ಗೆ ತಿಳಿದಿದೆ ಮತ್ತು ಬೆಂಬಲಿಸುತ್ತದೆ ಎಂದು ಸಂಸ್ಥೆ ಹೇಳಿದೆ.

ವಿವರವಾದ ತನಿಖೆಗಳು ನಡೆಯುತ್ತಿವೆ, ಇದರಲ್ಲಿ ಹೆಚ್ಚಿನ ಪ್ರಯೋಗಾಲಯ ಪರೀಕ್ಷೆಗಳು ಮತ್ತು ಸಾಂಕ್ರಾಮಿಕ ರೋಗಶಾಸ್ತ್ರೀಯ ತನಿಖೆಗಳು ಸೇರಿವೆ. ಪ್ರಯಾಣಿಕರು ಮತ್ತು ಸಿಬ್ಬಂದಿಗೆ ವೈದ್ಯಕೀಯ ಆರೈಕೆ ಮತ್ತು ಬೆಂಬಲವನ್ನು ನೀಡಲಾಗುತ್ತಿದೆ. ಸೇಂಟ್ ಹೆಲೆನಾದಿಂದ ಹೊರಟು ದಕ್ಷಿಣ ಆಫ್ರಿಕಾಕ್ಕೆ ಹಡಗು ವರ್ಗಾಯಿಸಲ್ಪಟ್ಟ ನಂತರ, ಅಟ್ಲಾಂಟಿಕ್‌ಬಲ್ಲಿರುವ ಮತ್ತೊಂದು ದೂರದ ದ್ವೀಪವಾದ ಅಸನ್ಮನ್ ದ್ವೀಪದ ಬಳಿ ಆ ವ್ಯಕ್ತಿ ಅಸ್ವಸ್ಥನಾಗಿದ್ದ ಎಂದು ಅದು ಹೇಳಿದೆ.

ಈ ಸಮಯದಲ್ಲಿ ಸುಮಾರು 150 ಪ್ರವಾಸಿಗರು ಹಡಗಿನಲ್ಲಿದ್ದರು ಎಂದು ದಕ್ಷಿಣ ಆಫ್ರಿಕಾದ ಆರೋಗ್ಯ ಇಲಾಖೆ ತಿಳಿಸಿದೆ. ವಿಶೇಷ ಧ್ರುವ ಕ್ರೂಸ್ ಹಡಗು ಎಂದು ವಿವರಿಸಲಾದ ಹೊಂಡಿಯಸ್ ಸಾಮಾನ್ಯವಾಗಿ ಸುಮಾರು 70 ಸಿಬ್ಬಂದಿಗಳೊಂದಿಗೆ ಪ್ರಯಾಣಿಸುತ್ತದೆ ಎಂದು ಹಲವಾರು ಆನ್‌ಲೈನ್ ಪ್ರವಾಸ ನಿರ್ವಾಹಕರು ತಿಳಿಸಿದ್ದಾರೆ.

# ಖಲಿಸ್ತಾನಿ ಉಗ್ರ ಸಂಘಟನೆ ರಾಷ್ಟ್ರೀಯ ಭದ್ರತೆಗೆ ಧಕ್ಕೆ: ಕೆನಡಾ ಸರ್ಕಾರದ ಅಧಿಕೃತ ಘೋಷಣೆ

**ಒಟ್ಟಾವಾ, ಮೇ 4:** ಇತ್ತೀಚಿನ ವರ್ಷಗಳಲ್ಲಿ ಕೆನಡಾ ದೇಶ ತನ್ನ ಆಂತರಿಕ ಭದ್ರತೆಯ ವಿಷಯದಲ್ಲಿ ಹಿಂದೆಂದೂ ಇಲ್ಲದಂತಹ ಆತಂಕವನ್ನು ಎದುರಿಸುತ್ತಿದೆ. ದೇಶದೊಳಗೆ ಖಲಿಸ್ತಾನಿ ಸಂಘಟನೆಗಳು ಪ್ರತ್ಯೇಕತಾವಾದಿ ಗುಂಪುಗಳ ಚಟುವಟಿಕೆಗಳು ಶಾಂತಿಗೆ ಭಂಗ ತರುತ್ತಿವೆ.

ಈ ಹಿನ್ನೆಲೆಯಲ್ಲಿ ಕೆನಡಾದ ತನಿಖಾ ಸಂಸ್ಥೆಗಳು ದೇಶದ ಭದ್ರತಾ ಸ್ಥಿತಿಗತಿಯನ್ನು ಕೂಲಂಕಷವಾಗಿ ಪರಿಶೀಲಿಸಿ ಹೊಸ ಆಯಾಮಗಳನ್ನು ತೆರೆದಿಟ್ಟಿವೆ.

ಕೆನಡಾದ ನೆಲವನ್ನು ಬಳಸಿಕೊಂಡು ಭಾರತದ ವಿರುದ್ಧ ಪಿತೂರಿ ನಡೆಸುತ್ತಿರುವ ಸಂಘಟನೆಗಳ ಮೇಲೆ ಅಲ್ಲಿನ ಅಧಿಕಾರಿಗಳು ಈಗ ತೀವ್ರ ನಿಗಾ ವಹಿಸಿದ್ದಾರೆ. ಈ ಗುಂಪುಗಳು ಕೇವಲ ಪ್ರಚಾರಕ್ಕೆ ಸೀಮಿತವಾಗದೆ, ಕೆನಡಾದ ಸಮಾಜದ ಶಾಂತಿಯನ್ನು ಕದಡುವ ಮತ್ತು ರಾಜಕೀಯ ವ್ಯವಸ್ಥೆಯಲ್ಲಿ ಪ್ರಭಾವ ಬೀರುವ ಹಂತಕ್ಕೆ ಬೆಳೆದಿರುವುದು ಆತಂಕಕಾರಿ ಸಂಗತಿಯಾಗಿದೆ. ಈ ಬೆಳವಣಿಗೆಯು ಅಂತರಾಷ್ಟ್ರೀಯ ಮಟ್ಟದಲ್ಲಿ ಕೆನಡಾದ ವರ್ಚಸ್ಸಿನ ಮೇಲೆ ಪರಿಣಾಮ ಬೀರಿದೆ.

ಕೆನಡಾ ಸರ್ಕಾರ ಮೊದಲ ಬಾರಿಗೆ ಖಲಿಸ್ತಾನಿ




ಉಗ್ರಗಾಮಿಗಳನ್ನು ತನ್ನ ದೇಶದ 'ರಾಷ್ಟ್ರೀಯ ಭದ್ರತೆಗೆ ಇರುವ ಪ್ರಮುಖ ಆಪತ್ತು' ಎಂದು ಅಧಿಕೃತವಾಗಿ ಘೋಷಿಸಿದೆ. ಅಲ್ಲಿನ ಗುಪ್ತಚರ ಇಲಾಖೆ ನೀಡಿರುವ ವರದಿಯ ಪ್ರಕಾರ, ಈ ಪ್ರತ್ಯೇಕತಾವಾದಿ ಶಕ್ತಿಗಳು ದೇಶದ ಸಂಸದೀಯ ಪ್ರಜಾಪ್ರಭುತ್ವಕ್ಕೆ ಧಕ್ಕೆ ತರುತ್ತಿರುವುದಲ್ಲದೆ, ವಿದೇಶಿ ಹಸ್ತಕ್ಷೇಪದ ಮೂಲಕ ಕೆನಡಾದ ಆಂತರಿಕ ನಿರ್ಧಾರಗಳನ್ನು ಪ್ರಭಾವಿಸಲು ಯತ್ನಿಸುತ್ತಿವೆ. ಈ ಉಗ್ರಗಾಮಿ ಪ್ರವೃತ್ತಿ ಕೆನಡಾದ ಭವಿಷ್ಯಕ್ಕೆ ದೊಡ್ಡ ಸಂಚಕಾರ ತರಬಲ್ಲದು, ಇಂತಹ ಶಕ್ತಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳುವ ತುರ್ತು ಅಗತ್ಯವಿದೆ ಎಂದು ಪ್ರತಿಪಾದಿಸಿದೆ.

# ಹಾರ್ಮುಜ್ ಬಳಿ ಅಮೆರಿಕದ ಯುದ್ಧ ನೌಕೆಯತ್ತ ಇರಾನ್ ಕ್ಷಿಪಣಿ ದಾಳಿ

**ಟೆಹರಾನ್, ಮೇ 4:** ಸೋಮವಾರ ಅಮೆರಿಕದ ಯುದ್ಧನೌಕೆಗಳು ಹಾರ್ಮುಜ್ ಜಲಸಂಧಿಯನ್ನು ಪ್ರವೇಶಿಸುವುದನ್ನು ಇರಾನ್ನ ನೌಕಾಪಡೆ ತಡೆದಿದೆ. ಜನ್ಮ ದ್ವೀಪದ ಬಳಿ ಇರಾನ್‌ನ ಎಚ್ಚರಿಕೆಯನ್ನು ನಿರ್ಲಕ್ಷಿಸಿದ ಅಮೆರಿಕದ ಯುದ್ಧ ನೌಕೆಯ ಮೇಲೆ ಎರಡು ಕ್ಷಿಪಣಿ ದಾಳಿ ನಡೆದಿದೆ ಎಂದು ಇರಾನ್‌ನ ಸರಕಾರಿ ಸ್ವಾಮ್ಯದ ಟಿವಿ ವರದಿ ಮಾಡಿದೆ. ಜಲಸಂಧಿಯನ್ನು ಪ್ರವೇಶಿಸುವ ದಕ್ಷಿಣದ ದ್ವಾರದ ಬಳಿಯ ಜಸ್ಕ್ ಬಂದರಿನ ಬಳಿ ಚಲಿಸುತ್ತಿದ್ದ ಯುದ್ಧನೌಕೆಯ ಮೇಲೆ ಎರಡು ಕ್ಷಿಪಣಿಗಳನ್ನು ಪ್ರಯೋಗಿಸಿದ ಬಳಿಕ ನೌಕೆಯು ಹಿಂದಿರುಗಿದೆ. ಹಾರ್ಮುಜ್ ಜಲಸಂಧಿಯನ್ನು ದಾಟುವ ಪ್ರಯತ್ನ ನಡೆಸದಂತೆ ಹಲವು ವಿದೇಶಿ ನೌಕೆಗಳಿಗೆ ಸೋಮವಾರ ಇರಾನ್ ಸಶಸ್ತ್ರ ಪಡೆಗಳು ಎಚ್ಚರಿಕೆ ನೀಡಿವೆ ಎಂದು ವರದಿ ಹೇಳಿದೆ. ಆದರೆ ಈ ವರದಿಯನ್ನು ಅಮೆರಿಕ ನಿರಾಕರಿಸಿದೆ.




# ಮಕ್ಕಳಲ್ಲಿ ಅನಾರೋಗ್ಯಕ್ಕೆ ಕಾರಣ ತಾಪಮಾನ: ಹವಾಮಾನ ವೈಪರೀತ್ಯ

**ಬ್ರೆಜಿಲಿಯಾ,ಮೇ.4:** ಜಾಗತಿಕ ತಾಪಮಾನ ಏರಿಕೆ ಮತ್ತು ಹವಾಮಾನ ಬದಲಾವಣೆಯು ಕೇವಲ ಪ್ರಕೃತಿಯ ಮೇಲೆ ಮಾತ್ರವಲ್ಲದೆ, ಮಾನವನ ಆರೋಗ್ಯದ ಮೇಲೂ ಗಂಭೀರ ಪರಿಣಾಮ ಬೀರುತ್ತಿದೆ. ಇತ್ತೀಚಿನ 'ಲ್ಯಾನ್ಸೆಟ್' ನಿಯತಕಾಲಿಕೆಯಲ್ಲಿ ಪ್ರಕಟವಾದ ಅಧ್ಯಯನದ ವರದಿಯ ಪ್ರಕಾರ, ಹವಾಮಾನ ವೈಪರೀತ್ಯ ಮತ್ತು ಮಕ್ಕಳಲ್ಲಿ ಕಂಡುಬರುತ್ತಿರುವ ಅಪೌಷ್ಟಿಕತೆಯ ನಡುವೆ ಆಘಾತಕಾರಿ ಸಂಬಂಧವಿರುವುದು ಬಹಿರಂಗವಾಗಿದೆ.

ಬ್ರೆಜಿಲ್ನಲ್ಲಿ ಕಳೆದ ಎರಡು ದಶಕಗಳ ದತ್ತಾಂಶಗಳನ್ನು ವಿಶ್ಲೇಷಿಸಿದಾಗ, ಅತಿಯಾದ ಉಷ್ಣಾಂಶವಿರುವ ಪ್ರದೇಶಗಳಲ್ಲಿ ವಾಸಿಸುವ ಮಕ್ಕಳಲ್ಲಿ ಬೆಳವಣಿಗೆಯ ಕುಂಠಿತ ಮತ್ತು ಅಪೌಷ್ಟಿಕತೆಯ ಪ್ರಮಾಣ ಹೆಚ್ಚಾಗಿರುವುದು ಕಂಡುಬಂದಿದೆ. ಅತಿಯಾದ ಶಾಖ ಅಥವಾ 'ಹೀಟ್ ಎಕ್ಸ್‌ಪೋಷರ್' ಮಕ್ಕಳ ದೈಹಿಕ ಬೆಳವಣಿಗೆಯ ಮೇಲೆ ನೇರ ಪರಿಣಾಮ ಬೀರುತ್ತಿದೆ.

ತಾಪಮಾನ ಏರಿಕೆಯಿಂದ ಮಕ್ಕಳ ಮೇಲಾಗುತ್ತಿರುವ ಪರಿಣಾಮಗಳು



ಅತಿಯಾದ ಶಾಖ ಮತ್ತು ಅಕಾಲಿಕ ಮಳೆಯಿಂದ ಬೆಳೆಗಳು ನಾಶವಾಗುತ್ತಿವೆ. ಇದರಿಂದ ಪೌಷ್ಟಿಕ ಆಹಾರದ ಕೊರತೆ ಉಂಟಾಗುತ್ತಿದ್ದು, ಆಹಾರ ಪದಾರ್ಥಗಳ ಬೆಲೆ ಏರಿಕೆಯಾಗುತ್ತಿದೆ. ಇದು ಬಡ ಕುಟುಂಬಗಳ ಮಕ್ಕಳ ಆಹಾರದ ತಟ್ಟೆಯಿಂದ ಪೌಷ್ಟಿಕಾಂಶವನ್ನು ಕಸಿದುಕೊಳ್ಳುತ್ತಿದೆ. ಅಲ್ಲದೆ, ವಿಪರೀತ ಸೆಕೆಯಿಂದ ಮಕ್ಕಳಲ್ಲಿ ಹಸಿವು ಕಡಿಮೆಯಾಗುತ್ತದೆ. ದೀರ್ಘಕಾಲದ ಉಷ್ಣ ಗಾಳಿಯು ಮಕ್ಕಳ ಚಯಾಪಚಯ ಕ್ರಿಯೆಯ ಮೇಲೆ ಕೆಟ್ಟ ಪರಿಣಾಮ ಬೀರಲಿದ್ದು, ಪೋಷಕಾಂಶಗಳನ್ನು ಹೀರಿಕೊಳ್ಳುವ ಶಕ್ತಿ ಕಡಿಮೆಯಾಗುತ್ತದೆ. ಹವಾಮಾನ ವೈಪರೀತ್ಯದಿಂದ ಸಾಂಕ್ರಾಮಿಕ ರೋಗಗಳು ಮತ್ತು ಜೀರ್ಣಕ್ರಿಯೆಗೆ ಸಂಬಂಧಿಸಿದ ಸಮಸ್ಯೆಗಳು ಹೆಚ್ಚುತ್ತಿವೆ. ಅತಿಸಾರ ಮತ್ತು ವಾಂತಿಯಂತಹ ತೊಂದರೆಗಳು ಮಕ್ಕಳಲ್ಲಿ ಪೌಷ್ಟಿಕಾಂಶದ ಕೊರತೆಯನ್ನು ಉಂಟುಮಾಡುತ್ತಿವೆ.

ಇನ್ನು ಗರ್ಭಾವಸ್ಥೆಯಲ್ಲಿ ತಾಯಿ ಅತಿಯಾದ ಶಾಖಕ್ಕೆ ಒಡ್ಡಿಕೊಳ್ಳುವುದರಿಂದ ಮಗುವಿನ ಜನನ ಸಮಯದಲ್ಲಿ ತೂಕ ಕಡಿಮೆಯಾಗುವ ಅಪಾಯವಿದೆ. ಇದು ಮಗುವಿನ ಮುಂದಿನ ಬೆಳವಣಿಗೆಯ ಮೇಲೆ ಅಜೀವ ಪರ್ಯಂತ ಪರಿಣಾಮ ಬೀರಲಿದೆ ಎಂದು ವರದಿ ಎಚ್ಚರಿಸಿದೆ.

ವಿಜ್ಞಾನಿಗಳ ಪ್ರಕಾರ, ಹವಾಮಾನ ಬದಲಾವಣೆಯು ಮಾನವ ಸಂಪನ್ಮೂಲದ ಮೇಲೆ ಕೊಡಲಿ ಪೆಟ್ಟು ನೀಡುತ್ತಿದೆ. ಅಪೌಷ್ಟಿಕತೆಯಿಂದ ಬಳಲುವ ಮಕ್ಕಳು ದೈಹಿಕವಾಗಿ ಮಾತ್ರವಲ್ಲದೆ ಮಾನಸಿಕವಾಗಿಯೂ ದುರ್ಬಲರಾಗುತ್ತಿದ್ದು, ಇದು ದೇಶದ ಭವಿಷ್ಯದ ಮೇಲೆ ಪರಿಣಾಮ ಬೀರಲಿದೆ.

**ಇದಕ್ಕೆ ಪರಿಹಾರವಾಗಿ ಕೆಳಗಿನ ಕ್ರಮಗಳನ್ನು ಸೂಚಿಸಲಾಗಿದೆ**

- ತೀವ್ರ ಶಾಖದ ಸಮಯದಲ್ಲಿ ಗರ್ಭಿಣಿಯರು ಮತ್ತು ಮಕ್ಕಳ ಆರೋಗ್ಯದ ಮೇಲೆ ನಿಗಾ ಇಡಲು ಆರೋಗ್ಯ ವ್ಯವಸ್ಥೆಯನ್ನು ಬಲಪಡಿಸುವುದು.
- ಹವಾಮಾನಕ್ಕೆ ತಕ್ಕಂತೆ ಪೌಷ್ಟಿಕ ಆಹಾರವನ್ನು ಬೆಳೆಯುವ 'ಹವಾಮಾನ ಸ್ನೇಹಿ ಕೃಷಿ' ತಂತ್ರಜ್ಞಾನಕ್ಕೆ ಒತ್ತು ನೀಡುವುದು.
- ಜಾಗತಿಕ ಮಟ್ಟದಲ್ಲಿ ಇಂಗಾಲದ ಹೊರಸೂಸುವಿಕೆಯನ್ನು ತಗ್ಗಿಸಲು ತುರ್ತು ಕ್ರಮ ಕೈಗೊಳ್ಳುವುದು.
- ಭಾರತದಂತಹ ಉಷ್ಣವಲಯದ ರಾಷ್ಟ್ರಗಳಿಗೂ ಈ ವರದಿ ದೊಡ್ಡ ಎಚ್ಚರಿಕೆಯ ಗಂಟೆಯಾಗಿದ್ದು, ಪರಿಸರ ಸಂರಕ್ಷಣೆ ಮತ್ತು ಆರೋಗ್ಯ ನೀತಿಗಳಲ್ಲಿ ಬದಲಾವಣೆ ತರುವುದು ಅನಿವಾರ್ಯವಾಗಿದೆ.

# ಸಹಕಾರ, ಉಕ್ರೇನ್‌ಗೆ ಬೆಂಬಲ, ನಾವೀನ್ಯತೆ ಸಂಬಂಧಗಳಿಗೆ ಇಯು, ಬ್ರಿಟನ್ ಒಪ್ಪಿಗೆ



**ಯೆರೆವಾನ್, ಮೇ 4:** ಉಕ್ರೇನ್‌ಗೆ ಭದ್ರತೆ, ನಾವೀನ್ಯತೆ ಮತ್ತು ಬೆಂಬಲದ ಕುರಿತು ಸಹಕಾರವನ್ನು ಗಾಢಗೊಳಿಸುವ ಯೋಜನೆಗಳನ್ನು ಯುರೋಪಿಯನ್ ಒಕ್ಕೂಟ ಮತ್ತು ಯುಕೆ ನಾಯಕರು ಸೋಮವಾರ ಎತ್ತಿ ತೋರಿಸಿದರು.

"ಗ್ರಾಹಕರು, ವ್ಯವಹಾರಗಳು ಮತ್ತು ಸಾಮೂಹಿಕ ಯುರೋಪಿಯನ್ ಭದ್ರತೆಗಾಗಿ" ಇಯು, ಬ್ರಿಟನ್ ಸಂಬಂಧಗಳನ್ನು ಬಲಪಡಿಸುವ ತಮ್ಮ ಬದ್ಧತೆಯನ್ನು ಎರಡೂ ಕಡೆಯವರು ಪುನರುಚ್ಚರಿಸಿದರು.

ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಮತ್ತು ಯುಕೆ ಪ್ರಧಾನಿ ಕೀರ್ ನಡುವಿನ ಯೆರೆವಾನ್ನಲ್ಲಿ ನಡೆದ ಯುರೋಪಿಯನ್ ಕಮ್ಯುನಿಟಿ ರಾಜಕೀಯ ಸಮಿತಿ ಶೃಂಗಸಭೆಯಲ್ಲಿ ಮಾತುಕತೆಯ ನಂತರ ಬಿಡುಗಡೆಯಾದ ಜಂಟಿ ಹೇಳಿಕೆಯಲ್ಲಿ ಉಲ್ಲೇಖಿಸಿರುವಂತೆ, ಉಕ್ರೇನ್‌ಗೆ ಇಯು ಯ 90 ಶತಕೋಟಿ ಡಾಲರ್ (78 ಶತಕೋಟಿ ಪೌಂಡ್) ಸಾಲ ಸೌಲಭ್ಯದಲ್ಲಿ ಭಾಗವಹಿಸುವ ಬ್ರಿಟನ್‌ನ ಉದ್ದೇಶವನ್ನು ನಾಯಕರು ಸ್ವಾಗತಿಸಿದರು. ಇದು ರಕ್ಷಣಾ ಕೈಗಾರಿಕಾ ಸಹಕಾರದಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ಕರೆದರು.

ಹೇಳಿಕೆಯು ಉಕ್ರೇನ್ ಜನರಿಗೆ "ಅಚಲ ಬೆಂಬಲ"ವನ್ನು ಒತ್ತಿಹೇಳಿದೆ ಮತ್ತು ನಡೆಯುತ್ತಿರುವ ಸಂಘರ್ಷದ ನಡುವೆ ಅವರ ಸ್ಥಿತಿಸ್ಥಾಪಕತ್ವ ಮತ್ತು ಧೈರ್ಯವನ್ನು ಶ್ಲಾಘಿಸಿದೆ.

ಉನ್ನತ ಬೆಳವಣಿಗೆಯ ತಂತ್ರಜ್ಞಾನ ಸಂಸ್ಥೆಗಳನ್ನು ಬೆಂಬಲಿಸುವ ಮತ್ತು ಯುರೋಪಿನೊಳಗೆ ಉನ್ನತ ನಾವೀನ್ಯಕಾರರನ್ನು ಉಳಿಸಿಕೊಳ್ಳುವ ಗುರಿಯನ್ನು ಹೊಂದಿರುವ ಸ್ಕೇಲ್‌ಅಪ್ ಯುರೋಪ್ ಫಂಡ್ ಸೇರಿದಂತೆ ಯುರೋಪಿಯನ್ ಇನ್ನೋವೇಶನ್ ಕೌನ್ಸಿಲ್ ಫಂಡ್‌ನಲ್ಲಿ ಯುಕೆ ಭಾಗವಹಿಸುವಿಕೆಯ ಕುರಿತು ಮಾತುಕತೆಗಳನ್ನು ಪ್ರಾರಂಭಿಸಲು ಇಬ್ಬರೂ ನಾಯಕರು ಒಪ್ಪಿಕೊಂಡರು.

ಮುಂಬರುವ ಇಯು, ಬ್ರಿಟನ್ ಶೃಂಗಸಭೆಯನ್ನು ಎದುರು ನೋಡುತ್ತಾ, ಪರಸ್ಪರ ಪ್ರಯೋಜನಗಳನ್ನು ನೀಡುವ ಮಹತ್ವಾಕಾಂಕ್ಷೆಯ ಕಾರ್ಯಸೂಚಿಯ ಮಹತ್ವವನ್ನು ನಾಯಕರು ಒತ್ತಿ ಹೇಳಿದರು.

ಐತಿಹಾಸಿಕವಾಗಿ ರಷ್ಯಾದ ನಿಕಟ ಪಾಲುದಾರ ಎಂದು ಪರಿಗಣಿಸಲಾದ ದೇಶದಲ್ಲಿ ಎರಡು ಅಭೂತಪೂರ್ವ ಶೃಂಗಸಭೆಗಳಿಗಾಗಿ ಯುರೋಪಿಯನ್ ನಾಯಕರು ಅರ್ಮೇನಿಯಾದಲ್ಲಿ ಒಟ್ಟುಗೂಡುತ್ತಿರುವಾಗ ಈ ಹೇಳಿಕೆ ಬಂದಿದೆ. ಮೂರು ಮಿಲಿಯನ್ಗಿಂತ ಕಡಿಮೆ ಜನಸಂಖ್ಯೆಯನ್ನು ಹೊಂದಿರುವ ಅರ್ಮೇನಿಯಾ, ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಯುರೇಷಿಯನ್ ಆರ್ಥಿಕ ಒಕ್ಕೂಟದ ಸದಸ್ಯರಾಗಿ ಉಳಿದಿದೆ ಮತ್ತು ತನ್ನ ಭೂಪ್ರದೇಶದಲ್ಲಿ ರಷ್ಯಾದ ಮಿಲಿಟರಿ ನೆಲೆಯನ್ನು ಹೊಂದಿದೆ.


ಸೋಮವಾರ, ಕೆನಡಾದ ಪ್ರಧಾನ ಮಂತ್ರಿಯೊಂದಿಗೆ 30 ಕ್ಕೂ ಹೆಚ್ಚು ಯುರೋಪಿಯನ್ ನಾಯಕರು ಯೆರೆವಾನ್ನಲ್ಲಿ ನಡೆದ ಯುರೋಪಿಯನ್ ರಾಜಕೀಯ ಸಮುದಾಯದ ಶೃಂಗಸಭೆಯಲ್ಲಿ ಭಾಗವಹಿಸಿದ್ದರು, ಇದು ಸ್ಪರ್ಧಾತ್ಮಕ ಭೌಗೋಳಿಕ ರಾಜಕೀಯ ಕ್ಷೇತ್ರಗಳ ನಡುವೆ ರಾಜತಾಂತ್ರಿಕ ಅಡ್ಡಹಾದಿಯಾಗಿ ಅರ್ಮೇನಿಯಾದ ಬೆಳೆಯುತ್ತಿರುವ ಪಾತ್ರವನ್ನು ಒತ್ತಿಹೇಳುತ್ತದೆ.

# ಇರಾನ್‌ನಲ್ಲಿ 65 ದಿನಗಳಿಂದ ಇಂಟರ್ನೆಟ್ ಸ್ಥಗಿತ

**ಟೆಹ್ರಾನ್, ಮೇ 4 :** ಇರಾನ್‌ನಲ್ಲಿ ಇಂಟರ್ನೆಟ್ ಸಂಪರ್ಕ ಕಡಿತಗೊಂಡಿದ್ದು, 65ನೇ ದಿನ ದಾಟಿದೆ. ತೀವ್ರ ನಿರ್ಬಂಧಿತ ಇಂಟರ್ನೆಟ್ ಸಂಪರ್ಕವು ಈಗ ದೈನಂದಿನ ಸಾಮಾಜಿಕ ಮತ್ತು ಖಾಸಗಿ ಜೀವನವನ್ನು ರೂಪಿಸುತ್ತಿದೆ. ವ್ಯವಹಾರಗಳನ್ನು ಅಸ್ತವ್ಯಸ್ತಗೊಳಿಸುತ್ತಿದೆ. ದೇಶಾದ್ಯಂತ ವಲಸೆ ಹೋಗುವಂತೆ ಮಾಡುತ್ತಿದೆ. ಇದರಿಂದಾಗಿ ಜನಸಂಖ್ಯೆಗೆ ಇಂಟರ್ನೆಟ್ ಸಂಪರ್ಕ ಮಾತ್ರ ಸಿಗುತ್ತಿದೆ.

ಫೆಬ್ರವರಿ 28 ರಂದು ಅಮೆರಿಕ–ಇಸ್ರೇಲಿ ಜಂಟಿ ದಾಳಿಗಳು ಪ್ರಾರಂಭವಾದಾಗಿನಿಂದ, ಇರಾನಿನ ಅಧಿಕಾರಿಗಳು ರಾಷ್ಟ್ರೀಯ ಭದ್ರತಾ ಕಾರಣಗಳನ್ನು ಉಲ್ಲೇಖಿಸಿ ಲಕ್ಷಾಂತರ ಜನರಿಗೆ ನಿವ್ವಳ ಪ್ರವೇಶವನ್ನು ನಿರ್ಬಂಧಿಸಿದ್ದಾರೆ, ತಾತ್ಕಾಲಿಕ ಕ್ರಮವಾಗಿ ಪ್ರಾರಂಭವಾದದ್ದನ್ನು ಜೀವನದ ಎಲ್ಲಾ ಅಂಶಗಳನ್ನು ಅಸ್ತವ್ಯಸ್ತಗೊಳಿಸಿದ ದೀರ್ಘಕಾಲೀನ ಕ್ರಮವಾಗಿ ಪರಿವರ್ತಿಸಿದ್ದಾರೆ, ಪೂರ್ಣ ಪುನಃಸ್ಥಾಪನೆಗೆ ಸ್ಪಷ್ಟ ಸಮಯದ ಸಮಯವಿಲ್ಲ. ಅಧಿಕಾರಿಗಳು ಇಂಟರ್ನೆಟ್‌ಗೆ ಎಲ್ಲಾ ಸಾಮಾನ್ಯ ಪ್ರವೇಶವನ್ನು ಯುದ್ಧವನ್ನು ನಿಲ್ಲಿಸುವುದು ಮತ್ತು ಭೌಗೋಳಿಕ ರಾಜಕೀಯ ಪರಿಸ್ಥಿತಿಯನ್ನು "ಸಾಮಾನ್ಯ ಸ್ಥಿತಿಗೆ" ಮರಳಿಸುವ ಮೇಲೆ ಷರತ್ತು ವಿಧಿಸಿದ್ದಾರೆ.

ಹಲವರಿಗೆ ಇದರ ಪರಿಣಾಮ ತಕ್ಷಣದ ಮತ್ತು ವೈಯಕ್ತಿಕವಾಗಿರುತ್ತದೆ. ಜಾಗತಿಕ ವೇದಿಕೆಗಳನ್ನು ಅವಲಂಬಿಸಿರುವ ಸಣ್ಣ ವ್ಯಾಪಾರ ಮಾಲೀಕರು, ಸ್ವತಂತ್ರೋದ್ಯೋಗಿಗಳು ಮತ್ತು ತಂತ್ರಜ್ಞಾನ ಕೆಲಸಗಾರರು ರಾತ್ರೋರಾತ್ರಿ ಗ್ರಾಹಕರಿಂದ ಸಂಪರ್ಕ ಕಡಿತಗೊಂಡಿದ್ದಾರೆ. ಇರಾನ್ ಇಂಟರ್ನ್ಯಾಷನಲ್ ಪ್ರಕಾರ, ಕೆಲವರು ಸ್ಥಿರವಾದ ಇಂಟರ್ನೆಟ್ ಪ್ರವೇಶವನ್ನು ಮರಳಿ ಪಡೆಯಲು ಮತ್ತು ತಮ್ಮ ಕೆಲಸವನ್ನು ಮುಂದುವರಿಸಲು ದೇಶವನ್ನು ತಾತ್ಕಾಲಿಕವಾಗಿ ತೊರೆದು ಹತ್ತಿರದ ರಾಜ್ಯಗಳಾದ




ಅರ್ಮೇನಿಯಾ ಮತ್ತು ಟರ್ಕಿಗೆ ಪ್ರಯಾಣಿಸಲು ಆಯ್ಕೆ ಮಾಡಿಕೊಂಡಿದ್ದಾರೆ.

ಇದು ಇನ್ನೂ ಬೆಳೆಯಬಹುದಾದ ಸಣ್ಣ ವರ್ಗಕ್ಕೆ ಮಾತ್ರ ಒಂದು ಅಳತೆಯಾಗಿದೆ, ಆದರೆ ಇತರರಿಗೆ, ನಿರ್ಬಂಧಗಳು ಅಸ್ತಿತ್ವದಲ್ಲಿರುವ ಆರ್ಥಿಕ ಒತ್ತಡಗಳನ್ನು ಹೆಚ್ಚಿಸಿವೆ. ಸರಾಸರಿ ಮಾಸಿಕ ಆದಾಯವು ಈಗ ಗಖಆ $100 ರಿಂದ ಗಖಆ $150 ರ ಆಸುಪಾಸಿನಲ್ಲಿದೆ, ಅನಿಯಂತ್ರಿತ ಇಂಟರ್ನೆಟ್ಗಾಗಿ ಕಪ್ಪು ಮಾರುಕಟ್ಟೆಯ ಏರಿಕೆಯು ಮತ್ತೊಂದು ಹೊರೆಯನ್ನು ಸೇರಿಸಿದೆ. ಬೆಲೆಗಳು ಪ್ರತಿ ಗಿಗಾಬೈಟ್‌ಗೆ 50ರಿಂದ 20 ದಶಲಕ್ಷ ರಿಯಾಲ್‌ವರೆಗೆ ಇರುತ್ತದೆ ಎಂದು ವರದಿಯಾಗಿದೆ, ಇದು ಹೆಚ್ಚಿನವರಿಗೆ ಅರ್ಥಪೂರ್ಣ ಪ್ರವೇಶವನ್ನು ತಲುಪದಂತೆ ಮಾಡುತ್ತದೆ.

ಅದೇ ಸಮಯದಲ್ಲಿ, ಒಂದು ಸಮಾನಾಂತರ ವ್ಯವಸ್ಥೆಯು ರೂಪುಗೊಂಡಿದೆ. ಹಿಂದಿನ ಅಶಾಂತಿಯ ಸಮಯದಲ್ಲಿ ಮೊದಲು ಗುರುತಿಸಲಾದ "ಬಿಳಿ ಸಿಮ್ ಕಾರ್ಡ್‌ಗಳು" ಆಯ್ದ ಬಳಕೆದಾರರಿಗೆ, ಹೆಚ್ಚಾಗಿ ರಾಜ್ಯ ಸಂಸ್ಥೆಗಳು ಅಥವಾ ಸಂಯೋಜಿತ ಮಾಧ್ಯಮಗಳೊಂದಿಗೆ ಸಂಪರ್ಕ ಹೊಂದಿದವರಿಗೆ ಫಿಲ್ಟರ್ ಮಾಡದ ಪ್ರವೇಶವನ್ನು ಒದಗಿಸುತ್ತವೆ.

ಇದರ ಜೊತೆಗೆ, ಕೆಲವು ವ್ಯವಹಾರಗಳು ಮತ್ತು ವ್ಯಕ್ತಿಗಳಿಗೆ "ಪ್ರೊ ಇಂಟರ್ನೆಟ್" ಪ್ಯಾಕೇಜ್‌ಗಳನ್ನು ನೀಡಲಾಗಿದ್ದು, ಮುಕ್ತ ಪ್ರವೇಶವನ್ನು ಪರಿಣಾಮಕಾರಿಯಾಗಿ ನಿಯಂತ್ರಿತ ಸವಲತ್ತಾಗಿ ಪರಿವರ್ತಿಸಲಾಗಿದೆ. ಅಡಚಣೆಯ ಸಮಯದಲ್ಲಿ ಸೀಮಿತ ವ್ಯಾಪಾರ ಚಟುವಟಿಕೆಯನ್ನು ನಿರ್ವಹಿಸಲು ಇಂತಹ ಸೇವೆಗಳನ್ನು ಅನುಮೋದಿಸಲಾಗಿದೆ ಎಂದು ಸರ್ಕಾರಿ ವಕ್ತಾರೆ ಫಾತಿಮೆಹ್ ಮೊಹಜೆರಾನಿ ದೃಢಪಡಿಸಿದರು. ಆರ್ಥಿಕ ಹಾನಿ ಹೆಚ್ಚುತ್ತಿದೆ. ಇರಾನ್‌ನ ವಾಣಿಜ್ಯ ಮಂಡಳಿಯ ಆರಂಭಿಕ ಅಂದಾಜಿನ ಪ್ರಕಾರ ದಿನಕ್ಕೆ 80 ದಶಲಕ್ಷ ಡಾಲರ್ ನಷ್ಟವಾಗಿದೆ, ಇದು ಆನ್‌ಲೈನ್ ವಾಣಿಜ್ಯಕ್ಕೆ ನೇರ ಹಾನಿ ಮತ್ತು ವ್ಯಾಪಕ ಪರಿಣಾಮಗಳನ್ನು ಪ್ರತಿಬಿಂಬಿಸುತ್ತದೆ.

ಸಂಖ್ಯೆಗಳನ್ನು ಮೀರಿ, ಮಾನವ ನಷ್ಟವನ್ನು ನಿರ್ಲಕ್ಷಿಸುವುದು ಕಷ್ಟವಾಗುತ್ತಿದೆ. ವಿದ್ಯಾರ್ಥಿಗಳು ಶೈಕ್ಷಣಿಕ ಸಂಪನ್ಮೂಲಗಳನ್ನು ಪಡೆಯಲು ಹೆಣಗಾಡುತ್ತಿದ್ದಾರೆ, ಆರೋಗ್ಯ ಸೇವೆ ಒದಗಿಸುವವರು ದತ್ತಾಂಶ ವ್ಯವಸ್ಥೆಗಳಲ್ಲಿ ಅಡಚಣೆಗಳನ್ನು ಎದುರಿಸುತ್ತಿದ್ದಾರೆ ಮತ್ತು ಕುಟುಂಬಗಳು ವಿದೇಶದಲ್ಲಿರುವ ಸಂಬಂಧಿಕರಿಂದ ದೂರ ಉಳಿದಿದ್ದಾರೆ. ಹದಿಹರೆಯದವರು ಸಾಮಾಜಿಕ ಜಾಲತಾಣಗಳಿಂದ ಸಂಪರ್ಕ ಕಡಿತಗೊಂಡಿರುವುದು, ವಯಸ್ಸಾದವರು ಪ್ರೀತಿಪಾತ್ರರ ಜೊತೆ ಸಂವಹನ ನಡೆಸಲು ಸಾಧ್ಯವಾಗದಿರುವುದು ಮತ್ತು ವೃತ್ತಿಪರರು ಅವಕಾಶಗಳು ತಪ್ಪಿ ಹೋಗುವುದನ್ನು ನೋಡುತ್ತಿರುವುದು ಹೆಚ್ಚುತ್ತಿರುವ ಒಂಟಿತನದ ಭಾವನೆಯನ್ನು ಹಲವರು ವಿವರಿಸುತ್ತಾರೆ.

# ರೋಹಿತ್, ರಿಕಲ್ಟನ್ ಅಬ್ಬರಕ್ಕೆ ಮಂಡಿಯೂರಿದ ಲಖನೌ

**ಮುಂಬೈ, ಮೇ 4:** ವಾಂಖೆಡೆ ಕ್ರೀಡಾಂಗಣದಲ್ಲಿ ನಡೆದ ಐಪಿಎಲ್ 47ನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಲಖನೌ ಸೂಪರ್ ಜೈಂಟ್ಸ್ ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಲಕ್ನೋ ತಂಡವನ್ನು ಮಣಿಸಿದ ಮುಂಬೈ ತಂಡ ತನ್ನ ತವರಿನಲ್ಲಿ ಸೋಲುಗಳ ಸರಮಾಲೆ ಮುರಿದಿದೆ. ಇದು ಈ ಆವೃತ್ತಿಯಲ್ಲಿ ಮುಂಬೈ ತಂಡದ ಮೂರನೇ ಗೆಲುವಾದರೆ, ಇತ್ತ ಇದು ಲಖನೌ ತಂಡದ 7ನೇ ಸೋಲಾಗಿದೆ. ಈ ಸೋಲಿನೊಂದಿಗೆ ಮುಂಬೈನಂತೆ ಲಕ್ನೋ ತಂಡದ ಪ್ಲೇ ಆಫ್ ಕನಸು ಕೂಡ ಭಾಗಶಃ ಭಗ್ನವಾಗಿದೆ. ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಲಖನೌ 228 ರನ್ ಕಲೆಹಾಕಿತು. ಈ ಗುರಿಯ ಬೆನ್ನುಹತ್ತಿದ ಮುಂಬೈ ರಿಕಲ್ಟನ್ ಹಾಗೂ ರೋಹಿತ್ ಅವರ ಅಬ್ಬರದ ಬ್ಯಾಟಿಂಗ್‌ನಿಂದಾಗಿ ಗೆಲುವು ದಾಖಲಿಸಿತು.ಈ ಗೆಲುವಿನ ಶ್ರೇಯ ಮುಂಬೈನ ಬೌಲರ್‌ಗಳಿಗೆ ಸಲ್ಲುತ್ತದೆ, ಏಕೆಂದರೆ ನಿಕೋಲಸ್ ಪೂರನ್ ಅವರ ಬಿರುಸಿನ ಇನ್ನಿಂಗ್ಸ್ ಲಖನೌ ತಂಡವನ್ನು 250 ರನ್‌ಗಳ ಗಡಿ ದಾಟಿಸುವ ನಿರೀಕ್ಷೆಯಲ್ಲಿತ್ತು. ಆದಾಗ್ಯೂ ಮುಂಬೈ ಬೌಲರ್‌ಗಳು ಉತ್ತಮ ಪ್ರದರ್ಶನ ನೀಡಿ, ಲಖನೌ ತಂಡವನ್ನು 20 ಓವರ್‌ಗಳಲ್ಲಿ ಐದು ವಿಕೆಟ್‌ಗಳಿಗೆ 228 ರನ್‌ಗಳಿಗೆ ಸೀಮಿತಗೊಳಿಸುವಲ್ಲಿ ಯಶಸ್ವಿಯಾದರು.

**ಪೂರನ್– ಮಾರ್ಷ್ ಅಬ್ಬರ:** ಈ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ಲಖನೌ ತಂಡಕ್ಕೆ ಉತ್ತಮ ಆರಂಭ ಸಿಗಲಿಲ್ಲ. ಲಖನೌ ಪರ ಮೊದಲ ಪಂದ್ಯವನ್ನಾಡಿದ ಇಂಗ್ಲಿಸ್ ಬೇಗನೇ ಔಟಾದರಯ. ಆ ಬಳಿಕ ಜೊತೆಯಾದ ಮಿಚೆಲ್



ಮಾರ್ಷ್ ಮತ್ತು ನಿಕೋಲಸ್ ಪೂರನ್ ಕೇವಲ 10 ಓವರ್‌ಗಳಲ್ಲಿ ತಂಡವನ್ನು 141 ರನ್‌ಗಳ ಗಡಿ ದಾಟಿಸಿದರು. ಇದೇ ವೇಳೆ ಪೂರನ್ ಕೇವಲ 16 ಎಸೆತಗಳಲ್ಲಿ ಈ ಆವೃತ್ತಿಯಲ್ಲಿ ತಮ್ಮ ಮೊದಲ ಅರ್ಧಶತಕವನ್ನು ಬಾರಿಸಿದರು.

**ಮುಂಬೈ ಬೌಲರ್‌ಗಳ ಪರಾಕ್ರಮ:** ಆದರೆ ಪೂರನ್ ಹಾಗೂ ಮಾರ್ಷ್ ಔಟಾದ ಬಳಿಕ ಲಖನೌ ರನ್ ವೇಗಕ್ಕೆ ಕಡಿವಾಣ ಬಿದ್ದಿತು. ಇಲ್ಲಿ ಅಮೋಘ ಪ್ರದರ್ಶನ ನೀಡಿದ ಮುಂಬೈ ಬೌಲರ್‌ಗಳು ಮುಂದಿನ ಹತ್ತು ಓವರ್‌ಗಳಲ್ಲಿ ಕೇವಲ 87 ರನ್‌ಗಳನ್ನು ಬಿಟ್ಟುಕೊಟ್ಟರು. ಹೀಗಾಗಿ ಲಕ್ನೋ ತಂಡವು 250 ರನ್‌ಗಳ ಗಡಿ ದಾಟುವುದು ಅಸಾಧ್ಯವಾಯಿತು. ಮುಂಬೈ ಪರ ಕಾರ್ಬಿನ್ ಬಾಷ್ ಎರಡು ವಿಕೆಟ್‌ಗಳನ್ನು ಪಡೆದರು.

**ರೋಹಿತ್– ರಿಕಲ್ಟನ್ ಅಬ್ಬರ:** ಈ ಗುರಿ ಬೆನ್ನಟ್ಟಿದ ಮುಂಬೈಗೆ ರೋಹಿತ್ ಶರ್ಮಾ ಮತ್ತು ರಯಾನ್ ರಿಕಲ್ಟನ್ ಉತ್ತಮ ಜೊತೆಯಾಟ ಒದಗಿಸಿಕೊಟ್ಟರು. ಇವರಿಬ್ಬರು 10.4 ಓವರ್‌ಗಳಲ್ಲಿ 143 ರನ್‌ಗಳ ಜೊತೆಯಾಟ ಕಟ್ಟಿದರು. ಗಾಯದಿಂದಾಗಿ ಐದು ಪಂದ್ಯಗಳಿಂದ ಹೊರಗುಳಿದಿದ್ದ ರೋಹಿತ್ 27 ಎಸೆತಗಳಲ್ಲಿ ಅರ್ಧಶತಕ ಗಳಿಸಿದರೆ, ಅತ್ಯುತ್ತಮ ಫಾರ್ಮ್‌ನಲ್ಲಿರುವ ರಿಕಲ್ಟನ್ 22 ಎಸೆತಗಳಲ್ಲಿ ಅರ್ಧಶತಕ ಪೂರೈಸಿದರು. ಆದಾಗ್ಯೂ, ಇಬ್ಬರೂ ತಮ್ಮ ಶತಕಗಳನ್ನು ಗಳಿಸುವಲ್ಲಿ ವಿಫಲರಾದರು.

ರಿಕಲ್ಟನ್ 83 (32 ಎಸೆತಗಳು) ಮತ್ತು ರೋಹಿತ್ 84 (44 ಎಸೆತಗಳು)ರನ್ ಬಾರಿಸಿ ಔಟಾದರು. ಲಖನೌ ಮತ್ತು ಮುಂಬೈ ಇನ್ನಿಂಗ್ಸ್ ನಡುವಿನ ವ್ಯತ್ಯಾಸ ಇರುವುದು ಇಲ್ಲಿಯೇ. ಮುಂದಿನ 10 ಓವರ್‌ಗಳಲ್ಲಿ ಲಕ್ನೋ ನಿಧಾನವಾಗಿ ಬ್ಯಾಟಿಂಗ್ ಮಾಡಿದರೂ, ಮುಂಬೈ ತಂಡವು ತನ್ನ ವೇಗವನ್ನು ಕಾಯ್ದುಕೊಂಡಿತು. ರೋಹಿತ್ ಔಟಾದ ನಂತರ ತಿಲಕ್ ವರ್ಮಾ ಮತ್ತು ಸೂರ್ಯಕುಮಾರ್ ಯಾದವ್ ಹೆಚ್ಚು ಹೊತ್ತು ನಿಲ್ಲಲಿಲ್ಲ, ಆದರೆ ನಮನ್ ಧೀರ್ ಕೇವಲ 12 ಎಸೆತಗಳಲ್ಲಿ ಅಜೇಯ 23 ರನ್ ಗಳಿಸಿ ತಂಡಕ್ಕೆ ಗೆಲುವು ತಂದುಕೊಟ್ಟರು. ಮುಂಬೈ ತಂಡವು 18.4 ಓವರ್‌ಗಳಲ್ಲಿ 4 ವಿಕೆಟ್‌ಗಳ ನಷ್ಟಕ್ಕೆ ಗುರಿಯನ್ನು ತಲುಪಿತು.